ಸಂಪುಟ: 05 ಸಂಚಿಕೆ: 214 ಪುಟಗಳು: 08 ಶನಿವಾರ 18 ಅಕ್ಟೋಬರ್ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail. com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ನೀವು ನಿಮ್ಮ ಜೀವನದಲ್ಲಿ ಯಶಸ್ವಿಯಾಗಬೇಕೆಂದರೆ ನೀವು ಜ್ಞಾನ ಮತ್ತು ಶಿಸ್ತನ್ನು ಬೆಳೆಸಿಕೊಳ್ಳಬೇಕು. ಜ್ಞಾನ ಮತ್ತು ಶಿಸ್ತುಗಳು ನಿಮ್ಮನ್ನು ಅನಾವಶ್ಯಕ ಸಮಸ್ಯೆಗಳಿಂದ ರಕ್ಷಿಸುತ್ತದೆ.

## ನನಗೆ ಸಮಸ್ಯೆ ಆದ್ರೆ, ಸರ್ಕಾರ, ಪ್ರಿಯಾಂಕ್ ಖರ್ಗೆ ಹೊಣೆ!

**ಬೆಂಗಾವಲು ಪಡೆ ರದ್ದು**

• ಉದಯವಾಹಿನಿ ಬೆಂಗಳೂರು

ನನ್ನ ಬೆಂಗಾವಲು ರಕ್ಷಣೆಯನ್ನು ವಾಪಸ್ ಪಡೆದುಕೊಳ್ಳಲಾಗಿದೆ. ನನಗೇನಾದರೂ ಆದರೆ, ರಾಜ್ಯ ಸರ್ಕಾರ ಮತ್ತು ಸಚಿವ ಪ್ರಿಯಾಂಕ್ ಖರ್ಗೆ ಕುಟುಂಬವೇ ಹೊಣೆ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಎಚ್ಚರಿಸಿದ್ದಾರೆ. ನಮ್ಮಲ್ಲಿ ಭಯ ಹುಟ್ಟಿಸಲು ಸರಕಾರ ನನ್ನ ಮನೆಯ ಬೆಂಗಾವಲು ರಕ್ಷಕರನ್ನು ವಾಪಸ್ ಕರೆಸಿಕೊಂಡಿದೆ; ಈ ಮೂಲಕ ಸರಕಾರ ನನ್ನನ್ನು ಟಾರ್ಗೆಟ್ ಮಾಡುತ್ತಿದೆ ಎಂದು ಆಕ್ಷೇಪಿಸಿದ್ದಾರೆ.

ಸರಕಾರ ಈ ಕ್ರಮ ಜರುಗಿಸಲು ಕಾರಣವೇನು? ರಾಜ್ಯ ವರ್ಗೀಕೃತ ಭದ್ರತಾ ಪುನರ್ ವಿಮರ್ಶಣಾ ಸಮಿತಿ ಈ ಆದೇಶ ಮಾಡಿದೆ. ನನಗೇನಾದರೂ ಆದರೆ, ಸರಕಾರ ಎಷ್ಟು ಹೊಣೆಯೋ ಪ್ರಿಯಾಂಕ್ ಖರ್ಗೆಯವರ ಕುಟುಂಬವೂ ಅಷ್ಟೇ ಹೊಣೆ ಎಂದು ಎಚ್ಚರಿಸಿದರು. ನಾನು ರಾಜ್ಯದ ವಿಪಕ್ಷ ನಾಯಕ ಆಗಿದ್ದು ಸರಕಾರದ ನ್ಯೂನತೆ, ಭ್ರಷ್ಟಾಚಾರವನ್ನು ಹೊರಕ್ಕೆ ತರುವ ಜವಾಬ್ದಾರಿ ಪಡೆದಿದ್ದೇನೆ ಎಂದರು.

**ಕಾರು ಮತ್ತಿತರ ಸೌಲಭ್ಯವನ್ನು ವಾಪಸ್ ಕೊಡುವೆ:** ಬೆಂಗಾವಲು ರಕ್ಷಕರನ್ನು ವಾಪಸ್ ಪಡೆಯಲು ಯಾರು ಕಾರಣರೆಂದು ಮುಖ್ಯಮಂತ್ರಿ, ಗೃಹ ಸಚಿವರು ಉತ್ತರಿಸಬೇಕು. ಇಲ್ಲವಾದರೆ ನನಗೆ ಕೊಟ್ಟ ಕಾರು ಮತ್ತಿತರ ಸೌಲಭ್ಯವನ್ನು ವಾಪಸ್ ಕೊಡುವೆ ಎಂದು ಛಲವಾದಿ ನಾರಾಯಣಸ್ವಾಮಿ ಅವರು ತಿಳಿಸಿದರು. ಉಳಿದ ಅಂಗರಕ್ಷಕರನ್ನೂ ವಾಪಸ್ ಕಳಿಸುವೆ; ನನಗೆ ಯಾವ ರಕ್ಷಣೆಯೂ ಬೇಕಿಲ್ಲ; ನನಗೇನೇ ಆದರೂ ಖರ್ಗೆ ಕುಟುಂಬ ಮತ್ತು ಈ ಸರಕಾರವೇ



ಕಾರಣ ಎಂದು ಎಚ್ಚರಿಸಿದರು. ಈ ಸರಕಾರ ನಮ್ಮನ್ನು ಟಾರ್ಗೆಟ್ ಮಾಡಿ ನಮ್ಮನ್ನು ಮುಗಿಸುವ ಕೆಲಸಕ್ಕೆ ಕೈ ಹಾಕಿದೆ ಎಂದು ಆರೋಪಿಸಿದರು. ಪ್ರಿಯಾಂಕ್ ಖರ್ಗೆಯವರಿಗೆ ಬೆದರಿಕೆ ಕರೆ ಬಂದಿತ್ತು; ರೆಕಾರ್ಡ್ ಮಾಡಿದ್ದರು. ದೂರು ಕೊಡುವ ಮೊದಲೇ ಬಂಧನ ಆಗಿದೆ. ಅವರ ಮನೆ ಮುಂದೆ ಇನ್ನಷ್ಟು ಭದ್ರತೆ ಹೆಚ್ಚಿಸಿದ್ದಾರೆ. ನನ್ನನ್ನು ಜೀವಂತ ಸುಟ್ಟು ಹಾಕುವುದಾಗಿ ಫೇಸ್‌ಬುಕ್‌ನಲ್ಲಿ ಪೋಸ್ಟ್ ಮಾಡಿದ್ದನ್ನು, ಬೆದರಿಕೆ ಕರೆ ಬಂದಿದ್ದನ್ನು ತೋರಿಸಿದ್ದೇನೆ. ಆದರೆ, ನನ್ನ ಭದ್ರತೆ ವಾಪಸ್ ಪಡೆದು ಸಚಿವರ ಭದ್ರತೆ ಹೆಚ್ಚಿಸಿದ್ದಾರೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ನನ್ನ ಹಿಂದೆ ನನ್ನ ಸಮಾಜ ಇದೆ. ವಿಪಕ್ಷ ನಾಯಕನಾಗಿ ಕ್ಯಾಬಿನೆಟ್ ದರ್ಜೆ ನನ್ನದು. ಈಗ ಮಹದೇವಪ್ಪನವರ ರಕ್ಷಣೆ ಹೆಚ್ಚಿಸಿದ್ದಾರೆ. ಪ್ರಿಯಾಂಕ್ ಖರ್ಗೆಯವರ ಭದ್ರತೆ ಹೆಚ್ಚಿಸಿದ್ದಾರೆ. ಇವಕ್ಕೆ ನನ್ನ ಅಭ್ಯಂತರ ಇಲ್ಲ; ಬೆದರಿಕೆ ನನಗಿದ್ದರೂ ನನ್ನ ಭದ್ರತೆ ವಾಪಸ್ ಪಡೆಯಲು ಕಾರಣವೇನು? ಎಂದರು. ಈ ಬೆದರಿಕೆ ಇರುವುದೇ ಸರಕಾರದಿಂದ ಎಂದು ಸಾಬೀತಾಗುತ್ತಿದೆ ಎಂದು ವಿಶ್ಲೇಷಿಸಿದರು. ಇದನ್ನು ಖಂಡಿಸುತ್ತೇನೆ ಎಂದರು.

**ಯಾವ್ಯಾವ ಹೋರಾಟ ಮಾಡಿದ್ದೀರೆಂದು ಕಥೆ ಹೇಳಿ:** ಪ್ರಶ್ನೆಗೆ ಉತ್ತರಿಸಿದ ಅವರು, ಪ್ರಿಯಾಂಕ್ ಖರ್ಗೆಯವರಿಗೆ ಸಾಮಾನ್ಯ ಜ್ಞಾನದ ಕೊರತೆ ಇದೆ. ಪುಸ್ತಕ ಓದಿ ಮಾತನಾಡುತ್ತಾರೆ. ಸಮಯ ಇದೆ; ಮಾಡಲು ಬೇರೆ ಕೆಲಸ ಇಲ್ಲ; ಇಲಾಖೆ ಬಗ್ಗೆ ಕೆಲಸ ಮಾಡುವ ಉದ್ದೇಶ ಇಲ್ಲ. ಅವರು ವಿದೇಶಾಂಗ ವ್ಯವಹಾರ ಖಾತೆ ಸಚಿವರಂತೆ ಕೆಲಸ ಮಾಡುತ್ತಾರೆ ಎಂದು ಟೀಕಿಸಿದರು. ನಿಮ್ಮ ಮಕ್ಕಳು ಎಷ್ಟು ಜನ ದಲಿತ ಸಂಘರ್ಷ ಸಮಿತಿಯಲ್ಲಿ (ದಸಂಸ) ಇದ್ದಾರೆ ಎಂದು ಕೇಳಿದರು. ನಾವೆಲ್ಲ ದಸಂಸ ಮೂಲಕ ಹೋರಾಟವನ್ನು ಮಾಡಿ ಬಂದವರು. ನಿಮ್ಮ ಮನೆಯ ಮಕ್ಕಳು ಯಾವ್ಯಾವ ಹೋರಾಟ ಮಾಡಿದ್ದೀರೆಂದು ಕಥೆ ಹೇಳಿ; ನೀವೆಲ್ಲ ಚಿನ್ನದ ಸ್ಪೂನ್ ಇಟ್ಟುಕೊಂಡು ಹುಟ್ಟಿದವರು. ದಲಿತತ್ವವೇ ಗೊತ್ತಿರದವರು. ನೀವು ದಲಿತರ ಬಗ್ಗೆ ಮೊಸಳೆಕಣ್ಣೀರು ಹಾಕುವುದು ಬೇಕಿಲ್ಲ ಎಂದು ತಿಳಿಸಿದರು.

## ಕ್ರೈಸ್ತರ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಚಾಲನೆ

• ಉದಯವಾಹಿನಿ ಬೆಂಗಳೂರು

'ರಾಜ್ಯದ ಎಲ್ಲಾ ಸಮುದಾಯಗಳ ಅಭಿವೃದ್ಧಿಗೆ ರಾಜ್ಯ ಸರ್ಕಾರವು ಬದ್ಧವಾಗಿದ್ದು, ಅದಕ್ಕಾಗಿ ಪ್ರತ್ಯೇಕ ನಿಗಮಗಳನ್ನು ಸ್ಥಾಪಿಸಲಾಗಿದೆ. ಕ್ರೈಸ್ತ ಸಮುದಾಯದ ಜನರ ಅಭಿವೃದ್ಧಿಗೆ ಸ್ಥಾಪಿಸಲಾಗಿರುವ ನಿಗಮದ ಎಲ್ಲಾ ಕಾರ್ಯಕ್ರಮಗಳು ಜನರಿಗೆ ತಲುಪುವಂತೆ ಕ್ರಮ ವಹಿಸಲಾಗುತ್ತದೆ' ಎಂದು ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಜಮೀರ್ ಅಹಮದ್ ಖಾನ್ ಹೇಳಿದರು. ನಗರದ ಕೆಎಂಡಿಸಿ ಭವನದಲ್ಲಿ ಶುಕ್ರವಾರ ನಡೆದ ಕಾರ್ಯಕ್ರಮದಲ್ಲಿ 'ಕರ್ನಾಟಕ ಕ್ರಿಶ್ಚಿಯನ್ ಸಮುದಾಯ ಅಭಿವೃದ್ಧಿ ನಿಗಮ'ದ ಹೊಸ ಯೋಜನೆಗಳಿಗೆ ಮತ್ತು ವೆಬ್ ಪೋರ್ಟಲ್ ಗೆ ಚಾಲನೆ ನೀಡಿ ಅವರು ಮಾತನಾಡಿದರು.

'ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳು ಎಂಬ ಧ್ಯೆಯದೊಂದಿಗೆ ನಮ್ಮ ಸರ್ಕಾರ ಕಾರ್ಯನಿರ್ವಹಿಸುತ್ತಿದೆ. ಕ್ರಿಶ್ಚಿಯನ್ ಸಮುದಾಯದ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಅಭಿವೃದ್ಧಿಗೆ ಈ ನಿಗಮ ಸ್ಥಾಪಿಸಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಿಗಮಕ್ಕೆ 250 ಕೋಟಿ ಅನುದಾನ ಒದಗಿಸಿದ್ದು, ಅದರಲ್ಲಿ ಪ್ರತಿ ರೂಪಾಯಿಯೂ ಸದುಪಯೋಗ ಆಗಬೇಕು' ಎಂದು ಅವರು ಹೇಳಿದರು.

## ಮತ್ತೆ 200 ವೈದ್ಯಕೀಯ ಸೀಟು ಲಭ್ಯ: ಕೆಇಎ

• ಉದಯವಾಹಿನಿ ಬೆಂಗಳೂರು

ಕರ್ನಾಟಕದ ನಾಲ್ಕು ಕಾಲೇಜುಗಳಿಗೆ ತಲಾ 50 ವೈದ್ಯಕೀಯ ಸೀಟುಗಳು ಮಂಜೂರಾಗಿದ್ದು, ಉಳಿದ ಎಲ್ಲಾ 200 ಸೀಟುಗಳನ್ನೂ ಮೂರನೇ ಸುತ್ತಿನ ಸೀಟು ಹಂಚಿಕೆಗೆ ಪರಿಗಣಿಸಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ) ನಿರ್ಧರಿಸಿದೆ. ಬೆಂಗಳೂರಿನ ಎಂವಿಜೆ, ಕಲಬುರಗಿಯ ಮಹದೇವಪ್ಪ ರಾಂಪುರೆ, ದಕ್ಷಿಣ ಕನ್ನಡ ಜಿಲ್ಲೆಯ ಕೆ.ವೆಂಕಟರಮಣಗೌಡ ಹಾಗೂ ಮಂಗಳೂರಿನ ಶ್ರೀನಿವಾಸ ವೈದ್ಯಕೀಯ ಕಾಲೇಜುಗಳಿಗೆ ಹೆಚ್ಚುವರಿಯಾಗಿ ತಲಾ 50 ಸೀಟುಗಳನ್ನು ವೈದ್ಯಕೀಯ ಕೌನ್ಸೆಲಿಂಗ್ ಪರಿಷತ್ ಮಂಜೂರು ಮಾಡಿದೆ. ಮೂರನೇ ಸುತ್ತಿನ ಸೀಟು ಹಂಚಿಕೆ ಪ್ರಕ್ರಿಯೆ ಆರಂಭವಾದ ನಂತರ ಒಟ್ಟು ಒಂಬತ್ತು ಕಾಲೇಜುಗಳ 450 ಸೀಟುಗಳು ಹೆಚ್ಚುವರಿಯಾಗಿ ಲಭ್ಯವಾಗಿವೆ. ಅ.18ರಂದು ಬೆಳಿಗ್ಗೆ 9ರಿಂದ ಮುಂಗಡ ಶುಲ್ಕ ಪಾವತಿಸಿ ಆಪ್ಷನ್ಸ್ ದಾಖಲಿಸಬಹುದು. ಆಪ್ಷನ್ಸ್ ದಾಖಲಿಸಲು ಸಂಜೆ 5 ಗಂಟೆವರೆಗೆ ಅವಕಾಶ ಇರುತ್ತದೆ. ಈಗಾಗಲೇ ವೈದ್ಯಕೀಯ ಕಾಲೇಜುಗಳಲ್ಲಿ ಪ್ರವೇಶ ಪಡೆದವರಿಗೂ ಆಪ್ಷನ್ಸ್ ದಾಖಲಿಸಲು ಅ.18ರಂದು ಬೆಳಿಗ್ಗೆ 8 ಗಂಟೆವರೆಗೆ ಅವಕಾಶ ಕಲ್ಪಿಸಲಾಗಿದೆ ಎಂದು ಕೆಇಎ ಕಾರ್ಯನಿರ್ವಾಹಕ ನಿರ್ದೇಶಕ ಎಚ್.ಪ್ರಸನ್ನ ಹೇಳಿದ್ದಾರೆ.

## ಬೆಂಗಳೂರಲ್ಲಿ ವರ್ಷಕ್ಕೆ 943 ಟನ್ ಆಹಾರ ವ್ಯರ್ಥ: ಸಿಎಂ

• ಉದಯವಾಹಿನಿ ಬೆಂಗಳೂರು

'ಗೊತ್ತಿದ್ದೂ ಗೊತ್ತಿದ್ದೂ ಆಹಾರ ವ್ಯರ್ಥ ಮಾಡುವುದು, ಅನ್ನಕ್ಕೆ ತೋರಿಸುವ ಅಹಂಕಾರ' ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯಪಟ್ಟರು. ಆಹಾರ ಇಲಾಖೆ ಆಯೋಜಿಸಿದ್ದ 'ವಿಶ್ವ ಆಹಾರ ದಿನ' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. 'ಪ್ರತಿವರ್ಷ ಬೆಂಗಳೂರು ಒಂದರಲ್ಲೇ 943 ಟನ್ ಆಹಾರ ವ್ಯರ್ಥವಾಗುತ್ತಿದೆ. ಅಂದಾಜು 360 ಕೋಟಿ ಮೌಲ್ಯದ ಆಹಾರವನ್ನು ನಾವು ವ್ಯರ್ಥ ಮಾಡುತ್ತಿದ್ದೇವೆ' ಎಂದು ಜಿಕೆವಿಕೆ ಅಧ್ಯಯನ ಹೇಳಿದೆ ಎಂದರು. 'ಅನ್ನಭಾಗ್ಯದ ಅಕ್ಕಿಯನ್ನು ಸಂಗ್ರಹಿಸಿ ಕಾಳಸಂತೆಯಲ್ಲಿ ಮಾರುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಕಾಳಸಂತೆ ಮಾರಾಟ ತಪ್ಪಿಸಲು 5 ಕಿಲೋ ಅಕ್ಕಿ ಕೊಟ್ಟು, ಉಳಿದ ಐದು ಕಿಲೋ ಕಾಳು, ಬೇಳೆ ವಿತರಿಸಲು ತೀರ್ಮಾನಿಸಿದ್ದೇವೆ' ಎಂದರು. 'ನಾವು ಒಂದು ಕಾಲದಲ್ಲಿ ಆಹಾರ ಧಾನ್ಯಕ್ಕಾಗಿ ಅಮೆರಿಕದ ಮೇಲೆ ಅವಲಂಬಿತರಾಗಿದ್ದೆವು. ಈಗ ವಿದೇಶಗಳಿಗೆ ರಫ್ತು ಮಾಡುವ ಮಟ್ಟಕ್ಕೆ ಪ್ರಗತಿ ಸಾಧಿಸಿದ್ದೇವೆ. ಇದರ ಜೊತೆಗೆ ಊಟ ವ್ಯರ್ಥ ಮಾಡುವ ಪ್ರಮಾಣವೂ ಹೆಚ್ಚಾಗುತ್ತಿರುವುದು ಬೇಸರದ ಸಂಗತಿ' ಎಂದರು.

## ತೀರ್ಥ ರೂಪದಲ್ಲಿ ದರ್ಶನ ಕೊಟ್ಟ

# ಕಾವೇರಮ್ಮ ಕಾಪಾಡಮ್ಮ

### ತಲಕಾವೇರಿಯಲ್ಲಿ ಜಲರೂಪಿಣಿಯಾಗಿ ದರ್ಶನ ನೀಡಿದ ಕಾವೇರಿ



• ಉದಯವಾಹಿನಿ ತಲಕಾವೇರಿ

ಜೀವನದಿ ಕಾವೇರಿ ಉಗಮಸ್ಥಾನ ತಲಕಾವೇರಿಯಲ್ಲಿ ನಿಗದಿಯಂತೆ ಶುಕ್ರವಾರ ಮಧ್ಯಾಹ್ನ 1.44ರ ಮಕರ ಲಗ್ನದಲ್ಲಿ ಪವಿತ್ರ ತೀರ್ಥೋದ್ಭವ ಸಂಭವಿಸಿತು. ಜಿಲ್ಲೆ ಮಾತ್ರವಲ್ಲದೆ ರಾಜ್ಯ, ಹೊರ ರಾಜ್ಯದಿಂದ ಆಗಮಿಸಿದ್ದ ಸಾವಿರಾರು ಭಕ್ತರು ಈ ಕೌತುಕದ ಕ್ಷಣಕ್ಕೆ ಸಾಕ್ಷಿ ಆದರು. ಶ್ರೀ ಕ್ಷೇತ್ರದಲ್ಲಿ ಸೇರಿದ್ದ ಮಾತೆ ಕಾವೇರಿಯ ಭಕ್ತರು ಈ ಸಂದರ್ಭ ಜೈ ಜೈ ಮಾತಾ, ಕಾವೇರಿ ಮಾತಾ ಘೋಷಣೆಗಳನ್ನು ಕೂಗಿ ಪುನೀತರಾದರು.

ಇದಕ್ಕೂ ಮೊದಲು ತೀರ್ಥೋದ್ಭವ ಹಿನ್ನೆಲೆಯಲ್ಲಿ ಬೆಳಗ್ಗೆ 11 ಗಂಟೆಯಿಂದಲೇ ಪ್ರಧಾನ ಅರ್ಚಕ ಟಿ.ವಿ. ಪ್ರಶಾಂತ್ ಆಚಾರ್ ನೇತೃತ್ವದಲ್ಲಿ ವಿವಿಧ ಪೂಜಾ ವಿಧಿವಿಧಾನಗಳಂತೂ ನಡೆದವು. ಕುಂಕುಮಾರ್ಚನೆ, ಮಹಾಪೂಜೆಯ ಹಾಗೂ ಸಾಂಪ್ರದಾಯಿಕ ಆಚರಣೆ ನೆರವೇರಿಸಿದ ನಂತರ ಬ್ರಹ್ಮಕುಂಡಿಕೆಯಲ್ಲಿ ಮಾತೆ ಕಾವೇರಿ ತೀರ್ಥರೂಪಿಣಿಯಾಗಿ ಭಕ್ತರಿಗೆ ದರ್ಶನ ನೀಡಿದಳು. ತೀರ್ಥೋದ್ಭವವು ಆಗುತ್ತಿದ್ದಂತೆಯೇ ಅರ್ಚಕರು ಬ್ರಹ್ಮಕುಂಡಿಕೆಯಿಗಿದ ಪವಿತ್ರ ತೀರ್ಥ ತೆಗೆದು ಭಕ್ತಾದಿಗಳ ಮೇಲೆ ಪ್ರೋಕ್ಷಣೆ ಮಾಡಿದರು. ಈ ಸಂದರ್ಭ ಬಾಟಲಿ, ಪಾತ್ರೆ, ಕ್ಯಾನ್‌ಗಳೊಂದಿಗೆ ತೀರ್ಥ ಸಂಗ್ರಹಕ್ಕೆ ಭಕ್ತರು ಮುಗಿಬಿದ್ದ ದೃಶ್ಯ ಕಂಡು ಬಂತು. ನೂಗು ನುಗ್ಗಲು ತಡೆಗೆ ಪೊಲೀಸರು ಸೂಕ್ತ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಂಡಿದ್ದರೂ ಭಕ್ತರ ಉತ್ಸಾಹದ ಮುಂದೆ ಯಾವುದೂ ಲೆಕ್ಕಕ್ಕೇ ಬರಲಿಲ್ಲ. ತೀರ್ಥೋದ್ಭವಕ್ಕೂ ಮೊದಲು ತೀರ್ಥ ಸಂಗ್ರಹಕ್ಕಾಗಿ ಶ್ರೀಕ್ಷೇತ್ರ ಭಾಗಮಂಡಲದಿಂದ ಸಾಂಪ್ರದಾಯಿಕವಾಗಿ ಬೆಳ್ಳಿಯ ಕೊಡದೊಂದಿಗೆ ಮೆರವಣಿ ಮೂಲಕ ದೇಗುಲದ ಪ್ರಮುಖರು ಆಗಮಿಸಿದರು. ತೀರ್ಥೋದ್ಭವ ನಂತರ ಮಾತೆ ಕಾವೇರಿ ಸನ್ನಿಧಿಯಲ್ಲಿ ವಿಶೇಷ ಪೂಜೆಗಳು ಸಂಜೆ ತನಕವೂ ಮುಂದುವರಿದವು. ದಿನಪೂರ್ತಿ ಭಕ್ತರಿಗೆ ತೀರ್ಥ ಪ್ರಸಾದ ವಿತರಣೆ ನಡೆಯಿತು. ಇನ್ನು ಒಂದು ತಿಂಗಳ ಕಾಲ ಭಾಗಮಂಡಲ ಮತ್ತು ತಲಕಾವೇರಿಯಲ್ಲಿ ಶ್ರೀ ಕಾವೇರಿ ಜಾತ್ರೆ ನಡೆಯಲಿದೆ. ತಲಕಾವೇರಿ ತಕ್ಕ ಮುಖ್ಯಸ್ಥ ಕೋಟಿ ಮೋಟಯ್ಯ, ಭಾಗಮಂಡಲದ ತಕ್ಕ ಮುಖ್ಯಸ್ಥ ಬಳ್ಳಡ್ಕ ಅಪ್ಪಾಜಿ ಈ ಸಂದರ್ಭ ಇದ್ದರು. ತೀರ್ಥೋದ್ಭವ ನಂತರ ಮಾತೆ ಕಾವೇರಿ ಸನ್ನಿಧಿಯಲ್ಲಿ ವಿಶೇಷ ಪೂಜೆಗಳು ಸಂಜೆ ತನಕವೂ ಮುಂದುವರಿದವು. ದಿನಪೂರ್ತಿ ಭಕ್ತರಿಗೆ ತೀರ್ಥ ಪ್ರಸಾದ ವಿತರಣೆ ನಡೆಯಿತು. ಇನ್ನು ಒಂದು ತಿಂಗಳ ಕಾಲ ಭಾಗಮಂಡಲ ಮತ್ತು ತಲಕಾವೇರಿಯಲ್ಲಿ ಶ್ರೀ ಕಾವೇರಿ ಜಾತ್ರೆ ನಡೆಯಲಿದೆ. ತಲಕಾವೇರಿ ತಕ್ಕ ಮುಖ್ಯಸ್ಥ ಕೋಟಿ ಮೋಟಯ್ಯ, ಭಾಗಮಂಡಲದ ತಕ್ಕ ಮುಖ್ಯಸ್ಥ ಬಳ್ಳಡ್ಕ ಅಪ್ಪಾಜಿ ಈ ಸಂದರ್ಭ ಇದ್ದರು.

ಈ ವರ್ಷ ಮಧ್ಯಾಹ್ನದ ವೇಳೆಗೆ ತೀರ್ಥೋದ್ಭವ ಸಂಭವಿಸಿದ ಕಾರಣ ಭಾಗಮಂಡಲ ಮತ್ತು ತಲಕಾವೇರಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಕಂಡುಬಂದರು. ವಿವಿಧ ಕೊಡವ ಸಂಘಟನೆಗಳ ಸದಸ್ಯರು ಭಾಗಮಂಡಲ ಭಗಂಡೇಶ್ವರ ದೇವಾಲಯದಲ್ಲಿ ಪೂಜೆ ಸಲ್ಲಿಸಿ ಪಾದಯಾತ್ರೆಯಲ್ಲಿ 8 ಕಿಮೀ ದೂರದ ತಲಕಾವೇರಿಗೆ ತೆರಳಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು. ಮುಖ್ಯಮಂತ್ರಿ ಕಾನೂನು ಸಲಹೆಗಾರರೂ ಆಗಿರುವ ವಿರಾಜಪೇಟೆ ಶಾಸಕ ಎ.ಎಸ್ ಪೊನ್ನಣ್ಣ ದಂಪತಿ ಕೂಡ ಸಾಂಪ್ರದಾಯಿಕ ದಿರಿಸಿನಲ್ಲಿ ಈ ಪಾದಯಾತ್ರೆಯಲ್ಲಿ ಪಾಲ್ಗೊಂಡಿದ್ದರು.

ಕೊಡಗು–ಮೈಸೂರು ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಮೈಸೂರು ಮಹಾರಾಜರ ಪೋಷಾಕಿನಲ್ಲಿ 8 ಕಿಮೀ ಪಾದಯಾತ್ರೆ ಮಾಡಿದ್ದು ವಿಶೇಷವಾಗಿತ್ತು.

**1** ತುಲಾಲಗ್ನದಲ್ಲಿ ಬೆಳಗ್ಗೆ 7 ಗಂಟೆ 41 ನಿಮಿಷಕ್ಕೆ ಬ್ರಹ್ಮ ಕುಂಡಿಕೆಯಲ್ಲಿ ಕಾವೇರಿ ಉದ್ಭವಿಸಿದೆ.

**2** ಮಂತ್ರಘೋಷದ ನಡುವೇ ತೀರ್ಥರೂಪಿಣಿಯಾಗಿ ಮಾತೆ ಕಾವೇರಿ ದರ್ಶನ ತೋರಿದಳು.

**3** ಕಾವೇರಿ ಕ್ಷೇತ್ರವನ್ನು ವಿವಿಧ ಹೂವುಗಳಿಂದ ಪುಷ್ಪಾಲಂಕಾರ ಮಾಡಿದ್ದು, ಕ್ಷೇತ್ರವು ಹಬ್ಬದ ಕಳೆಯಲ್ಲಿ ಕಂಗೊಳಿಸುತ್ತಿದೆ

**ತೀರ್ಥೋದ್ಭವ ಕಣ್ತುಂಬಿಕೊಂಡ ಭಕ್ತರು!**

ಈ ಉತ್ಸವ ಕೊಡವರ ಸಂಸ್ಕೃತಿಯ ಮುಖ್ಯ ಭಾಗ. ಕಾವೇರಿ ತಾಯಿ, ಕರ್ನಾಟಕದ ಜೀವನಾಡಿ, ತಮಿಳುನಾಡು, ಕರ್ನಾಟಕ ಮತ್ತು ತೆಲಂಗಾಣಾ ಮೂಲಕ ಹರಿಯುತ್ತಾಳೆ. ಈ ತೀರ್ಥೋದ್ಭವ, ಭಕ್ತರಿಗೆ ಆಶೀರ್ವಾದದ ಕ್ಷಣವಾಗಿದೆ. ಭಕ್ತರು ರಾತ್ರಿಯಿಂದಲೇ ರಾಜ್ಯ, ಹೊರರಾಜ್ಯಗಳಿಂದ ಕಾವೇರಿ ತೀರ್ಥೋದ್ಭವ ಕಣ್ತುಂಬಿಕೊಳ್ಳಲ ಆಗಮಿಸಿದ್ದರು. ಬೆಂಗಳೂರು, ಮೈಸೂರು, ಹಾಸನ, ಚಾಮರಾಜನಗರ, ತಮಿಳುನಾಡು, ತೆಲಂಗಾಣಾ ಮತ್ತು ಇತರ ರಾಜ್ಯಗಳಿಂದ ಬಂದು, ದರ್ಶನಕ್ಕಾಗಿ ಕಾಯುತ್ತಿದ್ದರು.

**ಪ್ರಕೃತಿಯ ವಿಸ್ಮಯ**

ಯಾವ ಕಾಲದಲ್ಲಿಯೂ ಈ ಪುಟ್ಟ ಕುಂಡಿಕೆಯಲ್ಲಿ ನೀರು ಬತ್ತುವುದಿಲ್ಲ. ಸಾವಿರಾರು ಕೊಡ ನೀರು ತೆಗೆದರೂ ಕುಂಡಿಕೆ ಭರ್ತಿಯಾಗೇ ಇರುವುದು ಅದೂ ಬೆಟ್ಟದ ಮೇಲೆ ಇರುವ ಕುಂಡಿಕೆ ಎಂಬುದು ಪ್ರಕೃತಿಯ ವಿಸ್ಮಯ. ಎಂತಹಾ ಬರಗಾಲದಲ್ಲೂ ಕುಂಡಿಕೆ ಬತ್ತಿಲ್ಲ. ರೋಗ ನಿವಾರಕ ಎಂದು ಭಕ್ತರು ಸೇವಿಸುತ್ತಾರೆ ಕಾವೇರಿ ತೀರ್ಥೋದ್ಭವ ಸಂದರ್ಭ ಜಿಲ್ಲಾ ಉಸ್ತುವಾರಿ ಸಚಿವ ಬೋಸರಾಜು, ಶಾಸಕರಾದ ಎ ಎಸ್ ಪೊನ್ನಣ್ಣ, ಡಾ ಮಂತರ್ ಗೌಡ, ಸುಜಾಕುಶಾಲಪ್ಪ, ಸರ್ಕಾರದ ಗ್ಯಾರಂಟಿ ಯೋಜನೆ ಅನುಷ್ಟಾನ ಸಮಿತಿ ಅಧ್ಯಕ್ಷ ಧರ್ಮಜಾ ಉತ್ತಪ್ಪ, ಜಿಲ್ಲಾಧಿಕಾರಿ ವೆಂಕಟ್ ರಾಜಾ, ಪೊಲೀಸ್ ವರಿಷ್ಠಾಧಿಕಾರಿ ಕೆ ರಾಮರಾಜನ್, ಎಎಸ್ ಪಿ ಸುಂದರ್ ರಾಜ್ , ಹೆಚ್ಚುವರಿ ಜಿಲ್ಲಾಧಿಕಾರಿ ಐಶ್ವರ್ಯ ಸೇರಿದಂತೆ ಅನೇಕರು ಭಾಗಿಯಾಗಿದ್ದಾರೆ.



**ಮಹಾಪೂಜೆಯ ಹಾಗೂ ಸಾಂಪ್ರದಾಯಿಕ ಆಚರಣೆ**

**ಭಾಗಮಂಡಲ ಭಗಂಡೇಶ್ವರ ದೇವಾಲಯದಲ್ಲಿ ಪೂಜೆ**

### ತಲಕಾವೇರಿಯ ಕುಂಡಿಕೆಯಲ್ಲಿ ಮೊಗೆದಷ್ಟು ನೀರು ಉತ್ಪತ್ತಿ!

ಕಾವೇರಿಯ ಉಗಮ ಸ್ಥಾನ ತಲಕಾವೇರಿಯ ಕುಂಡಿಕೆಯಲ್ಲಿ ಮೊಗೆದಷ್ಟು ನೀರು ಉತ್ಪತ್ತಿಯಾಗುತ್ತಿರುವುದು ವಿಸ್ಮಯಕಾರಿಯಾಗಿದ್ದು, ಈ ಜೀವಜಲವನ್ನು ಕೊಡಗಿನವರು ಸೇರಿದಂತೆ ಸಹಸ್ರಾರು ಮಂದಿ ಭಕ್ತಿಯಿಂದ ಪೂಜಿಸುತ್ತಾರೆ. ಜೀವ ನದಿಯನ್ನು ಕಣ್ತುಂಬಿಸಿಕೊಳ್ಳಲು ಸಹಸ್ರಾರು ಮಂದಿ ಆಗಮಿಸಿದ್ದಾರೆ. ತಲಕಾವೇರಿಯಲ್ಲಿನ ಕುಂಡಿಕೆಯಲ್ಲಿ ಪ್ರತಿ ವರ್ಷ ಕಾವೇರಿ ತೀರ್ಥ ರೂಪದಲ್ಲಿ ದರ್ಶನ ನೀಡುತ್ತಾಳೆ ಎನ್ನುವುದು ಪುರಾತನ ಕಾಲದಿಂದಲೂ ಇರುವ ನಂಬಿಕೆ. ಈ ಸಂದರ್ಭ ಸಹಸ್ರಾರು ಭಕ್ತರು ತೀರ್ಥರೂಪಿಣಿ ಕಾವೇರಿ ತಾಯಿಯನ್ನು ಕಣ್ತುಂಬಿಕೊಳ್ಳುತ್ತಾರೆ. ಕೇವಲ ಕೊಡಗು ಮಾತ್ರವಲ್ಲದೆ ರಾಜ್ಯದ ಮೂಲೆ ಮೂಲೆ ಹಾಗೂ ತಮಿಳುನಾಡಿನಿಂದಲೂ ಸಾಕಷ್ಟು ಭಕ್ತರು ಆಗಮಿಸಿ ಇಲ್ಲಿಂದ ತೀರ್ಥ ಕೊಂಡೊಯ್ಯುತ್ತಾರೆ. ಇಲ್ಲಿನ ಪುಟ್ಟ ಕುಂಡಿಕೆಯಲ್ಲಿನ ಕಾವೇರಿ ಜಲವನ್ನು ತೀರ್ಥವೆಂದು ನಂಬಿ ಪೂಜಿಸುವುದಲ್ಲದೆ, ಮನೆಗೆ ಕೊಂಡೊಯ್ಯುತ್ತಾರೆ. ಭಕ್ತಿ ಭಾವದಿಂದ ಕಾಣುತ್ತಾರೆ. ನಿತ್ಯ ಇಲ್ಲಿ ಪೂಜೆ ನಡೆಯುತ್ತದೆ.

## ಕನೇರಿ ಸ್ವಾಮೀಜಿ ಅರ್ಜಿ ವಜಾಗೊಳಿಸಿದ ಕರ್ನಾಟಕ ಹೈಕೋರ್ಟ್!

### ● ಮುಖ್ಯಮಂತ್ರಿಗಳ ಕೃಪಾಪೋಷಿತ ನಾಟಕ ಮಂಡಳಿ ಎಂಬುದು ಸೇರಿ ಹಲವು ಆಕ್ಷೇಪಾರ್ಹದ ಮಾತುಗಳನ್ನಾಡಿದ್ದ ಸ್ವಾಮೀಜಿ

• ಉದಯವಾಹಿನಿ ಬೆಂಗಳೂರು

ವಿಜಯಪುರ ಜಿಲ್ಲೆಗೆ ಭೇಟಿ ನೀಡುವುದನ್ನು ನಿರ್ಬಂಧಿಸಿ ವಿಜಯಪುರ ಜಿಲ್ಲಾಧಿಕಾರಿ ಹೊರಡಿಸಿದ್ದ ಆದೇಶ ಪ್ರಶ್ನಿಸಿ ಕನೇರಿ ಮಠದ ಕಾಡಸಿದ್ದೇಶ್ವರ ಸ್ವಾಮೀಜಿ ಸಲ್ಲಿಸಿದ್ದ ಅರ್ಜಿಯನ್ನು ಕರ್ನಾಟಕ ಹೈಕೋರ್ಟ್ ವಜಾಗೊಳಿಸಿದೆ.

ಕಲಬುರಗಿ ಪೀಠದ ನ್ಯಾಯಮೂರ್ತಿ ಸಚಿನ್ ಶಂಕರ್ ಮಗದುಮ್ ಅವರ ನೇತೃತ್ವದ ಏಕಸದಸ್ಯ ಪೀಠವು ವಿಚಾರಣೆ ನಡೆಸಿತು. ಲಿಂಗಾಯತ ಮಠಾಧಿಪತಿಗಳ ಒಕ್ಕೂಟವು, ಕಲಾವಿದರಿಂದ ಕೂಡಿದ ಮುಖ್ಯಮಂತ್ರಿಗಳ ಕೃಪಾಪೋಷಿತ ನಾಟಕ ಮಂಡಳಿ ಎಂಬುದು ಸೇರಿ ಹಲವು ಆಕ್ಷೇಪಾರ್ಹದ ಮಾತುಗಳನ್ನು ಆಡಿದ್ದರು ಎನ್ನಲಾಗಿದೆ. ಈ ಹಿನ್ನೆಲೆಯಲ್ಲಿ ವಿಜಯಪುರ ಜಿಲ್ಲಾಧಿಕಾರಿ ಅವರು ಸ್ವಾಮೀಜಿ ಅಕ್ಟೋಬರ್ 16ರಿಂದ ಡಿಸೆಂಬರ್ 14 ರವರೆಗೆ ವಿಜಯಪುರ ಜಿಲ್ಲೆ ಪ್ರವೇಶಿಸಬಾರದು ಎಂದು ಆದೇಶಿಸಿದ್ದರು.

**ಅಸಮಾಧಾನ ವ್ಯಕ್ತಪಡಿಸಿದ ಕೋರ್ಟ್:** ಗುರುವಾರ ವಿಚಾರಣೆ ನಡೆಸಿದ್ದ ಹೈಕೋರ್ಟ್ ಮಠದ ಶ್ರೀ ಕಾಡುಸಿದ್ದೇಶ್ವರ ಸ್ವಾಮೀಜಿ ಅವರು ಸಾರ್ವಜನಿಕ ಕಾರ್ಯಕ್ರಮವೊಂದರಲ್ಲಿ ಬಳಸಿದ ಭಾಷೆ ತಮ್ಮ ಸ್ಥಾನಕ್ಕೆ ತಕ್ಕುದಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿತ್ತು. ಸ್ವಾಮೀಜಿ ಅವರು ಸಾಮಾನ್ಯರಿಗಿಂತಲೂ ಕೆಳಮಟ್ಟದ ಭಾಷೆಯನ್ನು




ಬಳಸಿದ್ದಾರೆ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ.

**ಸ್ವಾಮೀಜಿ ಹೇಳಿದ್ದೇನು?:** ಮಹಾರಾಷ್ಟ್ರದ ಕೊಲ್ಲಾಪುರ ಜಿಲ್ಲೆಯ ಕನೇರಿ ಅದೃಶ್ಯ ಕಾಡುಸಿದ್ದೇಶ್ವರ ಮಠದ ಸ್ವಾಮೀಜಿ ಅವರು, ಮಹಾರಾಷ್ಟ್ರದ ಜತ್ ತಾಲ್ಲೂಕಿನ ಬೀಳೂರು ಗ್ರಾಮದಲ್ಲಿ ನಡೆದ ಸಮಾರಂಭವೊಂದರಲ್ಲಿ, ಲಿಂಗಾಯತ ಮಠಾಧಿಪತಿಗಳ ಒಕ್ಕೂಟದ ಬಗ್ಗೆ ಆಕ್ಷೇಪಾರ್ಹ ಹೇಳಿಕೆ ನೀಡಿದ್ದರು. ಲಿಂಗಾಯತ ಮಠಾಧಿಪತಿಗಳ ಒಕ್ಕೂಟವು ಕಲಾವಿದರಿಂದ ಕೂಡಿದ ಮುಖ್ಯಮಂತ್ರಿಗಳ ಕೃಪಾಪೋಷಿತ ನಾಟಕ ಮಂಡಳಿ. ಅವರು ಬಸವ ಸಂಸ್ಕೃತಿ ಅಭಿಯಾನ ನಾಟಕವನ್ನು ತೆಗೆದುಕೊಂಡು ಕರ್ನಾಟಕದಾದ್ಯಂತ ತಿರುಗಾಡಿ; ದೇವರು ಗುಡ್ಯಾಗ ಇಲ್ಲ. ಗುಡೀಗೆ ಹೋಗಬ್ಯಾಡ್ರಿ, ಮನ್ಯಾಗಿನ ದೇವರುಗಳನ್ನು ತಗೊಂಡು ಹೊಳ್ಯಾಗ ಹಾಕ್ರಿ. ಹೋಟೆಲ್ ದಾಗ ಹೋಗಿ ದಾರು ಕುಡೀರಿ. ಆರಾಮಾಗಿರಿ, ಮಾಂಸ ತಿನ್ರಿ... ಎಂದು ಜನರಿಗೆ ಹೇಳುತ್ತಿದ್ದಾರೆ ಎಂದು ಸ್ವಾಮೀಜಿ ಆರೋಪಿಸಿದ್ದರು. ಈ ಹೇಳಿಕೆಗಳು ಲಿಂಗಾಯತ ಮಠಾಧಿಪತಿಗಳ ವಿರುದ್ಧ ಅವಹೇಳನಕಾರಿಯಾಗಿವೆ ಎಂದು ಪರಿಗಣಿಸಿ, ಜಿಲ್ಲಾಡಳಿತ ಈ ನಿರ್ಬಂಧ ವಿಧಿಸಿತ್ತು.

### ನಿರ್ಬಂಧವನ್ನು ವಾಪಸ್ ಪಡೆಯದಿದ್ದರೆ ವಿಜಯಪುರ ಬಂದ್‌ಗೆ ಕರೆ

ಸರಕಾರದ ಪರ ಹಾಜರಾಗಿದ್ದ ಅಡ್ವೊಕೇಟ್ ಜನರಲ್ ಕೆ.ಶಶಿಕಿರಣ ಶೆಟ್ಟಿ ಅವರು, ಸ್ವಾಮೀಜಿ ಅವರ ಹಿತದೃಷ್ಟಿಯಿಂದಲೇ ಅವರ ವಿಜಯಪುರ ಭೇಟಿಯನ್ನು ನಿರ್ಬಂಧಿಸಲಾಗಿದೆ ಎಂದು ನ್ಯಾಯಾಲಯಕ್ಕೆ ತಿಳಿಸಿದರು. ರಾಜ್ಯ ಗುಪ್ತಚರ ಇಲಾಖೆಯ ಮಾಹಿತಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹಾಗೂ ಡಿಸಿಪಿ ವರದಿಗಳನ್ನು ಆಧರಿಸಿ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಅವರು ವಿವರಿಸಿದ್ದರು. ಇತ್ತ, ಕನೇರಿ ಶ್ರೀಗಳ ಜಿಲ್ಲಾ ಪ್ರವೇಶ ನಿರ್ಬಂಧವನ್ನು ವಾಪಸ್ ಪಡೆಯದಿದ್ದರೆ ವಿಜಯಪುರ ಬಂದ್‌ಗೆ ಕರೆ ನೀಡಬೇಕಾಗುತ್ತದೆ ಎಂದು ಶಾಸಕ ಬಸನಗೌಡ ಪಾಟೀಲ ಯತ್ನಾಳ ಜಿಲ್ಲಾಡಳಿತಕ್ಕೆ ಎಚ್ಚರಿಕೆ ನೀಡಿದ್ದರು. ಸಮಾಜದಲ್ಲಿ ನಡೆಯುತ್ತಿರುವ ಘಟನಾವಳಿಗಳನ್ನು ಯಥಾವತ್ತಾಗಿ ವಿವರಿಸಿದ್ದಕ್ಕೆ ಶ್ರೀಗಳ ಮೇಲೆ ಕ್ರಮಕ್ಕೆ ಮುಂದಾಗಿರುವುದು ಸರಿಯಲ್ಲ ಎಂದು ಯತ್ನಾಳ ತಮ್ಮ 'ಎಕ್ಸ್' ಖಾತೆಯಲ್ಲಿ ಆಕ್ರೋಶ ವ್ಯಕ್ತಪಡಿಸಿದ್ದರು.



**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹13,277/Gram24ct ₹12,170/Gram22ct ಬೆಳ್ಳಿ: ₹193.90/Gram

# ಮುಖ್ಯಮಂತ್ರಿ ಆಗಬೇಕು ಎನ್ನುವ ಬಯಕೆ ಎಲ್ಲರಿಗೂ ಇರುತ್ತದೆ

## ಕರ್ನಾಟಕ ಕಾಂಗ್ರೆಸ್ಸಿನಲ್ಲಿ ಬದಲಾವಣೆಯಾಗಲಿದೆ ಎನ್ನುವ ಸುದ್ದಿಯನ್ನು ಕಾಂಗ್ರೆಸ್ಸಿನ ಕೆಲವು ನಾಯಕರೇ ಹರಿಯ ಬಿಟ್ಟಿದ್ದಾರೆ

• **ಉದಯವಾಹಿನಿ, ಬೆಂಗಳೂರು**

ಬಿಹಾರದ ವಿಧಾನಸಭಾ ಚುನಾವಣೆಯ ನಂತರ, ಕರ್ನಾಟಕ ಕಾಂಗ್ರೆಸ್ಸಿನಲ್ಲಿ ಬದಲಾವಣೆಯಾಗಲಿದೆ ಎನ್ನುವ ಸುದ್ದಿಯನ್ನು ಕಾಂಗ್ರೆಸ್ಸಿನ ಕೆಲವು ನಾಯಕರೇ ಹರಿಯ ಬಿಟ್ಟಿದ್ದಾರೆ. ಹಾಗಾಗಿ, ನವೆಂಬರ್ ಕ್ರಾಂತಿ ನಡೆಯಲಿದೆ ಎನ್ನುವ ಸುದ್ದಿ ರಾಜ್ಯಾದ್ಯಂತ ಚರ್ಚೆಯಲ್ಲಿದೆ. ಸಿದ್ದರಾಮಯ್ಯನವರ ಪರಮಾಪ್ತ ವಲಯದಲ್ಲಿ ಕಾಣಿಸಿಕೊಳ್ಳುವ ವಸತಿ ಸಚಿವ ಜಮೀರ್ ಅಹ್ಮದ್ ಖಾನ್, ಮುಖ್ಯಮಂತ್ರಿ ಬದಲಾವಣೆ ಮತ್ತು ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಬಗ್ಗೆ ಮಾತನಾಡಿದ್ದಾರೆ.

ಆದರೆ, ಆರ್‌ಎಸ್‌ಎಸ್ ಬಗ್ಗೆ ಹೆಚ್ಚಿನ ಪ್ರತಿಕ್ರಿಯೆಯನ್ನು ಅವರು ಕೊಡಲು ಹೋಗಲಿಲ್ಲ. ಮುಖ್ಯಮಂತ್ರಿ ಆಗಬೇಕು ಎನ್ನುವ ಬಯಕೆ ಎಲ್ಲರಿಗೂ ಇರುತ್ತದೆ, ಇದರಲ್ಲಿ ತಪ್ಪೇನಿದೆ ಆದರೆ, ನಮ್ಮದು ಹೈಕಮಾಂಡ್ ಪಾರ್ಟಿ, ಅಲ್ಲಿ ಏನು ನಿರ್ಧಾರವಾಗುತ್ತೋ ಅದೇ ಅಂತಿಮ ಎಂದು ವಸತಿ ಸಚಿವರು ಹೇಳಿದ್ದಾರೆ.

ಕೆಲವು ದಿನಗಳ ಹಿಂದೆ, ಶಾಸಕರ ಮಾತೇ ಅಂತಿಮ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದರು. ಇನ್ನು, ಸಾರ್ವಜನಿಕ



ಉದಯವಾಹಿನಿ ಚಿತ್ರ

ಸ್ಥಳದಲ್ಲಿ ಖಾಸಗಿ ಸಂಸ್ಥೆಗಳ ಚಟುವಟಿಕೆಗಳನ್ನು ನಿರ್ಬಂಧಿಸುವ ನಿರ್ಧಾರದ ಬಗ್ಗೆ ಜಮೀರ್ ಅಹ್ಮದ್ ಖಾನ್ ಪ್ರತಿಕ್ರಿಯೆ ನೀಡಿದ್ದಾರೆ.

ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಬಗ್ಗೆ ನಾನೇನು ಪ್ರತಿಕ್ರಿಯೆ ನೀಡಲಿ. ಅದೊಂದು ಸಂಘಟನೆ, ಅವರು ಅವರ ಕೆಲಸವನ್ನು ಮಾಡುತ್ತಾರೆ. ನಾವು, ನಮ್ಮ ಕೆಲಸವನ್ನು ಮಾಡುತ್ತೇವೆ ಎಂದು

**ಮುಖ್ಯಮಂತ್ರಿ ಎನ್ನುವುದು ಎಲ್ಲರ ಕನಸು, ಆದರೆ, ಎಲ್ಲರೂ ಮುಖ್ಯಮಂತ್ರಿ ಆಗಲು ಸಾಧ್ಯವೇ ಮುಖ್ಯಮಂತ್ರಿ ಇವರಾಗಬೇಕು ಎನ್ನುವ ನಮ್ಮ ಅಭಿಪ್ರಾಯವನ್ನು ತಿಳಿಸಬಹುದು. ಆದರೆ, ಅಂತಿಮ ನಿರ್ಧಾರ ತೆಗೆದುಕೊಳ್ಳುವುದು ಹೈಕಮಾಂಡ್. ನನ್ನ ಆಸೆ ಒಂದೇ, ಫುಲ್ ಐದು ವರ್ಷ, ಸಿದ್ದರಾಮಯ್ಯನವರೇ ಮುಖ್ಯಮಂತ್ರಿ ಆಗಿ ಮುಂದುವರಿಯ ಬೇಕು ಎನ್ನುವುದು ಎಂದು ಜಮೀರ್ ಅಹ್ಮದ್ ಖಾನ್ ಹೇಳಿದ್ದಾರೆ.**

ಜಮೀರ್ ಅಹ್ಮದ್ ಖಾನ್ ಹೇಳಿದ್ದಾರೆ. ಕುಣಿಗಲ್ ಶಾಸಕ ರಂಗನಾಥ್, ಮಾಜಿ ಸಂಸದ ಎಲ್‌ಆರ್ ಶಿವರಾಮೇಗೌಡ, ಡಿಕೆ ಶಿವಕುಮಾರ್ ಅವರು ಮುಖ್ಯಮಂತ್ರಿ ಆಗುವುದು ಖಚಿತ ಎಂದು ಹೇಳಿದ್ದರು. ಮುಂದಿನ ವರ್ಷ, ಸಿಎಂ ಆಗಿ ದಸರಾಗೆ ಬರಲಿ ಎಂದು ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಮಿಥುನ್ ರೈ ಆಶಯವನ್ನು ವ್ಯಕ್ತಪಡಿಸಿದ್ದರು. ಈ ಪೈಕಿ, ಇಬ್ಬರಿಗೆ ಕೆಪಿಸಿಸಿಯ ಶಿಸ್ತು ಸಮಿತಿ ನೋಟಿಸ್ ಅನ್ನು ನೀಡಿತ್ತು.

**ಈ ಹಿಂದೆ ಕೂಡಾ ಹಲವು ಬಾರಿ ಜಮೀರ್ ಅಹ್ಮದ್, ಸಿದ್ದರಾಮಯ್ಯನವರೇ ನಮ್ಮ ಮುಖ್ಯಮಂತ್ರಿಗಳು, ಪೂರ್ಣಾವಧಿಗೆ ಅವರೇ ಸಿಎಂ ಎಂದು ಬಹಿರಂಗವಾಗಿಯೇ ಹೇಳಿದ್ದರು. ಇದು, ಹೈಕಮಾಂಡ್ ಸಿಟ್ಟಿಗೆ ಕಾರಣವಾಗಿತ್ತು. ಎಐಸಿಸಿ ಉಸ್ತುವಾರಿ ರಣದೀಪ್ ಸುರ್ಜೇವಾಲ, ಜಮೀರ್ ಅವರನ್ನು ಕರೆಸಿ ಮಾತನಾಡಿದ್ದರು. ಡಿಸಿಎಂ ಡಿಕೆ ಶಿವಕುಮಾರ್ ಕೂಡಾ ನೋಟಿಸ್ ನೀಡುವುದಾಗಿ ಎಚ್ಚರಿಕೆಯನ್ನು ನೀಡಿದ್ದರು. ಮಲ್ಲಿಕಾರ್ಜುನ ಖರ್ಗೆಯವರು ರಾಜ್ಯ ರಾಜಕಾರಣಕ್ಕೆ ಬರುತ್ತಾರಾ ಎನ್ನುವ ಮಾಧ್ಯಮಗಳ ಪ್ರಶ್ನೆಗೆ ಜಮೀರ್‌ಅಹ್ಮದ್ ಖಾನ್ ನೇರವಾದ ಉತ್ತರವನ್ನು ಕೊಡಲಿಲ್ಲ. ಬದಲಿಗೆ, ಸಿದ್ದರಾಮಯ್ಯನವರೇ ಪೂರ್ಣಾವಧಿಗೆ ಸಿಎಂ ಆದರೆ ಒಳ್ಳೆಯದು ಎನ್ನುವ ಆಶಯವನ್ನು ವ್ಯಕ್ತಪಡಿಸಿದ್ದಾರೆ.**

---

## ಇಂಜಿನೀಯರ್ ಕಾಲೇಜು ಕ್ಯಾಂಪಸ್‌ನಲ್ಲಿ ವಿದ್ಯಾರ್ಥಿನಿ ಮೇಲೆ ರೇಪ್

• **ಉದಯವಾಹಿನಿ, ಬೆಂಗಳೂರು**

ದಕ್ಷಿಣ ಬೆಂಗಳೂರಿನಲ್ಲಿರುವ ಖಾಸಗಿ ಇಂಜಿನಿಯರಿಂಗ್ ಸಂಸ್ಥೆಯ ಆವರಣದಲ್ಲಿ ಪುರುಷರ ಶೌಚಾಲಯದಲ್ಲಿ ತನ್ನ ಕಾಲೇಜು ಸಹಪಾಠಿಯ ಮೇಲೆ ಅತ್ಯಾಚಾರ ಎಸಗಿದ ಆರೋಪದ ಮೇಲೆ 21 ವರ್ಷದ ಇಂಜಿನಿಯರಿಂಗ್ ವಿದ್ಯಾರ್ಥಿಯನ್ನು ಬಂಧಿಸಲಾಗಿದೆ. 6 ನೇ ಸೆಮಿಸ್ಟರ್ ವಿದ್ಯಾರ್ಥಿ ಜೀವನ್ ಗೌಡ ಬಂಧಿತ ಆರೋಪಿ. ಆತನನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಘಟನೆ ಅಕ್ಟೋಬರ್ 10 ರಂದು ನಡೆದಿದ್ದು, ಅದೇ ಕಾಲೇಜಿನಲ್ಲಿ ಏಳನೇ ಸೆಮಿಸ್ಟರ್ ವಿದ್ಯಾರ್ಥಿಯಾಗಿದ್ದ ಸಂತ್ರಸ್ತೆ ಐದು ದಿನಗಳ ನಂತರ ಅಂದರೆ ಅಕ್ಟೋಬರ್ 15 ರಂದು ದೂರು ದಾಖಲಿಸಿದ್ದಾರೆ. ಭಾರತೀಯ ನ್ಯಾಯ ಸಂಹಿತಾ ಬಿಎನ್‌ಎಸ್) ಸೆಕ್ಷನ್ 64 (ಅತ್ಯಾಚಾರಕ್ಕೆ ಶಿಕ್ಷೆ) ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಸಂತ್ರಸ್ತೆ ಮತ್ತು ಆರೋಪಿಗೆ ಪರಸ್ಪರ ಪರಿಚಯವಿತ್ತು. ಜೀವನ್ ಗೌಡ ಓದಿನಲ್ಲಿ ಹಿಂದುಳಿದಿದ್ದ ಎಂದು ವಿವರಿಸಲಾಗಿದೆ. ಘಟನೆ ನಡೆದ ದಿನ ಸಂತ್ರಸ್ತೆ ಕೆಲವು ವಸ್ತುಗಳನ್ನು ಸಂಗ್ರಹಿಸಲು ಜೀವನ್ ಗೌಡನನ್ನು ಭೇಟಿಯಾಗಿದ್ದರು ಎಂದು ವರದಿಯಾಗಿದೆ. ಊಟದ ವಿರಾಮದ ಸಮಯದಲ್ಲಿ, ಜೀವನ್ ಆಕೆಗೆ ಹಲವು ಬಾರಿ ಕರೆ ಮಾಡಿ, ಏಳನೇ ಮಹಡಿಯಲ್ಲಿರುವ ಆರ್ಕಿಟೆಕ್ಚರ್ ಬ್ಲಾಕ್ ಬಳಿ ತನ್ನನ್ನು ಭೇಟಿಯಾಗುವಂತೆ ಕೇಳಿದ ಎಂದು ಆರೋಪಿಸಲಾಗಿದೆ.

---

## ಸಾರ್ವಜನಿಕ ಸ್ಥಳಗಳಲ್ಲಿ ನಮಾಜ್ ನಿಷೇಧಿಸಿ ಎಂದು ಸಿಎಂಗೆ ಪತ್ರ ಬರೆದ ಯತ್ನಾಳ

• **ಉದಯವಾಹಿನಿ, ಬೆಂಗಳೂರು**

ಸಾರ್ವಜನಿಕ ಸ್ಥಳಗಳಲ್ಲಿ, ಸರ್ಕಾರಿ ಜಾಗಗಳಲ್ಲಿ ನಮಾಜ್ ಮಾಡಲು ಅವಕಾಶ ಕೊಡಬಾರದು ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದಾರೆ. ಇಂಗ್ಲಿಷ್‌ನಲ್ಲಿ ಬರೆದಿರುವ ಪತ್ರದ ಪ್ರತಿಯನ್ನು ಅವರು ತಮ್ಮ ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಂಡು, ಸರ್ವ ಜನಾಂಗದ ಶಾಂತಿಯ ತೋಟ' ಎಂಬ ಸರ್ಕಾರದ ಆಶಯ ಎಲ್ಲರಿಗೂ ಅನ್ವಯ ಆಗಬೇಕು.

ಈ ನಿಟ್ಟಿನಲ್ಲಿ ಸರ್ಕಾರ ಕೂಡಲೇ ಅಗತ್ಯ ಕ್ರಮಕೈಗೊಳ್ಳಲಿ ಎಂದು ಆಗ್ರಹಿಸಿದ್ದಾರೆ. ಸರ್ಕಾರವೇ ಪರಿಚಯಿಸಿರುವ ನಿಯಮಾವಳಿಗಳ ಅನುಸಾರ ಸಾರ್ವಜನಿಕ ಸ್ಥಳಗಳಲ್ಲಿ, ಸರ್ಕಾರಿ ಜಾಗಗಳಲ್ಲಿ ನಮಾಜ್ ಮಾಡಲು ಅವಕಾಶ ಕೊಡಬಾರದೆಂದು ಮುಖ್ಯಮಂತ್ರಿಗಳಿಗೆ ವಿವರವಾಗಿ ಪತ್ರ ಬರೆದಿದ್ದೇನೆ ಎಂದು ಅವರು ತಿಳಿಸಿದ್ದಾರೆ. ರಸ್ತೆಗಳು, ಬಸ್ ನಿಲ್ದಾಣ, ಪಾದಚಾರಿ ಮಾರ್ಗಗಳಲ್ಲಿ ಸೇರಿದಂತೆ ಅನೇಕ ಸಾರ್ವಜನಿಕ ಸ್ಥಳಗಳಲ್ಲಿ ನಮಾಜ್ ಮಾಡುವುದನ್ನು ನೋಡುತ್ತಿದ್ದೇವೆ. ಸರ್ಕಾರಿ ಜಾಗಗಳಲ್ಲಿ ಖಾಸಗಿ ಸಂಘಸಂಸ್ಥೆಗಳ ಚಟುವಟಿಕೆಗಳನ್ನು ನಿರ್ಬಂಧಿಸಿದಂತೆ ನಮಾಜ್ ಮಾಡುವುದನ್ನೂ ನಿಷೇಧಿಸಬೇಕು. ಹಾಗೇ ಮಾಡಿದಾಗಲೇ ನೀವು ನಿಜವಾದ ಜಾತ್ಯಾತೀತ ಎಂದು ಸಿಎಂ ಅವರಿಗೆ ಯತ್ನಾಳ ಆಗ್ರಹಿಸಿದ್ದಾರೆ.

---

## ಕೆಂಪೇಗೌಡ ಏರ್ ಪೋರ್ಟ್ ರಸ್ತೆಯಲ್ಲಿ ಭಾರೀ ಟ್ರಾಫಿಕ್ ಜಾಮ್

• **ಉದಯವಾಹಿನಿ, ಬೆಂಗಳೂರು**

ಐಟಿ ಸಿಟಿ ಬೆಂಗಳೂರಿನಲ್ಲಿ ಮೂಲ ಸೌಕರ್ಯಗಳ ಕೊರತೆ, ಟ್ರಾಫಿಕ್ ಮತ್ತು ರಸ್ತೆ ಗುಂಡಿಗಳಂತಹ ಸಮಸ್ಯೆಗಳು ಸಾಕಷ್ಟಿವೆ ಎಂದು ಇಷ್ಟು ದಿನ ಉದ್ಯಮಿಗಳು ಸರ್ಕಾರದ ಮೇಲೆ ಆರೋಪ ಮಾಡುತ್ತಿದ್ದರು. ನಗರದಲ್ಲಿನ ರಸ್ತೆ ಗುಂಡಿಗಳು ಮತ್ತು ಕಸದ ಬಗ್ಗೆ ಚೀನಾ ಉದ್ಯಮಿಯೊಬ್ಬರು ತಮ್ಮನ್ನು ಪ್ರಶ್ನಿಸಿದ್ದಾರೆಂದು ಬಯೋಕಾನ್ ಮುಖ್ಯಸ್ಥೆ ಕಿರಣ್ ಮಜುಂದಾರ್ ಶಾ ಇತ್ತೀಚೆಗಷ್ಟೇ ಪೋಸ್ಟ್ ಮಾಡಿದ್ದರು. ಈ ವಿಚಾರ ಭಾರಿ ಚರ್ಚೆಗೆ ಗ್ರಾಸವಾಗಿತ್ತು. ಇದೀಗ ಬೆಂಗಳೂರಿನಿಂದ



ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ತೆರಳುವ ರಸ್ತೆಯ ಸಂಚಾರದಟ್ಟಣೆ ಬಗ್ಗೆ ಮಾಜಿ ಕ್ರಿಕೆಟರ್ ಸುನೀಲ್ ಜೋಶಿ ಅಸಮಾಧಾನ ಹೊರ ಹಾಕಿದ್ದಾರೆ.

ಈ ಬಗ್ಗೆ ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿರುವ ಅವರು, ವಿಮಾನ ನಿಲ್ದಾಣ ಮಾರ್ಗದಲ್ಲಿ ಹಗಲಿನ ವೇಳೆಯೂ ಸರಕು ಸಾಗಣೆ ಮಾಡುವ ವಾಹನಗಳು ಸಂಚಾರ ನಡೆಸುತ್ತಿವೆ. ಇವುಗಳಿಗೆ ರಾತ್ರಿ 10ರಿಂದ ಬೆಳಿಗ್ಗೆ 6ರವರೆಗೆ ಮಾತ್ರ ಸಂಚಾರಕ್ಕೆ ಅನುಮತಿ ಇರುವಾಗ ಇದು ಹೇಗೆ ಸಾಧ್ಯ ಎಂದು ಪ್ರಶ್ನಿಸಿದ್ದಾರೆ. **ಸಿಎಂ, ಡಿಸಿಎಂಗೆ ಪ್ರಶ್ನೆ:** ಸರಕು ಸಾಗಣೆ ಮಾಡುವ ವಾಹನಗಳು ಫಾಸ್ಟ್ ಲೇನ್‌ಗಳನ್ನು ಬಂದ್ ಮಾಡುತ್ತಿರುವ ಕಾರಣ ವಿಮಾನ ನಿಲ್ದಾಣಕ್ಕೆ ಹೋಗುವ ಅಥವಾ ಬರುವ ಪ್ರಯಾಣಿಕರು ಭಾರಿ ಟ್ರಾಫಿಕ್ ಸಮಸ್ಯೆಯನ್ನು ಅನುಭವಿಸುತ್ತಿದ್ದಾರೆ. ಸಾಮಾನ್ಯ ಜನರು ಪ್ರಯಾಣಿಸಲು ತುಂಬಾ ಕಷ್ಟ ಅನುಭವಿಸುತ್ತಿದ್ದಾರೆ. ಹೀಗಾಗಿ ಈ ಬಗ್ಗೆ ಕ್ರಮ ಕೈಗೊಳ್ಳಿ ಎಂದು ಸುನೀಲ್ ಜೋಶಿ ಸರ್ಕಾರಕ್ಕೆ ಒತ್ತಾಯಿಸಿದ್ದಾರೆ.

---

## ಹೆಬ್ಬಾಳ ಕ್ಷೇತ್ರದಲ್ಲಿಯೂ ಮತ ಕಳವು: ಸಚಿವ ಬೈರತಿ ಸುರೇಶ್ ಆರೋಪ

• **ಉದಯವಾಹಿನಿ, ಬೆಂಗಳೂರು**

2023ರಲ್ಲಿ ನಡೆದ ವಿಧಾನಸಭೆ ಚುನಾವಣೆಯಲ್ಲಿ ಹೆಬ್ಬಾಳ ಕ್ಷೇತ್ರದಲ್ಲಿಯೂ ಮತ ಕಳವು ನಡೆದಿತ್ತು ಎಂದು ಕ್ಷೇತ್ರದ ಶಾಸಕರೂ ಆಗಿರುವ ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಆರೋಪಿಸಿದರು. ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರದ ಮತ ಕಳವು ಮಾಡುತ್ತಿದೆ ಎಂದು ಆರೋಪಿಸಿ ಕಾಂಗ್ರೆಸ್ ಪಕ್ಷ ಆಯೋಜಿಸಿದ್ದ ಸಹಿ ಸಂಗ್ರಹ ಅಭಿಯಾನದಲ್ಲಿ ಅವರು ಈ ಗಂಭೀರ ಆರೋಪ ಮಾಡಿದರು ಹೆಬ್ಬಾಳ ಕ್ಷೇತ್ರದಲ್ಲಿ 20 ಸಾವಿರಕ್ಕೂ ಹೆಚ್ಚು ಮತಗಳ ಕಳವು ಆಗಿದೆ. ಆದರೂ ಕ್ಷೇತ್ರದ ಮತದಾರರು ನನ್ನ ಕೈಬಿಡಲಿಲ್ಲ. 32 ಸಾವಿರಕ್ಕೂ ಹೆಚ್ಚು ಮತಗಳ ಅಂತರದಿಂದ ಗೆಲುವು ತಂದುಕೊಟ್ಟರು ಎಂದರು. ಪ್ರಜಾಪ್ರಭುತ್ವದಲ್ಲಿ ಪ್ರತಿಯೊಬ್ಬರಿಗೂ ಒಂದು ಮತ ಚಲಾಯಿಸುವ ಹಕ್ಕು ನೀಡಲಾಗಿದೆ. ಆ ಒಂದು ಮತವನ್ನೇ ಕಸಿದುಕೊಳ್ಳುವಂಥ ಪ್ರಯತ್ನವನ್ನು ಬಿಜೆಪಿ ಮಾಡುತ್ತಿದೆ.

ಆ ಮೂಲಕ, ಪ್ರಜಾಪ್ರಭುತ್ವದ ಹತ್ಯೆ ಮಾಡಲಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಹೆಬ್ಬಾಳ ಕ್ಷೇತ್ರದ ವ್ಯಾಪ್ತಿಯಲ್ಲಿ ವಾಸ ಇಲ್ಲದಿದ್ದರೂ ಚುನಾವಣೆ ಸಂದರ್ಭದಲ್ಲಿ ಸಾವಿರಾರು ಜನ ಪ್ರತ್ಯಕ್ಷರಾಗುತ್ತಾರೆ. ಬೆಂಗಳೂರು ಹೊರವಲಯದ ಪಟ್ಟಣಗಳಿಂದ ಇಲ್ಲಿಗೆ ಬಂದು ಮತ ಚಲಾಯಿಸಿ ಹೋಗುತ್ತಾರೆ. ಮತ್ತೆ ಅವರು ಬರುವುದು ಮುಂದಿನ ಚುನಾವಣೆ ವೇಳೆಗೆ' ಎಂದು ಹೇಳಿದ ಅವರು, 'ಗಂಗೇನಹಳ್ಳಿ ವಾರ್ಡ್ ವಿಳಾಸ ಹೊಂದಿದ ಸಾವಿರಕ್ಕೂ ಹೆಚ್ಚು ಜನರು ಬಂದು ಮತ ಹಾಕುತ್ತಾರೆ. ಇದು ಹೇಗೆ ಸಾಧ್ಯ ಎಂದು ಪ್ರಶ್ನಿಸಿದರು.

---

## ಜಾತಿಗಣತಿ ಸಮೀಕ್ಷೆಗೆ ಹಿರಿಯ ಅಧಿಕಾರಿಗಳಿಂದಲೇ ಅಸಹಕಾರ

• **ಉದಯವಾಹಿನಿ, ಬೆಂಗಳೂರು**

ಸಾಮಾಜಿಕ-ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆಯಲ್ಲಿ ಭಾಗವಹಿಸಿಲ್ಲ ಎಂಬ ಆರೋಪವನ್ನು ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ವಿಶೇಷ ಆಯುಕ್ತ ಮುನೀಶ್ ಮೌದ್ಗಿಲ್ ಅವರು ನಿರಾಕರಿಸಿದ್ದಾರೆ.

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಕಂದಾಯ ವಿಭಾಗದ ವಿಶೇಷ ಆಯುಕ್ತ ಮುನೀಶ್ ಮೌದ್ಗಿಲ್ ಅವರ ಮನೆಗೆ ಸಮೀಕ್ಷೆಗೆಂದು ತೆರಳಿದ್ದ ಸಿಬ್ಬಂದಿ ಗಣತಿ ಮಾಡದೆ ಹಿಂದಿರುಗಿದ್ದಾರೆ.

ಮನೆಯ ಕಾಲಿಂಗ್ ಬೆಲ್ ಮಾಡಿದಾಗ ಯಾರೂ ಮನೆಯ ಬಾಗಿಲು ತೆರೆಯಲಿಲ್ಲ. . ಒಟ್ಟು ಮೂರು ಬಾರಿ ಮನಿಶ್ ಮೌದ್ಗಿಲ್ ಮನೆಗೆ ಸಮೀಕ್ಷೆಗೆಂದು ತೆರಳಿದ್ದರೂ ಮಾಹಿತಿ ಸಂಗ್ರಹಿಸಲು ಸಾಧ್ಯವಾಗಿಲ್ಲ ಅಧಿಕಾರಿಗಳಿಗೆ ಸಿಬ್ಬಂದಿ ತಿಳಿಸಿದ್ದಾರೆ. ಇದಕ್ಕೆ ನೋಡಲ್ ಅಧಿಕಾರಿ, ಗಣತಿದಾರರಿಗೆ ಸಮೀಕ್ಷೆ ಅಪ್ಲಿಕೇಶನ್‌ನಲ್ಲಿ ನಿರಾಕರಣೆ ಆಯ್ಕೆಯನ್ನು ಬಳಸಲು ಮತ್ತು ಅದಕ್ಕೆ ಅನುಗುಣವಾಗಿ ಅದನ್ನು ಸಮೀಕ್ಷೆಯನ್ನು ಕೊನೆಗೊಳಿಸಿ ಎಂದು ನಿರ್ದೇಶಿಸಿದ್ದಾರೆಂದು ಹೇಳಲಾಗುತ್ತಿದೆ.ಈ ಆರೋಪಕ್ಕೆ ಪ್ರತಿಕ್ರಿಯೆ ನೀಡಿರುವ ಮೌದ್ಗಿಲ್ ಅವರು, ಆನ್'ಲೈನ್ ಸಮೀಕ್ಷೆಯಲ್ಲಿ ಮಾಹಿತಿಗಳನ್ನು ಭರ್ತಿ ಮಾಡಲಾಗಿದೆ. ಆದರೆ, ಕೆಲವರು ಸುಳ್ಳುಗಳನ್ನು ಪ್ರಚಾರ ಮಾಡುತ್ತಿದ್ದಾರೆಂದು ಆರೋಪಿಸಿದ್ದಾರೆ.



ಉದಯವಾಹಿನಿ ಚಿತ್ರ

**ನಾನು ಬೆಳಿಗ್ಗೆ 8 ಗಂಟೆಗೆ ಮನೆಯಿಂದ ಹೊರಟರೆ ವಾಪಸ್ ಬರುವುದು ರಾತ್ರಿ 10 ಗಂಟೆಯಾಗುತ್ತದೆ. ಒಂದು ಬಾರಿ ಅವರು ಬಂದಾಗ ನನ್ನ ಪತ್ನಿ ಮನೆಯಲ್ಲಿ ಇರಲಿಲ್ಲ. ನಾಳೆ ಬರಲು ಹೇಳಿದ್ದೆ ಅಷ್ಟೇ. ಅವರು ಸುಮ್ಮನೆ ಪ್ರಚಾರ ಮಾಡುತ್ತಿದ್ದಾರೆ. ಸಂಜೆ ಆನ್‌ಲೈನ್‌ನಲ್ಲಿ ಸಮೀಕ್ಷೆಯನ್ನು ಪೂರ್ಣಗೊಳಿಸಿದ್ದೇನೆ. ಸಮೀಕ್ಷೆಗೆ ಗೈರಾಗಿರುವ ಸುಮಾರು 2 ಸಾವಿರ ಮಂದಿಯ ಮೇಲೆ ಶಿಸ್ತು ಕ್ರಮವಾಗುತ್ತಿದೆ. ಅದು ಆಗಬಾರದು. ಸುಖಾಸುಮ್ಮನೆ ಇಂತಹ ವಿಚಾರಗಳನ್ನು ಪ್ರಚಾರ ಮಾಡುತ್ತಿದ್ದಾರೆ' ಎಂದರು.**

---

## 7 ಸರ್ಕಾರಿ ಸಂಸ್ಥೆ ರದ್ದು, 9 ಸಂಸ್ಥೆ ವಿಲೀನಕ್ಕೆ ಶಿಫಾರಸು

• **ಉದಯವಾಹಿನಿ, ಬೆಂಗಳೂರು**

ಕಾಂಗ್ರೆಸ್ ಶಾಸಕ ಆರ್‌ವಿ ದೇಶಪಾಂಡೆ ನೇತೃತ್ವದ ಕರ್ನಾಟಕ ಆಡಳಿತ ಸುಧಾರಣಾ ಆಯೋಗ -II (ಕೆಎಆರ್‌ಸಿ-II), ನಿಗಮ-ಮಂಡಳಿಗಳು, ಸಂಸ್ಥೆ ಮತ್ತು ಪ್ರಾಧಿಕಾರಗಳ ರದ್ದು, ಹಾಗೂ ವಿಲೀನ ಸೇರಿದಂತೆ 449 ಹೊಸ ಶಿಫಾರಸುಗಳೊಂದಿಗೆ ತನ್ನ ಒಂಬತ್ತನೇ ವರದಿಯನ್ನು ಸಿದ್ದರಾಮಯ್ಯ ಅವರಿಗೆ ಸಲ್ಲಿಸಿತು.

ವಿಧಾನಸೌಧದಲ್ಲಿ ಆಯೋಗದ ಅಧ್ಯಕ್ಷ ಆರ್.ವಿ.ದೇಶಪಾಂಡೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ವರದಿ ಸಲ್ಲಿಸಿದರು. ವರದಿ ಸಲ್ಲಿಸಿದ ಬಳಿಕ ಮಾತನಾಡಿದ ದೇಶಪಾಂಡೆ ಅವರು, ರಾಜ್ಯದ 148 ನಿಗಮ-ಮಂಡಳಿಗಳ ಪೈಕಿ 82 ಸಂಸ್ಥೆಗಳನ್ನು ಪರಿಶೀಲನೆಗೊಳಪಡಿಸಲಾಗಿದೆ. 5 ವರ್ಷಗಳ ಆರ್ಥಿಕ ವ್ಯವಹಾರ, ಕಾರ್ಯ ಚಟುವಟಿಕೆಗಳನ್ನು ಪರಿಶೀಲಿಸಲಾಗಿದೆ. ಅದರಲ್ಲಿ ರಾಜ್ಯ ಸಮಾಜ ಕಲ್ಯಾಣ ಮಂಡಳಿ, ರಾಜ್ಯ ಸಂಯಮ ಮಂಡಳಿ, ಸಹಕಾರಿ ಕೋಳಿ ಸಾಕಣೆ ಒಕ್ಕೂಟ, ಕರ್ನಾಟಕ ಪಲ್ ವುಡ್ ಲಿಮಿಟೆಡ್, ರಾಜ್ಯ ಆಗ್ರೋ-ಕಾರ್ನ್ ಪ್ರಾಡಕ್ಟ್ಸ್ ಲಿಮಿಟೆಡ್, ಮೈಸೂರು ಲ್ಯಾಂಪ್ ವರ್ಕ್ಸ್ ಲಿಮಿಟೆಡ್ ಮತ್ತು ಆಗ್ರೋ ಇಂಡಸ್ಟ್ರೀಸ್ ಕಾರ್ಪೋರೇಷನ್ ಲಿಮಿಟೆಡ್ ಮುಚ್ಚುವಂತೆ



ಶಿಫಾರಸು ಮಾಡಲಾಗಿದೆ ಎಂದು ಹೇಳಿದರು.

ಜೊತೆಗೆ ಸದ್ಯ ಅವಶ್ಯಕತೆಯಿಲ್ಲದ 9 ಸರ್ಕಾರಿ ಸಂಸ್ಥೆಗಳನ್ನು ಬೇರೆ ಇಲಾಖೆ ಅಥವಾ ನಿಗಮ-ಮಂಡಳಿಗಳೊಂದಿಗೆ ವಿಲೀನಕ್ಕೆ ತಿಳಿಸಲಾಗಿದೆ.

ರಾಜ್ಯ ಏಡ್ಸ್ ತಡೆಗಟ್ಟುವ ಸೊಸೈಟಿಯನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರೇಷ್ಮೆ ಕೈಗಾರಿಕೆ ನಿಗಮವನ್ನು ರೇಷ್ಮೆ ಮಾರುಕಟ್ಟೆ ಮಂಡಳಿ, ಆಹಾರ ಕರ್ನಾಟಕ ಲಿಮಿಟೆಡ್‌ನ್ನು ರಾಜ್ಯ ಕೃಷಿ ಉತ್ಪನ್ನ, ಸಂಸ್ಕರಣೆ ಮತ್ತು ತುರ್ತು ನಿಗಮ, ಬೆಂಗಳೂರು ಸಬ್ ಅರ್ಬನ್ ರೈಲು ಸಂಸ್ಥೆಯನ್ನು ಕರ್ನಾಟಕ ರೈಲು ಲಸೌಕರ್ಯ ಅಭಿವೃದ್ಧಿ ಸಂಸ್ಥೆ ಕೆ-ರೈಡ್, ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮವನ್ನು ಜವಳಿ ಮೂಲಸೌಕರ್ಯ ಅಭಿವೃದ್ಧಿ ನಿಗಮ, ಮೈಸೂರು ಕ್ರೋಮ್ ಟ್ಯಾನಿಂಗ್ ಸಂಸ್ಥೆಯನ್ನು ಎಂಎಸ್‌ಐಎಲ್ ನೊಂದಿಗೆ, ಕರ್ನಾಟಕ ಗೇರು ಅಭಿವೃದ್ಧಿ ನಿಗಮವನ್ನು ರಾಜ್ಯ ಅರಣ್ಯ ಕೈಗಾರಿಕಾ ನಿಗಮ, ರಾಜ್ಯ ರೇಷ್ಮೆ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆಯನ್ನು ಕೃಷಿ ವಿಜ್ಞಾನ ವಿಶ್ವವಿದ್ಯಾಲಯ ಜಿಕೆವಿಕೆ, ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ ಸಿಎಡಿಎ ಗಳನು ಸಂಬಂಧಿಸಿದ ನೀರಾವರಿ ನಿಗಮ ಗಳೊಂದಿಗೆ ವಿಲೀನಕ್ಕೆ ವರದಿಯಲ್ಲಿ ತಿಳಿಸಲಾಗಿದೆ ಎಂದು ವಿವರಿಸಿದರು.

**ಭೂಸ್ವಾಧೀನಕ್ಕೆ ಸಂಬಂಧಿಸಿ ಎಲ್ಲಾ ಕಾಯ್ದೆಯಲ್ಲಿ ಏಕರೂಪತೆ, ಪಾರದರ್ಶಕತೆ ಕಾಯ್ದುಕೊಳ್ಳಬೇಕಿದೆ. ಅದಕ್ಕಾಗಿ ಕೆಐಎಡಿಬಿ ಕಾಯ್ದೆ, ಬಿಡಿಎ ಕಾಯ್ದೆ, ಕೆಎಚ್‌ಬಿ ಕಾಯ್ದೆ, ಕೊಳಗೇರಿ ಪ್ರದೇಶಗಳ ಕಾಯ್ದೆ, ನೀರಾವರಿ ಕಾಯ್ದೆಗಳಲ್ಲಿನ ವ್ಯತಿರಿಕ್ತ ನಿಬಂಧನೆಗಳನ್ನು ಪರಿಶೀಲಿಸಬೇಕು ಹಾಗೂ ಅವುಗಳಲ್ಲಿ ಏಕರೂಪತೆ ಕಾಯ್ದುಕೊಳ್ಳಲು ತಿದ್ದುಪಡಿ ತರಬೇಕು. ಅದರಲ್ಲೂ ಕೇಂದ್ರ ಕಾಯ್ದೆಯ ಅಂಶಗಳನ್ನು ಅಳವಡಿಸಿಕೊಳ್ಳಬೇಕು ಎಂದು ಆಯೋಗ ಶಿಫಾರಸುಮಾಡಿದೆ ಎಂದು ತಿಳಿಸಿದರು.**

---

## ನಮ್ಮ ಮೆಟ್ರೋ ಪಿಲ್ಲರ್‌ಗಳ ಮೇಲೆ 7 ವರ್ಷಗಳ ನಂತರ ಮತ್ತೆ ಜಾಹೀರಾತು

• **ಉದಯವಾಹಿನಿ, ಬೆಂಗಳೂರು**

ನಗರದ ಸಾರಿಗೆ ವ್ಯವಸ್ಥೆಯ ಜೀವನಾಡಿಯಾಗಿರುವ 'ನಮ್ಮ ಮೆಟ್ರೋ' ಇದೀಗ ತನ್ನ ಆದಾಯ ಮೂಲವನ್ನು ವಿಸ್ತರಿಸಲು ಮುಂದಾಗಿದೆ. ಸುಮಾರು ಏಳು ವರ್ಷಗಳ ಹಿಂದೆ ಸ್ಥಗಿತಗೊಂಡಿದ್ದ ಮೆಟ್ರೋ ಪಿಲ್ಲರ್‌ಗಳ ಮೇಲಿನ ಜಾಹೀರಾತು ಪ್ರದರ್ಶನಕ್ಕೆ ಬೆಂಗಳೂರು ಮೆಟ್ರೋ ರೈಲು ನಿಗಮ (ಬಿಎಂಆರ್‌ಸಿಎಲ್) ಮತ್ತೆ ಚಾಲನೆ ನೀಡಿದೆ. ಈ ಸಂಬಂಧ ಆಯ್ದ ಪಿಲ್ಲರ್‌ಗಳು ಪೋರ್ಟಲ್‌ಗಳಲ್ಲಿ ಜಾಹೀರಾತು ಪ್ರದರ್ಶಿಸಲು ಟೆಂಡರ್ ಕರೆಯಲಾಗಿದೆ.

2018ರಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ನಗರ ಸೌಂದರ್ಯದ ದೃಷ್ಟಿಯಿಂದ ಹೊರಾಂಗಣ ಜಾಹೀರಾತುಗಳನ್ನು ಸಂಪೂರ್ಣವಾಗಿ ನಿಷೇಧಿಸಿತ್ತು. ಈ ಕಾರಣದಿಂದ ಮೆಟ್ರೋ ಪಿಲ್ಲರ್‌ಗಳ ಮೇಲಿನ ಜಾಹೀರಾತುಗಳೂ ಸ್ಥಗಿತಗೊಂಡಿದ್ದವು.

ಇದೀಗ ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ)



ಉದಯವಾಹಿನಿ ಚಿತ್ರ

ಜಾಹೀರಾತು ಕಾನೂನಿಗೆ ತಿದ್ದುಪಡಿ ತಂದಿರುವುದರಿಂದ, ಬಿಎಂಆರ್‌ಸಿಎಲ್ ತನ್ನ ವ್ಯಾಪ್ತಿಯಲ್ಲಿ ಜಾಹೀರಾತು ಪ್ರದರ್ಶಿಸುವ ಹಕ್ಕನ್ನು ಮರಳಿ ಪಡೆದಿದೆ.

ಈ ಟೆಂಡರ್ ಪ್ರಕ್ರಿಯೆಯು ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ನೇರಳೆ, ಹಸಿರು, ಹಳದಿ ಮಾರ್ಗಗಳ ಜೊತೆಗೆ, ನಿರ್ಮಾಣ ಹಂತದಲ್ಲಿರುವ ಗುಲಾಬಿ, ನೀಲಿ ಮಾರ್ಗಗಳನ್ನೂ ಒಳಗೊಂಡಿದೆ.

65 ಕೋಟಿ ರೂಪಾಯಿ ಮೌಲ್ಯದ ಈ ಟೆಂಡರ್‌ನಿಂದ ಬಿಎಂಆರ್‌ಸಿಎಲ್ ವಾರ್ಷಿಕವಾಗಿ 70 ರಿಂದ 80 ಕೋಟಿ ರೂಪಾಯಿಗಳಷ್ಟು ಆದಾಯವನ್ನು ನಿರೀಕ್ಷಿಸುತ್ತಿದೆ. ನಿಷೇಧಕ್ಕೂ ಮುನ್ನ 2016-17ರಲ್ಲಿ 8 ಕೋಟಿ ರೂ. ಹಾಗೂ 2017-18ರಲ್ಲಿ 8.89 ಕೋಟಿ ರೂ. ಆದಾಯವನ್ನು ನಿಗಮ ಗಳಿಸಿತ್ತು. ಹೊಸ ನಿಯಮದ ಪ್ರಕಾರ, ಮೆಟ್ರೋ ರಚನೆಯ ಮೇಲಿನ ಜಾಹೀರಾತುಗಳು ಜಿಬಿಎ ವ್ಯಾಪ್ತಿಯಿಂದಲೂ ಗೋಚರಿಸಿದರೆ, ಬರುವ ಆದಾಯವನ್ನು ಬಿಎಂಆರ್‌ಸಿಎಲ್ ಮತ್ತು ಜಿಬಿಎ ಸಮಾನವಾಗಿ ಹಂಚಿಕೊಳ್ಳಲಿವೆ.

ಪ್ರಯಾಣಿಕರ ಮೇಲೆ ಟಿಕೆಟ್ ದರ ಏರಿಕೆಯ ಹೊರೆ ಹಾಕುವ ಬದಲು, ಟಿಕೆಟೇತರ ಆದಾಯ ಮೂಲಗಳನ್ನು ಬಲಪಡಿಸಬೇಕು ಎಂದು ತಜ್ಞರು ಸಲಹೆ ನೀಡಿದ್ದಾರೆ.

ಈ ಹಿನ್ನೆಲೆಯಲ್ಲಿ ಬಿಎಂಆರ್‌ಸಿಎಲ್ ಜಾಹೀರಾತು, ಸ್ಥಳ ಗುತ್ತಿಗೆಯಂತಹ ಆದಾಯ ಮೂಲಗಳಿಗೆ ಹೆಚ್ಚು ಒತ್ತು ನೀಡುತ್ತಿದೆ. ಪ್ರಸ್ತುತ ನಮ್ಮ ಮೆಟ್ರೋ 97 ಕಿ.ಮೀ. ಉದ್ದದ ಜಾಲ, 83 ನಿಲ್ದಾಣಗಳನ್ನು ಹೊಂದಿದ್ದು, ಪ್ರತಿದಿನ ಸರಾಸರಿ 8.50 ಲಕ್ಷ ಜನರು ಇದರಲ್ಲಿ ಪ್ರಯಾಣಿಸುತ್ತಾರೆ. ಜಾಹೀರಾತಿನ ಜೊತೆಗೆ, ನಿಲ್ದಾಣದ ಹೆಸರಿನ ಹಕ್ಕು, ಕೋಚ್‌ಗಳ ಬ್ರ್ಯಾಂಡಿಂಗ್, ಎಟಿಎಂ, ಪಾರ್ಕಿಂಗ್, ಚಲನಚಿತ್ರ ಚಿತ್ರೀಕರಣ ಮತ್ತು ಇವಿ ಚಾರ್ಜಿಂಗ್ ಕೇಂದ್ರಗಳ ಸ್ಥಾಪನೆಯಂತಹ ವಿವಿಧ ಮೂಲಗಳಿಂದಲೂ ಬಿಎಂಆರ್‌ಸಿಎಲ್ ಆದಾಯ ಗಳಿಸುತ್ತಿದೆ.

**ಇದೇ ನಿಟ್ಟಿನಲ್ಲಿ, 'ಸೈನ್‌ಪೋಸ್ಟ್ ಇಂಡಿಯಾ' ಸಂಸ್ಥೆಯೊಂದಿಗೆ ಬಿಎಂಆರ್‌ಸಿಎಲ್ 9 ವರ್ಷಗಳ ಕಾಲಾವಧಿಯ ಒಪ್ಪಂದ ಮಾಡಿಕೊಂಡಿದೆ. ಈ ಒಪ್ಪಂದವು 67 ನಮ್ಮ ಮೆಟ್ರೋ ನಿಲ್ದಾಣಗಳಲ್ಲಿ 1 ಲಕ್ಷ ಚದರ ಅಡಿಗಿಂತಲೂ ಹೆಚ್ಚಿನ ಜಾಹೀರಾತು ಸ್ಥಳವನ್ನು ಒಳಗೊಂಡಿದ್ದು, ಒಪ್ಪಂದದ ಅವಧಿಯಲ್ಲಿ ಸುಮಾರು 700 ಕೋಟಿ ರೂಪಾಯಿ ಆದಾಯ ತರುವ ಸಾಮರ್ಥ್ಯವನ್ನು ಹೊಂದಿದೆ ಎಂದು ಕಂಪನಿ ತಿಳಿಸಿದೆ.**

---

## ಬಿಜೆಪಿ, ಆರ್‌ಎಸ್‌ಎಸ್ ವಿರುದ್ಧ ಪ್ರಿಯಾಂಕ್ ಖರ್ಗೆ ವಾಗ್ದಾಳಿ

• **ಉದಯವಾಹಿನಿ, ಬೆಂಗಳೂರು**

ಸರ್ಕಾರಿ, ಸಾರ್ವಜನಿಕ ಸ್ಥಳಗಳಲ್ಲಿ ಆರ್‌ಎಸ್‌ಎಸ್ ಚಟುವಟಿಕೆಗಳನ್ನು ನಿಷೇಧಿಸುವಂತೆ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದ ಸಚಿವ ಪ್ರಿಯಾಂಕ್ ಖರ್ಗೆ ಬಿಜೆಪಿ ಮತ್ತು ಆರ್‌ಎಸ್‌ಎಸ್ ಅನ್ನು ಟೀಕಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ನಾನು ಸಿಎಂಗೆ ಬರೆದ ಪತ್ರದ ಹಿನ್ನೆಲೆಯಲ್ಲಿ, ಸರ್ಕಾರಿ ಸಂಸ್ಥೆಗಳು, ಸಾರ್ವಜನಿಕ ಸ್ಥಳಗಳಲ್ಲಿ ಸಾರ್ವಜನಿಕರು ಅಥವಾ ಸಂಘ ಸಂಸ್ಥೆಗಳು ಹೇಗೆ ಸೇರಬೇಕು ಎಂಬುದಕ್ಕೆ ಸಂಬಂಧಿಸಿದಂತೆ ಇರುವ ಎಲ್ಲಾ ನಿಯಮಗಳು ಮತ್ತು ಕಾಯ್ದೆಗಳನ್ನು ಕ್ರೋಢೀಕರಿಸಿ ಹೊಸ ನಿಯಮವನ್ನು ಜಾರಿಗೆ ತರಲು ನಿನ್ನೆ ಸಚಿವ ಸಂಪುಟ ತೀರ್ಮಾನ ಕೈಗೊಂಡಿದೆ' ಎಂದರು. ಇದು ಆರ್‌ಎಸ್‌ಎಸ್ ಮತ್ತು ಬಿಜೆಪಿಯ ಎಸ್‌ಒಪಿ... ಈ ಚಿಂತನೆಯು ಅಂತಿಮವಾಗಿ ಮಹಾತ್ಮ ಗಾಂಧಿಯವರ ಹತ್ಯೆಗೆ, ಬಾಬಾಸಾಹೇಬ್ ಅಂಬೇಡ್ಕರ್ ಅವರ ಸೋಲಿಗೆ ಕಾರಣವಾಯಿತು. ಇದು ಸಮಾಜಕ್ಕೆ ಅತ್ಯಂತ ವಿಷಕಾರಿ ಚಿಂತನೆಯಾಗಿದೆ. ಅಂತಹ ಮಹಾನ್ ವ್ಯಕ್ತಿಗಳನ್ನೇ ಅವರು



ಉದಯವಾಹಿನಿ ಚಿತ್ರ

ಬಿಡದಿದ್ದಾಗ, ನಾನು ಯಾರು ಎಂದು ಹೇಳಿದರು. ನಾನು ಪ್ರಸ್ತಾಪಿಸಿದ ಸಮಸ್ಯೆಗಳನ್ನು ಪರಿಹರಿಸುವ ಬದಲು ಬಿಜೆಪಿಯವರು ವೈಯಕ್ತಿಕ ದಾಳಿಗೆ ಮುಂದಾಗಿದ್ದಾರೆ.

ನನ್ನ ವಿರುದ್ಧ ವೈಯಕ್ತಿಕ ದೂಷಣೆ ಮಾಡುವ ಬದಲು ಬಿಜೆಪಿಯವರು ನಾನು ಕೇಳಿದ ಪ್ರಶ್ನೆಗಳಿಗೆ ಉತ್ತರಿಬೇಕು. ಆರ್‌ಎಸ್‌ಎಸ್ ಪರವಾಗಿ ಅವರು ಏಕೆ ಮಾತನಾಡುತ್ತಿದ್ದಾರೆ ಆರ್‌ಎಸ್‌ಎಸ್ ತನ್ನನ್ನು ತಾನು ರಕ್ಷಿಸಿಕೊಳ್ಳಲು ಸಾಧ್ಯವಿಲ್ಲವೇ ಎಂದು ಪ್ರಶ್ನಿಸಿದರು.


---

## ಬ್ಯುಸಿನೆಸ್ ಕಾರಿಡಾರ್ ಪರಿಹಾರ: ರೈತರಿಗೆ ನಾಲ್ಕು ಆಯ್ಕೆ

• **ಉದಯವಾಹಿನಿ, ಬೆಂಗಳೂರು**

ಬೆಂಗಳೂರು ಬ್ಯುಸಿನೆಸ್ ಕಾರಿಡಾರ್‌ಗೆ (ಪಿಆರ್‌ಆರ್) ಭೂಮಿ ನೀಡುವ ರೈತರಿಗೆ ನಾಲ್ಕು ಆಯ್ಕೆಗಳನ್ನು ನೀಡಲು ಹಾಗೂ ಯೋಜನೆಯನ್ನು ಯಾವುದೇ ಕಾರಣಕ್ಕೂ ನಿಲ್ಲಿಸದಿರಲು ಸಚಿವ ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿದೆ.ಸಂಪುಟ ಸಭೆ ಬಳಿಕ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದ ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆಗಿರುವ ಡಿ.ಕೆ. ಶಿವಕುಮಾರ್, ಹಿಂದಿನ ಸರ್ಕಾರ ಜಾರಿಗೊಳಿಸಲು ಉದ್ದೇಶಿಸಿದ್ದ ಪೆರಿಫೆರಲ್ ರಿಂಗ್ ರಸ್ತೆಯನ್ನು ಬೆಂಗಳೂರು ಬ್ಯುಸಿನೆಸ್ ಕಾರಿಡಾರ್' ಎಂದು ಮರುನಾಮಕರಣ ಮಾಡಿ 117ಕಿ.ಮೀ ಉದ್ದದ ರಸ್ತೆಗೆ ಅನುಮೋದನೆ ನೀಡಲಾಗಿದೆ. ನಗರದಲ್ಲಿ ಇಷ್ಟು ಪ್ರಮಾಣದ ಹೊಸ ರಸ್ತೆಯನ್ನು ಸೇರಿಸುವ ಮೂಲಕ ರಾಜ್ಯ ಸರ್ಕಾರ ಬೆಂಗಳೂರಿನ ಅಭಿವೃದ್ಧಿಗೆ ಹೊಸ ಅಧ್ಯಾಯ ಬರೆಯುತ್ತಿದೆ' ಎಂದರು.

ತುಮಕೂರು ರಸ್ತೆಯಿಂದ ಯಲಹಂಕ, ಎಲೆಕ್ಟ್ರಾನಿಕ್ ಸಿಟಿ- ಮೈಸೂರು ರಸ್ತೆ ಮೂಲಕ ಬೆಂಗಳೂರು ಎಕ್ಸಿಬಿಷನ್ ಸೆಂಟರ್‌ವರೆಗೂ ಕಾರಿಡಾರ್ ಸಾಗಲಿದೆ. ಈ ರಸ್ತೆಯು ಬೆಂಗಳೂರಿನ ಉತ್ತರ ಭಾಗದಲ್ಲಿ 73 ಕಿ.ಮೀ ಸಾಗಲಿದ್ದು, ಉಳಿದದ್ದು ಬೆಂಗಳೂರಿನ ದಕ್ಷಿಣ ಭಾಗದಲ್ಲಿ ಸಾಗಲಿದೆ. ಶೇ 40ರಷ್ಟು ದಟ್ಟಣೆ ಕಡಿಮೆಯಾಗಲಿದ್ದು, ಎಲೆಕ್ಟ್ರಾನಿಕ್ ಸಿಟಿ, ತುಮಕೂರು ರಸ್ತೆ, ನೆಲಮಂಗಲ, ಮೈಸೂರು ರಸ್ತೆ ಕಡೆ ಹೋಗುವ ವಾಹನಗಳು ಈ ರಸ್ತೆಯಲ್ಲಿ ಸಾಗಲಿವೆ ಎಂದು ಮಾಹಿತಿ ನೀಡಿದರು. 'ಈ ಹಿಂದಿನ ಸರ್ಕಾರ ಯೋಜನೆಗೆ ಅಧಿಸೂಚನೆ ಹೊರಡಿಸಿದ್ದು, ಅದನ್ನು ಹಿಂಪಡೆದಿರಲಿಲ್ಲ. ಈಗ ಬೆಂಗಳೂರಿನಲ್ಲಿ ನೈಸ್ ರಸ್ತೆಗೆ ಪರ್ಯಾಯ ರಸ್ತೆ ಅಗತ್ಯವಿದೆ. ಯಾವುದೇ ಕಾರಣಕ್ಕೂ ಡಿನೋಟಿಫಿಕೇಶನ್ ಮಾಡಬಾರದು ಎಂದು ಈ ಯೋಜನೆ ಕೈಗೊತ್ತಿಕೊಳ್ಳಲಾಗಿದೆ. ಯೋಜನೆಗೆ ಸರ್ಕಾರದ ಖಾತರಿಯೊಂದಿಗೆ ಹುಡ್ಕೊ ಮೂಲಕ ರೂ.27 ಸಾವಿರ ಕೋಟಿ ಸಾಲ ಪಡೆಯಲಾಗಿದೆ' ಎಂದರು.



---

# ಜಿಬಿಎ ಪಾಲಿಕೆಗಳ ನೌಕರರ ಕನ್ನಡ ಸಂಘದಲ್ಲಿ ತಾಯಿ ಭುವನೇಶ್ವರಿಗೆ ವಿಶೇಷ ಪೂಜೆ

## ನಮ್ಮ ಅತ್ಯಂತ ಶ್ರೀಮಂತ, ಸುಂದರ ಭಾಷೆ 8ಜ್ಞಾನಪೀಠ ಪ್ರಶಸ್ತಿ, ಕನ್ನಡಿಗರಿಗೆ ಬೂಕರ್ ಪ್ರಶಸ್ತಿಯು ಲಭಿಸಿದೆ 'ಕನ್ನಡ ಬನ್ನಿ ನಮ್ಮ ಸಂಗಡ'

• **ಉದಯವಾಹಿನಿ, ಬೆಂಗಳೂರು**

ಗ್ರೇಟರ್ ಬೆಂಗಳೂರು ಪ್ರಾಧಿಕಾರ ಪಾಲಿಕೆಗಳ ನೌಕರರ ಕನ್ನಡ ಸಂಘ ನವೀಕರಣಗೊಂಡ ಸಂಘದ ಕಛೇರಿಯಲ್ಲಿ ವಿಶೇಷ ಪೂಜಾ ಸಮಾರಂಭ. ಗ್ಯಾರೆಂಟಿ ಯೋಜನೆಗಳ ಅನುಷ್ಠಾನ ಸಮಿತಿ ನಗರದ ಅಧ್ಯಕ್ಷರಾದ ಜಿ.ಕೃಷ್ಣಪ್ಪ, ಮಾಜಿ ಮಹಾಪೌರರು, ಗೌರವಾಧ್ಯಕ್ಷರಾದ ಜೆ.ಹುಚ್ಚಪ್ಪರವರು, ಪ್ರಧಾನ ಕಾರ್ಯದರ್ಶಿ ಎ.ಅಮೃತ್ ರಾಜ್ ರವರು ತಾಯಿ ಭುವನೇಶ್ವರಿ ಪೂಜೆ ಸಲ್ಲಿಸಿ ಪುಷ್ಪನಮನ ಸಲ್ಲಿಸಿದರು.

ಜೆ.ಹುಚ್ಚಪ್ಪರವರು ಮಾತನಾಡಿ ಬಿಬಿಎಂಪಿ ನೌಕರರ ಕನ್ನಡ ಸಂಘವು ಜಿಬಿಎ ನೌಕರರ ಕನ್ನಡ ಸಂಘವಾಗಿ ನಾಮಕರಣಗೊಂಡಿದೆ. ಕಳೆದ ಮೂರು ದಶಕಗಳಿಂದಲೂ ಕನ್ನಡ ನಾಡು, ನುಡಿಗೆ ಏನಾದರು ತೊಂದರೆ ಜಿಬಿಎ ಕನ್ನಡ ಸಂಘವು ಮೊದಲು ಹೋರಾಟಕ್ಕೆ ಧುಮುಕ್ಕುತ್ತದೆ. ಕನ್ನಡ ಸಂಘವು ಕನ್ನಡ ಭಾಷೆ ಉಳಿಸಲು ಶ್ರಮಿಸಿದರು ಮತ್ತು ರಾಜ್ಯದ ಕಲೆ, ಸಾಹಿತ್ಯ ಮತ್ತು ಸಾಂಸ್ಕೃತಿಕ ಕಲಾ ಸಾಧಕರುಗಳನ್ನು ಗುರುತಿಸುತ್ತಿದೆ. ಕನ್ನಡ ಭಾಷೆಗೆ 2500ವರ್ಷಗಳ ಇತಿಹಾಸವಿದೆ. ನಮ್ಮ ಅತ್ಯಂತ ಶ್ರೀಮಂತ, ಸುಂದರ ಭಾಷೆ 8ಜ್ಞಾನಪೀಠ ಪ್ರಶಸ್ತಿ ಮತ್ತು ಕನ್ನಡಿಗರಿಗೆ ಬೂಕರ್ ಪ್ರಶಸ್ತಿಯು ಲಭಿಸಿದೆ. ಕನ್ನಡ ಬನ್ನಿ ನಮ್ಮ ಸಂಗಡ ಎಂದು ಹೇಳಿದರು.

ಬೆಂಗಳೂರು ನಗರ ಕನ್ನಡ ಸಾಹಿತ್ಯ ಅಧ್ಯಕ್ಷರಾದ ಪ್ರಕಾಶ್ ಮೂರ್ತಿ,ಪೌರ ಕಾರ್ಮಿಕ ಮುಖಂಡ ಬಾಬು, ಕನ್ನಡ ಪರ ಹೋರಾಟಗಾರ ವಾಟಾಳ್ ವೆಂಕಟೇಶ್ ಸಂಘದ ಪದಾಧಿಕಾರಿಗಳಾದ ಕೆ.ಜಿ.ರವಿ, ಡಿ.ರಾಮಚಂದ್ರ, ನಂಜಪ್ಪ, ಮಂಜುನಾಥ್ ರುದ್ರೇಶ್, ಕೆ.ಮಂಜೇಗೌಡ, ತಿಪ್ಪೇಶ್, ಹೆಚ್.ಬಿ.ಹರೀಶ್, ಮಾರ್ಕೆಟ್ ಮಂಜುನಾಥ್,ಹೆಚ್.ಎಸ್.ಸೋಮಶೇಖರ್ , ನರಸಿಂಹ ಶ್ರೀಧರ್, ರಾಜಶೇಖರ್, ಆಟೋ ವೆಂಕಟೇಶ್ ವಾಣಿ, ಎನ್.ಹರೀಶ್ ರವರು ಭಾಗವಹಿಸಿದ್ದರು.



ಉದಯವಾಹಿನಿ ಚಿತ್ರ

**ಜಿಬಿಎದಲ್ಲಿ ಸಂಪೂರ್ಣ ಕನ್ನಡದಲ್ಲಿ ಆಡಳಿತ ವ್ಯವಹಾರ ನಡೆಯುತ್ತಿದೆ. ನಮ್ಮ ಸಂಘವು ನಾಡು, ನುಡಿ ಉಳಿಸಿ, ಬೆಳಸಲು ಶ್ರಮಿಸುತ್ತಿದೆ. ಕನ್ನಡ ಭಾಷೆ ವಿಶ್ವಭಾಷೆಯಾಗಬೇಕು ಎಂಬ ಆಶಯದಿಂದ ನೇಪಾಳದಲ್ಲಿ ಅಂತರಾಷ್ಟ್ರೀಯ ಕರ್ನಾಟಕ ರಾಜ್ಯೋತ್ಸವ ಮತ್ತು ಹರಿದ್ವಾರ, ಕಾಶಿಯಲ್ಲಿ ಕರ್ನಾಟಕ ರಾಜ್ಯೋತ್ಸವ 2025ನಲ್ಲಿ ಕಾಶ್ಮೀರದ ಪೆಹಲ್ಗಾಮ್ ರಾಷ್ಟ್ರೀಯ ಕರ್ನಾಟಕ ರಾಜ್ಯೋತ್ಸವ ನವೆಂಬರ್‌ನಲ್ಲಿ ಆಚರಿಸಲಾಗುತ್ತಿದೆ. ನಮ್ಮ ಸಂಘದ ಮುಂಭಾಗದಲ್ಲಿ ಮೇರುನಟ ಡಾ||ರಾಜ್ ಕುಮಾರ್ ಮತ್ತು ಪವರ್ ಸ್ಟಾರ್ ಡಾ||ಪುನೀತ್ ರಾಜ್ ಕುಮಾರ್ ಪ್ರತಿಮೆ ಸ್ಥಾಪಿಸಲಾಗಿದೆ 2 ಮೇರುನಟರು ನಮ್ಮ ಹೋರಾಟಕ್ಕೆ ಸ್ಫೂರ್ತಿಯಾಗಿ ದ್ದಾರೆ. ನಾಡಿನ ಸಾಧಕರುಗಳನ್ನು ಗುರುತಿಸಿ ಗೌರವ ಸಮರ್ಪಣೆ ಮತ್ತು ಕಲಾವಿದರಿಗೆ ಉತ್ತಮ ವೇದಿಕೆ ನಮ್ಮ ಸಂಘದಲ್ಲಿ ಕಲ್ಪಿಸಲಾಗುತ್ತಿದೆ ಎಂದು ಹೇಳಿದರು. -ಎ.ಅಮೃತ್ ರಾಜ್**



# ಸಿಜೆಐ ಮೇಲೆ ಶೂ ಎಸೆತ, ಕೋಲಾರ ಬಂದ್ ಯಶಸ್ವಿ

## ■ ರಸ್ತೆಗಳು ಖಾಲಿ ಖಾಲಿ, ಅಂಗಡಿ ಮುಂಗಟ್ಟುಗಳು ಕ್ಲೋಸ್, ಸಂವಿಧಾನ, ಪ್ರಜಾ ಪ್ರಭುತ್ವಕ್ಕೆ ಅವಮಾನ ಮಾಡಿದ್ರೆ ಸಹಿಸಲ್ಲ

• **ಉದಯವಾಹಿನಿ, ಕೋಲಾರ**

ಇತ್ತೀಚೆಗೆ ವಕೀಲ ರಾಕೇಶ್ ಶರ್ಮಾ ಎಂಬುವವರು ಸುಪ್ರೀಂ ಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ಅವರ ಮೇಲೆ ಶೂ ಎಸೆಯಲು ಯತ್ನಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಶುಕ್ರವಾರ ಕೋಲಾರ ಜಿಲ್ಲೆಯಲ್ಲಿ ಸ್ವಯಂ ಪ್ರೇರಿತ ಬಂದ್‌ಗೆ ಕರೆ ನೀಡಿತ್ತು. ಶುಕ್ರವಾರ ಬೆಳಗ್ಗೆ ಐದು ಗಂಟೆಯಿಂದಲೇ ಜಿಲ್ಲೆಯ ಕೆಜಿಎಫ್, ಬಂಗಾರಪೇಟೆ, ಮುಳಬಾಗಿಲು, ಮಾಲೂರು, ಶ್ರೀನಿವಾಸಪುರ, ಕೋಲಾರ ತಾಲ್ಲೂಕುಗಳಲ್ಲಿ ಸಾರ್ವಜನಿಕರು ಬಂದ್‌ಗೆ ಸ್ಪಂದಿಸಿದರು.

ಸಂವಿಧಾನ ರಕ್ಷಣೆಗಾಗಿ ಪಕ್ಷ ಭೇದವಿಲ್ಲದ ಹೋರಾಟ ಮಾಡಲಾಗುತ್ತಿದ್ದು, ದಲಿತರು, ನ್ಯಾಯಾಲಯ ಯಾರ ಮೇಲೆಯೂ ದೌರ್ಜನ್ಯ ಆಗಬಾರದು ಎಂದು ಕೋಲಾರ ಜಿಲ್ಲಾ ಜನಪರ ಸಂಘಟನೆಗಳ ಒಕ್ಕೂಟ ಕರೆ ನೀಡಿತ್ತು. ಸ್ವಯಂ ಪ್ರೇರಿತ ಬಂದ್‌ಗೆ ಉತ್ತಮ ಸ್ಪಂದನ ವ್ಯಕ್ತವಾಗಿದೆ ಎಂದು ಪ್ರತಿಭಟನಾಕಾರರು ಹೇಳುತ್ತಿದ್ದಾರೆ.

**ಕೋಲಾರ ಸ್ತಬ್ಧ:** ಶುಕ್ರವಾರ ಮುಂಜಾನೆ 5ಕ್ಕೆ ಕೆಎಸ್‌ಆರ್‌ಟಿಸಿ ಬಸ್ ಡಿಪೋ ಬಳಿ ಪ್ರತಿಭಟನಕಾರರು ಸೇರಿದ್ದರು. ಆ ನಂತರ 10.30ಕ್ಕೆ ಬಸ್ ನಿಲ್ದಾಣದ ವೃತ್ತಕ್ಕೆ ಬಂದು ಮೆರವಣಿಗೆ ನಡೆಸಿದರು. ಈ ಮೆರವಣಿಗೆಯಲ್ಲಿ ರೈತ, ದಲಿತ, ಕನ್ನಡಪರ ಸಂಘಟನೆಗಳು, ಮಹಿಳೆಯರು ಸೇರಿದಂತೆ ವಿವಿಧ ಸಂಘಟನೆಗಳು ಬೆಂಬಲ ವ್ಯಕ್ತಪಡಿಸಿವೆ.

**ಬಸ್ ನಿಲ್ದಾಣ ಖಾಲಿ ಖಾಲಿ:** ಕೋಲಾರ ಸ್ವಯಂ ಪ್ರೇರಿತ ಬಂದ್ ಘೋಷಿಸಿದ್ದ ಕಾರಣ, ಬಸ್ ನಿಲ್ದಾಣಕ್ಕೆ ತೆರಳಿದ್ದ ಶಾಲಾ ಕಾಲೇಜು ವಿದ್ಯಾರ್ಥಿಗಳು ಮನೆಗಳಯತ್ತ ವಾಪಸ್ ತೆರಳಿದ್ದರು. ಕಚೇರಿಗಳಿಗೆ ಅಂಗಡಿಗಳಲ್ಲಿ ಕೆಲಸ ಮಾಡಲು ಹೊರಟಿದ್ದ ಉದ್ಯೋಗಿಗಳು ನಿರಾಸೆಯಿಂದ ವಾಪಸ್ ಆದರೂ, ಜಿಲ್ಲೆಯಲ್ಲಿ ರಸ್ತೆಗಳು, ಜನರ ಓಡಾಟ, ವಾಹನ ಸಂಚಾರದ ಸದ್ದಿಲ್ಲದೆ ಮೌನ ಆವರಿಸಿತ್ತು.

ಇನ್ನು ಪ್ರತಿಭಟನಾಕಾರರು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗೆ ಅರ್ಜಿ ನೀಡಿ ಬಂದ್‌ಗೆ ಮೊದಲೇ ಅನುಮತಿ ಪಡೆದುಕೊಳ್ಳಲಾಗಿತ್ತು. ಇನ್ನು ಕೆಎಸ್‌ಆರ್‌ಟಿಸಿ, ಡಿಡಿಪಿಐ, ಹೋಟೆಲ್ ಸಂಘ, ವರ್ತಕರು, ಆಟೋ ಸಂಘದವರಿಗೆ ಅರ್ಜಿ ನೀಡಿ ಬಂದ್‌ಗೆ ಬೆಂಬಲ ನೀಡುವಂತೆ ಮನವಿ ಮಾಡಿಕೊಳ್ಳಲಾಗಿತ್ತು ಅದರಂತೆ ಶುಕ್ರವಾರ ಯಾವ ವಾಹನದ ಸಂಚಾರವೂ ಇರಲಿಲ್ಲ. ಹೀಗಾಗಿ ರಸ್ತೆಗಳು ಖಾಲಿ ಖಾಲಿ ಇದ್ದವು.

**ಗುರುವಾರ ಬೈಕ್ ರ‍್ಯಾಲಿ:** ಬಂದ್‌ಗೆ ಜಿಲ್ಲೆಯ ಎಲ್ಲಾ ಸಾರ್ವಜನಿಕರು ಸಹಕರಿಸಬೇಕು ಎಂದು ಒಕ್ಕೂಟ ಮುಖಂಡರು ಗುರುವಾರ ಸಂಜೆ ವಿವಿಧ ಸಂಘಟನೆಗಳ ಮುಖಂಡರು ಬೈಕ್ ರ‍್ಯಾಲಿ ಮಾಡಿ ಬಂದ್‌ನಲ್ಲಿ ಪಾಲ್ಗೊಳ್ಳುವಂತೆ ಕೋರಿದ್ದರು.



☛ ಉದಯವಾಹಿನಿ ಚಿತ್ರ

**ಯಾರ ಮೇಲೆಯೂ ದೌರ್ಜನ್ಯ ಆಗಬಾರದು**

### ಷಡ್ಯಂತ್ರದ ಭಾಗ ಎಂದು ಆಕ್ರೋಶ

ವಕೀಲ ರಾಕೇಶ್ ಕಿಶೋರ್ ಅವರು ಸಿಜೆಐ ಅವರ ಮೇಲೆ ಶೂ ಎಸೆಯಲು ಯತ್ನಿಸಿದ್ದ ಪ್ರಕರಣವು ಸರ್ವೋಚ್ಚ ನ್ಯಾಯಾಲಯ ಪೀಠಕ್ಕೆ, ಪ್ರಜಾಪ್ರಭುತ್ವದ ಆತ್ಮವಾದ ಸಂವಿಧಾನಕ್ಕೆ ಮಾಡಿದ ಅವಮಾನ ಎಂದು ಪ್ರತಿಭಟನಾಕಾರರು ಕಿಡಿಕಾರಿದರು. ಇಂತಹ ಪ್ರಕರಣಗಳು ಸಂವಿಧಾನ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬುಡಮೇಲು ಮಾಡುವ ಬಹುದೊಡ್ಡ ಷಡ್ಯಂತ್ರದ ಭಾಗ ಎಂದು ಆಕ್ರೋಶ ವ್ಯಕ್ತಪಡಿಸಿದರು.

### ಸಿಜೆಐ ವಿರುದ್ಧ ಕಾಮೆಂಟ್ ಬಂಧನ

ಫೇಸ್‌ಬುಕ್‌ನಲ್ಲಿ ಸುಪ್ರೀಂಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ಅವರ ಬಗ್ಗೆ ಅವಹೇಳನಕಾರಿ ಪೋಸ್ಟ್ ಹಾಕಿದ್ದ ಐದು ಮಂದಿಯ ವಿರುದ್ಧ ಸೈಬರ್ ಠಾಣೆ ಪೊಲೀಸರು ಎಫ್‌ಐಆರ್ ದಾಖಲಿಸಿಕೊಂಡಿದ್ದರು. ಶ್ರೀಧರ್‌ಕುಮಾರ್,ಕೇಸರಿ ನಂದನ್, ರಮೇಶ್‌ನಾಯ್ಕ್, ನಾಗೇಂದ್ರಪ್ರಸಾದ್, ಎಂಸಿ ಮಂಜು ಹೆಸರಿನ ಫೇಸ್‌ಬುಕ್ ಖಾತೆದಾರರ ವಿರುದ್ಧ ದೂರು ದಾಖಲಾಗಿತ್ತು.

---

## ಮಾನಸಿಕ ಆರೋಗ್ಯ ಕಡೆಗಣಿಸದಿರಿ: ನ್ಯಾಯಾಧೀಶೆ ಬಿ.ವಿ. ರೇಣುಕ ಸಲಹೆ

• **ಉದಯವಾಹಿನಿ, ರಾಮನಗರ**



☛ ಉದಯವಾಹಿನಿ ಚಿತ್ರ

ದೇಹದ ಆರೋಗ್ಯ ಎಷ್ಟು ಮುಖ್ಯವೋ, ಮಾನಸಿಕ ಆರೋಗ್ಯವೂ ಅಷ್ಟೇ ಮುಖ್ಯವಾಗಿದೆ. ಪ್ರತಿಯೊಬ್ಬರು ತಮ್ಮ ಮಾನಸಿಕ ಆರೋಗ್ಯ ಕಾಪಾಡುವತ್ತ ಗಮನ ಹರಿಸಬೇಕು ಎಂದು ಜಿಲ್ಲಾ ಪ್ರಧಾನ, ಸೆಷನ್ಸ್ ನ್ಯಾಯಾಧೀಶೆ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷೆ ಬಿ.ವಿ. ರೇಣುಕ ಸಲಹೆ ನೀಡಿದರು. ನಗರದ ಜಿಲ್ಲಾ ಪೊಲೀಸ್ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪೊಲೀಸ್, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ವಿಭಾಗದ ಸಹಯೋಗದೊಂದಿಗೆ ಆಯೋಜಿಸಿದ್ದ ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ನಾವು ಕೆಲವೊಮ್ಮೆ ಸಣ್ಣ ವಿಷಯಗಳನ್ನು ನಿರ್ಲಕ್ಷಿಸುವುದರಿಂದ ಅನೇಕ ಸಮಸ್ಯೆಗಳು ಎದುರಾಗುತ್ತವೆ.

ನಮ್ಮ ಸುತ್ತಮುತ್ತ ಯಾರಾದರೂ ನಿರಂತರ ಒತ್ತಡ, ಆತಂಕ, ನಿದ್ರೆ ಕೊರತೆ, ಕೆಲಸದ ಅತಿಯಾದ ಒತ್ತಡ, ಕೌಟುಂಬಿಕ ಒತ್ತಡ, ಸಾಮಾಜಿಕ ಮಾಧ್ಯಮದಲ್ಲಿನ ನಕಾರಾತ್ಮಕತೆ ಮತ್ತು ಸ್ವಯಂ ಕಾಳಜಿ ಕೊರತೆಯಿಂದ ಬಳಸುತ್ತಿದ್ದರೆ, ಅಂತಹವರು ಮಾನಸಿಕ ಮಾನಸಿಕ ಒತ್ತಡಕ್ಕೆ ಒಳಗಾಗಿರುತ್ತಾರೆ ಎಂದರು.

ಅಂತಹ ವ್ಯಕ್ತಿಗಳ ಮಾನಸಿಕ ಆರೋಗ್ಯವನ್ನು ಸುಧಾರಿಸಲು ಪ್ರತಿದಿನ 30 ನಿಮಿಷ ಧ್ಯಾನ, ಯೋಗ ಮಾಡಬೇಕು. ಕುಟುಂಬ, ಸ್ನೇಹಿತರೊಂದಿಗೆ ಮುಕ್ತವಾಗಿ ಮಾತನಾಡಬೇಕು. ಪ್ರತಿದಿನ ನಮಗೆ ಎಂದು ಸ್ವಲ್ಪ ಸಮಯವನ್ನು ಇಟ್ಟುಕೊಳ್ಳಬೇಕು. ಸರಿಯಾದ ಸಮಯಕ್ಕೆ ನಿದ್ರೆ ಮಾಡಬೇಕು. ಪೌಷ್ಟಿಕ ಆಹಾರ ಸೇವಿಸಬೇಕು ಎಂದು ಹೇಳಿದರು.

ಪುಸ್ತಕಗಳನ್ನು ಸಾಮಾಜಿಕ ಮಾಧ್ಯಮಗಳ ಬಳಕೆಯನ್ನು ಮಿತವಾಗಿ ಬಳಸುವುದು ಮಾಡುವುದು ಹಾಗೂ ಮನೋವೈದ್ಯರು ಅಥವಾ ಸಲಹೆಗಾರರಿಂದ ಆಪ್ತ ಸಮಾಲೋಚನೆ, ಸಲಹೆ ಪಡೆದುಕೊಳ್ಳುವ ಮೂಲಕ ಮಾನಸಿಕ ಒತ್ತಡದಿಂದ ಮುಕ್ತರಾಗಬಹುದು.


ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶೆ ಪಂಚಾಕ್ಷರಿ ಎಂ. ಮಾತನಾಡಿ, ಪೊಲೀಸ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಹಲವಾರು ಒತ್ತಡಗಳ ನಡುವೆ ಕಾರ್ಯನಿರ್ವಹಿಸುತ್ತಿದ್ದಾರೆ. ಪ್ರತಿಯೊಬ್ಬರು ತಮ್ಮ ದೈಹಿಕ ಹಾಗೂ ಮಾನಸಿಕ ಆರೋಗ್ಯವನ್ನು ಕಾಪಾಡಿಕೊಂಡರೆ ಉತ್ತಮವಾಗಿ ಕರ್ತವ್ಯ ನಿಭಾಯಿಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ. ಕುಮಾರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ರಾಮನಗರ ಉಪ ವಿಭಾಗದ ಡಿವೈಎಸ್‌ಪಿ ಶ್ರೀನಿವಾಸ್ ಮಾತನಾಡಿದರು. ಮಾನಸಿಕ ಆರೋಗ್ಯಕ್ಕೆ ಸಂಬಂಧಿಸಿದ ಮಾಹಿತಿಯನ್ನೊಳಗೊಂಡ ಕರಪತ್ರವನ್ನು ಗಣ್ಯರು ಬಿಡುಗಡೆಗೊಳಿಸಿದರು.

---

## ಸೂಳೆಕೆರೆ ಒತ್ತುವರಿ ತೆರವಿಗೆ ರೈತರ ಆಗ್ರಹ

• **ಉದಯವಾಹಿನಿ, ಭಾರತೀನಗರ**



☛ ಉದಯವಾಹಿನಿ ಚಿತ್ರ

ಸೂಳೆಕೆರೆಯ ನೂರಾರು ಎಕರೆಯಷ್ಟು ಜಾಗವನ್ನು ಅಕ್ಕಪಕ್ಕದ ರೈತರು ಒತ್ತುವರಿ ಮಾಡಿಕೊಂಡಿದ್ದು, ಮೊದಲು ಒತ್ತುವರಿಯನ್ನು ತೆರವುಗೊಳಿಸಿ ಆನಂತರ ಜೀರ್ಣೋದ್ಧಾರ ಕೈಗೊಳ್ಳುವಂತೆ ರೈತರು ಆಗ್ರಹಿಸಿದರು. ಸಮೀಪದ ಚಿಕ್ಕಅರಸಿನಕೆರೆ ಕಾಲಭೈರವೇಶ್ವರ ದೇವಾಲಯದ ಆವರಣದಲ್ಲಿ ಕಾವೇರಿ ನೀರಾವರಿ ನಿಗಮದ ವತಿಯಿಂದ ನಡೆದ ಸೂಳೆಕೆರೆ ಜೀರ್ಣೋದ್ಧಾರ, ನಾಲೆಗಳ ಅಭಿವೃದ್ಧಿ ಕಾಮಗಾರಿ ಕುರಿತು ರೈತ ಮುಖಂಡರ ಜತೆ ಹಮ್ಮಿಕೊಂಡಿದ್ದ ಸಮಾಲೋಚನಾ ಸಭೆಯಲ್ಲಿ ಶಾಸಕ ಉದಯ್ ಸಮ್ಮುಖದಲ್ಲಿ ರೈತರು ಈ ಒತ್ತಾಯ ಮಾಡಿದರು.

ಕಳೆದ ಹತ್ತಾರು ವರ್ಷಗಳ ಹಿಂದೆಯೇ ಕೆರೆ ಒತ್ತುವರಿ ಮಾಡಿಕೊಂಡಿದ್ದು, ಈ ಹಿಂದಿನ ಯಾವ ಸರ್ಕಾರಗಳೂ ಕೆರೆ ಉಳಿವಿಗೆ ಕ್ರಮಕೈಗೊಂಡಿಲ್ಲ. ಈಗಲಾದರೂ 400 ಎಕರೆಗೂ ಹೆಚ್ಚು ಒತ್ತುವರಿಯಾಗಿರುವ ಕೆರೆಗೆ ಸೇರಿ ಜಾಗವನ್ನು ತೆರವುಗೊಳಿಸಿ, ಆನಂತರ ಅಭಿವೃದ್ಧಿಪಡಿಸಿ ಎಂದು ಸಲಹೆ ನೀಡಿದರು. ಸಭೆ ಉದ್ಘಾಟಿಸಿದ ಶಾಸಕ ಕೆ.ಎಂ.ಉದಯ್ ಮಾತನಾಡಿ, ಸೂಳೆಕೆರೆ ಅಭಿವೃದ್ಧಿಗೆ ಕ್ರಮಕೈಗೊಳ್ಳಲಾಗುತ್ತಿದೆ. ಮೊದಲು ಒತ್ತುವರಿಯಾಗಿರುವ ಕೆರೆ ಜಾಗ ಬಿಡಿಸಿ ನಂತರ ಅಭಿವೃದ್ಧಿಪಡಿಸಲಾಗುವುದು ಎಂದು ತಿಳಿಸಿದರು. ಸೂಳೆಕೆರೆ ಅಚ್ಚುಕಟ್ಟು ವ್ಯಾಪ್ತಿಯ ರೈತರು ಹಲವು ವರ್ಷಗಳಿಂದ ಶಿಥಿಲ ನಾಲೆಗಳಿಂದಾಗಿ ಹಲವು ಸಮಸ್ಯೆಗಳನ್ನು ಎದುರಿಸುತ್ತಿರುವುದು ಗಮನಕ್ಕೆ ಬಂದಿದೆ. ಇದಕ್ಕೆ ಶಾಶ್ವತ ಪರಿಹಾರ ಕಂಡುಕೊಳ್ಳಲು ರೈತರ ಸಲಹೆ ಅಗತ್ಯ. ರೈತರ ಸಲಹೆಗಳಿಗೆ ಅನುಗುಣವಾಗಿ ಕೆಲಸ ಮಾಡಲು ಬದ್ಧ ಎಂದು ಹೇಳಿದರು.

ಸೂಳೆಕೆರೆಯ ವಿಸ್ತೀರ್ಣ 845 ಎಕರೆ ಇದ್ದು, ಕೆಲವರು ಇದನ್ನು ಒತ್ತುವರಿ ಮಾಡಿಕೊಂಡಿದ್ದಾರೆ. ಒತ್ತುವರಿ ತೆರವಿಗೆ ಕ್ರಮವಹಿಸುತ್ತೇನೆ. ಸೂಳೆಕೆರೆ ಅಭಿವೃದ್ಧಿ ಕಾಮಗಾರಿಗೆ ಅಂದಾಜು ಮೊತ್ತ ಸುಮಾರು 34 ಕೋಟಿ ರೂ.ಮತ್ತು ಸೂಳೆಕೆರೆ ನಾಲೆಗಳ ಅಭಿವೃದ್ಧಿಗೆ ಅಂದಾಜು ಮೊತ್ತ 47.75 ಕೋಟಿ ರೂ. ಬಿಡುಗಡೆಯಾಗಿದೆ. ಈ ಹಣದಲ್ಲಿ ಉತ್ತರ, ದಕ್ಷಿಣ ಎರಡು ಭಾಗದ ನಾಲೆಗಳ ಅಭಿವೃದ್ಧಿ ಕಾಮಗಾರಿಯೂ ನಡೆಯಲಿದೆ ಎಂದು ತಿಳಿಸಿದರು.

---

## ರಾಜ್ಯದ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ


• **ಉದಯವಾಹಿನಿ, ಮೈಸೂರು**

ರಾಜ್ಯದ ಕಾನೂನು ಸುವ್ಯವಸ್ಥೆ, ಆಡಳಿತ ಯಂತ್ರ ಸಂಪೂರ್ಣ ಹದಗೆಟ್ಟಿದೆ. ಸರ್ಕಾರಿ ಅಧಿಕಾರಿಗಳು ಶಾಸಕರ ಕೃಪಾ ಪೋಷಿತರಾಗಿದ್ದಾರೆ. ಶಾಸಕರು ಆಯಾ ಕ್ಷೇತ್ರದ ಮಾಲೀಕರಂತೆ ವರ್ತಿಸುತ್ತಿದ್ದಾರೆ’ ಎಂದು ವಿಧಾನ ಪರಿಷತ್ ಸದಸ್ಯ ಅಡಗೂರು ಎಚ್.ವಿಶ್ವನಾಥ್ ಟೀಕಿಸಿದರು. ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಅತ್ಯಾಚಾರ, ಕೊಲೆ ಪ್ರಕರಣಗಳು ಹೆಚ್ಚಾಗುತ್ತಿವೆ. ಇವೆಲ್ಲದ ಮಾಹಿತಿ ಸಿದ್ದರಾಮಯ್ಯ ಅವರಿಗೆ ಇದ್ದರೂ ಕೇಳುತ್ತಿಲ್ಲ.

ಅವರ ಪುತ್ರ ಯತೀಂದ್ರ ಸಿದ್ದರಾಮಯ್ಯ ಮತ್ತು ಸ್ನೇಹಿತರು ವರ್ಗಾವಣೆ ದಂಧೆಯಲ್ಲಿ ತೊಡಗಿದ್ದಾರೆ. ಎಸಿಪಿ ಮೈಸೂರಿಗೆ ವರ್ಗಾವಣೆ ಮಾಡಿಸಿಕೊಳ್ಳಲು 1 ಕೋಟಿ ರೂ, ಇನ್‌ಸ್ಪೆಕ್ಟರ್ 75 ಲಕ್ಷ ರೂ.. ಸಬ್ ಇನ್‌ಸ್ಪೆಕ್ಟರ್ 50 ಲಕ್ಷ ರೂ. ಕೊಡಬೇಕಿದೆ ಎಂದು ಆರೋಪಿಸಿದರು.

**ಹೈಕಮಾಂಡ್ ಸುಪ್ರೀಂ:** ಕಾಂಗ್ರೆಸ್‌ನಲ್ಲಿ ಹೈಕಮಾಂಡ್ ನಿರ್ಧಾರವೇ ಸುಪ್ರೀಂ. ಡಿ.ಕೆ. ಶಿವಕುಮಾರ್ ಪಕ್ಷವನ್ನು ಕಟ್ಟಿ ಬೆಳೆಸಿದ್ದಾರೆ. ಸಿದ್ದರಾಮಯ್ಯ ಪಕ್ಷ ಕಟ್ಟದಿದ್ದರೂ ಅಧಿಕಾರ ಅನುಭವಿಸುತ್ತಿದ್ದಾರೆ. ಅವರು ಪಕ್ಷವನ್ನು ಸರ್ವನಾಶ ಮಾಡುತ್ತಿದ್ದಾರೆ.

ನಾಯಕತ್ವ ಬದಲಾವಣೆಯನ್ನು ಅವರ ಹೈಕಮಾಂಡ್ ನಿರ್ಧರಿಸಲಿದೆ ಎಂದು ವಿಶ್ವನಾಥ್ ಹೇಳಿದರು.ಮಡಿವಾಳರು ಶಾಸಕರಾಗಲು ಸಿದ್ದರಾಮಯ್ಯ ಬಿಟ್ಟಿಲ್ಲ. ತೋರಿಕೆಗೆ ವಿಭೂತಿ, ಕುಂಕುಮ ಹಾಕಿಕೊಂಡು ಹಿಂದೂ ಅನ್ನುತ್ತಿದ್ದಾರೆ. ಕಾಂತರಾಜು ಆಯೋಗದ ವರದಿಯನ್ನು ಅನುಮೋದಿಸಿ. ಬೂಟಾಟಿಕೆ ಮಾಡುವುದಲ್ಲ ಎಂದು ಹೇಳಿದ ಅವರು, ಕೆ.ಆರ್. ನಗರದ ಶ್ರೀರಾಮ ಸಕ್ಕರೆ ಕಾರ್ಖಾನೆಗೆ 100 ಕೋಟಿ ರೂ. ನೀಡಿದ್ದರೆ, ಕಾರ್ಖಾನೆಯು ನಡೆಯುತ್ತಿತ್ತು. ಇಂಥ ಒಳ್ಳೆ ಕೆಲಸಗಳನ್ನು ಕಾಂಗ್ರೆಸ್ ಮಾಡುವುದಿಲ್ಲ ಎಂದರು.



---

## ಸಾಮಾಜಿಕ-ಶೈಕ್ಷಣಿಕ ಸಮೀಕ್ಷೆ: 1 ಲಕ್ಷ ಜನ ನಕಾರ, ಮನೆ ಬೀಗ, ವಲಸೆ

• **ಉದಯವಾಹಿನಿ, ಕೋಲಾರ**



ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ಮುಕ್ತಾಯಗೊಳ್ಳಲು ಇನ್ನು ಕೇವಲ 48 ಗಂಟೆ ಬಾಕಿ ಉಳಿದಿದೆ. ಜಿಲ್ಲೆಯಲ್ಲಿ ಈ ವರೆಗೆ ಶೇ 97ರಷ್ಟು ಸಮೀಕ್ಷೆ ನಡೆದಿದ್ದು, ಇನ್ನೂ ಸುಮಾರು 52 ಸಾವಿರ ಜನರಿಂದ ಮಾಹಿತಿ ಪಡೆಯಬೇಕಿದೆ. ಸುಮಾರು 1.03 ಲಕ್ಷ ಜನರು (ಶೇ 6) ವಿವಿಧ ಕಾರಣಗಳಿಂದ ಸಮೀಕ್ಷೆಯಲ್ಲಿ ಭಾಗವಹಿಸಿಲ್ಲ.

ಕೆಲ ಕುಟುಂಬಗಳು ಮಾಹಿತಿ ನೀಡಲು ನಿರಾಕರಿಸಿದ್ದರೆ, ಇನ್ನು ಕೆಲವರ ಮನೆಗಳಿಗೆ ಬೀಗ ಹಾಕಲಾಗಿದೆ. ಇನ್ನು ಕೆಲವರು ವಿವಿಧೆಡೆಗೆ ವಲಸೆ ಹೋಗಿದ್ದಾರೆ. ಕೆಲವರನ್ನು ಹುಡುಕಿ ಸಮೀಕ್ಷೆಗೆ ಒಳಪಡಿಸುವ ಸವಾಲು ಗಣತಿದಾರರಿಗೆ ಎದುರಾಗಿದೆ. ಈ ನಡುವೆ ಜಿಲ್ಲೆಯ ಜನಸಂಖ್ಯೆಗೂ ಈಗ ನಡೆದಿರುವ ಸಮೀಕ್ಷೆಯಲ್ಲಿನ ಅಂಕಿಅಂಶಗಳಿಗೂ ಹೊಂದಾಣಿಕೆ ಕೊರತೆ ಎದುರಾಗಿದೆ. ಕುಟುಂಬದ ಲೆಕ್ಕದಲ್ಲಿ ನೋಡಿದರೆ ಶೇಕಡವಾರು 108ರಷ್ಟಾಗಿದೆ, ಜನಸಂಖ್ಯೆ ಆಧಾರದ ಮೇಲೆ ಇನ್ನೂ ಬಾಕಿ ಇದೆ. ನಿಗದಿಗಿಂತ ಹೆಚ್ಚು ಕುಟುಂಬಗಳು ಕಂಡು ಬರುತ್ತಿವೆ.ಜಿಲ್ಲೆಯಲ್ಲಿ 2011ರ ಜನಸಂಖ್ಯೆ ಪ್ರಕಾರ 15.30 ಲಕ್ಷ ಜನರಿದ್ದಾರೆ. 2025ರ ಅಂದಾಜು ಜನಸಂಖ್ಯೆ ಪ್ರಕಾರ 16.28 ಲಕ್ಷ ಜನರಿದ್ದಾರೆ. ಈ ಅಂಕಿ ಅಂಶ ಇಟ್ಟುಕೊಂಡೇ ಸಮೀಕ್ಷೆ ನಡೆಸಲಾಗುತ್ತಿದೆ. ಅ.16ರವರೆಗೆ ಶೇ 97ರಷ್ಟು ಮಂದಿ ಸಮೀಕ್ಷೆಗೆ ಒಳಪಟ್ಟಿದ್ದಾರೆ. ಜಿಲ್ಲೆಯಲ್ಲಿ ಒಟ್ಟು 4.17 ಲಕ್ಷ ಕುಟುಂಬಗಳಿವೆ. ಸೆ.22ರಂದು ಸಮೀಕ್ಷೆ ಆರಂಭವಾಗಿದ್ದು, ಅ.18ಕ್ಕೆ ಕೊನೆಗೊಳ್ಳಬೇಕಿದೆ. ಸಮೀಕ್ಷೆದಾರರು ಕುಟುಂಬದವರ ಮಾಹಿತಿ ಕಲೆಹಾಕಿ ಆ್ಯಪ್‌ನಲ್ಲಿ ದಾಖಲಿಸುತ್ತಿದ್ದಾರೆ. ಆರಂಭದ ಮೂರ್ನಾಲ್ಕು ದಿನ ಸರ್ವರ್ ಸಮಸ್ಯೆ, ನೆಟ್‌ವರ್ಕ್ ಸಮಸ್ಯೆಯಿಂದ ಜಿಲ್ಲೆಯಲ್ಲಿ ಸಮೀಕ್ಷೆ ವಿಳಂಬವಾಗಿತ್ತು.

ನಂತರ ವೇಗ ಪಡೆದಿಕೊಂಡಿತು. ಒಂದೇ ದಿನದಲ್ಲಿ ಸುಮಾರು 36 ಸಾವಿರ ಮನೆ ಸಮೀಕ್ಷೆ ನಡೆಸಲಾಗಿತ್ತು. ಪ್ರತಿ ತಾಲ್ಲೂಕಿನಲ್ಲಿ ತಹಶೀಲ್ದಾರ್ ಒಳಗೊಂಡ ಗಣತಿದಾರರ ತಂಡಕ್ಕೆ ಪ್ರತಿ ದಿನ 10 ಸಾವಿರ ಮನೆಗಳ ಸಮೀಕ್ಷೆ ನಡೆಸಲು ಗುರಿ ನೀಡಲಾಗಿದೆ.


### ನಿರಾಕರಣೆ: ಘೋಷಣೆಗೆ ಸೂಚನೆ

ಸಾಮಾಜಿಕ ಶೈಕ್ಷಣಿಕ ಸಮೀಕ್ಷೆ ನಿರಾಕರಿಸಿದ ವ್ಯಕ್ತಿಗಳಿಂದ ಘೋಷಣಾ ಪತ್ರ ಪಡೆಯಲಾಗುತ್ತಿದೆ. ತಕರಾರು ಹೊಂದಿರುವ ಜನರು ಸಮೀಕ್ಷೆಯಿಂದ ಹೊರಗೆ ಉಳಿಯುವ ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದಾರೆ. ಇಂತಹ ಮನೆಗಳಿಂದ ಮರಳಿದ್ದ ಸಮೀಕ್ಷಕರು ಘೋಷಣಾ ಪತ್ರ ಪಡೆಯುವುದನ್ನು ಕಡ್ಡಾಯಗೊಳಿಸಲಾಗಿದೆ. ಒಂದು ವೇಳೆ ಘೋಷಣಾ ಪತ್ರ ನೀಡಲು ನಿರಾಕರಿಸಿದರೆ ಅಂತಹವರ ಆಡಿಯೊ ಅಥವಾ ವಿಡಿಯೊ ಮಾಡಲು ಗಣತಿದಾರರಿಗೆ ಸೂಚನೆ ನೀಡಲಾಗಿದೆ. ಅದಕ್ಕಾಗಿ ಆ್ಯಪ್ ಕೂಡ ಇದೆ. ಘೋಷಣಾ ಪತ್ರ ನೀಡಿದವರು ಸಮೀಕ್ಷೆಯ ಶೇಕಡವಾರು ವ್ಯಾಪ್ತಿಯೊಳಗೇ ಬರುತ್ತಾರೆ.

---

## ಕೆಲಸ ಸಿಗುವವರೆಗೂ ಯುವನಿಧಿ ಭತ್ಯೆ : ಸಿದ್ದರಾಮಯ್ಯ

• **ಉದಯವಾಹಿನಿ, ಮೈಸೂರು**



☛ ಉದಯವಾಹಿನಿ ಚಿತ್ರ

ಉದ್ಯೋಗ ಸಿಗುವವರೆಗೂ ಯುವನಿಧಿ ಯೋಜನೆಯ ಅನುದಾನ ಫಲಾನುಭವಿಗೆ ನಿಲ್ಲುವುದಿಲ್ಲ. ಕೌಶಲಾಭಿವೃದ್ಧಿ ತರಬೇತಿಗೆ ಸೇರಿದರೆ ಭತ್ಯೆ ನಿಲ್ಲುವುದೆಂಬ ಬಿಜೆಪಿಗರ ಸುಳ್ಳುಗಳಿಗೆ ಕಿವಿಗೊಡಬಾರದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ನಗರದ ಮಹಾರಾಜ ಕಾಲೇಜು ಮೈದಾನದಲ್ಲಿ ರಾಜ್ಯ ಕೌಶಲಾಭಿವೃದ್ಧಿ, ಉದ್ಯಮಶೀಲತೆ, ಜೀವನೋಪಾಯ ಇಲಾಖೆಯು ಶುಕ್ರವಾರ ಆಯೋಜಿಸಿದ್ದ ಮೈಸೂರು ವಿಭಾಗೀಯ ಮಟ್ಟದ ಬೃಹತ್ ಉದ್ಯೋಗ ಮೇಳ ಉದ್ಘಾಟಿಸಿ ಮಾತನಾಡಿ, ಉದ್ಯೋಗ ಸಿಕ್ಕ ಬಳಿಕ ಯುವನಿಧಿ ನಿಲ್ಲಿಸಲಾಗುವುದು. ಎರಡು ವರ್ಷದವರೆಗೂ ಯೋಜನೆಯ ಪ್ರಯೋಜನ ಪಡೆಯಬಹುದು ಎಂದರು.

ಪ್ರಧಾನಿ ನರೇಂದ್ರ ಮೋದಿ ವರ್ಷಕ್ಕೆ 2 ಕೋಟಿ ಉದ್ಯೋಗ ನೀಡುವುದಾಗಿ ಹೇಳಿದ್ದರು. 11 ವರ್ಷದಲ್ಲಿ 22 ಕೋಟಿ ನೌಕರಿ ಕೊಡಬೇಕಿತ್ತು. ಕೊಟ್ಟ ಮಾತು ತಪ್ಪಿ ನಡೆಯಲು ನಾನು ಮೋದಿಯಲ್ಲ. ವಿರೋಧ ಪಕ್ಷಗಳು ಗ್ಯಾರಂಟಿ ಯೋಜನೆಗಳಿಗೆ ದುಡ್ಡಿಲ್ಲವೆಂದು ಅಪಪ್ರಚಾರ ಮಾಡಿದ್ದವು. ಲೋಕಸಭಾ ಚುನಾವಣೆ ನಂತರ ಅನುದಾನ ನಿಲ್ಲಿಸುತ್ತಾರೆಂದರು. ನಾವು ಏನು ಹೇಳುತ್ತೇವೆಯೋ ಅದನ್ನು ಮಾಡೇ ತೀರುತ್ತೇವೆ ಎಂದು ಹೇಳಿದರು. ನುಡಿದಂತೆ ನಡೆಯುವ ಸರ್ಕಾರ ನಮ್ಮದು. ಕಳೆದ ಎರಡೂವರೆ ವರ್ಷದಲ್ಲಿ 28 ಸಾವಿರಕ್ಕೂ ಹೆಚ್ಚು ಸರ್ಕಾರಿ ಹುದ್ದೆಗಳನ್ನು ಭರ್ತಿ ಮಾಡಿದ್ದು, 35 ಸಾವಿರ ಹುದ್ದೆಗಳ ನೇಮಕಾತಿಗೆ ಅನುಮೋದನೆ ನೀಡಿದ್ದೇವೆ’ ಎಂದು ಮಾಹಿತಿ ನೀಡಿದರು.

ಹಿಂದಿನ ಬಿಜೆಪಿ ಸರ್ಕಾರವೂ ಯಾರಿಗೂ ಉದ್ಯೋಗ ನೀಡಲಿಲ್ಲ. ರಾಜ್ಯದಲ್ಲಿ 7 ಲಕ್ಷ ರೂ. ಸರ್ಕಾರಿ ಹುದ್ದೆಗಳಿವೆ. ಉಳಿದವು ಖಾಸಗಿ ಕ್ಷೇತ್ರದಲ್ಲಿವೆ. ಉದ್ಯೋಗ ಮಾರುಕಟ್ಟೆಯ ಬೇಡಿಕೆಗೆ ಅನುಗುಣವಾಗಿ ಅಭ್ಯರ್ಥಿಗಳನ್ನು ತಯಾರು ಮಾಡಲು ಸರ್ಕಾರವು ಕೌಶಲ ತರಬೇತಿ ಕಾರ್ಯಕ್ರಮಗಳನ್ನು ಶಿಕ್ಷಣದೊಂದಿಗೆ ಹಮ್ಮಿಕೊಂಡಿದೆ. ನಿರುದ್ಯೋಗಿಗಳು, ವಿದ್ಯಾರ್ಥಿಗಳು ಅದರ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು. ನಿರುದ್ಯೋಗ ಸಮಸ್ಯೆ ಹೋಗಲಾಡಿಸುವುದು ದೊಡ್ಡ ಸವಾಲಾಗಿದೆ. ಹೀಗಾಗಿ ವಿಭಾಗೀಯ ಹಾಗೂ ಜಿಲ್ಲಾ ಮಟ್ಟದಲ್ಲಿ ಉದ್ಯೋಗ ಮೇಳ ಆಯೋಜಿಸಲಾಗುತ್ತಿದೆ.

**ಮಾತು ತಪ್ಪಲು ನಾನು ಮೋದಿಯಲ್ಲ**

ಮೈಸೂರಿನ ಮೇಳದಲ್ಲಿ 43 ಸಾವಿರ ನಿರುದ್ಯೋಗಿಗಳು ನೌಕರಿಗೆ ಹೆಸರು ನೋಂದಾಯಿಸಿಕೊಂಡಿದ್ದು, ಎಲ್ಲರಿಗೂ ಉದ್ಯೋಗ ಸಿಗುವಂತೆ ಮಾಡಲಾಗುವುದು ಎಂದು ಭರವಸೆ ನೀಡಿದರು.

ಕಳೆದ ಎರಡೂವರೆ ವರ್ಷದಲ್ಲಿ ಬೆಂಗಳೂರಿನಲ್ಲಿ ನಡೆದ ಉದ್ಯೋಗ ಮೇಳಗಳಲ್ಲಿ 58,892 ಅಭ್ಯರ್ಥಿಗಳು ಪಾಲ್ಗೊಂಡಿದ್ದು, ಅವರಲ್ಲಿ 11,507 ಮಂದಿ ಕೆಲಸ ಗಿಟ್ಟಿಸಿದ್ದಾರೆ. 22,869 ಅಭ್ಯರ್ಥಿಗಳು ಉದ್ಯೋಗ ಆಯ್ಕೆ ಪಟ್ಟಿಯಲ್ಲಿದ್ದಾರೆ. ಜಿಲ್ಲಾ ಮಟ್ಟದಲ್ಲಿ ನಡೆದ ಮೇಳಗಳಲ್ಲಿ 1,20,563 ಮಂದಿ ಅಭ್ಯರ್ಥಿಗಳು ಭಾಗವಹಿಸಿದ್ದು, 24,391 ಉದ್ಯೋಗಿಗಳಾಗಿದ್ದಾರೆ. 48,232 ಮಂದಿ ಆಯ್ಕೆ ಪಟ್ಟಿಯಲ್ಲಿ ಸ್ಥಾನ ಪಡಿದಿದ್ದು, ಆದ್ಯತೆ ಮೇಲೆ ಭರ್ತಿ ಮಾಡಿಕೊಳ್ಳಲು ಸೂಚಿಸಲಾಗಿದೆ ಎಂದರು.

---

## ಇ- ಖಾತಾ ಅಭಿಯಾನ ಚುರುಕುಗೊಳಿಸಿ: ಡಿಸಿ ಸೂಚನೆ

• **ಉದಯವಾಹಿನಿ, ಮಂಡ್ಯ**



☛ ಉದಯವಾಹಿನಿ ಚಿತ್ರ

ಜಿಲ್ಲೆಯಲ್ಲಿ ಮನೆ- ಮನೆಗೆ ಹೋಗಿ ಇ- ಖಾತಾ ಅಭಿಯಾನವನ್ನು ಚುರುಕುಗೊಳಿಸಿ ಎಂದು ಜಿಲ್ಲಾಧಿಕಾರಿ ಕುಮಾರ ಅವರು ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲಾಧಿಕಾರಿ ಕಚೇರಿಯಲ್ಲಿ ಅಧಿಕಾರಿಗಳೊಂದಿಗೆ ನಗರ ಅಭಿವೃದ್ಧಿ ಕುರಿತು ಸಭೆ ನಡೆಸಿ ಮಾತನಾಡಿದರು. ಸಾರ್ವಜನಿಕರಲ್ಲಿ ಮಾಹಿತಿಯ ಕೊರತೆಯಿದ್ದು, ಜಿಲ್ಲೆಯಲ್ಲಿ ಹೆಚ್ಚಿನ ಜಾಗೃತಿ ಮೂಡಿಸಿ ಮತ್ತು ಜಿಲ್ಲೆಯಲ್ಲಿ ಬಾಕಿಯಿರುವ ಇ-ಖಾತೆಗಳನ್ನು ವಾರಕ್ಕೊಂದು ವಾರ್ಡ್ ಎಂಬಂತೆ ಮನೆ-ಮನೆಗೆ ತಲುಪಿ ಅಭಿಯಾನ ನಡೆಸಬೇಕು. ಅಧಿಕಾರಿಗಳು ನಿರೀಕ್ಷಿತ ಗುರಿ ತಲುಪದಿದಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

**ವಸತಿರಹಿತರ ಪಟ್ಟಿ ತಯಾರಿಸಿ:** ಜಿಲ್ಲೆಯಲ್ಲಿ ವಸತಿ ರಹಿತರ ಪಟ್ಟಿ ತಯಾರಿಸಿ ನಿವೇಶನಕ್ಕಾಗಿ ಸ್ಥಳ ಪರಿಶೀಲಿಸಿ ಮತ್ತು ಈಗಾಗಲೇ ಅನುಮೋದನೆ ಪಡೆದಿರುವ ವಸತಿ ನಿರ್ಮಾಣದಲ್ಲಿ ಬಾಕಿಯಿರುವ ಕೆಲಸಗಳನ್ನು ಶೀಘ್ರದಲ್ಲಿ ಸಂಪೂರ್ಣಗೊಳಿಸಿ.

ಕಡ್ಡಾಯವಾಗಿ ಪ್ರತಿ ಇಲಾಖೆಯ ಅಭಿವೃದ್ಧಿ ಕುರಿತು ಪತ್ರಿಕೆಯಲ್ಲಿ ಮಾಹಿತಿ ಪ್ರಕಟಿಸಿ ಎಂದು ಅಧಿಕಾರಿಗಳಿಗೆ ತಿಳಿಸಿದರು. ಪೌರಕಾರ್ಮಿಕರಿಗೆ ಸವಲತ್ತುಗಳನ್ನು ಒದಗಿಸುವುದು ನಮ್ಮ ಕರ್ತವ್ಯವಾಗಿದ್ದು, ಪೌರಕಾರ್ಮಿಕರಿಗೆ ಸುರಕ್ಷತಾ ಉಪಕರಣಗಳನ್ನು ಕಡ್ಡಾಯವಾಗಿ ನೀಡಿ, ಬಳಕೆ ಮಾಡಲು ತಿಳಿಸಬೇಕು. ಪೌರಕಾರ್ಮಿಕರಿಗೆ ಆರೋಗ್ಯ ತಪಾಸಣೆ ಮಾಡಿಸುವಲ್ಲಿ ಕ್ರಮಕೈಗೊಳ್ಳಿ. ವಿಮೆ ಮತ್ತು ಇ.ಎಸ್.ಐ, ಪಿ.ಎಫ್. ಸೌಲಭ್ಯದ ಜತೆಗೆ ಗೃಹಭಾಗ್ಯ ಯೋಜನೆಯಡಿ ಪೌರಕಾರ್ಮಿಕರಿಗೆ ವಸತಿ ಸೌಲಭ್ಯವನ್ನು ಒದಗಿಸಬೇಕು ಎಂದು ತಿಳಿಸಿದರು.

**ಬೀದಿನಾಯಿ ಹಾವಳಿ: ಕ್ರಮಕ್ಕೆ ಸೂಚನೆ** ಜಿಲ್ಲೆಯಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿರುವುದು ಕಂಡು ಬಂದಿದ್ದು ಸಂತಾನಶಕ್ತಿ ಹರಣ ಶಸ್ತ್ರಚಿಕಿತ್ಸೆ ನಡೆಸಲು ಕೂಡಲೇ ಕ್ರಮ ಕೈಗೊಳ್ಳಿ ಹಾಗೂ ಜಿಲ್ಲೆಯಲ್ಲಿ ನಾಯಿ ಕಡಿತಕ್ಕೆ ಒಳಪಟ್ಟವರ ವರದಿ ತಯಾರಿಸಿ ಮಾಹಿತಿ ನೀಡುವಂತೆ ಜಿಲ್ಲಾಧಿಕಾರಿ ಸೂಚಿಸಿದರು. ಕುಡಿಯುವ ನೀರಿನ ಶುದ್ಧತೆ ಬಹಳ ಮುಖ್ಯವಾಗಿದ್ದು ಮಳೆ ಬಂದಂತಹ ಸಂದರ್ಭದಲ್ಲಿ ಕುಡಿಯುವ ನೀರಿನಲ್ಲಿ ಮಣ್ಣು ಮಿಶ್ರವಾಗಿರುವುದು ಬೆಳಕಿಗೆ ಬಂದಿದೆ. ನೀರಿನ ಶುದ್ಧತೆಯ ಕಡೆಗೆ ಹೆಚ್ಚಿನ ನಿಗಾವಹಿಸಿ ಮತ್ತು ಇಂದಿರಾ ಕ್ಯಾಂಟೀನ್‌ನಲ್ಲಿ ಕುಡಿಯುವ ನೀರಿನ ಘಟಕದ ವ್ಯವಸ್ಥೆಯಲ್ಲಿ ಹಾಗೂ ಊಟದ ಸ್ವಚ್ಛತೆ ಬಗ್ಗೆ ಪ್ರತಿ ನಿತ್ಯ ಪರಿಶೀಲಿಸಿ ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಿದರು.

---



## ಮಿನಿ ನ್ಯೂಸ್

### ಮಲೆ ಮಹದೇಶ್ವರನ ಹುಂಡಿಗೆ ಹರಿದು ಬಂತು 2.27 ಕೋಟಿ ರೂ. ಕಾಣಿಕೆ

• **ಉದಯವಾಹಿನಿ, ಹನೂರು**

ತಾಲ್ಲೂಕಿನ ಪ್ರಸಿದ್ಧ ಪುಣ್ಯಯಾತ್ರ ಸ್ಥಳ ಶ್ರೀಕ್ಷೇತ್ರ ಮಲೆ ಮಹದೇಶ್ವರ ಬೆಟ್ಟ ದೇವಾಲಯದಲ್ಲಿ ಹುಂಡಿ ಹಣ ಎಣಿಕೆ ಮಾಡಲಾಗಿದ್ದು, 28 ದಿನಗಳಲ್ಲಿ 2.27 ಕೋಟಿ ರೂ. ಸಂಗ್ರಹವಾಗಿದೆ. ಇದಲ್ಲದೆ 9 ವಿದೇಶಿ ನೋಟುಗಳು 2 ಸಾವಿರ ರೂ. ಮುಖ ಬೆಲೆ 9 ನೋಟುಗಳು ಸಹ ದೊರೆತಿವೆ. ಸಾಲೂರು ಬೃಹನಠಾಧ್ಯಕ್ಷ ಶ್ರೀ ಶಾಂತ ಮಲ್ಲಿಕಾರ್ಜುನ ಸ್ವಾಮೀಜಿ ಅವರ ಉಪಸ್ಥಿತಿಯಲ್ಲಿ ಶ್ರೀ ಮಲೆಮಹದೇಶ್ವರ ಸ್ವಾಮಿ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ರಘು ನೇತೃತ್ವದಲ್ಲಿ ಬೆಳಿಗ್ಗೆ 7 ಗಂಟೆಯಿಂದ ಹುಂಡಿ ಹಣ ಎಣಿಕೆ ಕಾರ್ಯ ನಡೆದಿದ್ದು, 28 ದಿನಗಳಲ್ಲಿ 2,27,24,757.00 ಕೋಟಿ ರೂ. ನಗದು ರೂಪದಲ್ಲಿ, 46 ಗ್ರಾಂ ಚಿನ್ನ, 01 ಕೆ.ಜಿ 350 ಗ್ರಾಂ ಬೆಳ್ಳಿ ಹುಂಡಿಯಲ್ಲಿ ದೊರೆತಿದೆ.

ಭಕ್ತರಿಂದ ಹರಕೆ ರೂಪದಲ್ಲಿ ಇಷ್ಟೊಂದು ದೊಡ್ಡ ಮೊತ್ತದ ಕಾಣಿಕೆ ಸಂದಿರುವುದು ಮಹಾಲಯ ಅಮಾವಾಸೆ, ಆಯುಧ ಪೂಜೆ, ಹುಣಿಮೆ ರಜೆ ದಿನಗಳಂದು ಎಂದು ಮಂಡಳಿ ತಿಳಿಸಿದೆ. ಸರ್ಕಾರ ಶಕ್ತಿ ಯೋಜನೆ ಮಹಿಳೆಯರ ಉಚಿತ ಪ್ರಯಾಣದಿಂದಾಗಿ ಹೆಚ್ಚಿನ ಸಂಖ್ಯೆಯಲ್ಲಿ ಶ್ರೀಕ್ಷೇತ್ರಕ್ಕೆ ಭೇಟಿ ನೀಡಿದ್ದರಿಂದ ದೊಡ್ಡ ಮೊತ್ತದ ಹಣ ಸಂಗ್ರಹವಾಗಿದೆ. ಬಸ್ ನಿಲ್ದಾಣದ ವಾಣಿಜ್ಯ ಕಟ್ಟಡದಲ್ಲಿ ಸಿಸಿಕ್ಯಾಮರಾ ಹಾಗೂ ಪೊಲೀಸರ ಕಣ್ಗಾವಲಿನಲ್ಲಿ ಪ್ರಾಧಿಕಾರದ ಸಿಬ್ಬಂಧಿಗಳು, ಕೊಳ್ಳೇಗಾಲ ಬ್ಯಾಂಕ್ ಆಫ್ ಬರೋಡ ಸ್ಥಳೀಯ ಶಾಖೆ ಸಿಬ್ಬಂದಿಗಳು ಹುಂಡಿ ಎಣಿಕೆ ಕಾರ್ಯದಲ್ಲಿ ತೊಡಗಿದ್ದರು.

### ತಾಯಿಯ ಕತ್ತು ಕೊಯ್ದು ಕೊಲೆ ಹಣಕ್ಕಾಗಿ ಪುತ್ರನಿಂದ ಕೃತ್ಯ

• **ಉದಯವಾಹಿನಿ, ರಾಮನಗರ**

ಮದ್ಯವ್ಯಸನಿಯೊಬ್ಬ ಹಣಕ್ಕಾಗಿ ತಾಯಿಯ ಕತ್ತು ಕೊಯ್ದು ಕೊಲೆ ಮಾಡಿರುವ ಘಟನೆ ತಾಲ್ಲೂಕಿನ ಜಾಲಮಂಗಲ ಗ್ರಾಮದಲ್ಲಿ ನಡೆದಿದೆ. ಸರೋಜಮ್ಮ (60) ಕೊಲೆಯಾದವರು. ಆರೋಪಿ ಪುತ್ರ ಅನಿಲ್‌ಕುಮಾರ್‌ನನ್ನು ರಾಮನಗರ ಗ್ರಾಮಾಂತರ ಠಾಣೆ ಪೊಲೀಸರು ಬಂಧಿಸಿದ್ದಾರೆ. ಸರೋಜಮ್ಮ ಅವರ ಇಬ್ಬರ ಪುತ್ರರ ಪೈಕಿ 43 ವರ್ಷ ಅನಿಲ್ ಮೊದಲನೆಯವನು. ಅವರ ಪತಿ, ಮತ್ತೊಬ್ಬ ಅಂಗವಿಕಲ ಪುತ್ರ ಈಗಾಗಲೇ ಮೃತಪಟ್ಟಿದ್ದಾರೆ. ಸರೋಜಮ್ಮ ಅವರು ಕೂಲಿ, ಮನೆಗೆಲಸ ಮಾಡಿ ಮನೆ ನಿರ್ವಹಣೆ ಮಾಡುತ್ತಿದ್ದರು. ಕೆಲಸಕ್ಕೆ ಹೋಗದೆ ಮನೆಯಲ್ಲೇ ಇದ್ದ ಅನಿಲ್ ಮದ್ಯವ್ಯಸನಿಯಾಗಿದ್ದ. ಹಣಕ್ಕಾಗಿ ತಾಯಿ ಜೊತೆ ನಿತ್ಯ ಜಗಳವಾಡುತ್ತಿದ್ದ. ಹಣ ಕೊಡದಿದ್ದಾಗ ಕಿತ್ತುಕೊಂಡು ಹೋಗುತ್ತಿದ್ದ. ಅದೇ ರೀತಿ ಗುರುವಾರ ಸಂಜೆ 5.30ರ ಸುಮಾರಿಗೆ ಅನಿಲ್ ತಾಯಿ ಬಳಿ ಹಣ ಕೇಳಿದ್ದ. ಹಣ ಕೊಡಲು ನಿರಾಕರಿಸಿದ್ದ ತಾಯಿ, ದುಡಿದು ಬದುಕುವಂತೆ ಬುದ್ಧಿ ಹೇಳಿದ್ದಾರೆ.

ಇದರಿಂದ ಕೋಪಗೊಂಡ ಅನಿಲ್, ತಾಯಿ ಮೇಲೆ ಹಲ್ಲೆ ನಡೆಸಿ ತಳ್ಳಿದ್ದಾನೆ. ನಿಯಂತ್ರಣ ಕಳೆದುಕೊಂಡ ಸರೋಜಮ್ಮ ಕೆಳಕ್ಕೆ ಬಿದ್ದಿದ್ದಾರೆ. ಆಗ ಅನಿಲ್ ಅಡುಗೆ ಮನೆಯಲ್ಲಿದ್ದ ಚಾಕು ತಂದು ಕತ್ತು ಕೊಯ್ದು ಕೊಲೆ ಮಾಡಿದ್ದಾನೆ. ಕೃತ್ಯದ ಬಳಿಕ ಅನಿಲ್, ರಕ್ತಸಿಕ್ತ ಚಾಕುವಿನೊಂದಿಗೆ ಮನೆಯ ಹೊರಗಡೆ ಬಂದು ಕುಳಿತಿದ್ದಾನೆ. ಆತನನ್ನು ಕಂಡ ಅಕ್ಕಪಕ್ಕದ ಮನೆಯವರು ಪೊಲೀಸ್ ಠಾಣೆಗೆ ಮಾಹಿತಿ ನೀಡಿದ್ದಾರೆ. ಸ್ಥಳಕ್ಕೆ ಹೋಗಿ ಆತನನ್ನು ವಶಕ್ಕೆ ಪಡೆಯಲಾಯಿತು. ಮದ್ಯ ಸೇವನೆಗೆ ಹಣ ಕೊಡದಿದ್ದಕ್ಕಾಗಿ ಕೊಲೆ ಮಾಡಿದ್ದಾಗಿ ಆರೋಪಿ ಹೇಳಿದ್ದಾನೆ ಎಂದು ಪೊಲೀಸರು ತಿಳಿಸಿದರು. ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್. ಶ್ರೀನಿವಾಸ ಗೌಡ, ಡಿವೈಎಸ್ಪಿ ಶ್ರೀನಿವಾಸ್, ರಾಮನಗರ ಗ್ರಾಮಾಂತರ ಠಾಣೆ ಇನ್‌ಸ್ಪೆಕ್ಟರ್ ರಮೇಶ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

### ಸ್ಮಶಾನ ಸಮಸ್ಯೆ ಬಗೆಹರಿಸಲು ದಲಿತರ ಒತ್ತಾಯ

• **ಉದಯವಾಹಿನಿ, ಹಾರೋಹಳ್ಳಿ**

ಸ್ಮಶಾನಕ್ಕಾಗಿ ಹಲವು ವರ್ಷಗಳಿಂದ ಪರಿತಪಿಸುತ್ತಿದ್ದೇವೆ. ಈಗಾಲಾದರೂ ಪರಿಹಾರ ಒದಗಿಸಿಕೊಡಿ ಎಂದು ದೇವರಗೊಲ್ಲಹಳ್ಳಿ ದಲಿತ ಸಮುದಾಯ ಶಾಸಕರಿಗೆ ಮನವಿ ಮಾಡಿದರು. ಹಾರೋಹಳ್ಳಿ ತಾಲ್ಲೂಕಿನ ಕೊಟ್ಟಗಾಳು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಲವು ಗ್ರಾಮಗಳಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು. ಸ್ಮಶಾನ ಭೂಮಿ, ಗ್ರಾಮದಲ್ಲಿ ಅಂಬೇಡ್ಕರ್ ಭವನ ನಿರ್ಮಾಣಕ್ಕೂ ಆದ್ಯತೆ ನೀಡಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದರು. ಶಾಸಕ ಇಕ್ಬಾಲ್ ಹುಸೇನ್ ಕೂಡಲೇ ಅಧಿಕಾರಿಗಳಿಂದ ಮಾಹಿತಿ ಪಡೆದರು. ಕೂಡಲೇ ಸ್ಪಂದಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು. ಕೊಟ್ಟಗಾಳು ಗ್ರಾಮ ಪಂಚಾಯಿತಿ ದೊಡ್ಡ ಕಲ್ಲುಬಾಳು, ಸಿದ್ದೇನಹಳ್ಳಿ, ಪಿಚ್ಚನಕೆರೆ, ಗೊಲ್ಲಹಳ್ಳಿ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಸಂಚರಿಸಿದ ಶಾಸಕ ಒಟ್ಟು 2ಕೋಟಿ 80 ಲಕ್ಷದ ವಿವಿಧ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿದರು.



☛ ಉದಯವಾಹಿನಿ ಚಿತ್ರ

---

### ● ಪ್ರಿಯಾಂಕ್ ಖರ್ಗೆಗೆ ಬೆದರಿಕೆ ಕರೆ; ಆರೋಪಿ ಹಿಂದೆ ಯಾರಿದ್ದಾರೆಂದು ತನಿಖೆ ಮಾಡ್ತೇವೆ; ಪರಮೇಶ್ವರ್

## ಆರೋಪಿಯ ಹಿಂದೆ ಯಾರಿದ್ದಾರೆ ಎಂಬ ಬಗ್ಗೆ ತನಿಖೆ ನಡೆಸಲಾಗುವುದು

• **ಉದಯವಾಹಿನಿ, ತುಮಕೂರು**

ಸರ್ಕಾರಿ ಸ್ಥಳಗಳಲ್ಲಿ ಆರ್‌ಎಸ್‌ಎಸ್ ಕಾರ್ಯಕ್ರಮಗಳಿಗೆ ನಿಷೇಧ ಹೇರುವ ಬಗ್ಗೆ ಸಚಿವ ಪ್ರಿಯಾಂಕ ಖರ್ಗೆ ಸಿಎಂ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದರು. ಆಬೆನ್ನಕೇ ಅವರಿಗೆ ಸಾಕಷ್ಟು ಜನರು ಬೆದರಿಕೆ ಕರೆ ಮಾಡಿ ನಿಂದಿಸಿದ್ದರು. ಸದ್ಯ ಒಬ್ಬ ಆರೋಪಿಯನ್ನು ಕಲಬುರಗಿ ಮತ್ತು ಬೆಂಗಳೂರು ಪೊಲೀಸರ ಜಂಟಿ ಕಾರ್ಯಾಚರಣೆಯಲ್ಲಿ ಬಂಧಿಸಿದ್ದಾರೆ. ಈ ಬಗ್ಗೆ ತುಮಕೂರಿನಲ್ಲಿ ಗೃಹ ಸಚಿವ ಪರಮೇಶ್ವರ್ ಅವರು ಮಾತನಾಡಿದ್ದಾರೆ. ಬೆದರಿಕೆ ಹಾಕಿದ ಆರೋಪಿಯನ್ನು ಮಹಾರಾಷ್ಟ್ರದಿಂದ ಬಂಧಿಸಿ ಕರೆತರಲಾಗಿದೆ. ಈ ಬಗ್ಗೆ ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಾಗುವುದು. ಸಚಿವರ ಭದ್ರತೆಯನ್ನು ಹೆಚ್ಚಿಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಆರೋಪಿಯ ಹಿಂದೆ ಯಾರಾದರೂ ಇದ್ದಾರೆಯೇ ಎಂಬ ಬಗ್ಗೆ ತನಿಖೆ ನಡೆಸಲಾಗುವುದು ಎಂದು ಹೇಳಿದರು.

ಇದೇ ವೇಳೆ, ಯಾವುದೇ ಖಾಸಗಿ ಸಂಘ-ಸಂಸ್ಥೆಗಳು ಸರ್ಕಾರಿ ಜಾಗದಲ್ಲಿ ಕಾರ್ಯಕ್ರಮ ನಡೆಸಬೇಕಾದರೆ ಅನುಮತಿ ಪಡೆಯುವುದು ಕಡ್ಡಾಯ ಎಂದು ಸರ್ಕಾರ ಸಚಿವ ಸಂಪುಟ ಸಭೆಯಲ್ಲಿ ಸ್ಪಷ್ಟಪಡಿಸಿದೆ.

**ಕಾನೂನು ಪ್ರಕಾರ ಕ್ರಮ**

ಈ ನಿಯಮ 2013ರಲ್ಲೇ ಜಗದೀಶ್ ಶೆಟ್ಟರ್ ಮುಖ್ಯಮಂತ್ರಿಯಾಗಿದ್ದಾಗ ಜಾರಿಗೆ ಬಂದಿತ್ತು. ಆದರೆ, ಅದನ್ನು ಸರಿಯಾಗಿ ಜಾರಿಗೊಳಿಸಿರಲಿಲ್ಲ ಎಂದು ಗೃಹ ಸಚಿವ ಪರಮೇಶ್ವರ್ ಅವರು ಹೇಳಿದರು. ಹಿಂದೆ ಪರಮೇಶ್ವರ್ ಅವರ ಒಡೆತನದ ಸಿದ್ದಾರ್ಥ ಕಾಲೇಜು ಆವರಣದಲ್ಲಿ ಆರ್‌ಎಸ್‌ಎಸ್ ಕಾರ್ಯಕ್ರಮ ನಡೆದಿತ್ತು ಎಂಬ ವಿಚಾರಕ್ಕೆ ಪ್ರತಿಕ್ರಿಯಿಸಿದ ಅಧಿಕಾರಿಗಳು, ಸುಮಾರು 20 ವರ್ಷಗಳ ಹಿಂದೆ ತಮ್ಮ ಶಿಕ್ಷಣ ಸಂಸ್ಥೆಯ ಮೈದಾನದಲ್ಲಿ ಆರ್‌ಎಸ್‌ಎಸ್ ಕ್ಯಾಂಪ್ ನಡೆದಿತ್ತು. ಆಗ ಪ್ರಾಂಶುಪಾಲರು ಅನುಮತಿ ನೀಡಿದ್ದರು



ಕಾಂಗ್ರೆಸ್ ಸರ್ಕಾರ ಹಣ ಮಾಡಲು ಆಸ್ತಿ ಪರಿವರ್ತನೆ ಮಾಡುತ್ತಿದೆ ಎಂಬ ಕೇಂದ್ರ ಸಚಿವ ಕುಮಾರಸ್ವಾಮಿ ಅವರ ಹೇಳಿಕೆಗೆ ಸಂಬಂಧಿಸಿದಂತೆ, ಕುಮಾರಸ್ವಾಮಿ ಅವರು ನಿರ್ದಿಷ್ಟವಾಗಿ ಹೇಳಿಕೆ ನೀಡಬೇಕು. ಅವರು ಮುಖ್ಯಮಂತ್ರಿಯಾಗಿದ್ದವರು. ಅವರು ನಿರ್ದಿಷ್ಟವಾಗಿ ಹೇಳಿದರೆ, ನಾವು ಅದನ್ನು ಗಂಭೀರವಾಗಿ ಪರಿಗಣಿಸುತ್ತೇವೆ. ಯಾವ ಕಡೆ ಹಣ ಮಾಡುತ್ತಿದ್ದಾರೆ ಎಂಬುದನ್ನು ಸ್ಪಷ್ಟವಾಗಿ ಹೇಳಬೇಕು.

-ಪರಮೇಶ್ವರ್, ಗೃಹ ಸಚಿವ

### ಎಲ್ಲಾ ಖಾಸಗಿ ಸಂಸ್ಥೆಗಳು ಅನುಮತಿ ಪಡೆಯಬೇಕು

ಮುಂದುವರೆದು, ಇತ್ತೀಚೆಗೆ ಕೆಲವು ಸಂಘಟನೆಗಳು ಸರ್ಕಾರಿ ಸ್ಥಳಗಳನ್ನು ದುರುಪಯೋಗ ಪಡಿಸಿಕೊಳ್ಳುತ್ತಿರುವುದು ಕಂಡುಬಂದಿದೆ. ಹೀಗಾಗಿ, ಕ್ಯಾಬಿನೆಟ್ ಸಭೆಯಲ್ಲಿ ಶಾಲಾ-ಕಾಲೇಜು ಮತ್ತು ಧಾರ್ಮಿಕ ಸ್ಥಳಗಳನ್ನು ಖಾಸಗಿಯವರಿಗೆ ನೀಡಬಾರದು ಎಂದು ತೀರ್ಮಾನಿಸಲಾಗಿದೆ. ಸರ್ಕಾರಿ ಜಾಗದಲ್ಲಿ ಗುಂಪು ಸೇರಿ ಕುಳಿತುಕೊಳ್ಳುವುದಕ್ಕೆ ಯಾರೂ ಬೇಡ ಎನ್ನುವುದಿಲ್ಲ. ಆದರೆ, ಕಾರ್ಯಕ್ರಮಗಳನ್ನು ನಡೆಸಲು ಅನುಮತಿ ಪಡೆಯಬೇಕು. ಇದು ಕೇವಲ ಆರ್‌ಎಸ್‌ಎಸ್‌ಗೆ ಮಾತ್ರವಲ್ಲ, ಎಲ್ಲಾ ಖಾಸಗಿ ಸಂಸ್ಥೆಗಳಿಗೂ ಅನ್ವಯಿಸುತ್ತದೆ. ಆರ್‌ಎಸ್‌ಎಸ್ ಕೂಡ ಒಂದು ಖಾಸಗಿ ಸಂಸ್ಥೆಯೇ ಎಂದು ಪರಮೇಶ್ವರ್ ಅವರು ಸ್ಪಷ್ಟಪಡಿಸಿದರು.

ಎಂದರು. ಶನಿವಾರ ತುಮಕೂರಿನಲ್ಲಿ ಆರ್‌ಎಸ್‌ಎಸ್ ಪಥ ಸಂಚಲನ ನಡೆಸುವುದಾದರೆ, ಪೊಲೀಸರಿಂದ ಅನುಮತಿ ಪಡೆಯಬೇಕು ಎಂದರು.

**ನಮಾಜ್‌ಗೆ ಅವಕಾಶ ಕೊಡದಿರಲು ಪತ್ರ:** ಸರ್ಕಾರವೇ ಪರಿಚಯಿಸಿರುವ ನಿಯಮಾವಳಿಗಳ ಅನುಸಾರ ಸಾರ್ವಜನಿಕ ಸ್ಥಳಗಳಲ್ಲಿ, ಸರ್ಕಾರಿ ಜಾಗಗಳಲ್ಲಿ ನಮಾಜ್ ಮಾಡಲು ಅವಕಾಶ ಕೊಡಬಾರದೆಂದು ಮುಖ್ಯ ಮಂತ್ರಿಗಳಿಗೆ ಯತ್ನಾಳ್ ಅವರು ಪತ್ರ ಬರೆದಿದ್ದಾರೆ.

## ಅಂತರಾಳದಿಂದ... EDITORIAL

# ಗ್ರಂಥಾಲಯ ಸಿಬ್ಬಂದಿ ಸಾವು: ಅವ್ಯವಸ್ಥೆ, ಅಸೂಕ್ಷ್ಮತೆಗೆ ಕನ್ನಡಿ




ಮಳಖೇಡದ ಗ್ರಂಥಾಲಯ ಮೇಲ್ವಿಚಾರಕಿಯ ಆತ್ಮಹತ್ಯೆ, ಗ್ರಂಥಾಲಯ ಇಲಾಖೆಯ ಅವ್ಯವಸ್ಥೆಯ ಪ್ರತಿಬಿಂಬ ಆಗಿದೆ ಹಾಗೂ ಅಧಿಕಾರಿಗಳ ಬೇಜವಾಬ್ದಾರಿ ಮನಃಸ್ಥಿತಿ ಸೂಚಿಸುವಂತಿದೆ. ಮೂರು ತಿಂಗಳಿಂದ ವೇತನ ಪಾವತಿ ಆಗದ ಕಾರಣಕ್ಕಾಗಿ ಹತಾಶರಾದ ಕಲಬುರಗಿ ಜಿಲ್ಲೆಯ ಸೇಡಂ ತಾಲ್ಲೂಕಿನ ಮಳಖೇಡ ಗ್ರಂಥಾಲಯದ ಮೇಲ್ವಿಚಾರಕಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಸರ್ಕಾರಿ ಸಂಸ್ಥೆಗಳಲ್ಲಿ ದುಡಿಯುವವರು ಸಕಾಲಕ್ಕೆ ಸಂಬಳ ಸಿಗದೆ ಆತ್ಮಹತ್ಯೆ ಮಾಡಿಕೊಳ್ಳುವ ಸ್ಥಿತಿ ತಲೆದೋರುವುದು ಸರ್ಕಾರ ತಲೆತಗ್ಗಿಸಬೇಕಾದ ಸಂಗತಿ. ಇಂಥ ಘಟನೆಗಳು ಸರ್ಕಾರಕ್ಕೆ ಕಲಂಕ ತರುವುದರ ಜೊತೆಗೆ, ನೌಕರರ ಆತ್ಮಸ್ಥೈರ್ಯವನ್ನು ಕುಗ್ಗಿಸುತ್ತವೆ. ಸಂಬಳ ಸಕಾಲಕ್ಕೆ ದೊರೆಯದ ಆತ್ಮಹತ್ಯೆ ಮಾಡಿಕೊಂಡ ಮೇಲ್ವಿಚಾರಕಿಯ ಪ್ರಕರಣ ಗ್ರಂಥಾಲಯ ಇಲಾಖೆಯಲ್ಲಿನ ಅವ್ಯವಸ್ಥೆಯ ಜೊತೆಗೆ, ಅಧಿಕಾರಿಗಳ ಸಂವೇದನಾರಾಹಿತ್ಯ ಮನಃಸ್ಥಿತಿಗೆ ನಿದರ್ಶನದಂತಿದೆ. ಭಾಗ್ಯವತಿ ವಿಶ್ವೇಶ್ವರಯ್ಯ ಸಾವಿಗೆ ತುತ್ತಾಗಿರುವ ನತದೃಷ್ಟ ಮಹಿಳೆ, ಅಧಿಕಾರಿಗಳ ಸತಾಯಿಸುವಿಕೆಯಿಂದಾಗಿ ಮೂರು ತಿಂಗಳಿಂದ ಸಂಬಳ ದೊರೆಯದೆ ಹೋದುದರಿಂದ ಮಾನಸಿಕ ಒತ್ತಡಕ್ಕೊಳಗಾಗಿರುವ ಅವರು ಗ್ರಂಥಾಲಯದಲ್ಲಿನ ಫ್ಯಾನ್‌ಗೆ ನೇಣು ಹಾಕಿಕೊಂಡಿದ್ದಾರೆ. ಜೀವನಪ್ರೀತಿ ನೀಡಬೇಕಾದ ಪರಿಸರವೇ ಜೀವನ ಕೊನೆಗೊಳಿಸಿಕೊಳ್ಳುವ ಸ್ಥಳವಾಗಿ ಪರಿಣಮಿಸಿದೆ.

**ಕೆಲವು ಸಂದರ್ಭಗಳಲ್ಲಿ ಸರ್ಕಾರದಿಂದ ಅನುದಾನ ಲಭ್ಯವಿದ್ದರೂ, ಅಧಿಕಾರಿಗಳ ಬೇಜವಾಬ್ದಾರಿಯಿಂದ ಸಕಾಲಕ್ಕೆ ವೇತನ ಪಡೆಯುವುದರಿಂದ ನೌಕರರು ವಂಚಿತರಾಗುತ್ತಿದ್ದಾರೆ. ನೌಕರರ ಸಂಬಳಕ್ಕೆ ಅನುದಾನ ಒದಗಿಸುವುದರ ಜೊತೆಗೆ, ಹಿರಿಯ ಅಧಿಕಾರಿಗಳಿಗೆ ಮಾನವೀಯತೆಯ ಪಾಠಗಳನ್ನೂ ಸರ್ಕಾರ ಹೇಳಿಕೊಡಬೇಕಾಗಿದೆ. ಆತ್ಮಹತ್ಯೆ ಮಾಡಿಕೊಂಡಿರುವ ಮಳಖೇಡದ ಗ್ರಂಥಾಲಯ ಮೇಲ್ವಿಚಾರಕಿಯ ಆತ್ಮಹತ್ಯೆ ಪ್ರಕರಣದ ತನಿಖೆ ನಡೆಸಿ, ಕರ್ತವ್ಯಲೋಪ ಎಸಗಿದ ಅಧಿಕಾರಿಗಳ ಮೇಲೆ ಕಾನೂನು ಕ್ರಮ ಜರುಗಿಸಬೇಕಾಗಿದೆ.**

ಹಲವಾರು ವರ್ಷಗಳಿಂದ ಗ್ರಂಥಾಲಯದ ಮೇಲ್ವಿಚಾರಕಿಯಾಗಿ ಕಾರ್ಯ ನಿರ್ವಹಿಸುತ್ತಿದ್ದ ಅವರು, ಸಂಬಳ ಸರಿಯಾದ ಸಮಯಕ್ಕೆ ಬಾರದೆ ಹೋದುದರಿಂದ ತೊಂದರೆ ಅನುಭವಿಸುತ್ತಿದ್ದರು: ಮಗಳ ಶಾಲಾ ಶುಲ್ಕ ಕಟ್ಟುವುದಕ್ಕೂ ಸಮಸ್ಯೆಯಾಗಿದೆ ಎಂದು ಗ್ರಾಮ ಪಂಚಾಯಿತಿ

ಅಧಿಕಾರಿಗಳು ಹಾಗೂ ಚುನಾಯಿತ ಪ್ರತಿನಿಧಿಗಳಿಗೆ ಮಾಡಿಕೊಂಡ ಮನವಿ ಫಲಕಾರಿಯಾಗದ ಕಾರಣ ಮಾನಸಿಕವಾಗಿ ಕುಗ್ಗಿಹೋಗಿದ್ದ ಅವರು ಆತ್ಮಹತ್ಯೆ ಮಾಡಿಕೊಳ್ಳುವ ತೀರ್ಮಾನಕ್ಕೆ ಬಂದಿದ್ದಾರೆ ಎಂದು ಮೃತ ಮಹಿಳೆಯ ಕುಟುಂಬ ಹೇಳಿದೆ. ಭಾಗ್ಯವತಿ ಅವರ ಆತ್ಮಹತ್ಯೆಯನ್ನು ವೈಯಕ್ತಿಕ ದುರಂತವಾಗಿ ನೋಡದೆ, ಗ್ರಂಥಾಲಯ ಇಲಾಖೆಯ ಒಟ್ಟಾರೆ ಅವ್ಯವಸ್ಥೆಯ ರೂಪದಲ್ಲಿ ನೋಡಬೇಕಾಗಿದೆ. ಗ್ರಾಮೀಣ ಪ್ರದೇಶಗಳಲ್ಲಿ ಗ್ರಂಥಾಲಯಗಳು ಓದುವ ಅಭಿರುಚಿಯನ್ನು ಹೆಚ್ಚಿಸುವುದರ ಜೊತೆಗೆ, ಜ್ಞಾನಕೇಂದ್ರಗಳಾಗಿಯೂ ಹಾಗೂ ಮಾಹಿತಿ ಕೇಂದ್ರಗಳಾಗಿಯೂ ಬಳಕೆಯಾಗುತ್ತಿವೆ. ಆರ್ಥಿಕವಾಗಿ ದುರ್ಬಲವಾದ ಕುಟುಂಬಗಳ ವಿದ್ಯಾರ್ಥಿಗಳಿಗೆ ಜ್ಞಾನದ ಅಕ್ಷಯಪಾತ್ರೆಯಂತೆ ಒದಗಿಬರುತ್ತವೆ. ಗ್ರಾಮೀಣ ಪ್ರದೇಶಗಳಲ್ಲಿ ಶೈಕ್ಷಣಿಕ ಹಾಗೂ ಸಾಂಸ್ಕೃತಿಕ ಅಗತ್ಯಗಳನ್ನು ಪೂರೈಸುವ ಈ ಅರಿವಿನ ಕೇಂದ್ರಗಳು, ಸರ್ಕಾರದ ನಿರ್ಲಕ್ಷ್ಯದಿಂದಾಗಿ ವರ್ಷದಿಂದ ವರ್ಷಕ್ಕೆ ದುರ್ಬಲಗೊಳ್ಳುತ್ತಿವೆ. ಮೂಲ ಸೌಕರ್ಯಗಳನ್ನು ಒದಗಿಸುವ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಪುಸ್ತಕಗಳನ್ನು ಸರಬರಾಜು ಮಾಡುವ ಸಾರ್ವಜನಿಕ ಗ್ರಂಥಾಲಯ ಇಲಾಖೆಗಳ ನಡುವಿನ ಸಮನ್ವಯದ ಕೊರತೆ ಮತ್ತು ಅದಕ್ಷತೆಯಿಂದ ಗ್ರಾಮೀಣ ಗ್ರಂಥಾಲಯಗಳು ಬಡವಾಗಿವೆ. ಇದರಿಂದ ಆಗುತ್ತಿರುವ ಸಾಂಸ್ಕೃತಿಕ ನಷ್ಟವನ್ನು ಸರ್ಕಾರ ಗಂಭೀರವಾಗಿ ತೆಗೆದುಕೊಂಡಂತಿಲ್ಲ. ಗ್ರಂಥಾಲಯಗಳೇ ದುರ್ಬಲವಾಗಿರುವಾಗ, ಅವುಗಳ ಉಸ್ತುವಾರಿ ನೋಡಿಕೊಳ್ಳುವ ಮೇಲ್ವಿಚಾರಕರ ಸ್ಥಿತಿ ಮತ್ತಷ್ಟು ಶೋಚನೀಯ ಆಗಿರುವುದರಲ್ಲಿ ಆಶ್ಚರ್ಯವೇನೂ ಇಲ್ಲ. ಕನಿಷ್ಠ ಸಂಬಳದಲ್ಲಿ ಜವಾಬ್ದಾರಿಯುತ ಹೊಣೆಗಾರಿಕೆ ನಿಭಾಯಿಸಬೇಕಾದ ಸವಾಲು ಅವರದು. ಸರ್ಕಾರದಿಂದ ಹಣ ಸರಿಯಾದ ಸಮಯಕ್ಕೆ ಬಿಡುಗಡೆ ಆಗದೆ ಇರುವುದರಿಂದ ಗ್ರಂಥಾಲಯಗಳಿಗೆ ತರಿಸುವ ಪತ್ರಿಕೆಗಳು ಮತ್ತು ನಿಯತಕಾಲಿಕೆಗಳನ್ನು ಸರಬರಾಜುದಾರರಿಗೆ ಮಾಡಬೇಕಾದ ಪಾವತಿಯೂ ವಿಳಂಬವಾಗುತ್ತದೆ ಹಾಗೂ ಅದರ ಒತ್ತಡವನ್ನು ಗ್ರಂಥಾಲಯದ ಮೇಲ್ವಿಚಾರಕರೇ ಅನುಭವಿಸಬೇಕಾಗುತ್ತದೆ. ನೌಕರರಿಗೆ ಸಮಯಕ್ಕೆ ಸರಿಯಾಗಿ ಸಂಬಳ ಕೊಡಬೇಕಾದುದು ಸರ್ಕಾರದ ಕರ್ತವ್ಯ. ಅದರಲ್ಲೂ ಗೌರವ ಸಂಭಾವನೆ ಪಡೆದು ಕೆಲಸ ಮಾಡುವವರು, ಗುತ್ತಿಗೆ ಕಾರ್ಮಿಕರು ಹಾಗೂ ದಿನಗೂಲಿ ಕಾರ್ಮಿಕರಿಗೆ ವಿಳಂಬವಿಲ್ಲದೆ ವೇತನ ದೊರೆಯಬೇಕು. ಸರ್ಕಾರದ ಅನುದಾನದ ಕೊರತೆಯಿಂದಾಗಿ, ಹಂಪಿ ಕನ್ನಡ ವಿಶ್ವವಿದ್ಯಾಲಯದಲ್ಲಿ ತಾತ್ಕಾಲಿಕ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗೆ ಹದಿನೈದು ತಿಂಗಳುಗಳಿಂದ ಸಂಬಳ ಆಗದಿರುವ ಸುದ್ದಿ ಇತ್ತೀಚೆಗಷ್ಟೇ ಪ್ರಕಟವಾಗಿತ್ತು. ಬಹುತೇಕ ವಿಶ್ವವಿದ್ಯಾಲಯಗಳಲ್ಲಿನ ತಾತ್ಕಾಲಿಕ ನೌಕರರು ವಿಳಂಬ ಸಂಬಳದಿಂದಾಗಿ ಒದ್ದಾಡುವಂತಾಗಿದೆ. ಬಹುತೇಕ ಇಲಾಖೆಗಳಲ್ಲಿನ ತಾತ್ಕಾಲಿಕ. ಗುತ್ತಿಗೆ ನೌಕರರ ಸ್ಥಿತಿ ಇದೇ ಆಗಿದೆ.

# ರಾಮಾಯಣ



## ಮಾರೀಚನು ರಾವಣನಿಗೆ ಹೇಳಿದ ಬುದ್ಧಿವಾದ

• ಹಿಂದಿನ ಸಂಚಿಕೆಯಿಂದ

### 120 ನೆಯ ಅಧ್ಯಾಯ

ಈ ಪ್ರಕಾರ ರಾಮನು ನನ್ನನ್ನು ಕೊಲ್ಲದೆ ಬಹುದೂರಕ್ಕೆ ಅಟ್ಟಿದನು ಆ ಬಳಿಕ ನಾನು ಅತ್ಯಂತ ಗಂಭೀರವಾದ ಸಮುದ್ರೋದಕದಲ್ಲಿ ಮುಳುಗಿ ಮೂರ್ಛಾಗತನಾಗಿ ಸ್ವಲ್ಪ ಹೊತ್ತಿನಮೇಲೆ ತಿಳಿದೆದ್ದು ಮೆಲ್ಲಗೆ ಲಂಕಾಪಟ್ಟಣಕ್ಕೆ ಬಂದೆನು. ಆತನಿಂದ ನನಗೆ ಅಂಥ ಅವಸ್ಥೆಯು ಬಂದಿತು. ನನಗೆ ಸಹಾಯವಾಗಿ ಬಂದ ರಾಕ್ಷಸರು ಬಾಲಕನಾದ ಶ್ರೀರಾಮನಿಂದ ಯಮಮಂದಿರವನ್ನೈದಿದರು. ಆದಕಾರಣ ನನ್ನ ಮಾತನ್ನು ಕೇಳದೆ ನೀನು ಆತನೊಡನೆ ವಿರೋಧವನ್ನು ತಂದುಕೊಂಡರೆ ಶೀಘ್ರದಲ್ಲಿ ನಿನ್ನ ಪ್ರಾಣಗಳಿಗೆ ನೀನೇ ಸಂಚಕಾರ ತಂದುಕೊಳ್ಳುವೆ. ಮೇಲಾಗಿ ಲಂಕಾಪಟ್ಟಣದಲ್ಲಿ ಅನೇಕ ವಿಲಾಸಯುಕ್ತರಾಗಿ ತಮ್ಮ ಸ್ತ್ರೀಯರೊಡನೆ ವಿಹರಿಸುತ್ತ ಅತ್ಯುತ್ಸವದಿಂದಿರುವ ರಾಕ್ಷಸರಿಗೆ ಮಾರಿಯನ್ನು ತರುವೆ. ಅನೇಕ ಉಪ್ಪರಿಗೆ ರಥ ತೋರಣಗಳಿಂದ ಅಲಂಕಾರಯುಕ್ತವಾದ ಲಂಕಾಪಟ್ಟಣವು ಸೀತಾದೇವಿಯ ನಿಮಿತ್ತ ವಾಗಿ ಹಾಳಾಗುವುದನ್ನು ನಿನ್ನ ಕಣ್ಣಿನಿಂದೆ ನೋಡುವೆ. ನೀರುಹಾವುಗಳುಳ್ಳ ಕೊಳಗಳಲ್ಲಿ ಮತ್ತಗಳಿದ್ದರೆ ಗರುಡಪಕ್ಷಿಗಳು ವೈರದಿಂದ ಆ ಹಾವುಗಳನ್ನು ತುಡುಕಿ ಅವುಗಳ ಸಹವಾಸ ಮಾಡುತ್ತಿರುವ ಮತ್ತ್ಯಗಳನ್ನೂ ಭಕ್ಷಿಸುವಂತೆ, ಆತನು ಲಂಕಾಪಟ್ಟಣದಲ್ಲಿ ಪಾಪಾತ್ಮನಾದ ನಿನ್ನ ಸಹವಾಸ ಮಾಡುತ್ತಿರುವ ರಾಕ್ಷಸರನ್ನೂ ಕೊಲ್ಲುವನಲ್ಲದೆ ಉಳಿಸನು. ಲಂಕಾಪಟ್ಟಣದಲ್ಲಿ ಉತ್ತಮವಾದ ದಿವ್ಯಭೂಷಣಗಳನ್ನು ತೊಟ್ಟು ದಿವ್ಯವಾದ ಪುಷ್ಪಮಾಲಿಕೆಗಳನ್ನು ಧರಿಸಿ ದಿವ್ಯ ಗಂಧಾದಿಗಳನ್ನು ಅನುಲೇಪಿಸಿ ದಿವ್ಯಭೋಗಗಳನ್ನು ಅನುಭವಿಸಿಕೊಂಡಿರುವ ರಾಕ್ಷಸರು ಪಾಪಿಯಾದ ನಿನ್ನ ಸಹವಾಸದಿಂದ ಮರಣವನ್ನೆದುವುದನ್ನು ನೀನು ಕಾಣುವೆ. ಕೆಲವು ರಾಕ್ಷಸರು ತಮ್ಮ ಸ್ತ್ರೀಯರನ್ನು ಕೈ ಹಿಡಿದುಕೊಂಡು ನಾನಾದಿಕ್ಕುಗಳಿಗೆ ಹೋಗುವುದನ್ನೂ ಕೆಲವರು ರಣದಲ್ಲಿ ಮಡಿಯಲು ಅವರ ಸ್ತ್ರೀಯರು ಗೋಳಿಟ್ಟು ರೋದನ ಮಾಡುವುದನ್ನೂ ನೀನು ನೋಡುವೆ. ಶ್ರೀರಾಮನ ಶರಸಂಧಾನ ದಿಂದ ಗಾಯಪಡೆದು ಸಕಲ ರಾಕ್ಷಸರೂ ಬೀಳಲು ಶೂನ್ಯವಾಗಿ ಅಗ್ನಿಜ್ವಾಲೆಯಿಂದ ದಗ್ಧವಾದ ಮರದಂತೆ ಕಾಣುವ ಲಂಕಾಪಟ್ಟಣವನ್ನು ನೀನು ನೋಡುವೆ. ಪರಸ್ತ್ರೀಸಂಸರ್ಗಕ್ಕಿಂತಲೂ ಅಧಿಕವಾದ ಪಾಪವಿಲ್ಲ ರಾವಣ, ನಿನಗೆ ಸಾವಿರ ಮಂದಿ ಸ್ತ್ರೀಯರಿದ್ದಾರೆ. ಆ ಸ್ತ್ರೀಯರೊಡನೆ ರಮಿಸಿಕೊಂಡು ಸ್ವದಾರನಿರತನಾಗಿ ಸುಖವಾಗಿರು. ನಿನ್ನ ಅಭಿಮಾನವನ್ನೂ ಐಶ್ವರ್ಯವನ್ನೂ ರಾಜ್ಯವನ್ನೂ ಪ್ರಾಣವನ್ನೂ ಸ್ತ್ರೀಯರನ್ನೂ ಮಿತ್ರವರ್ಗವನ್ನೂ ಉಳಿಸಿಕೊಂಡು ಸಮಸ್ತ ಭೋಗಗಳನ್ನು ಅನುಭವಿಸು. ಸುಖವಾಗಿ ರಬೇಕಾದ ಪಕ್ಷದಲ್ಲಿ ಶ್ರೀರಾಮನೊಡನೆ ವಿರೋಧವನ್ನು ಮಾಡಿಕೊಳ್ಳಬೇಡ. ಮಿತ್ರನಾದ ನನ್ನ ಹಿತವಾಕ್ಯವನ್ನು ಮೀರಿ ಸೀತಾದೇವಿಯನ್ನು ಬಲಾತ್ಕಾರದಿಂದ ಅಪಹರಿಸಿಕೊಂಡು ಬಂದೆಯಾದರೆ ನೀನು ನಿನ್ನ ಸಮಸ್ತ ಬಂಧುವರ್ಗ ಮಿತ್ರವರ್ಗ ಸಹಿತನಾಗಿ ಶ್ರೀರಾಮನ ಬಾಣಗಳಿಂದ ಹತನಾಗಿ ಯಮಲೋಕವನ್ನು ಸೇರುವೆ. ಈ ಅರ್ಥದಲ್ಲಿ ಸಂದೇಹವಿಲ್ಲ ಎಂದು ಹೇಳಿದನು.


**ಮುಂದುವರಿಯುವುದು...**

# ದೇಶಿಯ ಎಂ.ಇ.ಐ.ಎಲ್ ಸಂಸ್ಥೆಗೆ 225.5 ಮಿಲಿಯನ್ ಡಾಲರ್ ಕಾಮಗಾರಿ ಗುತ್ತಿಗೆ ಶುದ್ಧ ತೈಲಕ್ಕೆ ಆದ್ಯತೆ

• ಉದಯವಾಹಿನಿ, ಹೈದರಾಬಾದ್

ಕುವೈತ್, ದೇಶದ ಪ್ರತಿಷ್ಠಿತ ಮೆಘಾ ಎಂಜಿನಿಯರಿಂಗ್ ಅಂಡ್ ಇನ್ಫ್ರಾಸ್ಟ್ರಕ್ಚರ್ ಲಿಮಿಟೆಡ್ - ಎಂ.ಇ.ಐ.ಎಲ್ ಮತ್ತೊಂದು ಜಾಗತಿಕ ಮೈಲಿಗಲ್ಲು ಮುಟ್ಟಿದೆ. ಕುವೈತ್ ಆಯಿಲ್ ಕಂಪನಿ (ಕೆಓಸಿ)ಯಿಂದ 225.5 ಮಿಲಿಯನ್ ಅಮೇರಿಕ ಡಾಲರ್ ಮೌಲ್ಯದ ಬೃಹತ್ ಯೋಜನೆ ಜಾರಿ ಆದೇಶ ತನ್ನದಾಗಿಸಿಕೊಂಡಿದೆ. ಈ ಯೋಜನೆ ಪಶ್ಚಿಮ ಕುವೈತ್ನ ತೈಲ ಕ್ಷೇತ್ರಗಳಲ್ಲಿ ಹೊಸ ಗ್ಯಾಸ್ ಸ್ವೀಟನಿಂಗ್ ಮತ್ತು ಸಲ್ಫರ್ ರಿಕವರಿ ಸೌಲಭ್ಯ ವಿನ್ಯಾಸ, ನಿರ್ಮಾಣ, ಕಾರ್ಯಾಚರಣೆ ಮತ್ತು ನಿರ್ವಹಣೆಯನ್ನು ಒಳಗೊಂಡಿದೆ.

ಯೋಜನೆ ಬಿಲ್ಡ್-ಒನ್-ಆಪರೇಟ್ ಆಧಾರದ ಮೇಲೆ ಅಭಿವೃದ್ಧಿಪಡಿಸಲ್ಪಡಲಿದೆ. ಕೆಓಸಿ ಸಂಸ್ಥೆಗೆ ಈ ಘಟಕವನ್ನು ಖರೀದಿಸುವ ಆಯ್ಕೆಯೂ ಇದ್ದು, ಇದು 2 ಹಂತಗಳಲ್ಲಿ ಕಾರ್ಯನಿರ್ವಹಣೆ ಹಂತ ಮತ್ತು ಕಾರ್ಯಾಚರಣೆ ಮತ್ತು ನಿರ್ವಹಣೆ ಹಂತಗಳಲ್ಲಿ ನಡೆದಿದೆ. ಬೂಸ್ಟರ್ ಸ್ಟೇಷನ್ ಬಿಎಸ್-171 ಹತ್ತಿರ ಇರುವ ಈ ಯೋಜನೆ 790 ದಿನಗಳಲ್ಲಿ ಪೂರ್ಣಗೊಳ್ಳಲಿದ್ದು, ಅದರ ನಂತರ ಐದು ವರ್ಷದ ಕಾರ್ಯಾಚರಣೆ ಮತ್ತು ನಿರ್ವಹಣೆ ಹಂತ ನಡೆಯಲಿದೆ. ಸಂಬಂಧಿತ ಸಲ್ಫರ್ ರಿಕವರಿ ಘಟಕನಲ್ಲಿ ಪ್ರತಿಯೊಂದು 100 ಟನ್ಸ್ ಪ್ರತಿ ದಿನ ಸಾಮರ್ಥ್ಯದ ಎರಡು ಟ್ರೈನ್ಗಳು ಇರಲಿವೆ, ಒಟ್ಟು 99.9% ಸಲ್ಫರ್ ರಿಕವರಿ ದಕ್ಷತೆಯನ್ನು ಸಾಧಿಸಲಿವೆ. ಈ ಆಧುನಿಕ ಘಟಕವು 4% ಹೈಡ್ರೋಜನ್ ಸಲ್ಫೈಡ್ ($H_2S$) ಮತ್ತು 10% ಕಾರ್ಬನ್ ಡೈಆಕ್ಸೈಡ್ ($CO_2$) ಹೊಂದಿರುವ ದುರ್ವಾಸನೆಯ ಅನಿಲ ನಿರ್ವಹಿಸಲು ವಿನ್ಯಾಸಗೊಳಿಸಲ್ಪಟ್ಟಿದ್ದು, ಪ್ರತಿ ದಿನ 120 ಮಿಲಿಯನ್ ಸ್ಟ್ಯಾಂಡರ್ಡ್ ಕ್ಯೂಬಿಕ್ ಫೀಟ್ ಅನಿಲ ಶುದ್ಧೀಕರಣವಾಗಲಿದೆ.





**ಮಧ್ಯಪ್ರಾಚ್ಯದಲ್ಲಿ ಎಂಇಐಎಲ್ ಭರ್ಜರಿ ಹೆಜ್ಜೆ**


ಗ್ಯಾಸ್ ಸ್ವೀಟ್ನಿಂಗ್ ಎಂದರೆ ನೈಸರ್ಗಿಕ ಅನಿಲದಿಂದ ಅಪಾಯಕಾರಿ ಆಮ್ಲೀಯ ಅನಿಲಗಳಾದ ಹೈಡ್ರೋಜನ್ ಸಲ್ಫೈಡ್ ಮತ್ತು ಕಾರ್ಬನ್ ಡೈಆಕ್ಸೈಡ್ ಅನಿಲಗಳನ್ನು ತೆಗೆದುಹಾಕಿ, ನೈಸರ್ಗಿಕ ಅನಿಲವನ್ನು ಸುರಕ್ಷಿತ, ಕಾರ್ಯಕ್ಷಮ ಮತ್ತು ಪರಿಸರ ಸ್ನೇಹಿಯಾಗಿಸುವ ಪ್ರಕ್ರಿಯೆ ಆಗಿದೆ. ಶುದ್ಧೀಕರಿಸಿದ ಅನಿಲವನ್ನು ನಿರ್ಜಲೀಕರಣಗೊಳಿಸಿದ ನಂತರ ಕೆಓಸಿ ಸಂಸ್ಥೆಯ ಪೈಪ್ಲೈನ್ ಜಾಲದ ಮೂಲಕ ಮಿನಾ ಅಹ್ಮದಿ ರಿಫೈನರಿಯ ಎಲ್‌ಪಿಜಿ ಘಟಕಕ್ಕೆ ಸಾಗಿಸಲಾಗುತ್ತದೆ. ಈ ಯೋಜನೆ ಕುವೈತ್ನ ಸ್ಥಿರ ಶಕ್ತಿ, ಸ್ವಚ್ಛ ಇಂಧನ ಉತ್ಪಾದನೆ ಮತ್ತು ಪರಿಸರ ಸುರಕ್ಷತೆಗಳ ಮೇಲಿನ ಬದ್ಧತೆಗೆ ಸಹಕಾರಿಯಾಗಿದೆ. ''ಪಶ್ಚಿಮ ಕುವೈತ್ನ ಈ ತಂತ್ರಜ್ಞಾನಾಧಾರಿತ ಅನಿಲ ಶುದ್ಧೀಕರಣ ಸೌಲಭ್ಯಕ್ಕಾಗಿ ಕುವೈತ್ ಆಯಿಲ್ ಕಂಪನಿಯೊಂದಿಗೆ ಸಹಭಾಗಿಯಾಗಿರುವುದು ಮತ್ತು ಈ ಯೋಜನೆ ದೇಶೀಯ ಮೂಲಭೂತ ಸೌಕರ್ಯ ಸಂಸ್ಥೆಯಾಗಿರುವ ಎಂಇಐಎಲ್ ಜಾಗತಿಕ ಬದ್ಧತೆ ಮತ್ತು ಕಾರ್ಯಕ್ಷಮತೆಗೆ ಸಾಕ್ಷಿಯಾಗಿದೆ ಎಂದು ಎಂ.ಇ.ಐ.ಎಲ್ ನಿರ್ದೇಶಕ ಪಿ. ದೋರಯ್ಯ ಹರ್ಷ ವ್ಯಕ್ತಪಡಿಸಿದ್ದಾರೆ. ಈ ತಂತ್ರಜ್ಞಾನಾಧಾರಿತ ಜಯದೊಂದಿಗೆ, ಎಂ.ಇ.ಐ.ಎಲ್ ತನ್ನ ಮಧ್ಯಪ್ರಾಚ್ಯದ ತೈಲ ಮತ್ತು ಅನಿಲ ಕ್ಷೇತ್ರದಲ್ಲಿ ತನ್ನ ಉಪಸ್ಥಿತಿಯನ್ನು ಬಲಪಡಿಸಿದೆ.

ಎಂ.ಇ.ಐ.ಎಲ್ ರಾಜಸ್ಥಾನ ರಿಫೈನರಿ ಮತ್ತು ಮೊಂಗೋಲ್ ರಿಫೈನರಿಗಳಿಗೂ ಇದೇ ರೀತಿಯ ಸಲ್ಫರ್ ರಿಕವರಿ ಘಟಕವನ್ನು ಸ್ಥಾಪಿಸುತ್ತಿದೆ. ಇವು ಹೈಡ್ರೋಕಾರ್ಬನ್ ಉದ್ಯಮದಲ್ಲಿ ಎಂ.ಇ.ಐ.ಎಲ್ ನಾಯಕತ್ವಕ್ಕೆ ಉದಾಹರಣೆ ಹಾಗೂ ಇಂಧನ ಸ್ವಾವಲಂಬನೆ ಮತ್ತು ನವೀನ ತಂತ್ರಜ್ಞಾನದ ಯಶಸ್ವಿ ಅಳವಡಿಕೆಗೆ ಸಾಕ್ಷಿಯಾಗಿದೆ. ಎಂ.ಇ.ಐ.ಎಲ್ ಸಮೂಹವು ಮೊಂಗೋಲಿಯಾ, ಟಾಂಜಾನಿಯಾ,

ಇಟಲಿ ಮತ್ತು ಇನ್ನಿತರ ಹಲವು ದೇಶಗಳಲ್ಲಿ ಕುಡಿಯುವ ನೀರು, ಹೈಡ್ರೋಕಾರ್ಬನ್ ವಿದ್ಯುತ್ ಯೋಜನೆಗಳಂತಹ ವಿವಿಧ ಅಂತರರಾಷ್ಟ್ರೀಯ ಮೂಲಸೌಕರ್ಯ ಕಾರ್ಯಗಳಲ್ಲಿ ವಿಶಾಲ ಅನುಭವವನ್ನು ಹೊಂದಿರುವ ದೇಶೀಯ ಸಂಸ್ಥೆಯಾಗಿ ಹೊರ ಹೊಮ್ಮಿದೆ.

# ಗಂಟಲು ನೋವು ಯಾಕೆ

## ಶೀತವಾದಾಗ ನಮ್ಮ ಧ್ವನಿಯಲ್ಲಿ ಬದಲಾವಣೆಯಾಗೋದು



ಶೀತ, ಕೆಮ್ಮು ಉಂಟಾದಾಗ ಧ್ವನಿಯಲ್ಲಿ ಒಂದು ರೀತಿಯ ಗಡಸುತನ ಉಂಟಾಗುತ್ತದೆ. ಈ ರೀತಿಯಾಗಲು ಕಾರಣವೇನು ಇದನ್ನು ಯಾವ ರೀತಿ ಪರಿಹರಿಸಬಹುದು ಎನ್ನುವುದನ್ನು ತಿಳಿಯೋಣ.

ಸಾಮಾನ್ಯವಾಗಿ ಶೀತವಾದಾಗ ನಮ್ಮ ಧ್ವನಿ ಇದ್ದಕ್ಕಿದ್ದಂತೆ ಒರಟಾಗಿ ಅಥವಾ ಅಸಂಗತವಾಗಿ ಧ್ವನಿಸುವುದನ್ನು ನೀವು ಗಮನಿಸಿರಬಹುದು. ನಿಮ್ಮ ಗಂಟಲಿನಿಂದ ಬೇರೊಬ್ಬರ ಧ್ವನಿ ಬರುತ್ತಿರುವಂತೆ ಭಾಸವಾಗಬಹುದು. ಇದು ಕ್ಷುಲ್ಲಕ ವಿಷಯವಲ್ಲ, ಬದಲಿಗೆ ದೇಹದೊಳಗೆ ನಡೆಯುತ್ತಿರುವ ಆಕರ್ಷಕ ಪ್ರಕ್ರಿಯೆಯ ಪರಿಣಾಮವಾಗಿದೆ.

**ಗಂಟಲಿನ ಉರಿಯೂತವೇ ಪ್ರಮುಖ ಕಾರಣ:** ಶೀತ ಅಥವಾ ವೈರಲ್ ಸೋಂಕು ದೇಹವನ್ನು ಆವರಿಸಿದಾಗ, ಅದರ ಪರಿಣಾಮಗಳು ಮೂಗು ಮತ್ತು ಗಂಟಲಿಗೆ ಸೀಮಿತವಾಗಿರುವುದಿಲ್ಲ. ಶಬ್ದವನ್ನು ಉತ್ಪಾದಿಸುವ ಧ್ವನಿತಂತುಗಳ ಮೇಲೂ ಪರಿಣಾಮ ಬೀರುತ್ತವೆ. ನಿಮ್ಮ ಗಂಟಲಿನಲ್ಲಿರುವ ಈ ಧ್ವನಿತಂತುಗಳಲ್ಲಿ ಗಾಳಿಯು ಅವುಗಳ ಮೂಲಕ ಹಾದುಹೋಗುವಾಗ ಕಂಪಿಸುತ್ತವೆ, ಶಬ್ದವನ್ನು ಸೃಷ್ಟಿಸುತ್ತವೆ. ಅವು ಉರಿಯುವಾಗ ವೈದ್ಯಕೀಯವಾಗಿ ಲಾರಿಂಜೈಟಿಸ್ ಎಂದು ಕರೆಯಲ್ಪಡುವ ಸ್ಥಿತಿ - ಅವು ದಪ್ಪ ಮತ್ತು ಭಾರವಾಗುತ್ತವೆ. ಪರಿಣಾಮವಾಗಿ ಅವುಗಳ ಕಂಪನಗಳು ನಿಧಾನವಾಗುತ್ತವೆ, ನಿಮ್ಮ ಧ್ವನಿಯು ಆಳವಾಗಿ ಅಥವಾ ಗಟ್ಟಿಯಾಗಿ ಧ್ವನಿಸುತ್ತದೆ.

**ಕಫವೂ ಪರಿಣಾಮ ಬೀರುತ್ತದೆ:** ಶೀತದ ಸಮಯದಲ್ಲಿ ನಿಮ್ಮ ಗಂಟಲಿನಲ್ಲಿ ಸಂಗ್ರಹವಾಗುವ ಲೋಳೆಯು ನಿಮ್ಮ ಧ್ವನಿಯನ್ನು ಸಹ ಬದಲಾಯಿಸಬಹುದು. ಈ ಪದರವು ಧ್ವನಿತಂತುಗಳನ್ನು ಆವರಿಸುತ್ತದೆ, ಅವು ಮುಕ್ತವಾಗಿ ಕಂಪಿಸುವುದನ್ನು ತಡೆಯುತ್ತದೆ. ಧ್ವನಿಯಲ್ಲಿ ಗೊರಕೆ ಅಥವಾ ವಿಭಿನ್ನ ಸ್ವರಕ್ಕೆ ಇದು ಪ್ರಮುಖ ಕಾರಣವಾಗಿದೆ. ಕೆಲವೊಮ್ಮೆ, ಶೀತ ಕಡಿಮೆಯಾದ ನಂತರವೂ, ಕಫವು ದೀರ್ಘಕಾಲದವರೆಗೆ ಮುಂದುವರಿದರೆ, ಧ್ವನಿ ಸಾಮಾನ್ಯ ಸ್ಥಿತಿಗೆ ಮರಳಲು ಹೆಚ್ಚು ಸಮಯ ತೆಗೆದುಕೊಳ್ಳಬಹುದು.

**ಧ್ವನಿ ಏಕೆ ಗೊರಕೆಯಾಗಿ ಧ್ವನಿಸುತ್ತದೆ:** ಧ್ವನಿತಂತುಗಳು ಉಬ್ಬಿದಾಗ, ಅವುಗಳ ಗಾತ್ರ ಮತ್ತು ದಪ್ಪದಲ್ಲಿ ಹೆಚ್ಚಾಗುತ್ತದೆ. ಇದು ದಪ್ಪ ಗಿಟಾರ್ ತಂತಿಗಳು ಆಳವಾದ ಧ್ವನಿಯನ್ನು ಹೇಗೆ ಉತ್ಪಾದಿಸುತ್ತವೆ ಎಂಬುದಕ್ಕೆ ಹೋಲುತ್ತದೆ. ಬೇರೆ ರೀತಿಯಲ್ಲಿ ಹೇಳುವುದಾದರೆ, ಊದಿಕೊಂಡ ಧ್ವನಿತಂತುಗಳು ಹೆಚ್ಚು ನಿಧಾನವಾಗಿ ಕಂಪಿಸುತ್ತವೆ ಮತ್ತು ಅವುಗಳ ಆವರ್ತನ ಕಡಿಮೆಯಾಗುತ್ತದೆ ಇದರಿಂದಾಗಿ ಧ್ವನಿ ಗಟ್ಟಿಯಾಗುತ್ತದೆ.

**ಕೆಮ್ಮು ತೊಂದರೆಯನ್ನು ಹೆಚ್ಚಿಸುತ್ತದೆ**

**ಗಂಟಲು ನೋವು ಉಂಟಾದಾಗ, ನಾವು ಹೆಚ್ಚಾಗಿ ಕೆಮ್ಮಲು ಅಥವಾ ನಮ್ಮ ಗಂಟಲನ್ನು ತೆರವುಗೊಳಿಸಲು ಪ್ರಯತ್ನಿಸುತ್ತೇವೆ. ಆದರೆ ಈ ಅಭ್ಯಾಸವು ವಿರುದ್ಧ ಪರಿಣಾಮವನ್ನು ಬೀರುತ್ತದೆ. ಹಾಗೆ ಮಾಡುವುದರಿಂದ ಧ್ವನಿತಂತುಗಳ ಮೇಲೆ ಒತ್ತಡ ಹೆಚ್ಚಾಗುತ್ತದೆ ಮತ್ತು ಅವುಗಳನ್ನು ಆಯಾಸಗೊಳಿಸುತ್ತದೆ. ಪರಿಣಾಮವಾಗಿ, ಧ್ವನಿ ಹೆಚ್ಚು ದಣಿದ ಅಥವಾ ಗೊರಕೆಯಾಗಿ ಧ್ವನಿಸಲು ಪ್ರಾರಂಭಿಸುತ್ತದೆ.**

**ಪರಿಹಾರ ಪಡೆಯಲು ಸುಲಭ ಮಾರ್ಗಗಳು**

ದಿನವಿಡೀ ಸಾಕಷ್ಟು ನೀರು ಕುಡಿಯಿರಿ ಮತ್ತು ಸಾಧ್ಯವಾದರೆ, ಕೋಣೆಯ ಆರ್ದ್ರಕವನ್ನು ಬಳಸಿ. ಇದು ಗಂಟಲಿನ ಉರಿಯೂತವನ್ನು ಕಡಿಮೆ ಮಾಡುತ್ತದೆ ಮತ್ತು ಲೋಳೆಯನ್ನು ತೆಳುಗೊಳಿಸುತ್ತದೆ. ನಿಮ್ಮ ಗಂಟಲಿಗೆ ನಿಜವಾದ ವಿಶ್ರಾಂತಿ ನೀಡುವುದು ಬಹಳ ಮುಖ್ಯ. ಮೃದುವಾಗಿ ಮಾತನಾಡುವುದು ಅಥವಾ ಪಿಸುಗುಟ್ಟುವುದು ಸಹ ಧ್ವನಿತಂತುಗಳನ್ನು ಆಯಾಸಗೊಳಿಸಬಹುದು, ಆದ್ದರಿಂದ ಸ್ವಲ್ಪ ಸಮಯದವರೆಗೆ ಸಂಪೂರ್ಣವಾಗಿ ಮೌನವಾಗಿರುವುದು ಉತ್ತಮ.

ಎರಡು ಮೂರು ವಾರಗಳ ನಂತರ ನಿಮ್ಮ ಧ್ವನಿ ಸುಧಾರಿಸದಿದ್ದರೆ, ಅದು ಧ್ವನಿತಂತುಗಳ ಮೇಲಿನ ಚೀಲ ಅಥವಾ ಆಮ್ಲ ಹಿಮ್ಮುಖ ಹರಿವಿನಂತಹ ಆಳವಾದ ಸಮಸ್ಯೆಯ ಸಂಕೇತವಾಗಿರಬಹುದು.

# ನಕಲಿ ಒಣದ್ರಾಕ್ಷಿ ಕಾಟ ಶುರು



ಒಣದ್ರಾಕ್ಷಿ ಆರೋಗ್ಯಕ್ಕೆ ತುಂಬಾ ಪ್ರಯೋಜನಕಾರಿ, ಆದರೆ ಮಾರುಕಟ್ಟೆಯಲ್ಲಿ ನಕಲಿ ಒಣದ್ರಾಕ್ಷಿ ಕೂಡಸಿಗುತ್ತಿರುವ ಕಾರಣ, ಈ ವಿಚಾರದಲ್ಲಿ ತುಂಬಾನೇ ಎಚ್ಚರಿಕೆವಹಿಸಬೇಕು.

ಅದರಲ್ಲೂ ದೀಪಾವಳಿ ಹಬ್ಬದ ಸಮಯದಲ್ಲಿ ಒಣದ್ರಾಕ್ಷಿಗೆ ಬೇಡಿಕೆ ತುಂಬಾನೇ ಇರುವ ಕಾರಣ ಈ ವಿಚಾರದಲ್ಲಿ ಎಚ್ಚರಿಕೆ ವಹಿಸಿದರೆ ಒಳ್ಳೆಯದು ಹಬ್ಬ ಹರಿದಿನಗಳು ಹತ್ತಿರ ಬರುತ್ತಿರುವಾಗ, ಅದರಲ್ಲೂ ದೀಪಾವಳಿ ಹಬ್ಬದ ಸಂದರ್ಭದಲ್ಲಿ ಒಣದ್ರಾಕ್ಷಿ ನೆನಪಿಗೆ ಬರುತ್ತದೆ. ಹಬ್ಬದ ದಿನಗಳಲ್ಲಿ ಮಾಡುವ ಸಿಹಿ ತಿಂಡಿಗಳಲ್ಲಿ, ಪಾಯಾ ಸಗಳಲ್ಲಿಅಥವಾ ಖಾದ್ಯಗಳಲ್ಲಿ ಸ್ವಲ್ಪ ಒಣದ್ರಾಕ್ಷಿಯನ್ನು ಸೇರಿಸುವುದರಿಂದ ರುಚಿ ಇನ್ನಷ್ಟು ಇಮ್ಮಡಿ ಗೊಳ್ಳುತ್ತದೆ, ಜೊತೆಗೆ ಮನೆಮಂದಿಯವರಿಗೆಲ್ಲಾ ಇಷ್ಟವಾಗುತ್ತದೆ. ಅದರಲ್ಲೂ ಸಣ್ಣ ಮಕ್ಕಳಿಗೆ ಅಂತೂ ಒಣ ದ್ರಾಕ್ಷಿ ಎಂದರೆ ಬಲು ಇಷ್ಟಪಡುತ್ತಾರೆ.ಇನ್ನು ಒಣದ್ರಾಕ್ಷಿಯ ಬಗ್ಗೆ ಹೇಳುವುದಾದರೆ ದ್ರಾಕ್ಷಿ ಹಣ್ಣಿನಲ್ಲಿ ಬಿಸಿಲಿನಲ್ಲಿ ಒಣಗಿಸಿ ತಯಾರಿಸುವುದೇ ಒಣದ್ರಾಕ್ಷಿ. ಪ್ರಮುಖವಾಗಿ ಇದರಲ್ಲಿ ಆರೋಗ್ಯಕ್ಕೆ ಬೇಕಾಗುವ ಖನಿಜಾಂಶ ಗಳಾದ ಪೊಟ್ಯಾಶಿಯಮ್, ಕ್ಯಾಲ್ಸಿಯಂ, ಉನ್ನತ ಮಟ್ಟದ ಕಬ್ಬಿನಾಂಶ, ಅಧಿಕ ಪ್ರಮಾಣದಲ್ಲಿ ನಾರಿನಾಂಶ, ಮೆಗ್ನೀಸಿಯಂ, ಫೋಸ್ಫರಸ್ ಇತ್ಯಾದಿ ಅಂಶಗಳು ಅಧಿಕ ಪ್ರಮಾಣದಲ್ಲಿ ಕಂಡು ಬರುವುದು, ಒಣಫಲಗಳಲ್ಲಿ ಇದಕ್ಕೂ ಕೂಡ ಪ್ರಮುಖ ಸ್ಥಾನ ನೀಡಲಾಗಿದೆ.

**ಒಣದ್ರಾಕ್ಷಿಯಲ್ಲಿಯೂ ಕೂಡ ನಕಲಿ ಬಂದಿದೆ :** ಆದರೆ ಇಷ್ಟೆಲ್ಲಾ ಪ್ರಯೋಜನಗಳನ್ನು ಒಣದ್ರಾಕ್ಷಿಯನ್ನು ತಿನ್ನುವ ಮೊದಲು ಸ್ವಲ್ಪ ಆಲೋಚನೆ ಮಾಡುವ ಪರಿಸ್ಥಿತಿ ಎದುರಾಗಿದೆ ಒಣದ್ರಾಕ್ಷಿಗಳಲ್ಲಿಯೂ ಕೂಡ ಕಲಬೆರಕೆ ಶುರುವಾಗಿದೆ. ಹೀಗಾಗಿ ಇಂತಹ ಒಣದ್ರಾಕ್ಷಿಯನ್ನು ತಿನ್ನುವ ಅಭ್ಯಾಸ ಮಾಡಿಕೊಂಡರೆ, ಪ್ರಯೋಜನದ ಬದಲು ಆರೋಗ್ಯಕ್ಕೆ ಹಾನಿ ಆಗುವ ಸಾಧ್ಯತೆ ಹೆಚ್ಚಿರುತ್ತದೆ! ಹಾಗಾದ್ರೆ, ನಕಲಿ ಒಣದ್ರಾಕ್ಷಿಗಳನ್ನು ಸುಲಭವಾಗಿ ಪತ್ತೆಹಚ್ಚುವುದು ಹೇಗೆ ನೋಡೋಣ ಬನ್ನಿ

**ನಕಲಿ ಒಣದ್ರಾಕ್ಷಿಗಳನ್ನು ಹೇಗೆ ಗುರುತಿಸುವುದು :** ಸಾಮಾನ್ಯವಾಗಿ ಹಬ್ಬದ ಸಮಯದಲ್ಲಿ ಒಣದ್ರಾಕ್ಷಿಗೆ ಬೇಡಿಕೆ ಹೆಚ್ಚಿರುವ ಕಾರಣ, ಹಣದ ದುರಾಸೆಗೆ ಬಿದ್ದು, ಅನೇಕ ಅಂಗಡಿ ಮಾಲಿಕರು ನಕಲಿ ಒಣದ್ರಾಕ್ಷಿಗಳನ್ನು ಮಾರಾಟ ಮಾಡಿ, ಜನರ ಆರೋಗ್ಯದ ಜೊತೆಗೆ ಚೆಲ್ಲಾಟವಾಡುತ್ತಾರೆ

ಹಾಗಾಗಿ ಒಣದ್ರಾಕ್ಷಿ ಮಾತ್ರವಲ್ಲ ಯಾವುದೇ ಡ್ರೈಫ್ರೂಟ್ಸ್ ಖರೀದಿಸುವಾಗಲೂ ಕೂಡ ಬಹಳ ಎಚ್ಚರಿಕೆ ವಹಿಸಬೇಕು. ಸಾಮಾನ್ಯವಾಗಿ ನಕಲಿ ಒಣದ್ರಾಕ್ಷಿ ನೋಡುವುದಕ್ಕೆ ಅಸಲಿ ಒಣದ್ರಾಕ್ಷಿಗಳಂತೆ ಕಾಣಿಸಬಹುದು. ಆದರೆ ಈ ನಕಲಿ ಒಣದ್ರಾಕ್ಷಿಗಳು ಆರೋಗ್ಯಕ್ಕೆ ಹಾನಿಕಾರಕವಾದ ವಿವಿಧ ರಾಸಾಯನಿಕಗಳು ಮತ್ತು ಬಣ್ಣಗಳನ್ನು ಹೊಂದಿರುತ್ತವೆ. ಆದ್ದರಿಂದ, ಒಣದ್ರಾಕ್ಷಿಗಳನ್ನು ಖರೀದಿಸುವಾಗ ಈ ವಿಷಯಗಳನ್ನು ನೆನಪಿನಲ್ಲಿಡಿ:

**ಬಣ್ಣ ಹಾಗೂ ಆಕಾರ :** ಬಣ್ಣ: ಅಸಲಿ ಒಣದ್ರಾಕ್ಷಿಗಳು ಏಕರೂಪದ ಬಣ್ಣವನ್ನು ಹೊಂದಿರುತ್ತವೆ. ಬಣ್ಣವು ತುಂಬಾ ಪ್ರಕಾಶಮಾನವಾಗಿದ್ದರೆ ಅದು ನಕಲಿಯಾಗಿರಬಹುದು.

**ಆಕಾರ:** ಅಸಲಿ ಒಣದ್ರಾಕ್ಷಿಗಳು ಸ್ವಲ್ಪ ದುಂಡಗಿನ ಮತ್ತು ಏಕರೂಪದ ಆಕಾರವನ್ನು ಹೊಂದಿರುತ್ತವೆ. ಒಣದ್ರಾಕ್ಷಿಗಳು ಅಸಮವಾಗಿದ್ದರೆ, ಅವು ನಕಲಿಯಾಗಿರಬಹುದು.

**ಒಣದ್ರಾಕ್ಷಿಯ ಸಿಪ್ಪೆ :** ನಿಜವಾದ ಒಣದ್ರಾಕ್ಷಿಗಳು ಸ್ವಲ್ಪ ಸುಕ್ಕುಗಟ್ಟಿದ ಸಿಪ್ಪೆಯನ್ನು ಹೊಂದಿರುತ್ತವೆ. ಆದರೆ ಒಣದ್ರಾಕ್ಷಿಯ ಸಿಪ್ಪೆಯು ತುಂಬಾ ನಯವಾದ ಅಥವಾ ಹೊಳೆಯುವಂತಿದ್ದರೆ, ಅದು ನಕಲಿಯಾಗಿರಬಹುದು

**ರುಚಿ ಹಾಗೂ ಪರಿಮಳ : ರುಚಿ:** ಅಸಲಿ ಒಣದ್ರಾಕ್ಷಿಗಳು ಸಿಹಿ ಮತ್ತು ಸ್ವಲ್ಪ ಹುಳಿ ರುಚಿಯನ್ನು ಹೊಂದಿರುತ್ತವೆ. ಒಣದ್ರಾಕ್ಷಿಗಳು ತುಂಬಾ ಸಿಹಿಯಾಗಿ ಅಥವಾ ಕೃತಕವಾಗಿ ರುಚಿ ನೋಡಿದರೆ, ಅವು ನಕಲಿಯಾಗಿ ರಬಹುದು.

**ಪರಿಮಳ :** ನಿಜವಾದ ಒಣದ್ರಾಕ್ಷಿಗಳು ವಿಶಿಷ್ಟವಾದ ಸುವಾಸನೆಯನ್ನು ಹೊಂದಿರುತ್ತವೆ. ಅವು ವಿಚಿತ್ರವಾದ ವಾಸನೆಯನ್ನು ಹೊಂದಿದ್ದರೆ, ಅವು ನಕಲಿಯಾಗಿರಬಹುದು.

**ಒಣದ್ರಾಕ್ಷಿಗಳು:** ನೀರಿನಲ್ಲಿ ನೆನೆಹಾಕಿದಾಗ ಅಸಲಿ ಒಣದ್ರಾಕ್ಷಿಗಳು ತೇಲುತ್ತವೆ. ಅವು ಮುಳುಗಿದರೆ, ಅವು ನಕಲಿಯಾಗಿರಬಹುದು.

**ಬೀಜಗಳು:** ಅಸಲಿ ಒಣದ್ರಾಕ್ಷಿಗಳು ಸಣ್ಣ ಬೀಜಗಳನ್ನು ಹೊಂದಿರುತ್ತವೆ. ಒಣದ್ರಾಕ್ಷಿಯಲ್ಲಿ ಯಾವುದೇ ಬೀಜಗಳಿಲ್ಲದಿದ್ದರೆ, ಅದು ನಕಲಿಯಾಗಿರ ಬಹುದು.

**ಅಚ್ಚಾಗಿದ್ದ ಒಣದ್ರಾಕ್ಷಿಗಳನ್ನು ಖರೀದಿಸಬೇಡಿ:** ಕೆಲವು ಒಣದ್ರಾಕ್ಷಿಗಳನ್ನು (ಒಣದ್ರಾಕ್ಷಿ ತಯಾರಿಸುವುದು ಹೇಗೆ) ಹೆಚ್ಚಾಗಿ ಬಿಸಿಲಿನಲ್ಲಿ ಸಂಗ್ರಹಿಸಲಾಗುತ್ತದೆ ಎಂದು ನೀವು ಗಮನಿಸಿರಬಹುದು. ಇದು ಅಚ್ಚನ್ನು ಮರೆಮಾಡುತ್ತದೆ. ಅತಿಯಾದ ತೇವಾಂಶವು ಅಚ್ಚನ್ನು ಉಂಟು ಮಾಡಬಹುದು ಮತ್ತು ಕೆಲವು ಒಣದ್ರಾಕ್ಷಿಗಳು ಕೆಟ್ಟ ವಾಸನೆಯನ್ನು ಸಹ ಪ್ರಾರಂಭಿಸಬಹುದು. ಅವು ಕ್ಯಾನೋಲಾದಿಂದ ಲೇಪಿತವಾಗಿರುತ್ತವೆ, ಆದರೆ ಅದು ಕೂಡ ಕಾಲಾನಂತರದಲ್ಲಿ ಹಾಳಾಗಬಹುದು. ನಿಮ್ಮ ಒಣದ್ರಾಕ್ಷಿಗಳಲ್ಲಿ ಸ್ವಲ್ಪ ವಾಸನೆಯನ್ನು ನೀವು ಗಮನಿಸಿದರೆ, ಅವುಗಳನ್ನು ಖರೀದಿಸಬೇಡಿ.

**ಸಕ್ಕರೆ ಸೇರಿಸಲಾಗುತ್ತದೆ:** ಸಿಹಿ ಬರಲು ಕೃತಕ ಒಣದ್ರಾಕ್ಷಿಗಳಿಗೆ ಸಕ್ಕರೆ ಸೇರಿಸಲಾಗುತ್ತದೆ. ಆದ್ದರಿಂದ, ಒಣ ದ್ರಾಕ್ಷಿಯ ಮೇಲೆ ಒಂದು ಹನಿ ನೀರು ಅಥವಾ ತೇವಾಂಶವನ್ನು ನೀವು ನೋಡಿದರೆ, ಅದು ನಕಲಿ ಎಂದು ಅರ್ಥಮಾಡಿಕೊಳ್ಳಿ. ನಿಮ್ಮ ಕೈಗಳಿಗೆ ನಕಲಿ ಒಣ ದ್ರಾಕ್ಷಿಗಳನ್ನು ಉಜ್ಜುವುದರಿಂದ ನಿಮ್ಮ ಚರ್ಮವು ಹಳದಿ ಬಣ್ಣಕ್ಕೆ ತಿರುಗುತ್ತದೆ. ಇದಲ್ಲದೆ, ನಕಲಿ ಒಣದ್ರಾಕ್ಷಿಯ ವಾಸನೆಯಿಂದ ಗಂಧಕದ ವಾಸನೆಯೂ ಬರುತ್ತದೆ.

# ಬೇಕರಿ ರುಚಿಯ ಬಾದುಷ ಮನೆಯಲ್ಲೇ ಮಾಡಿ!



ದೀಪಾವಳಿಗೆ ನೀವು ಕೂಡ ಯಾವುದಾದರು ಸಿಹಿ ಮಾಡಿ ಸವಿಯುವ ಆಲೋಚನೆಯಲಿದ್ದರೆ ಯಾವ ಸಿಹಿ ಮಾಡಬೇಕು ಎಂಬ ಗೊಂದಲದಲ್ಲಿರಬಹುದು. ಹಾಗೆ ಹಲವು ರೀತಿಯ ಖಾದ್ಯಗಳು, ಸಿಹಿಗಳು ನೀವು ಮಾಡಿ ಸವಿಯೋದು ಸಹ ಇದೆ. ದೀಪಾವಳಿ ಅಂದ್ರೆ ಸಿಹಿಗಳ ಹಬ್ಬವೇ ಆಗಿರಲಿದೆ. ಹೋಳಿಗೆ ಕಜ್ಜಾಯ, ಪಾಯಸದಂತಹ ಸಿಹಿಯ ಜೊತೆಗೆ ಬಾದುಷ ಕೂಡ ದೀಪಾವಳಿಯ ಸಿಹಿ ತಿಂಡಿಯಾಗಿದೆ.

### ಬಾದುಷ ಮಾಡಲು ಬೇಕಾಗುವ ವಸ್ತುಗಳು

- ಮೈದಾ ಹಿಟ್ಟು
- ಸಕ್ಕರೆ
- ತುಪ್ಪ
- ಏಲಕ್ಕಿ
- ಎಣ್ಣೆ ಬೇಕಿಂಗ್

ನೀವು ಕೂಡ ಬೇಕರಿಗಳಲ್ಲಿ ಸಿಗುವಂತಹ ಬಾದುಷ ಸವಿದಿರುತ್ತೀರಿ. ಬಾದುಷ ಬಹಳ ರುಚಿಯಾದ ಸಿಹಿ ತಿಂಡಿ. ಹಾಗೆ ಮಕ್ಕಳಿಂದ ಹಿಡಿದು ಹಿರಿಯರ ವರೆಗೂ ಕೂಡ ಇಷ್ಟಪಟ್ಟು ಸವಿಯುವ ತಿಂಡಿ ಇದು. ಬಹುತೇಕರು ಈ ತಿಂಡಿಯನ್ನು ಸವಿಯಲು ಇಷ್ಟಪಡುತ್ತಾರೆ. ಆದ್ರೆ ಈ ಬಾದುಷ ಮಾಡುವ ಕುರಿತು ಹಲವರಿಗೆ ಗೊಂದಲ ಇರಲಿದೆ. ಬಾದುಷ ಸಿಹಿ ಮಾಡುವ ಕುರಿತು ನಾವಿಂದು ತಿಳಿದುಕೊಳ್ಳೋಣ.

ಬೇಕರಿಗಳಲ್ಲಿ ಸಿಗುವಂತಹ ಬಾದುಷದ ರೀತಿಯಲ್ಲೇ ಮನೆಯಲ್ಲೂ ನಾವು ಮಾಡಬಹುದು. ಹಾಗಾದ್ರೆ, ಬಾದುಷ ಮಾಡಲು ಯಾವೆಲ್ಲಾ ಪದಾರ್ಥಗಳು ಬೇಕು ಮಾಡುವ ವಿಧಾನವೇನು, ಎಷ್ಟು ಸಮಯ ಹಿಡಿಯಲಿದೆ ಎಂಬುದನ್ನು ಇಂದು ತಿಳಿದುಕೊಳ್ಳೋಣ.

**ಸೋಡಾ ಬಾದುಷ ಮಾಡುವ ವಿಧಾನವೇನು:** ಮೊದಲು ಒಂದು ಪಾತ್ರೆಗೆ ಒಂದೂವರೆ ಕಪ್ ಮೈದಾ ಹಿಟ್ಟು ಹಾಕಿ ಅರ್ಧ ಚಮಚ ಬೇಕಿಂಗ್ ಸೋಡಾ, 1 ಚಮಚ ಸಕ್ಕರೆ, ತುಪ್ಪ 1 ಸ್ಪೂನ್ ಸೇರಿಸಿಕೊಂಡು ಕೈಯಿಂದ ಮಿಕ್ಸ್ ಮಾಡಿಕೊಳ್ಳಿ. ಮಿಕ್ಸ್ ಮಾಡಿಕೊಂಡ ಬಳಿಕ ಕಾಲು ಕಪ್ ಹೊಸ ಮೊಸರು ಹಾಕಿಕೊಂಡು ಮಿಕ್ಸ್ ಮಾಡಿ ನಂತರ ಸ್ವಲ್ಪ ಸ್ವಲ್ಪವಾಗಿ ಅರ್ಧ ಕಪ್ ನೀರು ಹಾಕಿ ಹಿಟ್ಟು ಹದ ಮಾಡಿಕೊಳ್ಳಿ.

ನಂತರ ಮುಚ್ಚಳ ಮುಚ್ಚಿ ಈ ಹಿಟ್ಟನ್ನು ಬದಿಗಿಟ್ಟುಕೊಳ್ಳಿ. ಈಗ ಒಲೆ ಮೇಲೆ ಒಂದು ಪಾತ್ರೆ ಇಟ್ಟು ಅದಕ್ಕೆ 1 ಕಪ್ ಸಕ್ಕರೆ ಹಾಗೆ ಮುಕ್ಕಾಲು ಕಪ್ ನೀರು ಹಾಕಿ ಒಂದು ಎಳೆಯ ಪಾಕ ಮಾಡಿಕೊಳ್ಳಬೇಕು. ಅಂದರೆ ಅದು ಸ್ವಲ್ಪ ಅಂಟು ಅಂಟಾಗಿ ಬರಬೇಕು. ಈ ಸಮಯದಲ್ಲಿ ಏಲಕ್ಕಿ ಹಾಗೆ 6 ಹನಿ ನಿಂಬೆ ರಸ ಹಾಕಿ ಮಿಕ್ಸ್ ಮಾಡಿ ಇಳಿಸಿಕೊಳ್ಳಿ. ಈಗ ಮತ್ತೆ ಹಿಟ್ಟನ್ನು ಮತ್ತೆ ಹದ ಮಾಡಿಕೊಳ್ಳಿ. ಈಗ ಉಂಡೆ ಕಟ್ಟಬೇಕು. ಇದು ವಡೆ ರೀತಿ ಮಾಡಿ ಮಧ್ಯದಲ್ಲಿ ಒಂದು ತೂತು ಮಾಡಿಕೊಳ್ಳಿ. ಎಲ್ಲಾ ಹಿಟ್ಟನ್ನು ಈ ರೀತಿ ವಡೆಯಂತೆ ಮಾಡಿಟ್ಟುಕೊಳ್ಳಿ. ಈಗ ಒಲೆ ಮೇಲೆ ಒಂದು ಬಾಣಲೆ ಇಟ್ಟು ಎಣ್ಣೆ ಹಾಕಿ ಕಾಯಲು ಬಿಟ್ಟು ರೆಡಿಯಾಗಿದ್ದ ಬಾದುಷವನ್ನು ಹಾಕಿಕೊಂಡು ಮಧ್ಯಮ ಉರಿಯಲ್ಲಿ ಬೇಯಿಸಿ. 10 ನಿಮಿಷ ಎರಡೂ ಕಡೆ ಬೇಯಿಸಿಕೊಳ್ಳಿ. ಇಷ್ಟಾದರೆ ನಿಮ್ಮ ಮುಂದೆ ರುಚಿ ರುಚಿಯ ಬಾದುಷ ರೆಡಿಯಾಗುತ್ತದೆ. ನಂತರ ಇದನ್ನು ಸಕ್ಕರೆ ಪಾಕದೊಳಗೆ ಹಾಕಿ 10 ನಿಮಿಷ ಬಿಡಿ. ನೀವು ಕೂಡ ಇದನ್ನು ಹಬ್ಬದ ಸಮಯದಲ್ಲಿ ಮಾಡಿ ಸವಿದು ನೋಡಿ. ಅದರ ರುಚಿಗೆ ಮತ್ತೆ ಮತ್ತೆ ಮಾಡಿ ಸವಿಯುತ್ತೀರಿ.

## ಬೆಂಕಿ ನಂದಿಸುವ ಅರಿವು ಅವಶ್ಯ

• ಉದಯವಾಹಿನಿ ಬಾದಾಮಿ

ನಿತ್ಯ ಜೀವನದಲ್ಲಿ ಅಗ್ನಿಯಿಂದಾಗುವ ಅಪಾಯಗಳ ಬಗ್ಗೆ ಸಾರ್ವಜನಿಕರು ಎಚ್ಚರಿಕೆಯಿಂದ ಇರಬೇಕು. ಮುನ್ನೆಚ್ಚರಿಕೆ ಕುರಿತು ತಿಳಿವಳಿಕೆ ಪಡೆಯುವುದು ಅವಶ್ಯಕ ಎಂದು ಅಗ್ನಿ ಶಾಮಕ ದಳದ ರಾಜು ಲಮಾಣಿ ವಿದ್ಯಾರ್ಥಿಗಳಿಗೆ ವಿವರಣೆ ನೀಡಿದರು. ಇಲ್ಲಿನ ಎಸ್.ಬಿ. ಮಮದಾಪುರ ಪದವಿ ಕಾಲೇಜಿನ ಎನ್.ಎಸ್.ಎಸ್. ಘಟಕದಿಂದ ಅಗ್ನಿ ಶಾಮಕದಳ ಆಶ್ರಯದಲ್ಲಿ ಅಗ್ನಿ ಅವಘಡದ ಬಗ್ಗೆ ನಡೆದ ಪ್ರಾತ್ಯಕ್ಷಿಕೆ ಸಮಾರಂಭದಲ್ಲಿ ಅವರು ಮಾತನಾಡಿದರು.

'ಅಗ್ನಿಯಲ್ಲಿ ಎ.ಬಿ.ಸಿ.ಡಿ ಎಂದು ನಾಲ್ಕು ಪ್ರಕಾರಗಳಿವೆ. ಇವುಗಳಿಂದ ಅನಾಹುತ ತಪ್ಪಿಸಲು ವಿವಿಧ ರೀತಿಯ ಜ್ಞಾನದ ಕೌಶಲ ಅವಶ್ಯವಾಗಿದೆ' ಎಂದು ಅಗ್ನಿಶಾಮಕ ಠಾಣಾಧಿಕಾರಿ ಬಿ.ಪಿ. ಮರಡಿ ಹೇಳಿದರು. ಪ್ರಾಚಾರ್ಯ ಎ.ಎ. ತೋಪಲಕಟ್ಟಿ ಅಧ್ಯಕ್ಷತೆ ವಹಿಸಿದ್ದರು. ಅಗ್ನಿಶಾಮಕ ಸಿಬ್ಬಂದಿ ಪ್ರವೀಣ ಮಾಡಲಗೇರಿ, ಬಿ.ಟಿ. ಕೋನೇರಿ, ಎಲ್.ಎ. ಓಗೆನ್ನವರ, ಬಸವರಾಜ ಹಗರಗುಂಡಿ, ಶ್ರೀಧರ ದೊಡಮನಿ, ಎಸ್.ಆರ್. ಮಗಿ ಪ್ರಾತ್ಯಕ್ಷಿಕೆಯಲ್ಲಿ ಪಾಲ್ಗೊಂಡಿದ್ದರು.

## ಕಾಮಗಾರಿಗಳಿಗೆ ಚಾಲನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಕೆರೂರ

ಬೀಳಗಿ ಮತ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಕೈನಕಟ್ಟಿ, ಅನವಾಲ, ಇನಾಂ ಹನಮನೇರಿ ಗ್ರಾಮಗಳಲ್ಲಿ 3 ಕೋಟಿ ವೆಚ್ಚದ ಕಾಮಗಾರಿಗಳಿಗೆ ಶಾಸಕ ಜೆ.ಟಿ. ಪಾಟೀಲ ಚಾಲನೆ ನೀಡಿದರು. 2 ಕೋಟಿ ವೆಚ್ಚದಲ್ಲಿ ಕೈನಕಟ್ಟಿಯಿಂದ ಕಲಾದಗಿ ಗ್ರಾಮದವರೆಗೆ ಸೇರುವ ಜಿಲ್ಲಾ ಮುಖ್ಯ ರಸ್ತೆ ಸುಧಾರಣೆ, 40 ಲಕ್ಷ ವೆಚ್ಚದಲ್ಲಿ ಅನವಾಲ ಗ್ರಾಮದಲ್ಲಿ ಜಿಲ್ಲಾ ಮುಖ್ಯ ರಸ್ತೆಯ ಆಯ್ದ ಭಾಗಗಳಲ್ಲಿ ಚರಂಡಿ ನಿರ್ಮಾಣ, 50 ಲಕ್ಷ ವೆಚ್ಚದಲ್ಲಿ ಅನವಾಲ ಗ್ರಾಮದಲ್ಲಿ ಜಿಲ್ಲಾ ಮುಖ್ಯ ರಸ್ತೆ ಆಯ್ದ ಭಾಗಗಳಲ್ಲಿ ಅಡ್ಡಮೋರಿ ನಿರ್ಮಾಣ, ಇನಾಂ ಹನಮನೇರಿ ಗ್ರಾಮದಲ್ಲಿ 14 ಲಕ್ಷ ವೆಚ್ಚದಲ್ಲಿ ಶಾಲಾ ಕೊಠಡಿ ನಿರ್ಮಾಣ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿ ಚಾಲನೆ ನೀಡಿದರು.

ಧರ್ಮಣ್ಣ ಭಗವತಿ, ಪ್ರವೀಣ ಚಿಕ್ಕೂರ, ಹನಮಂತಗೌಡ ಪಾಟೀಲ, ಲಕ್ಷ್ಮಣ ತಳವಾರ, ಶಿವಪ್ಪ ಮೇಟಿ, ಭರಮಪ್ಪ ವಾಲಿಕಾರ, ಕಮಲಗೌಡ ಪಾಟೀಲ, ಯಂಕಂಣ್ಣ ವಾಸನದ, ಬಸು ತಳವಾರ, ಮಂಜುನಾಥ ತೆಗ್ಗಿ ಇದ್ದರು.

## ಗ್ರಾಮೀಣ ಆರೋಗ್ಯ ಸುಧಾರಣೆಗೆ ಹೆಚ್ಚಿನ ಆದ್ಯತೆ: ರಾಯರಡ್ಡಿ

• ಉದಯವಾಹಿನಿ ಯಲಬುರ್ಗಾ

ಗ್ರಾಮೀಣ ಪ್ರದೇಶದ ಜನರ ಆರೋಗ್ಯ ಸುಧಾರಣೆಗೆ ಹೆಚ್ಚಿನ ಆದ್ಯತೆ ನೀಡಿರುವ ಕಾರಣದಿಂದ ಕ್ಷೇತ್ರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಆರೋಗ್ಯ ಕೇಂದ್ರಗಳನ್ನು ತೆರೆಯಲಾಗಿದೆ. ಈ ಸೌಲಭ್ಯಗಳ ಪ್ರಯೋಜನೆ ಪಡೆದುಕೊಂಡು ಉತ್ತಮ ಆರೋಗ್ಯದಿಂದ ಇರಬೇಕು ಎಂದು ಮುಖ್ಯಮಂತ್ರಿ ಆರ್ಥಿಕ ಸಲಹೆಗಾರ ಬಸವರಾಜ ರಾಯರಡ್ಡಿ ಹೇಳಿದರು.

ತಾಲ್ಲೂಕಿನ ಕಲ್ಲೂರು ಗ್ರಾಮದಲ್ಲಿ ತೆರೆಯಲಾದ ನಮ್ಮ ಕ್ಲಿನಿಕ್ ವಿಸ್ತರಣಾ ಕೇಂದ್ರವನ್ನು ಉದ್ಘಾಟಿಸಿ ನಂತರ ಮಾತನಾಡಿದ ಅವರು, ಪಟ್ಟಣದಿಂದ ಕೇವಲ ಏಳೆಂಟು ಕಿ.ಮೀ. ಅಂತರದಲ್ಲಿರುವ ಕಲ್ಲೂರು ಗ್ರಾಮದಲ್ಲಿಯೇ ಆರೋಗ್ಯ ಸೇವೆ ಕಲ್ಪಿಸಿಕೊಡುವ ಉದ್ದೇಶದಿಂದ ಈ ಸೇವೆಯನ್ನು ಗ್ರಾಮದ ಜನತೆಗೆ ಒದಗಿಸಲಾಗಿದೆ. ಹಾಗೆಯೇ ಗ್ರಾಮದ ಸಮಗ್ರ ಅಭಿವೃದ್ಧಿ ವಿವಿಧ ಯೋಜನೆಗಳ


ಉದಯವಾಹಿನಿ ಚಿತ್ರ

ಮೂಲಕ ಅನುಷ್ಠಾನಕ್ಕೆ ಕ್ರಮಕೈಗೊಳ್ಳಲಾಗುವುದು ಎಂದರು. ಕ್ಷೇತ್ರದ ಅಭಿವೃದ್ಧಿಗಾಗಿ ನೀರಾವರಿ, ಶಿಕ್ಷಣ, ಕೆರೆಗಳ ಅಭಿವೃದ್ಧಿ, ಜಾನುವಾರುಗಳ ಆರೋಗ್ಯ ಸುಧಾರಣೆಗೆ ಪಶು ಆರೋಗ್ಯ ಕೇಂದ್ರಗಳ ಸ್ಥಾಪನೆ ಸೇರಿದಂತೆ ಜನರ, ರೈತರ ಹಾಗೂ ಜಾನುವಾರುಗಳ ಹಿತಕಾಪಾಡಲು ಸಾವಿರಾರು ಕೋಟಿ ಅನುದಾನದಲ್ಲಿ ಅಭಿವೃದ್ಧಿ ಕಾರ್ಯಕೈಗೊಳ್ಳಲಾಗಿದೆ. ವಿಶೇಷವಾಗಿ ಗ್ರಾಮೀಣ ಅಭಿವೃದ್ಧಿಯ ಪರಿಕಲ್ಪನೆಯಲ್ಲಿ ಸಿಮೆಂಟ್ ರಸ್ತೆ, ಗುಣಮಟ್ಟದ ಚರಂಡಿ ಹಾಗೂ ವಿವಿಧ ಸೌಕರ್ಯಗಳನ್ನು ಒದಗಿಸಿ ಹಳ್ಳಿಗಳ ಚಿತ್ರಣ ಬದಲಿಸಲು ಕ್ರಮಕೈಗೊಳ್ಳಲಾಗಿದೆ ಎಂದು ಅಭಿಪ್ರಾಯಪಟ್ಟರು.

ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ನೀಲಗಂಗಮ್ಮ ಬಬಲಾದ, ತಾಲ್ಲೂಕು ಆರೋಗ್ಯ ವೈದ್ಯಾಧಿಕಾರಿ ನಾಗರತ್ನ ಹಿರೇಮಠ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರೇಣಕಾ ಟಂಕದ, ಕಾಂಗ್ರೆಸ್ ಪಕ್ಷದ ಅಧ್ಯಕ್ಷ ಕೆರಿಬಸಪ್ಪ ನಿಡಗುಂದಿ, ಕಾರ್ಯಾಧ್ಯಕ್ಷ ಡಾ. ಶಿವನಗೌಡ ದಾನರೆಡ್ಡಿ, ಸಹಕಾರಿ ಧುರೀಣ ಚಂದ್ರಶೇಖರಯ್ಯ ಹಿರೇಮಠ ಸೇರಿ ಅನೇಕರು ಹಾಜರಿದ್ದರು.

### ಚರಂಡಿ ನಿರ್ವಹಣೆ ಕೊರತೆ, ಬೀದಿನಾಯಿಗಳ ಹಾವಳಿ, ಕಸ ವಿಲೇವಾರಿ ಸೇರಿದಂತೆ ಹಲವು ಸಮಸ್ಯೆಗಳು

## ಶಾಲೆ ಅಭಿವೃದ್ಧಿ, ಕಸದ ಸಮಸ್ಯೆ ಪರಿಹರಿಸಲು ಆಗ್ರಹ

• ಉದಯವಾಹಿನಿ ಧಾರವಾಡ

ನಗರದ ಎಂಟನೇ ವಾರ್ಡ್ ಹಲವೆಡೆ ಡಾಂಬರ್, ಸಿ.ಸಿ. ರಸ್ತೆ ನಿರ್ಮಿಸಲಾಗಿದೆ. ಒಳರಸ್ತೆಗಳಿಗೆ ಇಂಟರ್ ಲಾಕಿಂಗ್ ಸಿಮೆಂಟ್ ಇಟ್ಟಿಗೆ ಅವಳಡಿಸಲಾಗಿದೆ. ಸಿಎಸ್‌ಆರ್ ಅನುದಾನದಡಿ ಶಾಲಾ ಕೊಠಡಿಗಳನ್ನೂ ನಿರ್ಮಿಸಲಾಗಿದೆ. ಚರಂಡಿ ನಿರ್ವಹಣೆ ಕೊರತೆ, ಬೀದಿನಾಯಿಗಳ ಹಾವಳಿ, ಕಸ ವಿಲೇವಾರಿ ಸೇರಿದಂತೆ ಹಲವು ಸಮಸ್ಯೆಗಳು ಇವೆ.

ಚರಂತಿಮಠ ಗಾರ್ಡ್‌ನ್, ಕಾಮನಕಟ್ಟಿ, ವಿನಯ ಕುಲಕರ್ಣಿ ಬಡಾವಣೆ, ನಂದಿ ಲೇಔಟ್ ಸೇರಿದಂತೆ ಹಲವಡೆ ಸಿ.ಸಿ. ಹಾಗೂ ಡಾಂಬರ್ ರಸ್ತೆಗಳಿವೆ. ಬಸ್ತಿ ಓಣಿ, ವೆಂಕಟೇಶ್ವರ ಓಣಿ, ಜೋಶಿ ಗಲ್ಲಿ, ಕುಂಬಾರ ಓಣಿ ಮೊದಲಾದ ಓಣಿಗಳಲ್ಲಿ ಇಂಟರ್‌ಲಾಕಿಂಗ್ ಸಿಮೆಂಟ್ ಇಟ್ಟಿಗೆ ಅವಳಡಿಸಲಾಗಿದೆ.

**24×7 ನೀರು ಪೂರೈಕೆ ಯೋಜನೆ**

ಈ ವಾರ್ಡ್ ಕೆಲವು ಬಡಾವಣೆಗಳಲ್ಲಿ (ಹಳೇ ಧಾರವಾಡ) 24×7 ನೀರು ಪೂರೈಕೆ ಯೋಜನೆ ಕಾರ್ಯಗತವಾಗಿದೆ. ಕೋಳಿಕೇರಿ ಹೊಸ ಓಣಿ ಸೇರಿದಂತೆ ಹಲವು ರಸ್ತೆಗಳಲ್ಲಿ ಪೈಪ್‌ಲೈನ್ ಅಳವಡಿಕೆಗೆ ರಸ್ತೆ ಅಗೆದಿದ್ದು, ಗುಂಡಿಗಳು ಏರ್ಪಟ್ಟಿವೆ.

ವಾರ್ಡ್‌ನಲ್ಲಿ ಚರಂಡಿ ಸಮಸ್ಯೆ ಇದೆ. ಗಟಾರಗಳಲ್ಲಿ ಕಸ, ಕಡ್ಡಿ, ಹೂಳು ತುಂಬಿಕೊಂಡಿದೆ. 10 ಅಂಗನವಾಡಿ ಕೇಂದ್ರಗಳಿದ್ದು, ಈ ಪೈಕಿ ಎರಡು ಅಂಗನವಾಡಿಗಳಿಗೆ ಮಾತ್ರ ಸ್ವಂತ ಕಟ್ಟಡಗಳು ಇವೆ. ನಿವೇಶಗಳು, ರಸ್ತೆ ಬದಿಗಳಲ್ಲಿ ಕಸ ಎಸೆಯಲಾಗುತ್ತದೆ. ಜಾನುವಾರುಗಳು, ಹಂದಿಗಳು ಕಸದ ರಾಶಿ ಎಳೆದಾಡಿ ರಾಡಿ ಎಬ್ಬಿಸುತ್ತವೆ. ಸ್ವಚ್ಛತೆಗೆ ಆದ್ಯತೆ ನೀಡಬೇಕಿದೆ ಎಂಬುದು ವಾರ್ಡ್ ನಿವಾಸಿಗಳ ಆಗ್ರಹ. 'ವ್ಯವಸ್ಥಿತವಾಗಿ ಗಟಾರಗಳನ್ನು ನಿರ್ಮಿಸಬೇಕು.


ಉದಯವಾಹಿನಿ ಚಿತ್ರ

### ಪ್ರಮುಖ ಬೇಡಿಕೆಗಳು

- ನಿಯಮಿತವಾಗಿ ಕಸ ವಿಲೇವಾರಿ ಮಾಡಬೇಕು
- ಕಸ ಸಂಗ್ರಹಕ್ಕೆ ಹೆಚ್ಚುವರಿ ವ್ಯವಸ್ಥೆ ಕಲ್ಪಿಸಬೇಕು
- ಗಟಾರಗಳ ನಿರ್ವಹಣೆ ಸ್ವಚ್ಛತೆಗೆ ಆದ್ಯತೆ ನಿಡಬೇಕು
- ಹೊಸ ಬಡಾವಣೆಗಳಿಗೆ ಮೂಲಸೌಕರ್ಯ ಕಲ್ಪಿಸಬೇಕು
- ★ ಭದ್ರತೆಗೆ ಸಿಸಿಟಿವಿ ಕ್ಯಾಮೆರಾ ಅಳಡಿಸಬೇಕು

ಬೀದಿ ನಾಯಿಗಳ ಹಾವಳಿ ತಡೆಗಟ್ಟಬೇಕು. ಎರಡು ಉದ್ಯಾನಗಳಿವೆ. ಚರಂತಿಮಠ ಉದ್ಯಾನದಲ್ಲಿ ವಿಹಾರ ಪಥ, ವಿಶ್ರಾಂತಿ ಕೊಠಡಿ, ಕುಳಿತುಕೊಳ್ಳುವ ಬೆಂಚ್, ಮಕ್ಕಳ ಆಟಿಕೆ ಸಾಮಗ್ರಿಗಳು ಇವೆ. ದೇಸಾಯಿ ಉದ್ಯಾನದಲ್ಲಿ ವಿಹಾರಪಥ ನಿರ್ಮಿಸಿ ಗಿಡಗಳನ್ನೂ ನೆಡಲಾಗಿದೆ. ಆದರೆ, ಇನ್ನಷ್ಟು ಅಭಿವೃದ್ಧಿ ಆಗಬೇಕಿದೆ'' ಎಂದು ಕೋಳಿಕೇರಿ ನಿವಾಸಿ ನಾರಾಯಣ ರಾವುತ್ ಒತ್ತಾಯಿಸಿದರು.

'ಹಲವಡೆ ಚರಂಡಿ ಸಮಸ್ಯೆ ಇದೆ. ಕೆಲವಡೆ ಚರಂಡಿಗಳಲ್ಲಿ ಕಸ ತುಂಬಿಕೊಂಡಿದೆ. ರಭಸವಾಗಿ ಮಳೆ ಸುರಿದಾಗ ನೀರು ರಸ್ತೆ ನುಗ್ಗುತ್ತದೆ. ಕೆಲವು ಬಡಾವಣೆಗಳಲ್ಲಿ ಬೀದಿ ದೀಪ ಸಮಸ್ಯೆ ಇದೆ' ಎಂದರು. ಸಮರ್ಪಕವಾಗಿ ಕಸ ವಿಲೇವಾರಿ ಮಾಡಬೇಕು. ಬೀದಿಗಳಲ್ಲಿ ಸಿ.ಸಿ.ಟಿವಿ ಕ್ಯಾಮರಾ ಅಳವಡಿಸಬೇಕು. ನೀರಿನ ವ್ಯವಸ್ಥೆ ಚೆನ್ನಾಗಿದೆ ರಸ್ತೆಗಳು ಉತ್ತಮವಾಗಿವೆ ಮಹೇಶ ಸುಣಗಾರ ನಿವಾಸಿ ವಿನಯ ಕುಲಕರ್ಣಿ ಬಡಾವಣೆ.

### ಶಾಲಾ ಕೊಠಡಿ ನಿರ್ಮಾಣ ರಸ್ತೆ ಅಭಿವೃದ್ಧಿ

ಎಂಟನೇ ವಾರ್ಡ್ ಚರಂತಿಮಠ ಗಾರ್ಡ್‌ನನಲ್ಲಿ ರೂ. 90 ಲಕ್ಷದಲ್ಲಿ ಸಮುದಾಯ ಭವನ ರೂ.20 ಲಕ್ಷದಲ್ಲಿ ಹಳೇ ಗರಡಿಮನಿ ಅಭಿವೃದ್ಧಿ ಕಾಮನಕಟ್ಟಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ-2ಕ್ಕೆ ಕೋಲ್ ಇಂಡಿಯಾ ಲಿಮಿಟೆಡ್ ಸಾಮಾಜಿಕ ಸಾಂಸ್ಥಿಕ ನಿಧಿಯ (ಸಿಎಸ್‌ಆರ್) ರೂ 1.11 ಕೋಟಿ ಅನುದಾನದಲ್ಲಿ ಎಂಟು ಕೊಠಡಿಗಳು ಹಾಗೂ ಲೋಕೋಪಯೋಗಿ ಇಲಾಖೆಯ ರೂ.25 ಲಕ್ಷ ಅನುದಾನದಲ್ಲಿ ಎರಡು ಕೊಠಡಿಗಳನ್ನು ನಿರ್ಮಿಸಲಾಗಿದೆ. ರೂ.28 ಲಕ್ಷ ಅನುದಾನದಲ್ಲಿ ನೂಚ್ಚಂಬ್ಲಿ ಬಾವಿ ಅಭಿವೃದ್ಧಿಪಡಿಸಿ ರಸ್ತೆ ನಿರ್ಮಿಸಲಾಗಿದೆ' ಎಂದು ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಸದಸ್ಯ ಶಂಕರ ಶೇಳಕೆ ತಿಳಿಸಿದರು.

> 2022-23ರಲ್ಲಿ ಕೋಳಿ ಕೆರೆ ಅಭಿವೃದ್ಧಿಗೆ ಅಮೃತ-2 ಯೋಜನೆಯಡಿ ರೂ. 6 ಕೋಟಿ ಅನುದಾನ ಮಂಜೂರಾಗಿದೆ. ಟೆಂಡರ್ ಪ್ರಕ್ರಿಯೆ ನಡೆದಿದೆ. ಹೊಸ ಬಡವಾಣೆಗಳಿಗೆ 24× 7 ನೀರು ಪೂರೈಕೆಯಾಗಲಿದೆ. -ಶಂಕರ ಶೇಳಕೆ ಪಾಲಿಕೆ ಸದಸ್ಯ

### ಮಿನಿ ನ್ಯೂಸ್

## ಸೈಬರ್ ಅಪರಾಧ ಪ್ರಕರಣಗಳು ಹೆಚ್ಚಳ: ಎಚ್ಚರ ವಹಿಸಲು ಸಲಹೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಸಾಗರ

ಇತ್ತೀಚಿನ ದಿನಗಳಲ್ಲಿ ಸೈಬರ್ ಅಪರಾಧಗಳ ಸಂಖ್ಯೆ ಹೆಚ್ಚುತ್ತಿದ್ದು ಮೊಬೈಲ್ ಬಳಕೆದಾರರು ಎಚ್ಚರ ವಹಿಸಬೇಕು ಎಂದು ಶಿವಮೊಗ್ಗದ ಸೈಬರ್ ಅಪರಾಧ ಠಾಣೆ ಎಎಸ್‌ಐ ಪ್ರಕಾಶ್ ಜೆ.ಕೆ.ಹೇಳಿದರು.

ಸಮೀಪದ ಉಳ್ಳೂರು ಗ್ರಾಮದ ಸಿಗಂದೂರೇಶ್ವರಿ ಶಿಕ್ಷಣ ಸಂಸ್ಥೆಯಲ್ಲಿ ಸಾಗರ ಗಂಗೋತ್ರಿ ಕಾನೂನು ಮಹಾ ವಿದ್ಯಾಲಯ, ಸೈಬರ್ ಅಪರಾಧ ಪೊಲೀಸ್ ಠಾಣೆಯ ಆಶ್ರಯದಲ್ಲಿ ಗುರುವಾರ ನಡೆದ ಸೈಬರ್ ಅಪರಾಧ ತಡೆ ಕುರಿತ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದರು. ಅಪರಿಚಿತರು ಮೊಬೈಲ್ ಫೋನ್‌ಗೆ ಕರೆ ಮಾಡಿ ನಿಮ್ಮ ಬ್ಯಾಂಕ್ ಖಾತೆಯ ವಿವರ ಕೇಳಿದರೆ ಯಾವುದೇ ಕಾರಣಕ್ಕೂ ಅದನ್ನು ನೀಡಬಾರದು. 24 ಗಂಟೆಯೊಳಗೆ ವಿವರ ನೀಡದಿದ್ದರೆ ಬ್ಯಾಂಕ್ ಖಾತೆ ರದ್ದಾಗುವುದು ಎಂದು ಬೆದರಿಕೆ ಹಾಕುವ ಸಂದೇಶಗಳನ್ನು ನಿರ್ಲಕ್ಷಿಸಬೇಕು' ಎಂದರು.

ಬ್ಯಾಂಕ್ ಖಾತೆಗೆ ಸಂಬಂಧಿಸಿದಂತೆ ಒಟಿಪಿ ಕಳಿಸುವಂತೆ ಕೇಳಿದರೆ ಸಂಬಂಧಪಟ್ಟ ಬ್ಯಾಂಕ್ ಶಾಖೆಗೆ ಫೋನ್ ಮಾಡಿ, ಖಾತರಿ ಪಡಿಸಿಕೊಳ್ಳಬೇಕು. ಈ ರೀತಿ ಒಟಿಪಿ, ಪಾಸ್‌ವರ್ಡ್ ಕೇಳಿ ಬ್ಯಾಂಕ್ ಖಾತೆಯಿಂದ ಹಣ ಎಗರಿಸುವ ವಂಚಕರ ಜಾಲ ಇದ್ದು, ಈ ಬಗ್ಗೆ ಎಚ್ಚರ ವಹಿಸಬೇಕು ಎಂದು ಕಿವಿಮಾತು ಹೇಳಿದರು. ವಿವಿಧ ಅಂತರ್ಜಾಲ ಅಪರಾಧಗಳ ಕುರಿತು ಮಾಹಿತಿ ನೀಡಿದ ಸೈಬರ್ ಪೊಲೀಸ್ ಠಾಣೆ ಸಿಬ್ಬಂದಿ ಅರವಿಂದ್, ಯಾವುದೇ ವಂಚನೆಗೆ ಒಳಗಾದಲ್ಲಿ ಹಿಂಜರಿಕೆ ಮಾಡದೆ ತಕ್ಷಣ ಪೊಲೀಸರಿಗೆ ದೂರು ನೀಡಬೇಕು ಎಂದರು.

## ಮೊಳಕಾಲ್ಮೂರಿನಲ್ಲಿ 200 ಬೆಡ್ ಆಧುನಿಕ ಸುಸಜ್ಜಿತ ಆಸ್ಪತ್ರೆ ನಿರ್ಮಾಣ: ದಿನೇಶ್ ಗಂಡೂರಾವ್


ಉದಯವಾಹಿನಿ ಚಿತ್ರ

• ಉದಯವಾಹಿನಿ ಚಿತ್ರದುರ್ಗ

> ಈಗಿರುವ ತಾಲ್ಲೂಕು ಆಸ್ಪತ್ರೆಯಲ್ಲಿ ನೂತನ ಆಸ್ಪತ್ರೆ ನಿರ್ಮಿಸಲು ಜಾಗದ ಕೊರತೆಯಿದೆ. ಇಲ್ಲಿ ಕೇವಲ 100 ಬೆಡ್ ಆಸ್ಪತ್ರೆ ನಿರ್ಮಿಸಬಹುದು. ಮುಂದೆ ಯಾವುದೇ ವಿಸ್ತರಣೆ ಕಾಮಗಾರಿ ನಡೆಸಲು ಸಾಧ್ಯವಾಗುವುದಿಲ್ಲ. ನಗರದ ಹೊರ ವಲಯದಲ್ಲಿ ಜಾಗದ ಕೊರತೆಯಿಲ್ಲ. 200 ಹಾಸಿಗೆಗಳ ಆಸ್ಪತ್ರೆಯ ಜೊತೆಗೆ ಕ್ವಾಟ್ರಸ್ ಸಹ ನಿರ್ಮಿಸಬಹುದು. ಮುಂದಿನ ದಿನಗಳಲ್ಲಿ ಅಗತ್ಯ ಬಿದ್ದರೆ ಆಸ್ಪತ್ರೆ ಮೇಲ್ದರ್ಜೆಗೆ ಏರಿಸಲು ಜಾಗದ ಕೊರತೆ ಇರುವುದಿಲ್ಲ. ಶೀಘ್ರವಾಗಿ ಆಸ್ಪತ್ರೆ ನಿರ್ಮಾಣ ಕಾಮಗಾರಿ ಆಗಬೇಕಿರುವುದರಿಂದ ಮುಂದಿನ ವಾರದಲ್ಲಿ ಬೆಂಗಳೂರಿನಲ್ಲಿ ಶಾಸಕರು ಹಾಗೂ ಇಲಾಖಾ ಉನ್ನತ ಅಧಿಕಾರಿಗಳೊಂದಿಗೆ ಚರ್ಚಿಸಿ, ಸೂಕ್ತ ನಿರ್ಧಾರ ಕೈಗೊಳ್ಳಲಾಗುವುದು. ಸದ್ಯ ಮೊಳಕಾಲ್ಮೂರು ತಾಲ್ಲೂಕು ಆಸ್ಪತ್ರೆಗೆ ಆರ್ಥೋಪಿಡಿಕ್ ಸರ್ಜನ್ ನೇಮಕ ಮಾಡಲಾಗಿದ್ದು, 3 ದಿನದ ಒಳಗಾಗಿ ಸಿ.ಆರ್.ಮಿಷನ್ ಆಸ್ಪತ್ರೆಗೆ ಬರಲಿದೆ. -ದಿನೇಶ್ ಗಂಡೂರಾವ್

ಮೊಳಕಾಲ್ಮೂರು ಪಟ್ಟಣದಲ್ಲಿ 200 ಹಾಸಿಗೆಗಳ ಆಧುನಿಕವಾದ ಸುಸಜ್ಜಿತ ಆಸ್ಪತ್ರೆ ನಿರ್ಮಾಣಕ್ಕೆ ಸರ್ಕಾರ ಈಗಾಗಲೇ ಅನುಮೋದನೆ ನೀಡಿದೆ. ಇದಕ್ಕಾಗಿ 100 ಕೋಟಿ ರೂ. ಅನುದಾನ ಮೀಸಲು ಇರಿಸಲಾಗಿದೆ. ಈಗಿರುವ ಆಸ್ಪತ್ರೆ ಆವರಣದಲ್ಲಿಯೇ ನೂತನ ಆಸ್ಪತ್ರೆ ನಿರ್ಮಿಸಬೇಕೇ? ಅಥವಾ ಪಟ್ಟಣದ ಹೊರ ವಲಯದಲ್ಲಿ ಗುರುತಿಸಲಾಗಿರುವ 5 ಎಕರೆ ಜಾಗದಲ್ಲಿ ನಿರ್ಮಿಸಬೇಕೆ ಎಂಬುದನ್ನು ಸ್ಥಳೀಯ ಜನಪ್ರತಿನಿಧಿಗಳೊಂದಿಗೆ ಚರ್ಚಿಸಿ ಸೂಕ್ತ ನಿರ್ಧಾರ ಕೈಗೊಳ್ಳುವುದಾಗಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದರು. ನೂತನ ಆಸ್ಪತ್ರೆ ನಿರ್ಮಾಣ ಸಂಬಂಧವಾಗಿ ಮೊಳಕಾಲ್ಮೂರಿನ ತಾಲ್ಲೂಕು ಆಸ್ಪತ್ರೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದರು.

ಪಟ್ಟಣದಲ್ಲಿ ಸುಸಜ್ಜಿತ ಆಸ್ಪತ್ರೆ ನಿರ್ಮಿಸಬೇಕು ಎಂಬುದು ಶಾಸಕ ಎನ್.ವೈ. ಗೋಪಾಲಕೃಷ್ಣ ಅವರ ಒತ್ತಾಸೆಯಾಗಿತ್ತು. ಇದಕ್ಕೆ ಸ್ಪಂದಿಸಿರುವ ಸರ್ಕಾರ ಅನುದಾನ ಒದಗಿಸಿದೆ. ಈ ಯೋಜನೆಯಲ್ಲಿಯೇ ಆಸ್ಪತ್ರೆಗೆ ಅಗತ್ಯ ಇರುವ ವೈದ್ಯಕೀಯ ಉಪಕರಣ, ವಸತಿ ಸಮುಚ್ಚಯ ನಿರ್ಮಾಣ ವೆಚ್ಚವನ್ನು ಸೇರಿಸಿ ವಿಸ್ತತ ಯೋಜನಾ ವರದಿ ಸಿದ್ದಪಡಿಸಲಾಗುವುದು. ಮುಂದಿನ ತಿಂಗಳು ಕೌನ್ಸಿಲಿಂಗ್ ಮೂಲಕ ರಾಜ್ಯದ ಎಲ್ಲಾ ತಾಲ್ಲೂಕು ಆಸ್ಪತ್ರೆಗಳಲ್ಲಿ ತಲಾ ಇಬ್ಬರು ಹೆರಿಗೆ, ಮಕ್ಕಳ ಹಾಗೂ ಅರವಳಿಕೆ ತಜ್ಞರನ್ನು ನೇಮಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಈ ಮೂಲಕ ತಾಲ್ಲೂಕು ಆಸ್ಪತ್ರೆಗಳಲ್ಲಿ 24 ಗಂಟೆಯೂ ವೈದ್ಯರ ಸೇವೆ ದೊರಕುವಂತೆ ಮಾಡಲಾಗುವುದು. ಟೆಕ್ನೀಶಿಯನ್‌ಗಳ ನೇಮಕ ಮಾಡಿ ಎಲ್ಲ ಸಮಸ್ಯೆಗಳನ್ನು ಬಗಹರಿಸಲು ಪ್ರಯತ್ನಿಸಲಾಗುವುದು ಎಂದು ಸಚಿವ ಗುಂಡೂರಾವ್ ಹೇಳಿದರು. ಈ ವೇಳೆ ಶಾಸಕ ಎನ್.ವೈ. ಗೋಪಾಲಕೃಷ್ಣ, ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ.ಯೋಗೇಶ್ ಬಾಬು, ಜಿಲ್ಲಾ ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷ ಆರ್.ಶಿವಣ್ಣ, ಉಪಾಧ್ಯಕ್ಷ ಡಿ.ಎನ್.ಮೈಲಾರಪ್ಪ, ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ತಾಜ್‌ಪೀರ್, ಉಪವಿಭಾಗಾಧಿಕಾರಿ ಮೆಹಬೂಬ್ ಜಿಲಾನಿ ಖುರೇಷಿ, ಸೇರಿದಂತೆ ಆರೋಗ್ಯ ಇಲಾಖೆಯ ವಿವಿಧ ಅಧಿಕಾರಿಗಳು, ಗಣ್ಯರು, ಮತ್ತಿತರರು ಇದ್ದರು.

## ಕಬ್ಬಿಗೆ ರೂ.3,300 ನೀಡಲು ರೈತರ ಪಟ್ಟು: ಪ್ರತಿಭಟನೆ

• ಉದಯವಾಹಿನಿ ಬೆಳಗಾವಿ

ಕಬ್ಬಿಗೆ ಸೂಕ್ತ ದರ ನಿಗದಿ ಹಾಗೂ ರಿಕವರಿಗೆ ಸಂಬಂಧಿಸಿದಂತೆ. ಇಲ್ಲಿನ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆಯಲ್ಲಿ ನಡೆದ ಸಭೆ ಗೊಂದಲ ಗೂಡಾಯಿತು. ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಹಾಗೂ ಕಾರ್ಖಾನೆಗಳ ಆಡಳಿತ ಮಂಡಳಿಗಳ ಜತೆಗೆ ರೈತರು ತೀವ್ರ ವಾಗ್ವಾದ ನಡೆಸಿದರು. ತಮ್ಮ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಕೆಲಕಾಲ ಪ್ರತಿಭಟನೆ ಕೂಡ ಮಾಡಿದರು. ಜಿಲ್ಲೆಯ ಎಲ್ಲಾ 26 ಸಕ್ಕರೆ ಕಾರ್ಖಾನೆಗಳೂ ಈಗ ಕಬ್ಬು ಹಂಗಾಮು ಆರಂಭಿಸಿವೆ. ಕೆಲವೇ ದಿನಗಳಲ್ಲಿ ಕಬ್ಬು ನುರಿಸಲು ಶುರು ಮಾಡುತ್ತವೆ. ಆದರೆ, ಇದೂವರೆಗೂ ಯಾವುದೇ ಕಾರ್ಖಾನೆ ನಿಗದಿತ ದರ ಘೋಷಣೆ ಮಾಡಿಲ್ಲ. ಜಿಲ್ಲಾಡಳಿತ ಅಥವಾ ಸಕ್ಕರೆ ಸಂಸ್ಥೆಯು ಈ ವಿಚಾರದಲ್ಲಿ ಯಾವುದೇ ಕ್ರಮ ವಹಿಸಿಲ್ಲ' ಎಂದು ಕೆಲವು ರೈತರು ಸಭೆಯ ಆರಂಭಕ್ಕೇ ಆಕ್ರೋಶ ಹೊರಹಾಕಿದರು.

'ಈಗಾಗಲೇ ಕೇಂದ್ರ ಸರ್ಕಾರ ಎಫ್‌ಆರ್‌ಪಿ ದರ ಘೋಷಣೆ ಮಾಡಿದೆ. ಆದರೆ, ಕಾರ್ಖಾನೆಗಳು ಸಕ್ಕರೆ ಅಂಶ (ರಿಕವರಿ) ಬಹಿರಂಗ ಪಡಿಸುತ್ತಿಲ್ಲ. ಕಳೆದ ಸಾಲಿನಲ್ಲಿ ಟನ್ ಕಬ್ಬಿಗೆ ರೂ.3,500 ದರ ಘೋಷಣೆ ಮಾಡಲಾಗಿದ್ದರೂ ಕಾರ್ಖಾನೆಗಳು ರೂ.3,000 ಮಾತ್ರ ನೀಡಿವೆ. ಈ ವರ್ಷ ದರ ನಿಗದಿ ಮಾಡುವವರೆಗೂ ಕಬ್ಬು ನುರಿಸಲು ಅನುಮತಿ ಕೊಡಬಾರದು ಎಂದು ಪಟ್ಟು ಹಿಡಿದರು.


ಉದಯವಾಹಿನಿ ಚಿತ್ರ

ಮಹಾರಾಷ್ಟ್ರದಲ್ಲಿ ಕಾರ್ಖಾನೆಗಳು ರೂ. 3,450 ದರ ನೀಡುತ್ತಿವೆ. ಅಲ್ಲಿಗಿಂತ ಉತ್ತಮ ಕಬ್ಬು ನಮ್ಮಲ್ಲಿ ಬೆಳೆಯುತ್ತದೆ. ಕರ್ನಾಟಕದಲ್ಲಿ ಮಾತ್ರ ಏಕೆ ದರ ಪರಿಷ್ಕರಣೆ ಮಾಡುತ್ತಿಲ್ಲ. ಇದರಲ್ಲಿ ಏನು ಹುನ್ನಾರವಿದೆ ಎಂದೂ ಆಕ್ರೋಶ ಹೊರಹಾಕಿದರು.

ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿ, ಪ್ರಸಕ್ತ ವರ್ಷದಿಂದ ಟನ್ ಕಬ್ಬಿಗೆ ರೂ.50 ಹೆಚ್ಚು ಮಾಡುವಂತೆ ನಿರ್ದೇಶನ ನೀಡಲಾಗುವುದು ಎಂದರು. ಇದರಿಂದ ಕೋಪಗೊಂಡ ರೈತರು, ರೈತರಿಗೆ ಭಿಕ್ಷೆ ನೀಡುತ್ತಿದ್ದೀರೇ? ಕನಿಷ್ಠ ರೂ. 300 ಹೆಚ್ಚಳ ಮಾಡಬೇಕು. ಇಲ್ಲದಿದ್ದರೆ ಹೋರಾಟ ಅನಿವಾರ್ಯವಾಗುತ್ತದೆ ಎಂದರು. ಆಗ ಸಭೆಯಲ್ಲಿ ಗದ್ದಲ ಉಂಟಾಯಿತು. ಅಧಿಕಾರಿಗಳನ್ನು ಒಳಗಡೆಯೇ ಕೂಡಿಹಾಕಿ ಹೊರಬಂದ ರೈತರು ಆವರಣದಲ್ಲಿ ಘೋಷಣೆ ಮೊಳಗಿಸಿದರು.

## ನ. 6 ರೊಳಗೆ ಹೆಸರು ನೋಂದಾಯಿಸಲು ಮನವಿ

• ಉದಯವಾಹಿನಿ ಧಾರವಾಡ

ಕರ್ನಾಟಕ ಪಶ್ಚಿಮ ಪದವೀಧರ ಮತಕ್ಷೇತ್ರದ ಚುನಾವಣೆಗೆ ಸಂಬಂಧಿಸಿದಂತೆ ಧಾರವಾಡ ಜಿಲ್ಲೆಯಲ್ಲಿ 1 ನೇ ನವೆಂಬರ 2025 ಕ್ಕೆ ಮುಂಚೆ ಕನಿಷ್ಟ 3 ವರ್ಷಗಳಷ್ಟು ಮೊದಲು ಭಾರತದಲ್ಲಿರುವ ಯಾವುದಾದರೊಂದು ವಿಶ್ವವಿದ್ಯಾಲಯದ ಪದವೀಧರನಾಗಿರುವ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರುವ ಪ್ರತಿಯೊಬ್ಬ ವ್ಯಕ್ತಿಯು ನವೆಂಬರ್ 06, 2025 ರೊಳಗಾಗಿ ತಮ್ಮ ಹೆಸರುಗಳನ್ನು ಮತದಾರರ ಪಟ್ಟಿಯಲ್ಲಿ ಸೇರ್ಪಡೆ ಮಾಡಿಕೊಳ್ಳಲು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.



ಈ ಕುರಿತು ಪ್ರಕಟಣೆ ನೀಡಿರುವ ಅವರು, ಕರ್ನಾಟಕ ಪಶ್ಚಿಮ ಪದವೀಧರ ಮತಕ್ಷೇತ್ರದ ಮತದಾರರ ಪಟ್ಟಿಗೆ ಅರ್ಹರ ಹೆಸರು ಸೇರ್ಪಡೆಗೆ ಅನುಕೂಲವಾಗುವಂತೆ ಧಾರವಾಡ ಜಿಲ್ಲೆಯಲ್ಲಿ ಮಹಾನಗರ ಪಾಲಿಕೆ ಸೇರಿದಂತೆ ಎಲ್ಲಾ ತಾಲ್ಲೂಕುಗಳಲ್ಲಿ 18 ಜನ ಅಧಿಕಾರಿಗಳನ್ನು ಸಹಾಯಕ ಮತದಾರ ನೋಂದಣಾಧಿಕಾರಿಗಳನ್ನಾಗಿ ಮತ್ತು 10 ಜನ ಅಧಿಕಾರಿಗಳನ್ನು ನಿಯೋಜಿತ ಅಧಿಕಾರಿಗಳನ್ನಾಗಿ ಈಗಾಗಲೇ ನೇಮಿಸಿ, ಕರ್ನಾಟಕ ಪಶ್ಚಿಮ ಪದವೀಧರರ ಕ್ಷೇತ್ರದ ಮತದಾರರ ನೋಂದಣಾಧಿಕಾರಿಗಳು ಆಗಿರುವ ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರು ಆದೇಶ ಹೊರಡಿಸಿದ್ದಾರೆ. ನಿಯೋಜಿತ ಎಲ್ಲಾ ಅಧಿಕಾರಿಗಳು ಮತದಾರರ ಪಟ್ಟಿಗೆ ಸೇರಲು ಅರ್ಹ ಮತದಾರರು ಸಲ್ಲಿಸುವ ಅರ್ಜಿಗಳನ್ನು ಪರಿಶೀಲಿಸಿ, ಸ್ವೀಕರಿಸುತ್ತಿದ್ದಾರೆ ಎಂದು ಅವರು ತಿಳಿಸಿದ್ದಾರೆ.

ಕರ್ನಾಟಕ ಪಶ್ಚಿಮ ಪದವೀಧರ ಮತಕ್ಷೇತ್ರದ ಮತದಾರರ ಪಟ್ಟಿಗೆ ಸೇರ್ಪಡೆಯಾಗಲು ಅರ್ಹರು ನಮೂನೆ-18 ರಲ್ಲಿ ಮಾಹಿತಿಯನ್ನು ಭರ್ತಿ ಮಾಡಿ, ಅರ್ಜಿಯೊಂದಿಗೆ ಪದವಿ ಪ್ರಮಾಣಪತ್ರವನ್ನು ಪತ್ರಾಂಕಿತ ಅಧಿಕಾರಿಯ ಮೇಲು ರುಜು ಮಾಡಿಸಿ, ವಿಳಾಸದ ದಾಖಲೆಗಾಗಿ ಮತದಾರರ ಗುರುತಿನ ಚೀಟಿ ಅಥವಾ ಆಧಾರ ಕಾರ್ಡ ಅಥವಾ ರೇಷನ್ ಕಾರ್ಡ ಅಥವಾ ಇಂಡಿಯನ್ ಪಾಸ್‌ಪೋರ್ಟ್ ಅಥವಾ ಡ್ರೈವಿಂಗ್ ಲೈಸನ್ಸ್ ಇವುಗಳಲ್ಲಿ ಯಾವುದಾದರೂ ಒಂದು ದಾಖಲೆಗಳೊಂದಿಗೆ ಅರ್ಜಿಯನ್ನು ಸಂಬಂಧಿಸಿದ ಸಹಾಯಕ ಮತದಾರರ ನೋಂದಣಾಧಿಕಾರಿಗಳಲ್ಲಿ ಅಥವಾ ಗೊತ್ತುಪಡಿಸಿದ ನಿಯೋಜಿತ ಅಧಿಕಾರಿಗಳಿಗೆ ಸಲ್ಲಿಸಬೇಕು ಎಂದು ಅವರು ಹೇಳಿದ್ದಾರೆ. ಆದ್ದರಿಂದ ಜಿಲ್ಲೆಯ ಅರ್ಹ ಪದವಿಧರ ಮತದಾರರು ಕರ್ನಾಟಕ ಪಶ್ಚಿಮ ಪದವೀಧರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಣಿ ಮಾಡಿಕೊಳ್ಳುವದರ ಮೂಲಕ, ಈ ಪ್ರಕ್ರಿಯೆಯನ್ನು ಯಶಸ್ವಿಗೊಳಿಸಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಂಪ್ ಸ್ಟೋರೇಜ್ ಪರಿಸರಕ್ಕೆ ಮಾರಕ; ಬೇಡವೇ ಬೇಡ: ಸ್ವಾಮೀಜಿ

• ಉದಯವಾಹಿನಿ ಶಿವಮೊಗ್ಗ

ಈಗಾಗಲೇ ಹತ್ತು-ಹಲವು ಯೋಜನೆಗಳಿಂದ ಪಶ್ಚಿಮಘಟ್ಟ ಪ್ರದೇಶ ತತ್ತರಿಸಿ ಹೋಗಿದೆ. ಈ ಹೊತ್ತಿನಲ್ಲಿ ರಾಜ್ಯ ಸರ್ಕಾರದ ಪ್ರಸ್ತಾವಿತ ಶರಾವತಿ ಪಂಪ್ ಸ್ಟೋರೇಜ್ ಯೋಜನೆ ಪರಿಸರಕ್ಕೆ ಮಾರಕವಾಗಿದ್ದು, ಅದು ಬೇಡವೇ ಬೇಡ ಎಂದು ಸೋಂದಾ ಸ್ವರ್ಣವಲ್ಲಿ ಮಹಾಸಂಸ್ಥಾನ ಮಠದ ಜಗದ್ಗುರು ಗಂಗಾಧರೇಂದ್ರ ಸರಸ್ವತಿ ಸ್ವಾಮೀಜಿ ಹೇಳಿದರು. ಶರಾವತಿ ಪಂಪ್ಸ್ ಸ್ಟೋರೇಜ್ ಯೋಜನೆ ವಿರೋಧಿಸಿ ಇಲ್ಲಿನ ಶೃಂಗೇರಿ ಶಂಕರಮಠದಲ್ಲಿ ಪರ್ಯಾವರಣ ಟ್ರಸ್ಟ್, ರಾಷ್ಟ್ರೀಯ ಸ್ವಾಭಿಮಾನಿ ಆಂದೋಲನ ಮತ್ತು ನಿರ್ಮಲ ತುಂಗಾಭದ್ರಾ ಅಭಿಯಾನದ ಪದಾಧಿಕಾರಿಗಳೊಡನೆ ಚಿಂತನಾ ಸಭೆ ನಡೆಸಿ ಮಾತನಾಡಿದರು.

ಸಾಧಕ-ಬಾಧಕಗಳ ಲೆಕ್ಕಾಚಾರವಿಲ್ಲದೇ ಈಗಾಗಲೇ ಸರ್ಕಾರ ಜಾರಿಗೊಳಿಸಿರುವ ಹಲವು ಯೋಜನೆಗಳು ಪಶ್ಚಿಮಘಟ್ಟಕ್ಕೆ ವಿನಾಶಕಾರಿಯಾಗಿ ಪರಿಣಮಿಸಿವೆ. ಭೂಕುಸಿತ, ಅರಣ್ಯನಾಶದಂತಹ ಅವಘಡ ನಿರಂತರವಾಗಿ ಜರುಗುತ್ತಿವೆ. ಈಗ ಮತ್ತೆ ಪಂಪ್ಸ್ ಸ್ಟೋರೇಜ್ ಯೋಜನೆಯಡಿ ನೆಲದೊಳಗೆ ಸುರಂಗಮಾರ್ಗ ತೋಡುವುದರಿಂದ ಅಪಾಯ ತಪ್ಪಿದ್ದಲ್ಲ ಎಂದು ಹೇಳಿದರು.

ವಿಶೇಷವಾಗಿ ಬೇಡ್ತಿ-ಅಘನಾಶಿನಿ, ಅಘನಾಶಿನಿ-ವೇದಾವತಿ ಯೋಜನೆಗಳಲ್ಲಿ ಈ ಲೆಕ್ಕಾಚಾರಗಳಿಲ್ಲದ ಯೋಚನೆಯನ್ನು ಕಾಣಬಹುದು. ಎತ್ತಿನಹೊಳೆ ಯೋಜನೆಯಲ್ಲಿ ಇಂತಹುದೇ ಲೆಕ್ಕಾಚಾರಗಳಿಲ್ಲದ ಕೆಲಸವಾಗಿದೆ ಎಂದು ವಿಷಾದ ವ್ಯಕ್ತಪಡಿಸಿದರು.


ಉದಯವಾಹಿನಿ ಚಿತ್ರ

ಪ್ರಾಸ್ತಾವಿಕವಾಗಿ ಮಾತನಾಡಿದ ಪರಿಸರ ಹೋರಾಟಗಾರ ಎಲ್.ಕೆ. ಶ್ರೀಪತಿ, ವಿಜ್ಞಾನಿಗಳ ಪ್ರಕಾರ ಶರಾವತಿ ಕಣಿವೆಯಲ್ಲಿ ಪಂಪ್ಸ್ ಸ್ಟೋರೇಜ್ ಯೋಜನೆ ಪರಿಸರಕ್ಕೆ ಮಾರಕವಾಗಿದೆ. ಈಗಾಗಲೇ ಅದಕ್ಕೆ ಟೆಂಡರ್ ಕರೆಯಲಾಗಿದೆ ಎಂದರು. ಈ ಯೋಜನೆಯ ಬಗ್ಗೆ ಸಂಪೂರ್ಣ ಮಾಹಿತಿ ಕೇಳಿದರೆ ರಾಷ್ಟ್ರೀಯ ಹಿತಾಸಕ್ತಿಯ ನೆಪ ಹೇಳಿ ಕರ್ನಾಟಕ ವಿದ್ಯುತ್ ನಿಗಮ ನಿಯಮಿತ (ಕೆಪಿಸಿಎಲ್) ನಿರಾಕರಣೆ ಮಾಡುತ್ತಿದೆ. ಕಾರ್ಯಸಾಧ್ಯತಾ ವರದಿಯಲ್ಲಿ ವಿದ್ಯುತ್ ಉತ್ಪಾದನೆಗೆ ತಗುಲುವ ವೆಚ್ಚದ ಬಗ್ಗೆ ಯಾವ ಮಾಹಿತಿಯೂ ಇಲ್ಲ, ಆರ್ಥಿಕವಾಗಿಯೂ ಈ ಯೋಜನೆಯಿಂದ ಯಾವ ಪ್ರಯೋಜನ ಆಗುವುದಿಲ್ಲ ಎಂದು ವಿವರಿಸಿದರು. ಜಗತ್ತಿನ ಜೀವವೈವಿಧ್ಯ ತಾಣಗಳಲ್ಲಿ ಒಂದಾದ ಶರಾವತಿ ಕೊಳ್ಳದಲ್ಲಿ ಅಳಿವಿನಂಚಿಗಿರುವ ಸಿಂಗಳೀಕ, ಮಂಗಟ್ಟೆ ಹಕ್ಕಿಗಳ ಆವಾಸಸ್ಥಾನ ಇದೆ. ಪಂಪ್ ಸ್ಟೋರೇಜ್ ಜಾರಿಗೊಂಡರೆ ಅದು ಬರಿದಾಗಲಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ನಿರ್ಮಲ ತುಂಗಾಭದ್ರಾ ಅಭಿಯಾನದ ಸಂಚಾಲಕ ಎಂ. ಶಂಕರ್, ರಾಷ್ಟ್ರೀಯ ಸ್ವಾಭಿಮಾನಿ ಆಂದೋಲನದ ದಕ್ಷಿಣ ಭಾರತದ ಪ್ರಮುಖ ವಿ.ಪಿ. ಮಾಧವನ್, ಮಾಜಿ ಶಾಸಕ ಮಹಿಮಾ ಪಟೇಲ್, ಪರ್ಯಾವರಣ ಟ್ರಸ್ಟಿನ ಬಾಲಕೃಷ್ಣನಾಯ್ಡು, ಬಾಲಕೃಷ್ಣ ಹೆಗಡೆ, ವರದರಾಜ್, ದಿನೇಶ್‌ಕುಮಾರ್ ಇದ್ದರು.

> ಆಹಾರ ಬೆಳೆ ಬೆಳೆಯುವ ಜಾಗದಲ್ಲಿ ಅಡಿಕೆ ಬೆಳೆಯಲಾಗುತ್ತಿದೆ. ಭವಿಷ್ಯದಲ್ಲಿ ಮನುಕುಲದ ಆಹಾರ ವ್ಯವಸ್ಥೆಗೆ ಇದರಿಂದ ಪೆಟ್ಟುಬೀಳುವ ಸಂಭವವಿದೆ. ಅಡಿಕೆ ಆಹಾರ ಬೆಳೆಯಲ್ಲ, ಅದಕ್ಕೆ ನೀರಿನ ಬಳಕೆ ಹೆಚ್ಚಿದೆ. ಇದರಿಂದ ಅಂತರ್ಜಲಮಟ್ಟ ಕುಸಿಯುತ್ತಿದೆ. -ಸ್ವಾಮೀಜಿ

## ಬೆಳೆ ವಿಮೆ ಅರಿವು ಮೂಡಿಸಿ: ಪಿ.ಸಿ. ಗದ್ದಿಗೌಡರ

• ಉದಯವಾಹಿನಿ ಬಾಗಲಕೋಟೆ

ಬೆಳೆ ಹಾನಿ ಅಪಾಯ ತಪ್ಪಿಸಲು ರೈತರಲ್ಲಿ ಬೆಳೆ ವಿಮೆ ಬಗ್ಗೆ ಹೆಚ್ಚಿನ ಅರಿವು ಮೂಡಿಸುವ ಕಾರ್ಯ ಮಾಡಬೇಕು ಎಂದು ಸಂಸದ ಪಿ.ಸಿ. ಗದ್ದಿಗೌಡರ ಸೂಚಿಸಿದರು.

ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ನಡೆದ 'ದಿಶಾ' ಪ್ರಗತಿ ಪರಿಶೀಲನಾ ಸಭೆ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಈ ಬಾರಿ ಮೊದಲಿಗಿಂತ ಅಧಿಕ ಪ್ರಮಾಣದಲ್ಲಿ ಈರುಳ್ಳಿ, ದಾಳಿಂಬೆ ಬೆಳೆಯಲಾಗಿದ್ದು, ರೈತರು ಮೊದಲೇ ಬೆಳೆ ವಿಮೆ ಮಾಡಿಸಿಕೊಂಡಿದ್ದಲ್ಲಿ, ಬೆಳೆ ಹಾನಿಯಂತಹ ಅಪಾಯವನ್ನು ಸಮರ್ಥವಾಗಿ ಎದುರಿಸಬಹುದಾಗಿದೆ ಎಂದರು.

ಬಾಗಲಕೋಟೆ-ಕುಡಚಿ ರೈಲು ಮಾರ್ಗ ಕಾಮಗಾರಿ ಸ್ಥಿತಿ ಪರಿಶೀಲಿಸಿ, ಕೇಂದ್ರದಲ್ಲಿ ಅನುದಾನ ಮತ್ತು ಸಂಪನ್ಮೂಲಕ್ಕೆ ಕೊರತೆ ಇರುವುದಿಲ್ಲ, ಆದರೆ, ಭೂ ಮಾಲೀಕರ ಕುಟುಂಬ ವ್ಯಾಜ್ಯದಿಂದಾಗಿ ಯೋಜನೆ ವಿಳಂಬವಾಗಿದೆ. ಸ್ಥಳಿಯ ಸಮಸ್ಯೆಗಳನ್ನು ಬೇಗ ಪರಿಹರಿಸಬೇಕು ಎಂದು ಜಿಲ್ಲಾಡಳಿತ, ರೈಲ್ವೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಲಜೀವನ್ ಮಿಷನ್ ಯೋಜನೆಯಡಿ ಪೂರ್ಣಗೊಳಿಸಿರುವಂತಹ 608 ಕಾಮಗಾರಿಗಳಲ್ಲಿ ಯಾವುದಾದರೂ ಒಂದು ದೂರು ಬಂದರೂ ಕೂಡ ತಕ್ಷಣ ಪರಿಶೀಲಿಸಬೇಕು. ಪ್ರಧಾನಮಂತ್ರಿ ಆವಾಸ್ ಯೋಜನೆ ಮೊತ್ತ ಹೆಚ್ಚಿಸುವಂತೆ ಸರ್ಕಾರಕ್ಕೆ ಮನವಿ ಮಾಡಲಾಗುವುದು. ಎರಡನೇ ಹಂತದಲ್ಲಿರುವ ಪ್ರಧಾನಮಂತ್ರಿ ಆವಾಸ್ ಯೋಜನೆ ಫಲಾನುಭವಿಗಳ ಅಂಕಿ-ಸಂಖ್ಯೆ ಮಾಹಿತಿ ನೀಡುವಂತೆ ತಿಳಿಸಿದರು.

ಕಾರ್ಮಿಕ ಇಲಾಖೆಯ ವಿವಿಧ ಯೋಜನೆಗಳಿಗೆ ಸಾಕಷ್ಟು ಜನರು ನೋಂದಣಿ ಮಾಡಿಕೊಂಡಿದ್ದು, ನಿಜವಾದ ಕಾರ್ಮಿಕರನ್ನ ಗುರುತಿಸಿ ಫಲಾನುಭವಿಗಳಿಗೆ ಸೌಲಭ್ಯ ನೀಡುವ ಕೆಲಸ ಅಧಿಕಾರಿಗಳಿಂದ ಆಗಬೇಕು ಎಂದು ಸೂಚಿಸಿದರು.


ಉದಯವಾಹಿನಿ ಚಿತ್ರ

> ಜಿಲ್ಲೆಯಲ್ಲಿ ಪೋಕ್ಸೋ ಪ್ರಕರಣಗಳ ನಿಯಂತ್ರಣಕ್ಕೆ ಸೂಕ್ತ ಜಾಗೃತಿ ಅಗತ್ಯವಾಗಿದೆ. ಪ್ರಕರಣಗಳಲ್ಲಿ ಶಿಕ್ಷೆಗೊಳಗಾದವರ ಮತ್ತು ದಂಡದ ಮೊತ್ತದ ಕುರಿತು ಪ್ರಚಾರ ನೀಡಿದಲ್ಲಿ ಭಯದಿಂದ ಪ್ರಕರಣಗಳ ಸಂಖ್ಯೆ ಕಡಿಮೆಯಾಗುತ್ತವೆ. ಗ್ರಾಮೀಣ ಪ್ರದೇಶಗಳಲ್ಲಿ ಕಾನೂನಿನ ಕುರಿತು ಅರಿವು ಮೂಡಿಸುವ ಕೆಲಸ ಮಾಡಬೇಕು. -ಪಿ.ಸಿ. ಗದ್ದಿಗೌಡರ

## ನಾಡಿನ ಮನೆ, ಮನದ ಬಿಕ್ಕಟ್ಟು ತೊಲಗಿ ಒಗ್ಗಟ್ಟು ಮೂಡಲಿ

### ಧರ್ಮ ಮತ್ತು ಭಾವೈಕ್ಯತೆ ಭಾರತದ ಉಸಿರಾಗಿದೆ: ಪ್ರಸನ್ನರೇಣುಕ ವೀರಸೋಮೇಶ್ವರ ಸ್ವಾಮೀಜಿ

• ಉದಯವಾಹಿನಿ ಕುಷ್ಟಗಿ

ಧರ್ಮ ಮತ್ತು ಭಾವೈಕ್ಯತೆ ಭಾರತದ ಉಸಿರಾಗಿದೆ. ಇಲ್ಲಿಯ ಪರಂಪರೆ ಮತ್ತು ಸಂಸ್ಕೃತಿ ಅತ್ಯಂತ ಶ್ರೀಮಂತವಾಗಿದ್ದು, ಸರ್ವ ಜನಾಂಗದ ತೋಟ ಎಂದೆ ಬಿಂಬಿಸಿಕೊಳ್ಳುತ್ತಿರುವ ನಮ್ಮ ನಾಡಿನ ಮನೆ ಮನಗಳಲ್ಲಿ ಉದ್ಭವಿಸಿರುವ ಬಿಕ್ಕಟ್ಟು ತೊಲಗಿ ಒಗ್ಗಟ್ಟು ಮೂಡಬೇಕಿದೆ' ಎಂದು ರಂಭಾಪುರ ಪೀಠದ ಪ್ರಸನ್ನರೇಣುಕ ವೀರಸೋಮೇಶ್ವರ ಸ್ವಾಮೀಜಿ ಹೇಳಿದರು.

ತಾಲ್ಲೂಕಿನ ಚಳಗೇರಾ ಹಿರೇಮಠದ ಲಿಂಗೈಕ್ಯ ವಿರೂಪಾಕ್ಷಲಿಂಗ ಶಿವಾಚಾರ್ಯ ಸ್ವಾಮಿಯವರ 11ನೇ ವರ್ಷದ ಪುಣ್ಯಸ್ಮರಣೆ ಹಾಗೂ ನವೀಕೃತ ಹಿರೇಮಠದ ಉದ್ಘಾಟನೆ ಸಂದರ್ಭದಲ್ಲಿ ಹಮ್ಮಿಕೊಳ್ಳಲಾಗಿದ್ದ ಜನಜಾಗೃತಿ ಧರ್ಮಸಭೆ ಸಾನ್ನಿಧ್ಯವಹಿಸಿ ಮಾತನಾಡಿದ, ಕಾವಿ, ಖಾಕಿ ಮತ್ತು ಖಾದಿ ಈ ಮೂರು ವರ್ಗಗಳು ನಿರ್ಮಲ ಮತ್ತು ಪ್ರಾಂಜಲ ಮನಸ್ಸಿನಿಂದ ಶ್ರಮಿಸಿದರೆ ಜನ ಕಲ್ಯಾಣ ಸಾಧ್ಯವಾಗುತ್ತದೆ' ಎಂದು ಹೇಳಿದರು.

> ನಾಡಿನ ಮಠಗಳು ಹಾಗೂ ದೇವಸ್ಥಾನಗಳು ನಮ್ಮ ಸಂಸ್ಕೃತಿಯ ಸಂವರ್ಧನಾ ಕೇಂದ್ರಗಳಾಗಿದ್ದು ಜನ ಮನವನ್ನು ತಿದ್ದುವ ಮತ್ತು ರಾಷ್ಟ್ರಾಭಿಮಾನ ಬೆಳೆಸುವ ತಾಣಗಳೂ ಆಗಿವೆ. ಇದನ್ನು ಅರಿತು ಜನರು ಸಾತ್ವಿಕ ಮತ್ತು ಅಷ್ಟೇ ಸಮೃದ್ಧವಾದ ನಾಡನ್ನು ಕಟ್ಟಲು ಪ್ರಾಮಾಣಿಕ ಪ್ರಯತ್ನ ಮಾಡಬೇಕಾಗಿದೆ. ಧ್ಯಾನ, ಜ್ಞಾನ ಮತ್ತು ಆಧ್ಯಾತ್ಮಿಕ ಚಿಂತನೆಗಳಿಂದ ವ್ಯಕ್ತಿಯ ಆತ್ಮಸ್ಥೈರ್ಯ ಮತ್ತು ಮನೋಬಲ ವೃದ್ಧಿಸುತ್ತದೆ. ಸದೃಢ ರಾಷ್ಟ್ರನಿರ್ಮಾಣದಲ್ಲಿ ಯುವಕರ ಪಾತ್ರ ದೊಡ್ಡದಾಗಿದ್ದು, ಆಲಸ್ಯ ಮತ್ತು ದುರ್ವ್ಯಸನಗಳಿಂದ ದೂರವಾಗಿ ಒಳ್ಳೆಯ ಸಮಾಜವನ್ನು ಕಟ್ಟಿ ಬೆಳೆಸುವ ನಿಟ್ಟಿನಲ್ಲಿ ಯುವ ಜನಾಂಗ ಗಟ್ಟಿ ಹೆಜ್ಜೆಯನ್ನಿಡಬೇಕು. -ವೀರಸೋಮೇಶ್ವರ ಸ್ವಾಮೀಜಿ


ಉದಯವಾಹಿನಿ ಚಿತ್ರ

**ಶ್ರಮಿಸಿದರೆ ಜನ ಕಲ್ಯಾಣ ಸಾಧ್ಯ**

ವಿರೂಪಾಕ್ಷಲಿಂಗ ಶಿವಾಚಾರ್ಯ ಸ್ವಾಮೀಜಿ ಮಾತು ಮನ ಮತ್ತು ಕೃತಿಯಿಂದ ಒಂದಾಗಿ ಬಾಳಿದವರು. ಸರಳ, ಸಜ್ಜನಿಕೆಯ ಸಾಕಾರ ಮೂರ್ತಿಗಳಾಗಿದ್ದ ಅವರು ನಿರ್ವಹಿಸಿದ ಪೂಜೆ, ತೋರಿದ ದಾರಿ ಮತ್ತು ಭಕ್ತರ ಮೇಲೆ ಇರಿಸಿದ್ದ ವಾತ್ಸಲ್ಯ ಅವರ ಜೀವನದ ಶ್ರೇಯಸ್ಸಿಗೆ ಕಾರಣವಾಯಿತು' ಎಂದು ಬಣ್ಣಿಸಿದರು. ಉಜ್ಜಯಿನಿ ಪೀಠದ ಸಿದ್ಧಲಿಂಗರಾಜ ಶಿವಾಚಾರ್ಯರು ಮಾತನಾಡಿ, ವಿಜ್ಞಾನ ಮನುಕುಲದ ಉನ್ನತಿಗೆ ಇರಬೇಕೇ ಹೊರತು ವಿನಾಶಕ್ಕಲ್ಲ. ವಿಜ್ಞಾನವನ್ನು ವಿನಾಶಕ್ಕಾಗಿ ಎಂದೂ ಬಳಸಬಾರದು. ಭೌತಿಕ ಜೀವನ ಸಮೃದ್ಧಗೊಂಡಂತೆ ಅಂತರಿಕ ಜೀವನವೂ ಪರಿಶುದ್ಧಗೊಳ್ಳಬೇಕು. ಭೌತಿಕ ಬದುಕಿಗೆ ಸಂಪತ್ತಷ್ಟೇ ಮುಖ್ಯವಲ್ಲ ಅದರೊಂದಿಗೆ ಧರ್ಮ ಪ್ರಜ್ಞೆ ಮತ್ತು ಗುರು ಕಾರುಣ್ಯವೂ ಮುಖ್ಯ ಎಂಬುದನ್ನು ಮರೆಯಬಾರದು' ಎಂದು ಹೇಳಿದರು. ಎಲ್ಲಾ ಧಾರ್ಮಿಕ, ಸಾಮಾಜಿಕ ಕಾರ್ಯಕ್ರಮಗಳ ನೇತೃತ್ವ ವಹಿಸಿದ್ದ ವೀರಸಂಗಮೇಶ್ವರ ಸ್ವಾಮೀಜಿ ಮಾತನಾಡಿದರು.

ಹೈದರಾಬಾದಿನ ಕುಮಾರಸ್ವಾಮಿ ಹಿರೇಮಠ ಅವರಿಗೆ ಉದ್ಯಾನ ಶಿಲ್ಪಿ ಹಾಗೂ ಬೆಂಗಳೂರಿನ ಪಂಚಾಕ್ಷರಿ ಹಿರೇಮಠ ಅವರಿಗೆ ವೀರಶೈವ ಯುವಸಿರಿ' ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು. ಅದೇ ರೀತಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದವರನ್ನು ಮಠದ ಪರವಾಗಿ ಸನ್ಮಾನಿಸಲಾಯಿತು. ಸಮಾಂಭದಲ್ಲಿ ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ಮುಕ್ತಿಮುನಿ ಸ್ವಾಮೀಜಿ ಅಧ್ಯಕ್ಷತೆ ವಹಿಸಿದ್ದರು. ಅಲ್ಲದೆ ನಾಡಿನ ವಿವಿಧ ಮಠಾಧೀಶರು, ಧಾರ್ಮಿಕ ಗುರುಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 09:00 ರಿಂದ 10:30 |
| ಗುಳಿಕ ಕಾಲ | ಬೆಳಿಗ್ಗೆ | 06:00 ರಿಂದ 07:30 |
| ಯಮಗಂಡ ಕಾಲ | ಮಧ್ಯಾಹ್ನ | 01:30 ರಿಂದ 03:00 |

**ಮೇಷ** ಏಕಪಕ್ಷೀಯ ವ್ಯಾಮೋಹ ನಿಮಗೆ ಕೇವಲ ಎದೆಗುಂದು ತರುತ್ತದೆ. ವಿಚಾರಗೋಷ್ಠಿಗಳು ಮತ್ತು ಪ್ರದರ್ಶನಗಳು ನಿಮಗೆ ಹೊಸ ಜ್ಞಾನ ಮತ್ತು ಸಂಪರ್ಕಗಳನ್ನು ಒದಗಿಸುತ್ತವೆ.

**ವೃಷಭ** ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ನೀವು ತ್ವರಿತ ಹಣ ಪಡೆಯುವ ಬಯಕೆ ಹೊಂದಿರುತ್ತೀರಿ.

**ಮಿಥುನ** ಕೆಲಸ ಮತ್ತು ಮನೆಯಲ್ಲಿನ ಕೆಲವು ಒತ್ತಡ ನಿಮ್ಮ ಸಹನೆಯನ್ನು ಪರೀಕ್ಷಿಸುತ್ತದೆ. ಯಾವುದೇ ಸಮಯದಲ್ಲಿ ಹಣದ ಅಗತ್ಯವಿರುತ್ತದೆ ಆದ್ದರಿಂದ ಸಾಧ್ಯವಾದಷ್ಟು ನಿಮ್ಮ ಹಣವನ್ನು ಸಂಗ್ರಹಿಸುವ ಬಗ್ಗೆ ಆಲೋಚಿಸಿ.

**ಕರ್ಕಾಟಕ** ಸಮುದ್ರದಾಚೆಯ ಸಂಬಂಧಿಯಿಂದ ಒಂದು ಉಡುಗೊರೆ ನಿಮ್ಮನ್ನು ಸಂತೋಷಪಡಿಸುತ್ತದೆ. ಪ್ರಣಯದ ಸಂಬಂಧ ಅತ್ಯಾಕರ್ಷಕ ವಾಗಿದ್ದರೂ ಅದು ಬಹು ಕಾಲ ಬಾಳುವುದಿಲ್ಲ.

**ಸಿಂಹ** ನಿಮ್ಮ ಪ್ರೀತಿಪಾತ್ರರು ನಿಮ್ಮ ಮಾತುಗಳನ್ನು ಅರ್ಥಮಾಡಿಕೊಳ್ಳುತ್ತಿಲ್ಲ ಎಂದು ಭಾವಿಸಿದರೆ, ನೀವು ಅವರೊಂದಿಗೆ ಸಮಯವನ್ನು ಕಳೆಯಿರಿ ಮತ್ತು ನಿಮ್ಮ ಮಾತುಗಳನ್ನು ಸ್ಪಷ್ಟವಾಗಿ ಅವರ ಮುಂದೆ ಇಡಿ.

**ಕನ್ಯಾ** ನಿಮ್ಮ ಶೀಘ್ರ ಕ್ರಮ ನಿಮ್ಮನ್ನು ಪ್ರೇರೇಪಿಸುತ್ತದೆ. ಯಶಸ್ಸು ಸಾಧಿಸಲು ಸಮಯದ ಜೊತೆ ನಿಮ್ಮ ಆಲೋಚನೆಗಳನ್ನು ಬದಲಾಯಿಸಿಕೊಳ್ಳಿ ಇದು ನಿಮ್ಮ ದೃಷ್ಟಿಯನ್ನು ವಿಸ್ತಾರಗೊಳಿಸುತ್ತದೆ.

**ತುಲಾ** ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮ ಸುತ್ತಮುತ್ತಲಿನ ಪರಿಸರವನ್ನು ಬೆಳಗಿಸುತ್ತದೆ. ಪ್ರೀತಿ ಯಾವಾಗಲೂ ಭಾವಪೂರ್ಣವಾಗಿದೆ, ಮತ್ತು ನೀವು ಇಂದು ಇದನ್ನು ಅನುಭವಿಸುತ್ತೀರಿ.

**ವೃಶ್ಚಿಕ** ನಿಮ್ಮ ಪ್ರೀತಿ ಒಂದು ಹೊಸ ಎತ್ತರವನ್ನು ತಲುಪುತ್ತದೆ. ಈ ದಿನವು ನಿಮ್ಮ ಪ್ರೀತಿಪಾತ್ರರ ನಗುವಿನಿಂದ ಪ್ರಾರಂಭವಾಗುತ್ತದೆ, ಮತ್ತು ಪರಸ್ಪರರ ಕನಸಿನಲ್ಲಿ ಕೊನೆಗೊಳ್ಳುತ್ತದೆ.

**ಧನಸ್ಸು** ಹೆದರಿಕೆ ನಿಮ್ಮ ಸಂತೋಷವನ್ನು ಹಾಳುಗೆಡವಬಹುದು. ಇದು ನಮ್ಮ ಆಲೋಚನೆಗಳು ಮತ್ತು ಕಲ್ಪನೆಯ ಪ್ರಭಾವವೆಂದು ಅರ್ಥ ಮಾಡಿಕೊಳ್ಳಬೇಕು. ಇದು ಸ್ವಾಭಾವಿಕತೆಯನ್ನು ಕೊಲ್ಲುತ್ತದೆ.

**ಮಕರ** ವೈವಾಹಿಕ ಜೀವನವನ್ನು ಉತ್ತಮವಾಗಿಸುವ ನಿಮ್ಮ ಪ್ರಯತ್ನಗಳು ಇವತ್ತು ನಿರೀಕ್ಷೆಗೂ ಮೀರಿ ಫಲ ನೀಡುತ್ತವೆ. ಹೆಚ್ಚು ಇಲ್ಲದಿದ್ದರೆ, ರಾತ್ರಿ ತಡವಾಗಿ ಸ್ಮಾರ್ಟ್‌ಫೋನ್‌ನಲ್ಲಿ ಗಾಸಿಪ್ ಮಾಡುವುದರಲ್ಲಿ ತಪ್ಪೇನಿಲ್ಲ.

**ಕುಂಭ** ನಿಮ್ಮ ಭಾವನೆಗಳನ್ನು ನಿಯಂತ್ರಿಸಲು ನಿಮಗೆ ಕಷ್ಟವಾಗಬಹುದು – ನಿಮ್ಮ ಅಸಾಮಾನ್ಯ ವರ್ತನೆ ನಿಮ್ಮ ಸುತ್ತಲಿನ ಜನರನ್ನು ಗೊಂದಲದಲ್ಲಿ ಕೆಡವಬಹುದು ಮತ್ತು ನಿಮ್ಮನ್ನು ನಿರಾಸೆಗೊಳಿಸಬಹುದು.

**ಮೀನ** ಕುಟುಂಬ ಸದಸ್ಯರೊಂದಿಗಿನ ಸಂತಸದ ಪ್ರಯಾಣ ನಿಮಗೆ ಸಮಾಧಾನ ನೀಡುತ್ತದೆ. ವ್ಯಾಪರದಲ್ಲಿ ಪ್ರಯೋಜನ ಇಂದು ಅನೇಕ ವ್ಯಾಪಾರಿಗಳ ಮುಖದ ಮೇಲೆ ಸಂತೋಷವನ್ನು ತರಬಹುದು.

### ರೈತರಿಗೆ ಮಾರುಕಟ್ಟೆ ಮತ್ತು ಸಂಪರ್ಕ ಸರಳವಾಗಲಿದೆ: ನಿರ್ಮಲಾ ಸೀತಾರಾಮನ್

# ಕೃಷಿ ಸಂಸ್ಕರಣೆ ಘಟಕ ಸದುಪಯೋಗ ಪಡಿಸಿಕೊಳ್ಳಬೇಕು

• ಉದಯವಾಹಿನಿ ಸಿಂಧನೂರು

ಕೃಷಿ ಸಂಸ್ಕರಣಾ ಘಟಕಗಳನ್ನು (ಅಗ್ರೋ ಪ್ರೊಸೆಸಿಂಗ್ ಸೆಂಟರ್) ಬಳಸಿಕೊಂಡಲ್ಲಿ ರೈತರ ಕೃಷಿ ಉತ್ಪನ್ನಗಳಿಗೆ ಹೆಚ್ಚಿನ ಬೆಲೆ ಸಿಗಲಿದೆ. ರೈತರಿಗೆ ಮಾರುಕಟ್ಟೆ ಮತ್ತು ಸಂಪರ್ಕ ಸರಳವಾಗಲಿದೆ ಎಂದು ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವರಾದ ನಿರ್ಮಲಾ ಸೀತಾರಾಮನ್ ಅವರು ರೈತರಿಗೆ ಸಲಹೆ ಮಾಡಿದರು.

ಸಿಂಧನೂರು ತಾಲ್ಲೂಕಿನ ಜವಳಗೇರಾ ಗ್ರಾಮದಲ್ಲಿ ಅಕ್ಟೋಬರ್ 16ರಂದು, ಭಾರತ ಸರ್ಕಾರ ಮತ್ತು ನಬಾರ್ಡ್ ಇವರ ಸಹಯೋಗದಲ್ಲಿ ನಡೆದ ಕೃಷಿ ಸಂಸ್ಕರಣೆಗಾಗಿ ರೈತರ ತರಬೇತಿ ಮತ್ತು ಸಾಮಾನ್ಯ ಸೌಲಭ್ಯ ಕೇಂದ್ರವನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

ಇಡೀ ರಾಯಚೂರು ಜಿಲ್ಲೆಯಾದ್ಯಂತ ಅಂದಾಜು 40 ಕೃಷಿ ಸಂಸ್ಕರಣ ಘಟಕಗಳ ಸ್ಥಾಪನೆ ಮಾಡಿ ಸಂಸ್ಕರಣೆಗೊಳಪಡಿಸುವಷ್ಟು ರಾಯಚೂರು ಜಿಲ್ಲೆಯೊಂದರಲ್ಲಿಯೇ ಪ್ರತಿ ವರ್ಷ ಅಂದಾಜು ಸಾವಿರಾರು ಮೆಟ್ರಿಕ್ ಟನ್ ದಷ್ಟು ತೊಗರಿ ಉತ್ಪನ್ನ ಬರುತ್ತದೆ ಎನ್ನುವ ಮಾಹಿತಿ ಇದೆ. ತುಂಗಭದ್ರಾ ಮತ್ತು ಕೃಷ್ಣಾ ನದಿಗಳ ಮಧ್ಯೆದ ಈ ಭೂಮಿಯು ಅತ್ಯಂತ ಸಂಪದ್ಭರಿತವಾಗಿದೆ. ಈ ಪ್ರದೇಶದಲ್ಲಿ ಪ್ರತಿ ವರ್ಷ ಅಂದಾಜು 80,000 ಮೆಟ್ರಿಕ್ ಟನ್ ತೊಗರಿ ಉತ್ಪನ್ನ ಹಾಗೂ ಅಂದಾಜು 34,000 ಮೆಟ್ರಿಕ್ ಟನ್ ಕಡಲೆ ಉತ್ಪನ್ನ ಬರುತ್ತಿದ್ದು, ಯಾವುದೇ ಉತ್ಪನ್ನ ಇರಲಿ ರೈತರು ಆಯಾ ಉತ್ಪನ್ನವನ್ನು ನೇರವಾಗಿ ಮಾರುಕಟ್ಟೆಗೆ ಸಾಗಿಸದೇ ಸಂಸ್ಕರಣೆಗೊಳಪಡಿಸಿ ಪ್ಯಾಕೇಟ್ ಅಥವಾ ಬೇರೆ ಬೇರೆ ರೂಪದಲ್ಲಿ ಮಾರಾಟ ಮಾಡಿದಲ್ಲಿ ಉತ್ತಮ ಬೆಲೆ ಸಿಗಲಿದೆ. ಈ ದಿಶೆಯಲ್ಲಿ ಯೋಚಿಸಿ ಕೇಂದ್ರ ಸರ್ಕಾರವು ಕೃಷಿ ಸಂಸ್ಕರಣಾ ಘಟಕಗಳ ಸ್ಥಾಪನೆಗೆ ಹೆಚ್ಚಿನ ಒತ್ತು ನೀಡುತ್ತಿದೆ. ಇದರ ಭಾಗವಾಗಿ ಕಲ್ಯಾಣ ಕರ್ನಾಟಕ ಭಾಗದ ಎಲ್ಲಾ ಜಿಲ್ಲೆಗಳಲ್ಲಿ ಕೃಷಿ ಸಂಸ್ಕರಣೆಗಾಗಿ ರೈತರ ತರಬೇತಿ ಮತ್ತು ಸಾಮಾನ್ಯ ಸೌಲಭ್ಯ ಕೇಂದ್ರಕ್ಕೆ ಹಸಿರು ನಿಶಾನೆ ತೋರಲಾಗಿದೆ. ರೈತರು ಈ ಕೃಷಿ ಸಂಸ್ಕರಣಾ ಘಟಕಗಳ ಸದುಪಯೋಗ ಪಡೆಯಬೇಕು ಎಂದು ಸಲಹೆ ಮಾಡಿದರು.

> ಕೇಂದ್ರ, ಹಣಕಾಸು ಸಚಿವರ ಸಂಸದರ ನಿಧಿಯ ಮೊತ್ತವನ್ನು ಬಳಸಿಕೊಂಡು ಕಲ್ಯಾಣ ಕರ್ನಾಟಕ ಭಾಗದ ಎಲ್ಲಾ ಜಿಲ್ಲೆಗಳಲ್ಲಿ ತಲಾ 2.54 ಕೋಟಿ ರೂ ವೆಚ್ಚದಲ್ಲಿ, ನಬಾರ್ಡ್ ಜೊತೆಗೆ ಜಂಟಿಯಾಗಿ ಸಂಸದರ ಸ್ಥಳೀಯ ಪ್ರದೇಶ ಅಭಿವೃದ್ಧಿ ಯೋಜನೆಯಡಿ ಕೃಷಿ ಸಂಸ್ಕರಣೆಗಾಗಿ ರೈತರ ತರಬೇತಿ ಮತ್ತು ಸಾಮಾನ್ಯ ಸೌಲಭ್ಯ ಕೇಂದ್ರಗಳನ್ನು ತೆರೆಯಲಾಗಿದೆ.
> – ಎಂ ನಾಗರಾಜ್, ಭಾರತ ಸರ್ಕಾರದ ಹಣಕಾಸು ಸಚಿವಾಲಯದ ಹಣಕಾಸು ಸೇವೆಗಳ ಇಲಾಖೆಯ ಕಾರ್ಯದರ್ಶಿ



ಉದಯವಾಹಿನಿ ಚಿತ್ರ

**ಕೃಷಿ ತಂತ್ರಜ್ಞಾನಕ್ಕೆ ಅನುದಾನ**

> ಪ್ರತಿ ಆಯವ್ಯದಲ್ಲಿ ಕೇಂದ್ರ ಸರ್ಕಾರವು ರೈತರು ಮತ್ತು ಕೃಷಿ ಹಾಗೂ ಕೃಷಿ ತಂತ್ರಜ್ಞಾನಕ್ಕೆ ಸಂಬಂಧಿಸಿದಂತೆ ವಿಶೇಷ ಕಾರ್ಯಕ್ರಮಗಳಿಗೆ ಸೂಕ್ತ ಅನುದಾನ ಮೀಸಲಿರಿಸುತ್ತಿದೆ ಎಂದು ತಿಳಿಸಿದರು. ಕೃಷಿ ಹಾಗೂ ಕೃಷಿ ಕ್ಷೇತ್ರಗಳ ಬೆಳವಣಿಗೆಗಾಗಿ ಐಟಿಸಿ ಜೊತೆಗೆ ನಬಾರ್ಡ್ ಕೈಜೋಡಿಸಿದ್ದಕ್ಕೆ ಸಾಕಷ್ಟು ಅನುಕೂಲವಾಗಲಿದೆ. ಇದು ಆರಂಭವಷ್ಟೇ, ಮುಂದಿನ ದಿನಗಳಲ್ಲಿ ಇನ್ನು ಉತ್ತಮ ಕಾರ್ಯಗಳನ್ನು ಮಾಡಲಾಗುವುದು.
> –ಸಂಜೀವ್ ಪೂರಿ, ಐಟಿಸಿ ಲಿಮಿಟೆಡ್‌ನ ವ್ಯವಸ್ಥಾಪಕ ನಿರ್ದೇಶಕ

ಕೃಷಿ ಸಂಸ್ಕರಣಾ ಘಟಕಗಳ ಸ್ಥಾಪನೆಗೆ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ (ನಬಾರ್ಡ್) ನಮ್ಮೊಂದಿಗೆ ಕೈಜೋಡಿಸಿರುವುದು ಉತ್ತಮ ಬೆಳವಣಿಗೆಯಾಗಿದೆ. ರಾಜ್ಯ ಕೇಂದ್ರದಲ್ಲಿನ ಉನ್ನತ ಮಟ್ಟದ ಅಧಿಕಾರಿಗಳು, ಜಿಲ್ಲಾ ಕೇಂದ್ರದಲ್ಲಿನ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಕೃಷಿ ಅಧಿಕಾರಿಗಳು ಇಂತಹ ಕೃಷಿ ಸಂಸ್ಕರಣಾ ಘಟಕಗಳ ಬಲವರ್ಧನೆಯ ಬಗ್ಗೆ ಗಮನ ಹರಿಸಬೇಕು ಎಂದು ಅವರು ಸಲಹೆ ಮಾಡಿದರು.

> ಕೇಂದ್ರ ಸರ್ಕಾರವು ರೈತರ ಪರವಾಗಿ ಅನೇಕ ಯೋಜನೆಗಳನ್ನು ಜಾರಿ ಮಾಡಿದೆ. ರೈತರಿಗೆ ಮಣ್ಣಿನ ಆರೋಗ್ಯ ಕಾರ್ಡ ನೀಡುವುದಕ್ಕೆ ಆದ್ಯತೆ ನೀಡಿದ್ದೇವೆ. 24.74 ಕೋಟಿ ರೈತರಿಗೆ ಕಿಸಾನ್ ಕಾರ್ಡ್ ನೀಡಿದ್ದೇವೆ. 8000 ಕೋಟಿಯಷ್ಟು ಮಣ್ಣಿನ ಪರೀಕ್ಷೆ ನಡೆಸಿದ್ದೇವೆ. ಕೃಷಿ ಸಿಂಚಾಯಿ ಯೋಜನೆಯಡಿ 93,000 ಕೋಟಿ ರೂ.ನಷ್ಟು ಅನುದಾನವನ್ನು ನೀರಾವರಿ ಯೋಜನೆಗಳಿಗೆ ನೀಡಿದ್ದೇವೆ. ಪ್ರಧಾನಮಂತ್ರಿ ಫಸಲ ಭಿಮಾ ಯೋಜನೆಯಡಿ 1.74 ಲಕ್ಷ ಕೋಟಿ ರೂ. ಪರಿಹಾರವನ್ನು ಅನ್ನದಾತರಿಗೆ ನೀಡಿದ್ದೇವೆ. ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ತಲಾ ಒಬ್ಬ ರೈತರಿಗೆ ವಾರ್ಷಿಕ 6 ಸಾವಿರ ರೂ.ನಂತೆ ಇದುವರೆಗೆ 3.69 ಲಕ್ಷ ಕೋಟಿ ರೂ.ನಷ್ಟು ಮೊತ್ತವನ್ನು ಕಿಸಾನ್ ಸಮ್ಮಾನ್ ನಿದಿಗೆ ಬಳಸಿದ್ದೇವೆ.
> –ನಿರ್ಮಲಾ ಸೀತಾರಾಮನ್ , ಕೇಂದ್ರ ಸಚಿವೆ

ರೈತರ ಬೆಳೆಗಳಿಗೆ ವೈಜ್ಞಾನಿಕ ರೀತಿಯಲ್ಲಿ ಬೆಂಬಲ ಬೆಲೆ ಸಿಗಬೇಕು ಎಂಬುದು ನಮ್ಮ ಆಶಯವಾಗಿದೆ. ತೊಗರಿ ಬೆಳೆಗೆ 2013-14ರಲ್ಲಿ ಪ್ರತಿ ಹೆಕ್ಟೇಟರ್‌ಗೆ 4,300ರಷ್ಟು ಬೆಂಬಲ ಬೆಲೆ ನೀಡಿದ್ದು, 2025-26ನೇ ಸಾಲಿನಲ್ಲಿ ಬೆಂಬಲ ಬೆಲೆಯ ಮೊತ್ತವನ್ನು ಶೇ.84ರಷ್ಟು ಹೆಚ್ಚಿಸಿ ಪ್ರತಿ ಹೆಕ್ಟರಗೆ 8000 ರೂ. ನಿಗದಿ ಮಾಡಿದ್ದೇವೆ. ಹೆಸರು ಬೆಳೆಗೆ ಬೆಂಬಲ ಬೆಲೆಯ ಮೊತ್ತವನ್ನು ಶೇ.81ರಷ್ಟು ಹೆಚ್ಚಿಸಿ ಪ್ರತಿ ಹೆಕ್ಟಗೆ 8800 ರೂ.ನಿಗದಿ ಮಾಡಿದ್ದೇವೆ. ಈ ಬೆಳೆಗೆ ಈ ಹಿಂದೆ ಪ್ರತಿ ಹೆಕ್ಟರಗೆ 4500 ನಿಗದಿಪಡಿಸಲಾಗಿತ್ತು ಎಂದು ಅವರು ವಿವರಿಸಿದರು.

ನೀತಿ ಆಯೋಗದಿಂದ ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಮಹತ್ವಾಕಾಂಕ್ಷಿ ಜಿಲ್ಲಾ ಕಾರ್ಯಕ್ರಮಗಳು ಜಾರಿಯಲ್ಲಿವೆ. ಈ ಭಾಗದಲ್ಲಿನ ಮಹತ್ವಾಕಾಂಕ್ಷಿ ಯೋಜನೆಗಳು ಮತ್ತು ಇತರೆ ವಿಷಯಗಳ ಬಗ್ಗೆ ಪರಿಶೀಲನೆ ನಡೆಯುತ್ತಿದೆ. ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ರಸ್ತೆ, ಕುಡಿಯುವ ನೀರು, ಬೀದಿ ದೀಪ ಅಳವಡಿಕೆ ಸೇರಿದಂತೆ ಅಗತ್ಯ ಮೂಲಸೌಕರ್ಯ ಕಲ್ಪಿಸುವ ಕಾರ್ಯವು ಅಚ್ಚುಕಟ್ಟಾಗಿ ಆಗಬೇಕಿದೆ. ನೀತಿ ಆಯೋಗ ನಡೆಸಿದ ಆಸ್ಪೈರೇಷನಲ್ ಜಿಲ್ಲಾ ರ್‍ಯಾಂಕಿಂಗ್‌ನಲ್ಲಿ 2020-23ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಗೆ ಟಾಪ್ ಒನ್ ಸ್ಥಾನ ಮತ್ತು ದಕ್ಷಿಣ ಭಾರತದಲ್ಲಿ ಮಸ್ಕಿ ತಾಲ್ಲೂಕಿಗೆ ಟಾಪ್ 8ನೇ ಸ್ಥಾನ ಲಭಿಸಿದೆ ಎಂದು ಅವರು ತಿಳಿಸಿದರು.

## ಅಕ್ರಮ ಮರುಳು ಸಾಗಾಟ: ಟ್ರ್ಯಾಕ್ಟರ್ ವಶಕ್ಕೆ

• ಉದಯವಾಹಿನಿ ಹೊನ್ನಾಳಿ

ತಾಲ್ಲೂಕಿನ ಬೇಲಿ ಮಲ್ಲೂರು ಗ್ರಾಮದ ಸಮೀಪದಲ್ಲಿರುವ ತುಂಗಭದ್ರಾ ನದಿಯಲ್ಲಿನ ಮರಳನ್ನು ಅಕ್ರಮವಾಗಿ ಸಾಗಿಸುತ್ತಿದ್ದ ಟ್ರ್ಯಾಕ್ಟರ್‌ಗಳ ಮೇಲೆ ಸಿಪಿಐ ಸುನೀಲ್‌ಕುಮಾರ್ ದಾಳಿ ನಡೆಸಿ. ಟ್ರ್ಯಾಕ್ಟರ್‌ಗಳನ್ನು ವಶಕ್ಕೆ ಪಡೆದಿದ್ದಾರೆ.

ಸಿಪಿಐ ಸುನೀಲ್ ಕುಮಾರ್, ಖಚಿತ ಮಾಹಿತಿ ಮೇರೆಗೆ ದಾಳಿ ಮಾಡಿ, ಮರಳು ತುಂಬಿದ 5 ಟ್ರ್ಯಾಕ್ಟರ್‌ಗಳನ್ನು ವಶಕ್ಕೆ ಪಡೆದುಕೊಳ್ಳಲಾಗಿದೆ ಎಂದು ತಿಳಿಸಿದರು. ಸರ್ಕಾರದಿಂದ ಯಾವುದೇ ಪರವಾನಿಗೆ ಪಡೆದಿಲ್ಲವಾದ್ದರಿಂದ ಅಕ್ರಮ ಸಾಗಣೆದಾರರ ಮೇಲೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅಧಿಕಾರಿಗಳಿಗೆ ಸೂಕ್ತ



ಉದಯವಾಹಿನಿ ಚಿತ್ರ

ಕಾನೂನು ಕ್ರಮ ಜರುಗಿಸುವಂತೆ ವರದಿ ನೀಡಲಾಗಿದೆ ಎಂದು ತಿಳಿಸಿದರು. ದಾವಣಗೆರೆ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಹಿರಿಯ ನಿರ್ದೇಶಕಿ ರಶ್ಮಿ ಮಾತನಾಡಿ, ಪೊಲೀಸರಿಂದ ವರದಿ ಬಂದ ತಕ್ಷಣ ದಂಡ ವಸೂಲಿ ಮಾಡಲಾಗುವುದು. ಅಕ್ರಮ ಸಾಗಾಣಿಕೆದಾರರ ಮೇಲೆ ಪೊಲೀಸರೇ ದೂರು ದಾಖಲಿಸುತ್ತಾರೆ ಎಂದು ಹೇಳಿದರು. ಆದರೆ ಸಿಪಿಐ ಸುನೀಲ್‌ಕುಮಾರ್, ಗಣಿ, ಭೂ ವಿಜ್ಞಾನ ಇಲಾಖೆಯಿಂದ ಶಿಫಾರಸ್ಸು ಮಾಡಿದರೆ ಮಾತ್ರ ನಾವು ದೂರು ಸ್ವೀಕರಿಸುತ್ತೇವೆ ಎಂದು ಹೇಳುತ್ತಾರೆ. ಒಟ್ಟಿನಲ್ಲಿ ಈ ಎರಡು ಇಲಾಖೆಗಳ ನಡುವೆ ಸಮನ್ವಯದ ಕೊರತೆ ಇರುವುದರಿಂದ ಅಕ್ರಮ ಮರಳು ಸಾಗಾಣಿಕೆದಾರರ ಮೇಲೆ ಸರಿಯಾದ ಕ್ರಮ ಜರುಗಿಸುತ್ತಿಲ್ಲ ಎನ್ನುವುದು ಮೇಲ್ನೋಟಕ್ಕೆ ಕಂಡು ಬರುತ್ತಿದೆ.

## ನೆರೆ ಸಂತ್ರಸ್ಥ ಮಂದಾರವಾಡ ಗ್ರಾಮದ ಜನರಿಗೆ ಕಿಟ್‌ಗಳ ವಿತರಣೆ

• ಉದಯವಾಹಿನಿ ಜೇವರ್ಗಿ

ನೆರೆ ಸಂತ್ರಸ್ತರಿಗೆ ಬೆಂಗಳೂರಿನ ಕೋರಮಂಗಲದ ಸೆಂಟ್ ಫ್ರಾನ್ಸಿಸ್ ಕಾಲೇಜು ಕರ್ನಾಟಕ ಬಟಾಲಿಯನ್ ಎ ತಂಡ ಬೆಂಗಳೂರು ವತಿಯಿಂದ ಆಯೋಜನೆ ಮಾಡಿ ಆಹಾರ ಸಾಮಗ್ರಿ, ದಿನಸಿಕಿಟ್ಟುಗಳನ್ನ ಇಲ್ಲಿನ ಜೇವರಗಿ ತಾಲ್ಲೂಕಿನ ಮಂದಾರವಾಡ ಗ್ರಾಮದ ಸುಮಾರು 50 ಸಂತ್ರಸ್ತರಿಗೆ ವಿತರಿಸಲಾಯಿತು. ಅಮರೇಗೌಡ ಕಾಲೇಜು ನಿರ್ವಹಣೆ ಮತ್ತು ಹಿರಿಯ ಕಡೆಟ್ಟುಗಳು ಸೇರಿದಂತೆ ಕಂಪನಿ ಸೀನಿಯರ್ ಅಂಡರ್ ಆಫೀಸರ್ ಡ್ಯಾನಿಯಲ್ ಬಾರ್ನ್ ಬಾಸ್, ಎಸ್ ಕಂಪನಿ ಸಾರಜಂಟ ಮೇಜರ್ ಪುನೀತ್, ಖತರ್,ಮಾಸ್ಟರ್ ಸಜೆರ್‌ಂಟ್ ವಿಕಾಸ್ ಪಿ ಗೌಡ ಕಿಟ್ ವಿತರಣೆ ಮಾಡಿದರು.

## ಔರಾದನಲ್ಲಿ ಬೃಹತ್ ಪ್ರತಿಭಟನೆ


• ಉದಯವಾಹಿನಿ ಔರಾದ್

ಅತಿವೃಷ್ಟಿಯಿಂದ ಬೆಳೆ ಹಾನಿಗೀಡಾಗಿ ತೀವ್ರ ಸಂಕಷ್ಟದಲ್ಲಿರುವ ರೈತರಿಗೆ ಪರಿಹಾರ ವಿತರಿಸಲು ವಿಳಂಬ ಮಾಡುತ್ತಿರುವ ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಜಿಲ್ಲಾ ರೈತ ಮೋರ್ಚಾ ನೇತೃತ್ವದಲ್ಲಿ ನಾಳೆ ಅ.18 ರಂದು ಪಟ್ಟಣದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಗುತ್ತಿದೆ ಶಾಸಕ ಪ್ರಭು ಬಿ. ಚವ್ಹಾಣ ತಿಳಿಸಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಇಂದು ಬೆಳಗ್ಗೆ 10 ಗಂಟೆಗೆ ಪಟ್ಟಣದಲ್ಲಿ ಪ್ರತಿಭಟನಾ ರ್‍ಯಾಲಿ ನಡೆಯಲಿದೆ. ರ್‍ಯಾಲಿಯು ಎಪಿಎಂಸಿ ವೃತ್ತದಿಂದ ಆರಂಭಗೊಂಡು ಕನ್ನಡಾಂಬೆ ವೃತ್ತ, ಬಸ್ ನಿಲ್ದಾಣದ ಮಾರ್ಗವಾಗಿ ಬಸವೇಶ್ವರ ವೃತ್ತದ ಹತ್ತಿರ ಸಮಾವೇಶಗೊಳ್ಳಲಿದೆ. ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ, ಜಿಲ್ಲಾ ರೈತ ಮೋರ್ಚಾ ಅಧ್ಯಕ್ಷ ಶಿವರಾಜ ಅಲ್ಮಾಜೆ ಸೇರಿದಂತೆ ಬಿಜೆಪಿಯ ಎಲ್ಲಾ ಶಾಸಕರು ಹಾಗೂ ಮುಖಂಡರು ಪ್ರತಿಭಟನೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದ್ದಾರೆ.

ಶೀಘ್ರ ಬೆಳೆ ಪರಿಹಾರ ಬಿಡುಗಡೆ ಮಾಡಿ ರೈತರ ನೋವುಗಳಿಗೆ ಸ್ಪಂದಿಸುವಂತೆ ಸರ್ಕಾರವನ್ನು ಒತ್ತಾಯಿಸಲು ಜಿಲ್ಲಾ ಬಿಜೆಪಿ ರೈತ ಮೋರ್ಚಾ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಗುತ್ತಿದ್ದು, ಪಕ್ಷದ ಮುಖಂಡರು, ಮಹಾಶಕ್ತಿ ಕೇಂದ್ರ, ಶಕ್ತಿ ಕೇಂದ್ರ ಹಾಗೂ ಎಲ್ಲಾ ಬೂತ್‌ಗಳ ಪದಾಧಿಕಾರಿಗಳು, ಕಾರ್ಯಕರ್ತರು ಸೇರಿದಂತೆ ರೈತ ಮುಖಂಡರು, ಸಾರ್ವಜನಿಕರು ಪಕ್ಷಾತೀತವಾಗಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಶಾಸಕರು ಮನವಿ ಮಾಡಿದ್ದಾರೆ.

## ಜಿಲ್ಲಾ ಚುನಾವಣಾಧಿಕಾರಿಯಾಗಿ ಚಿಕ್ಕಪ್ಪನಹಳ್ಳಿ ಷಣ್ಮುಖ ನೇಮಕ

• ಉದಯವಾಹಿನಿ ಚಿತ್ರದುರ್ಗ



ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ) ಚಿತ್ರದುರ್ಗ ಜಿಲ್ಲಾ ಘಟಕದ 2025-28ನೇ ಅವಧಿಯ ಚುನಾವಣೆ ಸಂಬಂಧ ಜಿಲ್ಲಾ ಚುನಾವಣಾಧಿಕಾರಿಯಾಗಿ ಹಿರಿಯ ಪತ್ರಕರ್ತ ಚಿಕ್ಕಪ್ಪನಹಳ್ಳಿ ಷಣ್ಮುಖ ನೇಮಕವಾಗಿದ್ದು, ಚುನಾವಣಾ ಕಚೇರಿ ನಗರದ ಪತ್ರಿಕಾ ಭವನದಲ್ಲಿ ಅಧಿಕಾರ ಸ್ವೀಕರಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಓ.ಪರಮೇಶ್ವರಪ್ಪನವರು ಚಿತ್ರದುರ್ಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಚುನಾವಣಾಧಿಕಾರಿಯಾಗಿ ಇದುವರೆಗೂ ಕರ್ತವ್ಯನಿರ್ವಹಿಸಿದ್ದು, ತಮ್ಮ ವೈಯಕ್ತಿಕ ಕಾರಣಗಳಿಂದಾಗಿ ಚುನಾವಣಾ ಕರ್ತವ್ಯದಿಂದ ಬಿಡುಗಡೆಗೊಂಡ ಹಿನ್ನೆಲೆಯಲ್ಲಿ, ಇವರ ಸ್ಥಾನಕ್ಕೆ ಚಿತ್ರದುರ್ಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಚುನಾವಣಾಧಿಕಾರಿಯಾಗಿ ಹಿರಿಯ ಪತ್ರಕರ್ತ ಚಿಕ್ಕಪ್ಪನಹಳ್ಳಿ ಷಣ್ಮುಖ ಅವರನ್ನು ನೇಮಕ ಮಾಡಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಸಚಿವರಿಗೆ ಜೀವ ಬೆದರಿಕೆ ಹಾಕಿದ ವ್ಯಕ್ತಿಗೆ ಕಠಿಣ ಶಿಕ್ಷೆ ವಿಧಿಸಿ

• ಉದಯವಾಹಿನಿ,ಚಿಂಚೋಳಿ

ವಿವಿಧ ಸಂಘಟನೆಗಳ ಒಕ್ಕೂಟದಿಂದ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐಟಿಬಿಟಿ ಕಲಬುರ್ಗಿ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆಯವರಿಗೆ ಅವಚ್ಯ ಶಬ್ದಗಳಿಂದ ನಿಂದಿಸಿ ಜೀವ ಬೆದರಿಕೆ ಹಾಕಿದ ವ್ಯಕ್ತಿಗೆ ಹಾಗೂ ವಿಜಯಪುರ ಜಿಲ್ಲೆಯಲ್ಲಿ ಸಾಮೂಹಿಕವಾಗಿ ಅತ್ಯಾಚಾರ ಮಾಡಿದ ಕೊಲೆಗಾರರನ್ನು ಗಲ್ಲಿಗೆರಿಸುವಂತೆ ಆಗ್ರಹಿಸಿ ಪಟ್ಟಣದ ಅಂಬೇಡ್ಕರ್ ವೃತ್ತದಿಂದ ಬಸ್ ನಿಲ್ದಾಣವರೆಗೆ ಪಾದಯಾತ್ರೆ ಪ್ರತಿಭಟನೆ ನಡೆಸಿ ಗ್ರೇಡ್2 ತಹಶೀಲ್ದಾರ್ ವೆಂಕಟೇಶ ದುಗ್ಗನ್ ಮೂಲಕ ರಾಜ್ಯಪಾಲರಿಗೆ ಮನವಿಪತ್ರ ಸಲ್ಲಿಸಿದರು.

ಹಿರಿಯ ಮುಖಂಡ ಗೌತಮ್ ಬೋಮ್ನಳ್ಳಿ ಮಾತನಾಡಿ ಕ್ರೀಯಾಶೀಲ ಕಲಬುರ್ಗಿ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆಯವರಿಗೆ ಕೆಲ ಕಿಡಿಗೇಡಿಗಳು ಅವಾಚ್ಯ ಶಬ್ದಗಳಿಂದ ನಿಂದಿಸಿ ಜೀವ ಬೆದರಿಕೆ ಹಾಕುವವರನ್ನು ಅರೆಸ್ಟ್ ಮಾಡಿ ಕಠಿಣ ಶಿಕ್ಷೆ ವಿಧಿಸಬೇಕು, ರಾಜ್ಯದಲ್ಲಿ ನಡೆಯುತ್ತಿರುವ ಅತ್ಯಾಚಾರ ಪ್ರಕರಣಗಳು ಸರ್ಕಾರ ತಡೆಗಟ್ಟಲು ಕಾನೂನು ತಿದ್ದುಪಡಿ ಮಾಡಿ ಪೋಲಿಸರಿಗೆ ಸ್ವಾತಂತ್ರ್ಯ ನೀಡಬೇಕು ಎಂದರು. ಪ್ರತಿಭಟನೆಯ ನೇತೃತ್ವ



ಉದಯವಾಹಿನಿ ಚಿತ್ರ

ವಹಿಸಿ ಮಾತನಾಡಿದ ಲೋಕೇಶ ಐನೋಳ್ಳಿ ಕಲಬುರ್ಗಿ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆಯವರಿಗೆ ಕಿಡಿಗೇಡಿಯೊಬ್ಬ ಅವಚ್ಯ ಶಬ್ದಗಳಿಂದ ನಿಂದಿಸಿ ಜಾತಿನಿಂದನೆ ಮಾಡಿ ಜೀವ ಬೆದರಿಕೆ ಹಾಕಿದ್ದು ಅವನನ್ನು ಕಠಿಣ ಶಿಕ್ಷೆಗೆ ಒಳಪಡಿಸಬೇಕು ಹಾಗೂ ಸಚಿವರಿಗೆ ಝುಡ್ ಪ್ಲಸ್ ಭದ್ರತೆ ಒದಗಿಸಬೇಕು, ವಿಜಯಪುರ ಜಿಲ್ಲೆಯಲ್ಲಿ ಬಾಲಕಿಯೊಬ್ಬಳಿಗೆ ಸಾಮೂಹಿಕ ಅತ್ಯಾಚಾರ ಮಾಡಿದ ಕೊಲೆಗಾರರಿಗೆ ಗಲ್ಲುಶಿಕ್ಷೆ ವಿಧಿಸಬೇಕು ಎಂದು ಒತ್ತಾಯಿಸಿದರು. ಅಬ್ದುಲ್ ಬಾಷೀದ್, ಆರ್.ಗಣಪತರಾವ, ಬಾಬುರಾವ ಮೇತ್ರಿ, ಕಾಶಿರಾಮ ತಳವಾರ, ಚೇತನ ನಿರಾಳ್ಕರ, ನೀಲಕಂಠ ಕೆಕೆ, ಸುನೀಲ ತ್ರಿಪಾಠಿ ಭಾಗ್ಯವಂತ ಕನಕಪುರ, ನಾಸೀರ್ ಅನಸಾರಿ, ಅಬ್ದುಲ್ ಅಜೀಜ್, ಅಯೇಜ್, ಆಸೀಫ್ ಹುಡಾ ಅನೇಕರಿದ್ದರು.

## ಉದ್ಯಮಿಗಳಾಗಿ, ಇತರರಿಗೆ ಉದ್ಯೋಗ ನೀಡಿ: ಬೆಳ್ಳಿಕರೆ

• ಉದಯವಾಹಿನಿ ವಿಜಯಪುರ

ಸರಕಾರದ ಯೋಜನೆಗಳ ಲಾಭ ಪಡೆದುಕೊಂಡು, ಪ್ರತಿಯೊಬ್ಬರೂ ಯಶಸ್ಸನ್ನು ಹೊಂದಿ, ಉದ್ಯಮಿಗಳಾಗುವುದರ ಜೊತೆಗೆ ಬೇರೆಯವರಿಗೂ ಉದ್ಯೋಗವನ್ನು ನೀಡುವಂತವರಾಗಿ ಎಂದು ನಿವೃತ್ತ ಕೃಷಿ ಸಹ ವಿಸ್ತರಣೆ ನಿರ್ದೇಶಕ ಡಾ. ರವೀಂದ್ರ ಬೆಳ್ಳಿ ಕರೆ ನೀಡಿದರು.

**ಉದ್ದಿಮೆ ಸ್ಥಾಪನೆಗೆ ಅವಕಾಶ**

ನಗರ ಹೊರ ವಲಯದ ಹಿಟ್ನಳ್ಳಿಯ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಪ್ರಧಾನ ಮಂತ್ರಿ ಕಿರು ಆಹಾರ ಸಂಸ್ಕರಣೆಯ ಯೋಜನೆಯ ಫಲಾನುಭವಿಗಳಿಗೆ ಹಮ್ಮಿಕೊಂಡ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕೃಷಿಯಲ್ಲಿ ಉದ್ಯಮಿಗಳಾಗಲು ಅನೇಕ ಅವಕಾಶಗಳಿವೆ. ಆಡು, ಕುರಿ ಸಾಕಣೆ, ಹೈನೋದ್ಯಮ, ಎರೆಹುಳು ಸಾಕಾಣಿಕೆ, ಜೇನು ಕೃಷಿ, ಅಣಬೆ ಕೃಷಿ, ಕೃಷಿ ನರ್ಸರಿ ಸ್ಥಾಪನೆ ,ಕೃಷಿ ಯಂತ್ರೋಪಕರಣ ಗೃಹಿಣಿಯರಿಗಾಗಿ ರೊಟ್ಟಿ ತಯಾರಿಕೆ, ಉಪ್ಪಿನಕಾಯಿ ತಯಾರಿಕೆ, ಅಗರಬತ್ತಿ ತಯಾರಿಕೆ ವಿವಿಧ ಹಣ್ಣುಗಳಿಂದ ಜ್ಯೂಸ್ ತಯಾರಿಕೆಯಂತಹ ಹಲವಾರು ಗೃಹ ಉದ್ದಿಮೆ ಸ್ಥಾಪನೆಗೆ ವಿಪುಲ ಅವಕಾಶಗಳಿವೆ. ಇವುಗಳ



ಉದಯವಾಹಿನಿ ಚಿತ್ರ

ಸದ್ಬಳಕೆ ಮಾಡಿಕೊಳ್ಳಬೇಕೆಂದರು.

ಲೀಡ್ ಬ್ಯಾಂಕ್ ವ್ಯವಸ್ಥಾಪಕ ಸಿದ್ದಯ್ಯ.ಬಿ ಮಾತನಾಡಿ, ಈ ಯೋಜನೆ ಅಡಿಯಲ್ಲಿ ಬ್ಯಾಂಕುಗಳಿಂದ ಸಾಲ ಸೌಲಭ್ಯ ಮತ್ತು ಸಹಾಯಧನದ ಸೌಲಭ್ಯಗಳಿದ್ದು ಯಾವುದೇ ಬ್ಯಾಂಕ್ ನಲ್ಲಿ ಈ ಯೋಜನೆ ಅಡಿಯಲ್ಲಿ ಸಾಲ ಪಡೆಯುವಾಗ ತಾಂತ್ರಿಕ ತೊಂದರೆ ಉಂಟಾದಲ್ಲಿ ತಮ್ಮನ್ನು ಸಂಪರ್ಕಿಸಬೇಕೆಂದರು. ಈ ಮೂಲಕ ವಿವಿಧ ಉದ್ಯಮಗಳನ್ನು ಸ್ಥಾಪಿಸಿ ಆರ್ಥಿಕವಾಗಿ ಲಾಭ ಹೊಂದಬೇಕೆಂದರು.

ಜಿಲ್ಲಾ ಸಂಪನ್ಮೂಲ ವ್ಯಕ್ತಿ ಸಿದ್ದು ಪೂಜಾರಿ ಪಿಎಂಎಫ್‌ಎಂಇ ಯೋಜನೆಯ ವರದಿ ತಯಾರಿಕೆ,ಸಲ್ಲಿಸುವಿಕೆ, ಅನುಮೋದನೆ, ಹಿಡಿದು ಉದ್ಯಮವನ್ನು ಸ್ಥಾಪಿಸುವವರೆಗೆ ಸಹಾಯ ಮಾಡಲಾಗುತ್ತದೆ ಎಂದು ತಿಳಿಸಿದರು.

## ಕಳೆದ ಒಂದು ತಿಂಗಳಲ್ಲಿ 5 ಪ್ರಕರಣಗಳ ಶ್ಯೂರಿಟಿ ಆಸ್ತಿ ಮುಟ್ಟುಗೋಲು: 2 ಪ್ರಕರಣಗಳಲ್ಲಿ ದಂಡ

• ಉದಯವಾಹಿನಿ ಮಂಗಳೂರು

ನ್ಯಾಯಾಲಯದ ವಿಚಾರಣೆಗೆ ಹಾಜರಾಗದೆ ತಲೆಮರೆಸಿಕೊಂಡಿರುವ ಆರೋಪಿಗಳ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿರುವ ಮಂಗಳೂರು ನಗರ ಪೊಲೀಸರು, ಜಾಮೀನು ನೀಡಿದ ಶ್ಯೂರಿಟಿದಾರರ ವಿರುದ್ಧ ಕಠಿಣ ಕ್ರಮ ಜರಗಿಸಲು ಮುಂದಾಗಿದೆ. ಆರೋಪಿಗಳ ಜಾಮೀನು ಭದ್ರತೆಯಾಗಿ ಇರಿಸಲಾದ ಆಸ್ತಿಗಳನ್ನು ಮುಟ್ಟುಗೋಲು ಹಾಕುವ ಮತ್ತು ದಂಡ ವಿಧಿಸುವ ಪ್ರಕ್ರಿಯೆಯನ್ನು ಆರಂಭಿಸಲಾಗಿದೆ.

ಮಂಗಳೂರು ನಗರ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯಲ್ಲಿನ ಹಲವು ಪ್ರಕರಣಗಳಲ್ಲಿ ದೋಷಾರೋಪಣಾ ಪಟ್ಟಿ ಸಲ್ಲಿಸಿದ ನಂತರ ಆರೋಪಿಗಳು ನ್ಯಾಯಾಲಯದ ವಿಚಾರಣೆಗೆ ಹಾಜರಾಗದೆ ತಲೆಮರೆಸಿಕೊಂಡಿದ್ದಾರೆ. ಇಂತಹ ಪ್ರಕರಣಗಳಲ್ಲಿ ಆರೋಪಿಗಳ ಬಿಡುಗಡೆ ವೇಳೆ ಶ್ಯೂರಿಟಿದಾರರು ಭದ್ರತೆಯ ಆಧಾರವಾಗಿ ನೀಡಿದ್ದ ಜಮೀನು ಮತ್ತು ಇತರ ಸೊತ್ತುಗಳ ವಿವರಗಳನ್ನು ಪೊಲೀಸರು ಸಂಗ್ರಹಿಸಿದ್ದಾರೆ. ನ್ಯಾಯಾಲಯದಿಂದ ಸೂಕ್ತ ಆದೇಶವನ್ನು ಪಡೆದು, ಇದೀಗ ಆ ಶ್ಯೂರಿಟಿದಾರರಿಗೆ ಸಂಬಂಧಿಸಿದ ಸೊತ್ತುಗಳನ್ನು ಮುಟ್ಟುಗೋಲು ಹಾಕಲು ಮತ್ತು ಆಧಾರವಾಗಿಟ್ಟಿದ್ದ ದಂಡದ ಮೊತ್ತವನ್ನು ವಸೂಲಿ ಮಾಡಲು ಕ್ರಮ ಕೈಗೊಳ್ಳಲಾಗಿದೆ.

ಈ ಮುಟ್ಟುಗೋಲು ಹಾಕಲಾದ ಆಸ್ತಿಗಳ ಆರ್.ಟಿ.ಸಿ.ಯಲ್ಲಿಯೂ ವಿವರಗಳನ್ನು ನಮೂದಿಸಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ಸುಧೀರ್ ಕುಮಾರ್ ರೆಡ್ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಇನ್ನು ಕೆಲವು ಪ್ರಕರಣಗಳಲ್ಲಿ ಮುಟ್ಟುಗೋಲು ಪ್ರಕ್ರಿಯೆಗಳು ಚಾಲ್ತಿಯಲ್ಲಿವೆ ಎಂದು ಅವರು ಹೇಳಿದ್ದಾರೆ.

ಕಳೆದ ಒಂದು ತಿಂಗಳ ಅವಧಿಯಲ್ಲಿ 5 ಅಪರಾಧ ಪ್ರಕರಣಗಳಲ್ಲಿ ಶ್ಯೂರಿಟಿಗಾಗಿ ಇರಿಸಲಾಗಿದ್ದ ಆಸ್ತಿಯನ್ನು ಮುಟ್ಟುಗೋಲು ಹಾಕಲಾಗಿದೆ.2 ಪ್ರಕರಣಗಳಲ್ಲಿ ನ್ಯಾಯಾಲಯದಿಂದ ದಂಡವನ್ನು ವಿಧಿಸಲಾಗಿದೆ. ಪ್ರಸ್ತುತ 4 ಪ್ರಕರಣಗಳಲ್ಲಿ ಆಸ್ತಿ ಮುಟ್ಟುಗೋಲು ಪ್ರಕ್ರಿಯೆ ಚಾಲ್ತಿಯಲ್ಲಿದೆ. ಈ ಕಾರ್ಯಾಚರಣೆ ಆರಂಭವಾದ ನಂತರ, ತಲೆಮರೆಸಿಕೊಂಡಿದ್ದ 2 ಆರೋಪಿಗಳು ಸ್ವತಃ ನ್ಯಾಯಾಲಯಕ್ಕೆ ಶರಣಾಗಿದ್ದಾರೆ. ಆರೋಪಿಗಳ ಪರವಾಗಿ ಜಾಮೀನು ನೀಡುವ ಸಾರ್ವಜನಿಕರು ಎಚ್ಚರ ವಹಿಸಬೇಕು ಎಂದು ಪೊಲೀಸ್ ಆಯುಕ್ತರು ಈ ಮೂಲಕ ಮನವಿ ಮಾಡಿದ್ದಾರೆ.

### ಮರಗಳ ಮಾರಣಹೋಮ ಮಾಡುವ ಅಧಿಕಾರಿಗಳ ವಿರುದ್ಧ ಪರಿಸರ ಪ್ರೇಮಿಗಳ ಆಕ್ರೋಶ


# ರಸ್ತೆ ಅಭಿವೃದ್ಧಿ ನೆಪದಲ್ಲಿ ಮರಗಳ ಹನನ

• ಉದಯವಾಹಿನಿ ಜಮಖಂಡಿ

ಕಾಡು ಬೆಳೆಸಿ ನಾಡು ಉಳಿಸಿ, ಮನೆಗೊಂದು ಮರ ಊರಿಗೊಂದು ವನ ಹೀಗೆ ಸಸ್ಯ ಜೀವಸಂಕುಲವನ್ನು ಪೊಷಿಸಲು ಅರಣ್ಯ ಇಲಾಖೆ ಕೋಟ್ಯಾಂತರ ರುಪಾಯಿ ಖರ್ಚು ಮಾಡುತ್ತಿದೆ ಆದರೆ ರಸ್ತೆ ಅಗಲೀಕರಣ ನೆಪದಲ್ಲಿ ನೂರಾರು ಮರಗಳ ಮಾರಣಹೋಮ ಮಾಡುವ ಅಧಿಕಾರಿಗಳ ವಿರುದ್ಧ ಪರಿಸರ ಪ್ರೇಮಿಗಳ ಆಕ್ರೋಶ ಹೊರಹಾಕಿದ್ದಾರೆ. ನಗರದ ರಸ್ತೆ ಭಿವೃದ್ದಿಯ ಜೊತೆಗೆ ಪರಿಸರ ಸಂರಕ್ಷಣೆಯೂ ಅಷ್ಟೇ ಅಗತ್ಯವಾಗಬೇಕು ನಗರ ಬೆಳೆದಂತೆ ಹೆಚ್ಚುತ್ತಿರುವ ಜನಸಂಖ್ಯೆ ವಾಹನಗಳಿಂದ ಮೊದಲಿನ ರಸ್ತೆಗಳು ಸಾಕಾಗದೇ ಹೋಗಬಹುದು ಆದರೆ ಅದಕ್ಕೆ ಪರ್ಯಾಯ ವ್ಯವಸ್ಥೆಯನ್ನು ಕೂಡಾ ಮಾಡುವದು ಒಂದು ಅಭಿವೃದ್ದಿಯೇ ಆಗುತ್ತದೆ.

ಜಮಖಂಡಿ ಒಂದು ಸುಂದರ ನಗರವಾಗಿದ್ದು ಐತಿಹಾಸಿಕ ಹಿನ್ನೆಲೆಯಿಂದ ಕೂಡಿದೆ ಸ್ವಾತಂತ್ರ್ಯ ಪೂರ್ವದಲ್ಲಿ ಪಟವರ್ಧನ ಸಂಸ್ಥಾನಿಕರು ಬೆಳೆಸಿದ ಮರಗಳು ಇಂದು ಧರೆಗುರುಳುತ್ತಿವೆ. ಇದು ಐತಿಹಾಸಿಕ ಮರಗಳ ಮಾರಣಹೋಮಕ್ಕೆ ಕಾರಣವಾಗಿದೆ.

ಈ ಮೊದಲು ನಾವು ಚಿಕ್ಕವರಿದ್ದಾಗ ದೇಸಾಯಿವೃತ್ತದ ಹತ್ತಿರ ನಿಂತರೆ ಉಮಾರಾಮೇಶ್ವರ ಮಂದಿರವು ಕಾಣುತ್ತಿತ್ತು ಆದರೆ ಈಗ ಅಂತರಿಕವಾಗಿ ಅತಿಕ್ರಮಣದಿಂದ ರಸ್ತೆಯೇ ಮಂಗಮಾಯವಾಗಿದೆ ಎಂದು ಓರ್ವ ವಯೋವೃದ್ದರು ತಿಳಿಸಿದ್ದಾರೆ. ಪ್ರಸ್ತುತವಾಗಿ ನಗರದ ಜಿ.ಎಲ್.ಬಿ.ಸಿ ಹತ್ತಿರದಿಂದ ಎಸ್,ಆರ್,ಎ ಕ್ಲಬ ವರೆಗಿನ ಸುಮಾರು 1.75 ಕಿಮಿ ರಸ್ತೆಗೆ ಅನುದಾನ ಲಭ್ಯವಾಗಿದ್ದು ಆ ರಸ್ತೆಯ ಮೇಲೆ ಅತೀ ಹೆಚ್ಚು ಬೆಲೆಬಾಳುವ ಮರಗಳಿದ್ದು ಅವುಗಳು ಇಂದು ಅಭಿವೃದ್ದಿಯ ನೆಪದಲ್ಲಿ ಧರೆಗುರುಳುತ್ತಿವೆ.





ಉದಯವಾಹಿನಿ ಚಿತ್ರ

**ಪರಿಸರ ಪ್ರೇಮಿಗಳ ಆಕ್ರೋಶ**

ಸರಕಾರದ ಕಾರ್ಯಾದೇಶದಂತೆ ಗುತ್ತಿಗೆದಾರರಾಗಲೀ ಅರಣ್ಯ ಇಲಾಖೆಯ ಅಧೀಕಾರಿಗಳಾಗಳಿಂದ ನಡೆಯುತ್ತಿಲ್ಲ ಕಾರ್ಯ. ಮರಗಳ ತೆರವು ಕಾರ್ಯಾಚರಣೆಯಲ್ಲಿ ಕಾರ್ಯಾದೇಶದ ಪ್ರಕಾರ ಅರಣ್ಯ ಇಲಾಖೆಯ ಸಿಬ್ಬಂದಿಗಳು ಅಲ್ಲಿರಬೇಕು ಎಂದು ಉಲ್ಲೇಖವಿದೆ ಆದರೆ ಸುಮರು 40 ಕ್ಕೂ ಅಧಿಕ ಮರಗಳನ್ನು ತೆರವುಗೊಳಿಸಿದರೂ ಸಹ ಯಾವುದೆ ಅಧಿಕಾರಿಗಳಾಗಿ ಸ್ವತಃ ಗುತ್ತಿಗೆದಾರನಾಗಲಿ ಅಲ್ಲಿಲ್ಲ ಎಂದು ಸಾರ್ವಜನಿಕರು ದೂರಿದ್ದಾರೆ. 1 ಮರ ಕಡಿದರೆ ಬದಲಿಗೆ 10 ಮರಗಳನ್ನು ನೆಟ್ಟು ಬೆಳೆಸಬೇಕು ಅಂತ ಸುಪ್ರೀಂ ಕೋರ್ಟ್ ಆದೇಶ ಇದೆ ಆದರೆ ಇಲ್ಲಿ ಬದಲಿಗೆ ಮರಗಳನ್ನು ನೆಡದೆ ಇರುವ ಅಧಿಕಾರಿಗಳು ಸುಪ್ರೀಂ ಕೋರ್ಟ್ ಆದೇಶವನ್ನು ಗಾಳಿಗೆ ತೂರಿದ್ದಾರೆ. ಆದರೆ ಅದ್ಯಾಕೋ ಅರಣ್ಯ ಇಲಾಖೆ ಅಧಿಕಾರಿಗಳು ಮಾತ್ರ ಮೌನಕ್ಕೆ ಜಾರಿದ್ದು ಯಾರೇ ಮರ ಕಡಿಯಲು ಪರವಾನಿಗೆ ಕೇಳಿದರೆ ಹಿಂದೂ ಮುಂದು ನೋಡದೆ ಮರ ಕಡಿಯಲು ಪರವಾನಿಗೆ ಕೊಡುವುದು ಪರಿಸರ ಪ್ರೇಮಿಗಳ ಆಕ್ರೋಶಕ್ಕೆ ಕಾರಣವಾಗಿದೆ.

ನಿಯಮಾನುಸಾರವಾಗಿ ರಸ್ತೆಯ ಕಾಮಗರಿಯ ಗುತ್ತಿಗೆದಾರರ ಸಮ್ಮುಖದಲ್ಲಿಯೇ ಅಥವಾ ಅವರ ಮೇಲ್ವಿಚಾರಕರ ಸಕ್ಷಮದಲ್ಲಿ ತೆರವು ಕಾರ್ಯಾಚರಣೆ ನಡೆಯುತ್ತಿಲ್ಲ ಎಂದು ಕೇಳಿ ಬರುತ್ತಿದೆ. ಮೊದಲಿದ್ದ ರಸ್ತೆಯ ಸೊಬಗು ಈಗ ಮಾಯವಾಗುತ್ತಿದೆ ಈ ಮೊದಲು ನಗರದಲ್ಲಿ ಸಮೃದ್ಧ ಮಳೆಯಾಗುತ್ತಿತ್ತು ಆದರೆ ಮರಗಳ ಮಾರಣ ಹೋಮದಿಂದ ಮಳೆಯು ಕಡಿಮೆಯಾಗುತ್ತಿದ್ದು ಅಂತರ್ಜಲವೂ ಸಹ ಕುಂಠಿತವಾಗುತ್ತಿದೆ ಇದಕ್ಕೆಲ್ಲ ಕಾರಣ ಪರಿಸರ ನಾಶ ಈ ನಾಶಕ್ಕೆ ಒಂದೆಡೆ ಅರಣ್ಯ ಇಲಾಖೆಯೇ ನೇರ ಕಾರಣವೆನ್ನಬಹುದಾಗಿದೆ

**ಅಧಿಕಾರಿಗಳ ವಿರುದ್ಧ ಆಕ್ರೋಶ**

> ನಗರದಲ್ಲಿ ಅವೈಜ್ಞಾನಿಕವಾಗಿ ನಡೆಯುತ್ತಿರುವ ಅತಿಕ್ರಮಣಗಳಿಗೆ ಯಾವುದೆ ಸರಕಾರವಾಗಲೀ ಅಧಿಕಾರಿಯಾಗಲೀ ಕಡಿವಾಣ ಹಾಕುತ್ತಿಲ್ಲ ನಾಯಿ ಕೊಡೆಗಳಂತೆ ಬೆಳೆಯುತ್ತಿರುವ ಅತಿಕ್ರಮಣ ಕಟ್ಟಡಗಳಿಗೆ ಕಡಿವಾಣ ಹಾಕಿದರೆ ಮರಗಳ ಮಾರಣ ಹೋಮ ನಡೆಯುವದು ತಪ್ಪುತ್ತದೆ ಎಂದು ಸಾರ್ವಜನಿಕರ ಹಾಗೂ ಪರಿಸರ ಪ್ರೇಮಿಗಳು ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕೆಲವು ವರ್ಷಗಳ ಹಿಂದೆ ನಗರದ ಜೋಳದ ಬಜಾರ ರಸ್ತೆಯ, ಬಸ್ ಸ್ಟ್ಯಾಂಡ್ ರಸ್ತೆ ಸೇರಿದಂತೆ ಅನೇಕ ರಸ್ತೆಯಲ್ಲಿನ ಅನೇಕ ಮರಗಳನ್ನು ಕಡಿಯಲು ಪರವಾನಿಗೆ ನೀಡಿದ ಅರಣ್ಯ ಇಲಾಖೆ ಈಗ ಎಸ್.ಆರ್.ಎ ಕ್ಲಬದಿಂದ ಚನ್ನಮ್ಮ ವೃತ್ತದ ವರೆಗೆ ಐತಿಹಾಸಿಕ ಮರಗಳನ್ನು ತೆಗೆಯಲು ಪರವಾನಿಗೆ ನೀಡಿದ್ದಾರೆ.

ಇದರಿಂದ ಇಡೀ ನಗರದಲ್ಲಿ ಒಂದು ಮರ ಕೂಡ ಉಳಿಯದೆ ರಸ್ತೆ ಅಗಲೀಕರಣ ನೆಪದಲ್ಲಿ ಬರಡಾಗುತ್ತಿದೆ ಎಂದು ಸಾರ್ವಜನಿಕರು ಆಕ್ರೋಶ ಹೊರಹಾಕಿದ್ದಾರೆ.

## ಕನ್ನಡ ರಾಜ್ಯೋತ್ಸವ: ಪೂರ್ವಭಾವಿ ಸಭೆ

• ಉದಯವಾಹಿನಿ ಗದಗ

ಜಿಲ್ಲೆಯಲ್ಲಿ ನವೆಂಬರ್ 1 ರಂದು ಕನ್ನಡ ರಾಜ್ಯೋತ್ಸವವನ್ನು ಅರ್ಥಪೂರ್ಣವಾಗಿ ಹಾಗೂ ವ್ಯವಸ್ಥಿತವಾಗಿ ಸಂಭ್ರಮದಿಂದ ಆಚರಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕನ್ನಡ ರಾಜ್ಯೋತ್ಸವ ಆಚರಣೆಯ ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿದರು. ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ವ್ಯವಸ್ಥಿತವಾಗಿ ಯಾವುದೇ ಲೋಪಗಳಿಲ್ಲದಂತೆ ಆಚರಿಸಲು ವಿವಿಧ ಸಮಿತಿಗಳನ್ನು ರಚಿಸಲಾಗಿದ್ದು ಸಮಿತಿಯವರು ತಮಗೆ ವಹಿಸಿದ ಕೆಲಸವನ್ನು ನಿರ್ವಹಿಸಿ ರಾಜ್ಯೋತ್ಸವ ಕಾರ್ಯಕ್ರಮ ಯಶಸ್ವಿಗೆ ಶ್ರಮಿಸಬೇಕೆಂದು ಸೂಚಿಸಿದರು. ಪ್ರತಿ ವರ್ಷದಂತೆ ಈ ವರ್ಷವೂ ಸಹ ಕನ್ನಡ ರಾಜ್ಯೋತ್ಸವದ ದಿನದ ಹಿಂದಿನ ದಿನ ಹಾಗೂ ಕನ್ನಡ ರಾಜ್ಯೋತ್ಸವದ ದಿನ ಎರಡು ದಿನ ಸರ್ಕಾರಿ ಕಚೇರಿ ಹಾಗೂ ನಗರದ ವಿವಿಧ ವೃತ್ತಗಳಲ್ಲಿ ಸ್ವಚ್ಛತೆಯೊಂದಿಗೆ ವಿದ್ಯುತ್ ದೀಪಾಲಂಕಾರಕ್ಕೆ ಸಕ್ರಮ ಕೈಗೊಳ್ಳಬೇಕು ಎಂದರು.

## ಇಂದಿರಾ ಕ್ಯಾಂಟೀನ್ ಆರಂಭಿಸಲು ಒತ್ತಾಯ

• ಉದಯವಾಹಿನಿ ಮಂಗಳೂರು

ಮೀನುಗಾರರು ಅತ್ಯಧಿಕ ಸಂಖ್ಯೆಯಲ್ಲಿ ಇರುವ ಬಂದರು ಪ್ರದೇಶದಲ್ಲಿ ನಿರ್ಮಿಸಿಕೊಡಬೇಕಿದ್ದ ಇಂದಿರಾ ಕ್ಯಾಂಟೀನನ್ನು ತೆರೆಯದೆ ನಿರ್ಲಕ್ಷ್ಯ ಮಾಡಿರುವ ಜಿಲ್ಲಾಡಳಿತದ ಕ್ರಮವನ್ನು ವಿರೋಧಿಸಿ, ಕೂಡಲೇ ಇಂದಿರಾ ಕ್ಯಾಂಟೀನ್ ಸೇವೆ ಆರಂಭಿಸಲು ಒತ್ತಾಯಿಸಿ ಹಳೆ ಬಂದರು, ಹಳೆ ಮುನ್ಸಿಪಲ್ ಕಚೇರಿ ಬಳಿ ನಿರ್ಮಾಣಗೊಂಡಿರುವ ಇಂದಿರಾ ಕ್ಯಾಂಟೀನ್ ಎದುರು ಬಂದರು ಶ್ರಮಿಕರ ಸಂಘ ಮತ್ತು ಡಿವೈಎಫ್ಐ ಬಂದರು ಘಟಕದ ನೇತೃತ್ವದಲ್ಲಿ ಪ್ರತಿಭಟನೆ ನಡೆಯಿತು.

ಡಿವೈಎಫ್ಐ ಜಿಲ್ಲಾಧ್ಯಕ್ಷರೂ, ಬಂದರು ಶ್ರಮಿಕರ ಸಂಘದ ಅಧ್ಯಕ್ಷರೂ ಆಗಿರುವ ಬಿ.ಕೆ ಇಮ್ತಿಯಾಜ್ ಪ್ರತಿಭಟನೆ ಉದ್ದೇಶಿಸಿ ಮಾತನಾಡಿ ನಗರದ ಆರ್ಥಿಕತೆಗೆ ಜನ್ಮ ಕೊಟ್ಟ ಬಂದರು ಪ್ರದೇಶದ ಅಭಿವೃದ್ಧಿಯಲ್ಲಿ






ಉದಯವಾಹಿನಿ ಚಿತ್ರ

ಕಾರ್ಮಿಕರನ್ನು ಕಡೆಗಣಿಸಲಾಗುತ್ತಿದೆ, ಬಂದರಿನ ಕಾರ್ಮಿಕರ ಶ್ರಮದಿಂದ ನಗರ ಅಭಿವೃದ್ಧಿ ಆಗಿದೆ ಆದರೆ ಹಳೆ ಬಂದರಿನ ಕಾರ್ಮಿಕರಿಗೆ ಆದ್ಯತೆಯಲ್ಲಿ ಆರಂಭಿಸಬೇಕಿದ್ದ ಇಂದಿರಾ ಕ್ಯಾಂಟೀನ್ ಕಾಮಗಾರಿ ಮುಗಿಸಿ ವರ್ಷಗಳು ಕಳೆದರೂ ತೆರೆಯದೆ ಬಡವರಿಗೆ ಅನ್ಯಾಯ ಮಾಡಲಾಗಿದೆ, ದುಬಾರಿ ಹೋಟೆಲ್ ಆಹಾರ ಖರೀದಿಸಲು ಸಾಧ್ಯವಿಲ್ಲದ ಕಾರ್ಮಿಕರ ಹಸಿವು ತಣಿಸಲು ಕೂಡಲೇ ಇಂದಿರಾ ಕ್ಯಾಂಟೀನ್ ತೆರೆಯಬೇಕೆಂದು ಆಗ್ರಹಿಸಿದರು.

# ಭಾರತದ ವಿರುದ್ಧ 2 ಫ್ರಂಟ್ ವಾರ್ ಆರೋಪ ಹೊರಿಸಿದ ಪಾಕಿಸ್ತಾನ

**ಇಸ್ಲಾಮಾಬಾದ್:** ಪಾಕಿಸ್ತಾನ ಕೇವಲ ಕಾಗದದ ಹುಲಿ ಎಂಬುದು ಎಲ್ಲರಿಗೂ ಗೊತ್ತಿರುವ ಸಂಗತಿ. ಭಾರತವನ್ನು ನೇರ ಯುದ್ಧದಲ್ಲಿ ಎದುರಿಸಲಾಗದ ನೆರೆ ರಾಷ್ಟ್ರ, ತನ್ನ ವೈಫಲ್ಯವನ್ನು ಮುಚ್ಚಿಕೊಳ್ಳಲು ಭಾರತದ ವಿರುದ್ಧ ಇಲ್ಲಸಲ್ಲದ ಆರೋಪಗಳನ್ನು ಮಾಡುತ್ತಿದೆ. ತನ್ನ ಸೇನಾ ಅಸಮರ್ಥತೆಯಿಂದ ಜಗತ್ತಿನ ಗಮನ ಬೇರೆಡೆ ಸೆಳೆಯಲು ಅದು ನಾಟಕವಾಡುತ್ತಿರುವುದು ಸ್ಪಷ್ಟವಾಗಿ ಗೋಚರವಾಗುತ್ತಿದೆ. ಅಫ್ಘಾನಿಸ್ತಾನ-ಪಾಕಿಸ್ತಾನ ಕದನ ವಿರಾಮ ಒಪ್ಪಂದ ಜಾರಿಯಾದ ಬಳಿಕ, ಪಾಕಿಸ್ತಾನದ ಉನ್ನತ ನಾಯಕತ್ವವು ಈಗ ಭಾರತದ ವಿರುದ್ಧ ತಿರುಗಿ ಬಿದ್ದಿದೆ. ಪಾಕಿಸ್ತಾನ-ಅಫ್ಘಾನಿಸ್ತಾನ ಮಿಲಿಟರಿ ಸಂಘರ್ಷದಲ್ಲಿ ಭಾರತವು ಪರೋಕ್ಷವಾಗಿ ಅಫ್ಘಾನಿಸ್ತಾನಕ್ಕೆ ಸೇನಾ ನೆರವು ನೀಡುತ್ತಿದೆ ಎಂದು ಗಂಭೀರ ಆರೋಪ ಮಾಡಿರುವ ನೆರೆ ರಾಷ್ಟ್ರ, ಇದೀಗ ಭಾರತದ ವಿರುದ್ಧ 2 ಫ್ರಂಟ್ ವಾರ್ ಆರೋಪ ಮಾಡಿದೆ. ಈ ಕುರಿತು ಪಾಕಿಸಾನದ ಸಮಾ ಟಿವಿಗೆ ನೀಡಿರುವ ಸಂದರ್ಶನದಲ್ಲಿ ಮಾತನಾಡಿರುವ ಪಾಕಿಸ್ತಾನದ ರಕ್ಷಣಾ ಸಚಿವ ಖ್ವಾಜಾ ಆಸಿಫ್, ಭಾರತವು ಪಾಕಿಸ್ತಾನದ ವಿರುದ್ಧ 2 ಫ್ರಂಟ್ ವಾರ್ ಆರಂಭಿಸಿದ್ದು, ಅಫ್ಘಾನಿಸ್ತಾನವನ್ನು ಎತ್ತಿಕಟ್ಟುತ್ತಿದೆ. ಆದರೆ ಪಾಕಿಸ್ತಾನ ಸೇನೆ ಈ 2 ಫ್ರಂಟ್ ವಾರ್‌ನ್ನು ಗೆಲ್ಲಲಿದೆ. ಭಾರತವು ಕೊಳಕು ಆಟಕ್ಕೆ ಸೋಲು ಕಟ್ಟಿಟ್ಟ ಬುತ್ತಿ ಎಂದು ಹೇಳಿದ್ದಾರೆ.



**ಪಾಕ್ ಆರೋಪವೇನು?:** ಗಡಿಯಲ್ಲಿ ಭಾರತದ ಪ್ರಚೋದನೆಗಳ ಸಾಧ್ಯತೆಯ ಬಗ್ಗೆ ಕೇಳಲಾದ ಪ್ರಶ್ನೆಗೆ, ಈ ಸಾಧ್ಯತೆಗಳನ್ನು ತಳ್ಳಿಹಾಕುವಂತಿಲ್ಲ, ಭಾರತ ಇಂತಹ ಕೊಳಕು ಆಟವಾಡುವುದನ್ನು ನಿಸ್ಸೀಮವಾಗಿದ್ದು, ಇತ್ತೀಚಿನ ಸಂಘರ್ಷದಲ್ಲಿ ಅಫ್ಘಾನಿಸ್ತಾನಕ್ಕೆ ಕುಮ್ಮಕ್ಕು ನೀಡಿರುವ ಬಗ್ಗೆ ನಮಗೆ ಬಲವಾದ ಸಾಕ್ಷಿಗಳು ಲಭಿಸಿವೆ ಎಂದು ಖ್ವಾಜಾ ಆಸಿಫ್ ಹೇಳಿದ್ದಾರೆ. ಅಫ್ಘಾನಿಸ್ತಾನದ ಹೆಗಲ ಮೇಲೆ ಭಾರತದ ಬಂದೂಕು ಕಾಣಿಸುತ್ತಿವೆ ಎಂದಿರುವ ಖ್ವಾಜಾ ಆಸಿಫ್, ಭಾರತದ ಈ ಕುಟಿಲ ನೀತಿಗೆ ಅದರದ್ದೇ ಆದ ಭಾಷೆಯಲ್ಲಿ ಉತ್ತರಿಸಲು ಪಾಕಿಸ್ತಾನ ಸಶಕ್ತವಾಗಿದೆ ಎಂದು ಕಿಡಿಕಾರಿದ್ದಾರೆ. ಖ್ವಾಜಾ ಆಸಿಫ್ ಅವರ ಆರೋಪಗಳಿಗೆ ಯಾವುದೇ ಬಲವಾದ ಸಾಕ್ಷಿ ಗಳಿಲ್ಲ ಎಂಬುದು ಖುದ್ದು ಪಾಕಿಸ್ತಾನಕ್ಕೆ ಗೊತ್ತಿದೆ. ಇನ್ನು ಭಾರತದ 2 ಫ್ರಂಟ್ ವಾರ್‌ಗೆ ಪಾಕಿಸ್ತಾನದ ರಣತಂತ್ರವೇನು? ಎಂಬ ಪ್ರಶ್ನೆಗೆ, ರಕ್ಷಣಾ ಇಲಾಖೆ ಈಗಾಗಲೇ ಪ್ರಧಾನಿ ಶೆಹಬಾಜ್ ಷರೀಫ್ ಅವರೊಂದಿಗೆ ಚರ್ಚಿಸಿದ್ದು, ನಮ್ಮ ಸೇನೆ ತನ್ನದೇ ಆದ ಕಾರ್ಯತಂತ್ರ ಹೆಣೆದಿದೆ ಯುದ್ಧ ಮೈದಾನಕ್ಕೆ ಇಳಿಯಲಿದೆ. ಆದರೆ ಅವುಗಳನ್ನು ಸಾರ್ವಜನಿಕವಾಗಿ ಚರ್ಚಿಸಲು ಸಾಧ್ಯವಿಲ್ಲ ಎಂದು ಪಾಕಿಸ್ತಾನದ ರಕ್ಷಣಾ ಸಚಿವರು ತಿಳಿಸಿದ್ದಾರೆ.

### ನೆರವಿಗೆ ಬಾರದ ಸೌದಿ

ಪಾಕಿಸ್ತಾನವು ಸೌದಿ ಅರೇಬಿಯಾದೊಂದಿಗೆ ರಕ್ಷಣಾ ಒಪ್ಪಂದ ಮಾಡಿಕೊಂಡಿದೆ. ಈ ಒಪ್ಪಂದದನ್ವಯ ಎರಡೂ ರಾಷ್ಟ್ರಗಳ ಪೈಕಿ ಯಾವುದೇ ರಾಷ್ಟ್ರದ ಮೇಲೆ ಬೇರೊಂದು ದೇಶ ದಾಳಿ ಮಾಡಿದರೆ, ಪರಸ್ಪರ ಸೇನಾ ನೆರವು ಒದಗಿಸಬೇಕಿದೆ. ಆದರೆ ಅಫ್ಘಾನಿಸ್ತಾನದೊಂದಿಗಿನ ಸಂಘರ್ಷದಲ್ಲಿ, ಪಾಕಿಸ್ತಾನಕ್ಕೆ ಸೌದಿ ಅರೇಬಿಯಾದ ನೇರ ಸೇನಾ ನೆರವು ದೊರೆತಿಲ್ಲ, ಇದು ಪಾಕಿಸ್ತಾನದ ರಕ್ಷಣಾ, ರಾಜತಾಂತ್ರಿಕ ವೈಫಲ್ಯಕ್ಕೆ ಹಿಡಿದ ಕನ್ನಡಿಯಾಗಿದೆ.

# ಬಿಹಾರ ಅಧಿಕಾರಿಗಳೊಂದಿಗೆ ಚುನಾವಣಾ ಆಯೋಗ ಮಹತ್ವದ ಸಭೆ

**ನವದೆಹಲಿ:** ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಮತದಾರರನ್ನು ಪ್ರಚೋದಿಸುವುದನ್ನು ತಡೆಗಟ್ಟುವ ಕಾರ್ಯತಂತ್ರಕ್ಕೆ ಅಂತಿಮ ರೂಪ ನೀಡಲು ಚುನಾವಣಾ ಆಯೋಗವು ಶುಕ್ರವಾರ ಜಾರಿ ಸಂಸ್ಥೆಗಳ ಮುಖ್ಯಸ್ಥರು, ಸೇನಾ ಪಡೆಗಳ ಮುಖ್ಯಸ್ಥರ ಜೊತೆ ಶುಕ್ರವಾರ ಮಹತ್ವದ ಸಭೆ ನಡೆಸಿದೆ. ಬಿಹಾರದ ಮುಖ್ಯ ಕಾರ್ಯದರ್ಶಿ ಮತ್ತು ಡಿಜಿಪಿ ಕೂಡ ರಾಜ್ಯ ಮುಖ್ಯ ಚುನಾವಣಾ ಅಧಿಕಾರಿಯೊಂದಿಗೆ ಆನ್‌ಲೈನ್‌ನಲ್ಲಿ ಸಭೆಯಲ್ಲಿ ಭಾಗವಹಿಸಿದ್ದರು. ಮುಂಬರುವ ಬಿಹಾರ ಚುನಾವಣೆಗಳ ಸಮಯದಲ್ಲಿ ಪ್ರತಿಯೊಂದು ಕಾನೂನು ಜಾರಿ ಸಂಸ್ಥೆಯಿಂದ ಸಕ್ರಿಯ ಮತ್ತು ತಡೆಗಟ್ಟುವ ಕ್ರಮವನ್ನು ಖಚಿತಪಡಿಸಿಕೊಳ್ಳುವ ಗುರಿಯನ್ನು ಹೊಂದಿರುವ ಸಮಿತಿಯು, ಅಭ್ಯರ್ಥಿಗಳು ಮತ್ತು ರಾಜಕೀಯ ಪಕ್ಷಗಳ ರಹಸ್ಯ ವೆಚ್ಚವನ್ನು ತಡೆಯುವ ಕಾರ್ಯತಂತ್ರವನ್ನು ಚರ್ಚಿಸುತ್ತದೆ. ಪರಿಣಾಮಕಾರಿ ಕ್ರಮಕ್ಕಾಗಿ ಕಾನೂನು ಜಾರಿ ಸಂಸ್ಥೆಗಳ ನಡುವೆ ಆರ್ಥಿಕ ಅಪರಾಧಗಳ ಸಹಕಾರ ಮತ್ತು ಗುಪ್ತಚರ ಹಂಚಿಕೆಯನ್ನು ಸಹ ಇದು ಉತ್ತಮಗೊಳಿಸುತ್ತದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.




ಅಂತರರಾಜ್ಯ ಗಡಿಗಳು ಮತ್ತು ಅಂತರರಾಷ್ಟ್ರೀಯ ಗಡಿಗಳ ಮೂಲಕ ಕಳ್ಳಸಾಗಣೆ ಸರಕುಗಳು, ಮಾದಕ ವಸ್ತುಗಳು, ಮದ್ಯ ಮತ್ತು ನಗದು, ನಕಲಿ ಕರೆನ್ಸಿ ಸೇರಿದಂತೆ ಸಾಗಣೆಯನ್ನು ಪರಿಶೀಲಿಸುವ ಕ್ರಮಗಳನ್ನು ಸಹ ಚರ್ಚೆಯ ಸಮಯದಲ್ಲಿ ತೆಗೆದುಕೊಳ್ಳಲಾಗುವುದು. ಬಿಹಾರವು ನೇಪಾಳದೊಂದಿಗೆ ತನ್ನ ಅಂತರರಾಷ್ಟ್ರೀಯ ಗಡಿಯನ್ನು ಹಂಚಿಕೊಳ್ಳುತ್ತದೆ. ಸಮಿತಿಯು 17 ಇಲಾಖೆಗಳನ್ನು ಒಳಗೊಂಡಿದ್ದು ಆಯಾ ಇಲಾಖೆಯ ಎಲ್ಲಾ ಮುಖ್ಯಸ್ಥರೊಂದಿಗೆ ಚುನಾವಣಾಧಿಕಾರಿಗಳು ಸಭೆ ನಡೆಸಿ ಕೆಲವು ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದ್ದಾರೆ. ನವೆಂಬರ್ 6, 11 ರಂದು ಎರಡು ಹಂತಗಳಲ್ಲಿ ಚುನಾವಣೆಗೆ ನಡೆಯಲಿದ ಮತ್ತು ನವೆಂಬರ್ 14 ರಂದು ಮತ ಎಣಿಕೆ ನಡೆಯಲಿದೆ.

## ಉಕ್ರೇನ್ ಯುದ್ಧ ಕೊನೆಗಾಲ ಸನ್ನಿಹಿತ; ಟ್ರಂಪ್ – ಪುಟಿನ್ ಮಾತುಕತೆಗೆ ಸಿದ್ಧ

# ಅಮೆರಿಕ ಅಧ್ಯಕ್ಷ ಟ್ರಂಪ್, ರಷ್ಯಾ ಅಧ್ಯಕ್ಷ ಪುಟಿನ್ ಭೇಟಿ

**ಗಾಜಾ:** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರು ಉಕ್ರೇನ್ ಯುದ್ಧವನ್ನು ಕೊನೆಗಾಣಿಸುವ ಬಗ್ಗೆ ಚರ್ಚಿಸಲು ಹಂಗೇರಿಯ ರಾಜಧಾನಿ ಬುಡಾಪೆಸ್ಟ್‌ನಲ್ಲಿ ಭೇಟಿಯಾಗಲು ಒಪ್ಪಿಕೊಂಡಿದ್ದಾರೆ. ಈ ಮಹತ್ವದ ನಿರ್ಧಾರವು ನಡೆದ ಇಬ್ಬರು ನಾಯಕರ ಸುದೀರ್ಘ ದೂರವಾಣಿ ಸಂಭಾಷಣೆಯಲ್ಲಿ ಕೈಗೊಂಡಿದೆ. ಈ ಸಭೆಗೆ ಪೂರ್ವಭಾವಿಯಾಗಿ, ಮುಂದಿನ ವಾರ ಅಮೆರಿಕದ ಉನ್ನತ ಅಧಿಕಾರಿಗಳು ಮತ್ತು ರಷ್ಯಾದ ಅಧಿಕಾರಿಗಳು ಭೇಟಿಯಾಗಿ ಮಾತುಕತೆ ನಡೆಸಲಿದ್ದಾರೆ. ಈ ಬಗ್ಗೆ ಟ್ರಂಪ್ ತಮ್ಮ Truth Social ಪೋಸ್ಟ್‌ನಲ್ಲಿ ಮಾಹಿತಿ ನೀಡಿದ್ದಾರೆ.

**ಟ್ರಂಪ್ ಮತ್ತು ಪುಟಿನ್ ಭೇಟಿ:** ಟ್ರಂಪ್ ಅವರು ಪುಟಿನ್ ಅವರೊಂದಿಗೆ ನಡೆಸಿದ ಮಾತುಕತೆಯ ವಿವರಗಳನ್ನು ತಮ್ಮ Truth Social ಖಾತೆಯಲ್ಲಿ ಹಂಚಿಕೊಂಡಿದ್ದಾರೆ.

ಈ ಕರೆ ನಡೆದ ಮರುದಿನವೇ, ವ್ಲಾಡಿಮಿರ್ ಝೆಲೆನ್ಸ್ಕಿ ಅಮೆರಿಕದ ಶ್ವೇತಭವನದಲ್ಲಿ ಟ್ರಂಪ್ ಅವರನ್ನು ಭೇಟಿ ಆಗಲಿದ್ದಾರೆ. ಉಕ್ರೇನ್ ತನ್ನ ಯುದ್ಧಕ್ಕೆ ಅಮೆರಿಕದಿಂದ ಹೆಚ್ಚಿನ ಬೆಂಬಲವನ್ನು ಕೋರುತ್ತಿದೆ.

> ಅಧ್ಯಕ್ಷ ಝೆಲೆನ್ಸ್ಕಿ, ನಾನು ಓವಲ್ ಆಫೀಸ್‌ನಲ್ಲಿ ಭೇಟಿಯಾಗಲಿದ್ದೇವೆ. ಅಲ್ಲಿ ನಾವು ಅಧ್ಯಕ್ಷ ಪುಟಿನ್ ಅವರೊಂದಿಗಿನ ನನ್ನ ಸಂಭಾಷಣೆ ಮತ್ತು ಇತರ ಅನೇಕ ವಿಷಯಗಳ ಬಗ್ಗೆ ಚರ್ಚಿಸುತ್ತೇವೆ. ಇಂದಿನ ದೂರವಾಣಿ ಸಂಭಾಷಣೆಯಿಂದ ಮಹತ್ತರ ಪ್ರಗತಿಯಾಗಿದೆ ಎಂದು ನಾನು ನಂಬುತ್ತೇನೆ.
>
> –ಡೊನಾಲ್ಡ್ ಟ್ರಂಪ್, ಅಮೆರಿಕ ಅಧ್ಯಕ್ಷ

ಈ ಹಿನ್ನೆಲೆಯಲ್ಲಿ ಟ್ರಂಪ್, ಪುಟಿನ್ ಅವರ ಭೇಟಿ ಮಹತ್ವ ಪಡೆದುಕೊಂಡಿದೆ.

**ಉಕ್ರೇನ್ ಯುದ್ಧದ ಮೇಲೆ ಹೊಸ ಆಯಾಮ:** ಈಗಾಗಲೇ ಟ್ರಂಪ್ ಅವರು ಈ ವಾರ ರಷ್ಯಾದ ಮೇಲೆ ಒತ್ತಡ ಹೆಚ್ಚಿಸಲು ಉಕ್ರೇನ್‌ಗೆ ಟಾಮಾಹಾಕ್ ಕ್ಷಿಪಣಿಗಳನ್ನು ಕಳುಹಿಸುವ ಬಗ್ಗೆ ಚಿಂತನೆ ನಡೆಸುತ್ತಿರುವುದಾಗಿ ಹೇಳಿದ್ದರು.




ಈ ಬೆಳವಣಿಗೆಗಳು ಉಕ್ರೇನ್ ಯುದ್ಧದ ಮೇಲೆ ಹೊಸ ಆಯಾಮವನ್ನು ನೀಡುವ ಸಾಧ್ಯತೆ ಇದೆ. ಟ್ರಂಪ್ ಮತ್ತು ಪುಟಿನ್ ಅವರ ಭೇಟಿಯ ದಿನಾಂಕ ಇನ್ನೂ ನಿಗದಿಯಾಗಿಲ್ಲ.

ಆದರೆ, ಈ ಭೇಟಿ ಉಕ್ರೇನ್‌ನಲ್ಲಿ ನಡೆಯುತ್ತಿರುವ ಯುದ್ಧವನ್ನು ಕೊನೆಗಾಣಿಸುವ ನಿಟ್ಟಿನಲ್ಲಿ ಒಂದು ಮಹತ್ವದ ಹೆಜ್ಜೆಯಾಗಬಹುದು ಎಂದು ನಿರೀಕ್ಷಿಸಲಾಗಿದೆ. ಈ ಮಾತುಕತೆಗಳು ಅಮೆರಿಕ ಮತ್ತು ರಷ್ಯಾದ ನಡುವಿನ ಸಂಬಂಧದಲ್ಲಿಯೂ ಮಹತ್ವದ ಬದಲಾವಣೆಗಳನ್ನು ತರಬಹುದು. ಉಕ್ರೇನ್ ಯುದ್ಧವು ಜಾಗತಿಕ ಮಟ್ಟದಲ್ಲಿ ಗಂಭೀರ ಪರಿಣಾಮಗಳನ್ನು ಬೀರಿದೆ. ಈ ಹಿನ್ನೆಲೆಯಲ್ಲಿ, ಉಭಯ ನಾಯಕರ ಭೇಟಿ ಮತ್ತು ಅವರ ಮಾತುಕತೆಗಳ ಫಲಿತಾಂಶದ ಬಗ್ಗೆ ಜಗತ್ತು ಕಾತರದಿಂದ ಕಾಯುತ್ತಿದೆ.

### ಬುಡಾಪೆಸ್ಟ್‌ನಲ್ಲಿ ಭೇಟಿಯಾಗಲು ಒಪ್ಪಿಗೆ

ಅಮೆರಿಕ ಅಧ್ಯಕ್ಷ ಟ್ರಂಪ್ ಮತ್ತು ರಷ್ಯಾ ಅಧ್ಯಕ್ಷ ಪುಟಿನ್ ಅವರು ಉಕ್ರೇನ್ ಯುದ್ಧವನ್ನು ಕೊನೆಗಾಣಿಸಲು ಹಂಗೇರಿಯ ರಾಜಧಾನಿ ಬುಡಾಪೆಸ್ಟ್‌ನಲ್ಲಿ ಭೇಟಿಯಾಗಲು ಒಪ್ಪಿಕೊಂಡಿದ್ದಾರೆ. ಈ ಮಹತ್ವದ ನಿರ್ಧಾರವು ದೂರವಾಣಿ ಸಂಭಾಷಣೆಯಲ್ಲಿ ಕೈಗೊಂಡಿದ್ದು, ಉಕ್ರೇನ್ ಅಧ್ಯಕ್ಷ ಝೆಲೆನ್ಸ್ಕಿ ಅವರೊಂದಿಗೆ ಟ್ರಂಪ್ ಮಾತುಕತೆ ನಡೆಸಲಿದ್ದಾರೆ.

# ನ್ಯಾಯಾಲಯ ತಲುಪಿದ ಟ್ರಂಪ್ ವಿಧಿಸಿದ ಹೆಚ್-1ಬಿ ಶುಲ್ಕದ ವಿಚಾರ

**ವಾಷಿಂಗ್ಟನ್:** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆಡಳಿತವು ಎಲ್ಲಾ ಹೊಸ ಹೆಚ್-1ಬಿ ವೀಸಾ ಅರ್ಜಿಗಳ ಮೇಲೆ ಒಂದು ಲಕ್ಷ ಡಾಲರ್‌ಗಳ ಶುಲ್ಕ ವಿಧಿಸುವ ನಿರ್ಧಾರದ ವಿರುದ್ಧ ಚೇಂಬರ್ ಆಫ್ ಕಾಮರ್ಸ್ ಮೊಕದ್ದಮೆ ಹೂಡಿದೆ, ಇದು ಅಮೆರಿಕದ ನಾವೀನ್ಯತೆ ಮತ್ತು ಸ್ಪರ್ಧಾತ್ಮಕತೆಯನ್ನು ಕುಂಠಿತಗೊಳಿಸುವ ದಾರಿತಪ್ಪಿದ ನೀತಿ ಮತ್ತು ಸ್ಪಷ್ಟವಾಗಿ ಕಾನೂನುಬಾಹಿರ ಕ್ರಮ ಎಂದು ಅದು ಹೇಳಿದೆ.

ಕೊಲಂಬಿಯಾದ ಜಿಲ್ಲಾ ನ್ಯಾಯಾಲಯದಲ್ಲಿ ಸಲ್ಲಿಸಲಾದ ಮೊಕದ್ದಮೆಯು, ಟ್ರಂಪ್ ಆಡಳಿತದ ಸೆ. 19ರ ಘೋಷಣೆಯಾದ ಕೆಲವು ವಲಸೆರಹಿತ ಕಾರ್ಮಿಕರ ಪ್ರವೇಶದ ಮೇಲಿನ ನಿರ್ಬಂಧವನ್ನು ಪ್ರಶ್ನಿಸುತ್ತದೆ, ಇದು ಹೆಚ್-1ಬಿ ವೀಸಾ ಕಾರ್ಯಕ್ರಮವನ್ನು ನಿಯಂತ್ರಿಸುವ ಕಾಂಗ್ರೆಸ್‌ನ ಅಧಿಕಾರವನ್ನು ಅತಿಕ್ರಮಿಸುವ ಮೂಲಕ ವಲಸೆ, ರಾಷ್ಟ್ರೀಯತೆ ಕಾಯ್ದೆಯನ್ನು ಉಲ್ಲಂಘಿಸುತ್ತದೆ ಎಂದು ವಾದಿಸುತ್ತದೆ.

ಹೋಮ್‌ಲ್ಯಾಂಡ್ ಸೆಕ್ಯುರಿಟಿ, ಸ್ಟೇಟ್ ಇಲಾಖೆಗಳು, ಅವುಗಳ ಕಾರ್ಯದರ್ಶಿಗಳಾದ ಕ್ರಿಸ್ಟಿ ಎಲ್ ನೋಯೆಮ್ ಮತ್ತು ಮಾರ್ಕೊ ರುಬಿಯೊ ಅವರನ್ನು ಕ್ರಮವಾಗಿ ಪ್ರತಿವಾದಿಗಳಾಗಿ ಹೆಸರಿಸಲಾಗಿದೆ.ಪ್ರಸ್ತುತ ಇರುವ




ಸುಮಾರು 3,600 ರ ಮಟ್ಟದಿಂದ ಹೆಚ್ಚಿನ ಶುಲ್ಕವು ಅಮೆರಿಕದ ಉದ್ಯೋಗದಾತರಿಗೆ, ವಿಶೇಷವಾಗಿ ಸ್ಟಾರ್ಟ್ ಅಪ್‌ಗಳು ಮತ್ತು ಸಣ್ಣ ಮತ್ತು ಮಧ್ಯಮ ಗಾತ್ರದ ವ್ಯವಹಾರಗಳಿಗೆ ಹೆಚ್-1ಬಿ ಕಾರ್ಯಕ್ರಮವನ್ನು ಬಳಸಿಕೊಳ್ಳುವುದು ವೆಚ್ಚ ನಿಷೇಧಿತವಾಗಿಸುತ್ತದೆ, ಇದನ್ನು ಎಲ್ಲಾ ಗಾತ್ರದ ಅಮೇರಿಕನ್ ವ್ಯವಹಾರಗಳು ಇಲ್ಲಿ ತಮ್ಮ ಕಾರ್ಯಾಚರಣೆಗಳನ್ನು ಬೆಳೆಸಲು ಅಗತ್ಯವಿರುವ ಜಾಗತಿಕ ಪ್ರತಿಭೆಗಳನ್ನು ಪ್ರವೇಶಿಸಬಹುದು ಎಂದು ಖಚಿತಪಡಿಸಿಕೊಳ್ಳಲು ಕಾಂಗ್ರೆಸ್ ಸ್ಪಷ್ಟವಾಗಿ ರಚಿಸಿದೆ ಎಂದು ಚೇಂಬರ್‌ನ ಕಾರ್ಯನಿರ್ವಾಹಕ ಉಪಾಧ್ಯಕ್ಷ ಮುಖ್ಯ ನೀತಿ ಅಧಿಕಾರಿ ನೀಲ್ ಬ್ರಾಡ್ಲಿ ಹೇಳಿದರು.

ತನ್ನ ದೂರಿನಲ್ಲಿ, ಈ ಘೋಷಣೆಯು ತಪ್ಪು ನೀತಿ ಮಾತ್ರವಲ್ಲ; ಇದು ಸ್ಪಷ್ಟವಾಗಿ ಕಾನೂನುಬಾಹಿರ ಎಂದು ವ್ಯಾಪಾರ ಸಂಸ್ಥೆ ಹೇಳಿದೆ. ನಾಗರಿಕರಲ್ಲದವರ ಪ್ರವೇಶದ ಮೇಲೆ ಗಮನಾರ್ಹ ಅಧಿಕಾರವನ್ನು ಹೊಂದಿದ್ದಾರೆ, ಆದರೆ ಆ ಅಧಿಕಾರವು ಕಾನೂನಿನಿಂದ ಸೀಮಿತವಾಗಿದೆ ಮತ್ತು ಕಾಂಗ್ರೆಸ್ ಅಂಗೀಕರಿಸಿದ ಕಾನೂನುಗಳನ್ನು ನೇರವಾಗಿ ವಿರೋಧಿಸಲು ಸಾಧ್ಯವಿಲ್ಲ ಎಂದು ಹೇಳಿದೆ.

**ಘೋಷಣೆ ನಿಖರವಾಗಿ ಹೀಗೆ ಮಾಡುತ್ತದೆ:** ಇದು -1 ಕಾರ್ಯಕ್ರಮಕ್ಕಾಗಿ ಕಾಂಗ್ರೆಸ್ ನಿಗದಿಪಡಿಸಿದ ಶುಲ್ಕವನ್ನು ಸ್ಪಷ್ಟವಾಗಿ ಉಲ್ಲಂಘಿಸುತ್ತದೆ, ಈ ಕಾರ್ಯಕ್ರಮವು ಅಮೇರಿಕನ್ ಸಮಾಜದ ಸುಧಾರಣೆಗಾಗಿ ವಾರ್ಷಿಕವಾಗಿ 85,000 ಜನರಿಗೆ ತಮ್ಮ ಪ್ರತಿಭೆಯನ್ನು ಅಮೆರಿಕಕ್ಕೆ ಕೊಡುಗೆ ನೀಡಲು ಒಂದು ಮಾರ್ಗವನ್ನು ಒದಗಿಸಬೇಕು ಎಂಬ ಕಾಂಗ್ರೆಸ್‌ನ ತೀರ್ಪನ್ನು ವಿರೋಧಿಸುತ್ತದೆ ಎಂದು ಅದು ಹೇಳಿದೆ. ಈ ಘೋಷಣೆಯು ಅಧ್ಯಕ್ಷರ ಕಾನೂನುಬದ್ಧ ಅಧಿಕಾರವನ್ನು ಮೀರಿದೆ ಎಂದು ದೂರಿನಲ್ಲಿ ಒತ್ತಿ ಹೇಳಲಾಗಿದೆ. ಅಮೆರಿಕದಲ್ಲಿ ಹೆಚ್ಚಿನ ಹೂಡಿಕೆಯನ್ನು ಆಕರ್ಷಿಸುವ ಟ್ರಂಪ್ ಅವರ ಪ್ರಸ್ತಾಪಗಳನ್ನು ಚೇಂಬರ್ ಸಕ್ರಿಯವಾಗಿ ಬೆಂಬಲಿಸಿದೆ, ಆದರೆ ಈ ಬೆಳವಣಿಗೆಯನ್ನು ಬೆಂಬಲಿಸಲು, ಅಮೆರಿಕದ ಆರ್ಥಿಕತೆಗೆ ಕಡಿಮೆ ಅಲ್ಲ, ಹೆಚ್ಚಿನ ಕಾರ್ಮಿಕರ ಅಗತ್ಯವಿರುತ್ತದೆ ಎಂದು ಬ್ರಾಡ್ಲಿ ಹೇಳಿದರು.

# ಹತ್ಯೆಗೀಡಾಗಿದ್ದ ಯುವಕನ ಕುಟುಂಬಕ್ಕೆ ರಾಹುಲ್ ಸಾಂತ್ವನ

**ಕಾನ್ಪುರ:** ಉತ್ತರ ಭಾರತದ ರಾಯ್‌ಬರೇಲಿಯಲ್ಲಿ ಗುಂಪು ಗಲಭೆಯಿಂದ ಹತ್ಯೆಗೀಡಾದ ದಲಿತ ವ್ಯಕ್ತಿ ಹರಿಓಂ ವಾಲ್ಮೀಕಿಯ ಕುಟುಂಬದವರಿಗೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಇಂದು ಸಾಂತ್ವನ ಹೇಳಿದರು. ರಾಹುಲ್ ನಮ್ಮ ಕುಟುಂಬ ಸದಸ್ಯರೊಂದಿಗೆ ಸಂವಹನ ನಡೆಸಿದರು ಎಂದು ಬಲಿಪಶುವಿನ ಚಿಕ್ಕಪ್ಪ ಚೌಧರಿ ಭಕ್ತ್ ದಾಸ್ ಹೇಳಿದ್ದಾರೆ. ಅಕ್ಟೋಬರ್ 2 ರಂದು ಬೆಳಗಿನ ಜಾವ 1 ಗಂಟೆ ಸುಮಾರಿಗೆ ರಾತ್ರಿ ಜಾಗರಣೆ ವೇಳೆ ಗ್ರಾಮಸ್ಥರು ವಾಲ್ಮೀಕಿ (40) ಅವರನ್ನು ಕಳ್ಳ ಎಂದು ತಪ್ಪಾಗಿ ಭಾವಿಸಿ ಹತ್ಯೆ ಮಾಡಿದ್ದಾರೆ ಎಂದು ಆರೋಪಿಸಲಾಗಿದೆ.

ದರೋಡೆಗಳಿಗಾಗಿ ಮನೆಗಳನ್ನು ಗುರುತಿಸಲು ಒಂದು ಗ್ಯಾಂಗ್ ಕಣ್ಗಾವಲುಗಾಗಿ ಡ್ರೋನ್‌ಗಳನ್ನು ಬಳಸುತ್ತಿದೆ ಎಂಬ ವದಂತಿಗಳ ನಡುವೆ ನಡೆದಿದ್ದ ಈ ಕೊಲೆಗೆ ಆಕ್ರೋಶಕ್ಕೆ ಕಾರಣವಾಗಿತ್ತು. ಕಾಂಗ್ರೆಸ್, ಸಮಾಜವಾದಿ ಪಕ್ಷ ಸೇರಿದಂತೆ ವಿರೋಧ ಪಕ್ಷಗಳು ಬಿಜೆಪಿ ಸರ್ಕಾರವು ದಲಿತರನ್ನು ರಕ್ಷಿಸುವಲ್ಲಿ, ಗುಂಪು ಹಿಂಸಾಚಾರವನ್ನು ತಡೆಯುವಲ್ಲಿ ವಿಫಲವಾಗಿದೆ ಎಂದು ಆರೋಪಿಸಿವೆ.ದಾಳಿಯ ನಂತರ, ಪೊಲೀಸರು ಪ್ರಕರಣ ದಾಖಲಿಸಿದ್ದಾರೆ ಮತ್ತು ಅಕ್ಟೋಬರ್ 10 ರಂದು ನಡೆದ ಎನ್‌ಕೌಂಟರ್ ನಂತರ ಬಂಧಿಸಲಾದ ಪ್ರಮುಖ ಆರೋಪಿ ಸೇರಿದಂತೆ ಇದುವರೆಗೆ 14 ಜನರನ್ನು ಬಂಧಿಸಲಾಗಿದೆ.



ಪ್ರಕರಣವನ್ನು ನಿರ್ವಹಿಸುವಲ್ಲಿನ ಲೋಪಕ್ಕಾಗಿ ಇಬ್ಬರು ಸಬ್ ಇನ್ಸ್‌ಪೆಕ್ಟರ್‌ಗಳು ಸೇರಿದಂತೆ ಐದು ಪೊಲೀಸರನ್ನು ಅಮಾನತು ಗೊಳಿಸಲಾಗಿದೆ. ಕಾಂಗ್ರೆಸ್ ನಾಯಕ ಚಕೇರಿ ವಿಮಾನ ನಿಲ್ದಾಣದಲ್ಲಿ ಬಂದಿಳಿದು ರಸ್ತೆ ಮೂಲಕ ಸುಮಾರು 80 ಕಿ.ಮೀ ದೂರದಲ್ಲಿರುವ ಫತೇಪುರಕ್ಕೆ ಪ್ರಯಾಣ ಬೆಳೆಸಿ, ಅಲ್ಲಿ ಮೃತರ ಕುಟುಂಬ ಸದಸ್ಯರನ್ನು ಭೇಟಿಯಾದರು. ಅವರ ಭೇಟಿಗೂ ಮುನ್ನ, ಸರ್ಕಾರವು ಹರಿಯೋಮ್ ಅವರ ಸಹೋದರಿ ಕುಸುಮ್ ಅವರಿಗೆ ಫತೇಪುರ್ ವೈದ್ಯಕೀಯ ಕಾಲೇಜಿನಲ್ಲಿ ಸ್ಟಾಫ್ ನರ್ಸ್ ಆಗಿ ಗುತ್ತಿಗೆ ಹುದ್ದೆಗೆ ಪ್ರಸ್ತಾವನೆ ಪತ್ರವನ್ನು ನೀಡಿತು.ಅವರ ಭೇಟಿಗಾಗಿ ಬಿಗಿ ಭದ್ರತಾ ವ್ಯವಸ್ಥೆಗಳನ್ನು ಮಾಡಲಾಗಿತ್ತು, ವಾಲ್ಮೀಕಿಯವರ ಮನೆಗೆ ಹೋಗುವ ಮಾರ್ಗವನ್ನು ಬ್ಯಾರಿಕೇಡ್ ಮಾಡಲಾಗಿದೆ.

# ಶಬರಿಮಲೆ ದೇವಾಲಯಕ್ಕೆ ರಾಷ್ಟ್ರಪತಿ ಮುರ್ಮು ಭೇಟಿ

**ಕೊಚ್ಚಿ:** ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇದೇ 22 ರಂದು ಶಬರಿಮಲೆ ದೇವಾಲಯಕ್ಕೆ ಭೇಟಿ ನೀಡಲಿದ್ದಾರೆ. ಮುರ್ಮು ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ದೇಗುಲದಲ್ಲಿ ವಿವಿಐಪಿ ಬೆಂಗಾವಲಿಗೆ ಅನುಮತಿ ನೀಡುವಂತೆ ಶಬರಿಮಲೆ ವಿಶೇಷ ಆಯುಕ್ತರು ಕೇರಳ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ರಾಷ್ಟ್ರಪತಿಗಳ ಭೇಟಿಯನ್ನು ಗಮನದಲ್ಲಿ ಇಟ್ಟುಕೊಂಡು ವಿಸ್ತಾರವಾದ ಜನಸಂದಣಿ ನಿರ್ವಹಣಾ ವ್ಯವಸ್ಥೆಗಳನ್ನು ಖಚಿತಪಡಿಸಿಕೊಳ್ಳುವಂತೆ ನ್ಯಾಯಾಲಯವು ತಿರುವಾಂಕೂರು ದೇವಸ್ವಂ ಮಂಡಳಿ (ಟಿಡಿಬಿ)ಗೆ ನಿರ್ದೇಶನ ನೀಡಿದೆ. ವಿಶೇಷ ಆಯುಕ್ತರ ಪ್ರಕಾರ, ಕೇರಳ ಪೊಲೀಸರ ಐದು ನಾಲ್ಕು ಚಕ್ರ ಚಾಲನೆಯ ವಾಹನಗಳು 4.5 ಕಿಮೀ ಉದ್ದದ ಸ್ವಾಮಿ ಅಯ್ಯಪ್ಪನ್ ರಸ್ತೆ ಮತ್ತು ಸನ್ನಿಧಾನಕ್ಕೆ ಸಾಂಪ್ರದಾಯಿಕ ಚಾರಣ ಮಾರ್ಗದಲ್ಲಿ ಆಂಬ್ಯುಲೆನ್ಸ್‌ನೊಂದಿಗೆ ರಾಷ್ಟ್ರಪತಿಗಳ ಬೆಂಗಾವಲು ಪಡೆಯ ಭಾಗವಾಗಿರುತ್ತವೆ.

ವಿವಿಐಪಿ ಭದ್ರತೆಗಾಗಿ ಬ್ಲೂ ಬುಕ್ ಪ್ರೋಟೋಕಾಲ್ ಅನ್ನು ಅನುಸರಿಸಬೇಕು ಎಂದು ನ್ಯಾಯಾಲಯವು ನಿರ್ದೇಶಿಸಿದೆ.



ಪತ್ತನಂತಿಟ್ಟದಲ್ಲಿರುವ ಪೊಲೀಸ್ ಅಧಿಕಾರಿಗಳು ಈಗಾಗಲೇ ಭದ್ರತಾ ಪೂರ್ವಾಭ್ಯಾಸ ನಡೆಯುತ್ತಿದ್ದು, ಶೀಘ್ರದಲ್ಲೇ ಪೂರ್ಣ ಬೆಂಗಾವಲು ವಿಚಾರಣೆಯನ್ನು ನಡೆಸಲಾಗುವುದು ಎಂದು ಹೇಳಿದರು.

ಸಾಂಪ್ರದಾಯಿಕವಾಗಿ, ಭಕ್ತರು ಕಾಲ್ನಡಿಗೆಯಲ್ಲಿ ಅಥವಾ ಗೊಂಬೆಗಳಲ್ಲಿ (ಪಲ್ಲಕ್ಕಿಗಳು) ಬೆಟ್ಟದ ಮೇಲೆ ಚಾರಣ ಕೈಗೊಳ್ಳುತ್ತಾರೆ. 1970 ರ ದಶಕದಲ್ಲಿ ಶಬರಿಮಲೆಗೆ ಭೇಟಿ ನೀಡಿದ ಮಾಜಿ ಅಧ್ಯಕ್ಷ ವಿ.ವಿ. ಗಿರಿ ಅವರು ಡಾಲಿಯಲ್ಲಿ ದೇವಾಲಯವನ್ನು ತಲುಪಿದರು ಎಂದು ಟಿಡಿಬಿ ಅಧಿಕಾರಿಗಳು ತಿಳಿಸಿದ್ದಾರೆ.

ತುರ್ತು ಸಂದರ್ಭಗಳಲ್ಲಿ, ದೇವಾಲಯಕ್ಕೆ ಸರಕುಗಳನ್ನು ಸಾಗಿಸಲು ಟಿಡಿಬಿ, ಅರಣ್ಯ ಇಲಾಖೆಯಿಂದ ನಿರ್ವಹಿಸಲ್ಪಡುವ ಆಂಬ್ಯುಲೆನ್ಸ್‌ಗಳು, ಟ್ರ್ಯಾಕ್ಟರ್‌ಗಳಿವೆ ಎಂದು ಟಿಡಿಬಿ ಅಧಿಕಾರಿ ತಿಳಿಸಿದ್ದಾರೆ.

ಅಧ್ಯಕ್ಷ ಮುರ್ಮು ನಾಲ್ಕು ದಿನಗಳ ಭೇಟಿಯ ಭಾಗವಾಗಿ ಅಕ್ಟೋಬರ್ 21 ರಂದು ಕೇರಳಕ್ಕೆ ಆಗಮಿಸಲಿದ್ದಾರೆ.

# ಖಡಕ್ ಪೊಲೀಸ್ ಆಫಿಸರ್ ಎನಿಸಿಕೊಂಡಿದ್ದ ಡಿಐಜಿ ಮನೆಯಲ್ಲಿ ಪತ್ತೆಯಾಯ್ತು ಕುಬೇರನ ಖಜಾನೆ

**ಚಂಡೀಗಢ:** ಖಡಕ್ ಪೊಲೀಸ್ ಆಫಿಸರ್ ಎಂದೇ ಗುರುತಿಸಿಕೊಂಡಿದ್ದ ಪಂಜಾಬ್‌ನ ಹಿರಿಯ ಪೊಲೀಸ್ ಅಧಿಕಾರಿಯೊಬ್ಬರ ಮನೆಯಲ್ಲಿ ಕುಬೇರನ ಖಜಾನೆಯೇ ಪತ್ತೆಯಾಗಿದ್ದು ಅವರನ್ನು ಸಿಬಿಐ ಬಂಧಿಸಿದೆ. ಭ್ರಷ್ಟಾಚಾರ ಪ್ರಕರಣವೊಂದರಲ್ಲಿ ಪಂಜಾಬ್‌ನ ರೋಪರ್ ವಲಯ ಡಿಐಜಿ ಹರ್‌ಚರಣ್ ಸಿಂಗ್ ಬುಲ್ಲಾರ್ ಸಿಬಿಐ ಬಲೆಗೆ ಬಿದ್ದ ಐಪಿಎಸ್ ಅಧಿಕಾರಿಯಾಗಿದ್ದಾರೆ. ಅವರ ನಿವಾಸದಿಂದ ಐದು ಕೋಟಿ ರೂ. ನಗದು, ಚಿನ್ನಾಭರಣ, ಕಂತೆ ಕಂತೆ ನೋಟುಗಳು, ವಜ್ರ, ಚಿನ್ನದ ಆಭರಣಗಳು, ಉತ್ಕೃಷ್ಟ ವಾಚ್‌ಗಳು ಸೇರಿದಂತೆ ಸಂಪತ್ತಿನ ಖಜಾನೆಯನ್ನೇ ವಶಕ್ಕೆ ಪಡೆದುಕೊಳ್ಳಲಾಗಿದೆ. ವ್ಯಕ್ತಿಯೊಬ್ಬರಿಂದ 8 ಲಕ್ಷ ರೂ. ಲಂಚ ಪ್ರಕರಣ ಪಡೆದ ಪ್ರಕರಣದ ಬೆನ್ನತ್ತಿದ್ದ ಸಿಬಿಐನವರು ಭ್ರಷ್ಟ ಐಪಿಎಸ್ ಅಧಿಕಾರಿಯ ಸಂಪತ್ತಿನ ಖಜಾನೆ ಕಂಡು ನಿಬ್ಬೆರಗಾಗಿದ್ದಾರೆ. ಹರ್‌ಚರಣ್ ಸಿಂಗ್ ಬುಲ್ಲಾರ್ 2009ರ ಬ್ಯಾಚ್‌ನ ಐಪಿಎಸ್ ಅಧಿಕಾರಿ. ಪಂಜಾಬ್‌ನ ರೋಪರ್ ವಲಯದಲ್ಲಿ ಡಿಐಜಿಯಾಗಿದ್ದಾರೆ. 8 ಲಕ್ಷ ರೂಪಾಯಿ ಲಂಚ ಪಡೆದ ಆರೋಪದಲ್ಲಿ ಸಿಬಿಐಗೆ ಬಲೆಗೆ ಬಿದ್ದಿದ್ದಾರೆ. ಇವರ ಜೊತೆ ಮಧ್ಯವರ್ತಿ ಕೃಷ್ಣ ಎಂಬಾತನನ್ನು ಬಂಧಿಸಲಾಗಿದೆ.



ಆಕಾಶ್ ಬಟ್ಟಾ ಎಂಬ ಸ್ಕ್ರ್ಯಾಪ್ ವ್ಯಾಪಾರಿ ವಿರುದ್ಧ ಕ್ರಿಮಿನಲ್ ಕೇಸ್ ಇತ್ಯರ್ಥಕ್ಕೆ ಮಧ್ಯವರ್ತಿ ಮೂಲಕ ಲಂಚ ಪಡೆಯುವ ವೇಳೆ ಲಾಕ್ ಆಗಿದ್ದಾರೆ. 8 ಲಕ್ಷ ರೂ. ಲಂಚ ಕೊಡದಿದ್ದರೆ ಕ್ರಿಮಿನಲ್ ಕೇಸ್ ಜೊತೆ ಉದ್ಯಮಕ್ಕೆ ತೊಂದರೆ ಎದುರಿಸಬೇಕಾಗುತ್ತದೆ ಎಂದು ಡಿಐಜಿ ಬೆದರಿಸಿದ್ದರು. ಈ ಬಗ್ಗೆ ಉದ್ಯಮಿ ಆಕಾಶ್ ಸಿಬಿಐಗೆ ದೂರು ಸಲ್ಲಿಸಿದ್ದರು. ದೂರಿನ ಆಧಾರದಲ್ಲಿ ಅಖಾಡಕ್ಕಿಳಿದ ಸಿಬಿಐ ಅಧಿಕಾರಿಗಳು, ಲಂಚ ಪಡೆಯುವ ವೇಳೆ ರೆಡ್ ಹ್ಯಾಂಡಾಗಿ ಡಿಐಜಿ ಹರ್‌ಚರಣ್‌ರನ್ನು ಬಂಧಿಸಿದೆ.

ನಂತರ ಅವರ ಮನೆಯನ್ನು ಶೋಧಿಸಿದಾಗ 5 ಕೋಟಿ ರೂಪಾಯಿಗೂ ಹೆಚ್ಚು ನಗದು ಸಿಕ್ಕಿದೆ. ಇದಲ್ಲದೆ 1.5 ಕೆಜಿ ಚಿನ್ನಾಭರಣ, ನೂರಾರು ಕೋಟಿ ರೂ. ಮೌಲ್ಯದ ನಿವೇಶನ-ಜಮೀನಿನ ದಾಖಲೆಪತ್ರಗಳು, ಐಷಾರಾಮಿ ಮರ್ಸಿಡಿಸ್, ಆಡಿ ಕಾರ್‌ನ ಕೀಗಳು, 22 ದುಬಾರಿ ಬೆಲೆಯ ವಾಚ್‌ಗಳು, 40 ಲೀಟರ್ ಇಂಪೋರ್ಟೆಡ್ ಮದ್ಯ, ಡಬಲ್ ಬ್ಯಾರಲ್ ಶಾಟ್‌ಗನ್, ಒಂದು ಪಿಸ್ತೂಲ್, ಒಂದು ರಿವಾಲ್ವರ್ ಮತ್ತು 1 ಏರ್‌ಗನ್‌ಅನ್ನು ಸಿಬಿಐ ವಶಕ್ಕೆ ಪಡೆದಿದೆ. ಇದಲ್ಲದೆ ಲಂಚದ ಡೀಲ್ ಕುದಿರಿಸಿದ್ದ ಮಧ್ಯವರ್ತಿ ಕೃಷ್ಣ ಎಂಬಾತನಿಂದ 21 ಲಕ್ಷ ರೂಪಾಯಿ ಜಪ್ತಿ ಮಾಡಲಾಗಿದೆ. ಡಿಜಿಐ ಮನೆಯಲ್ಲಿ ರಾತ್ರಿಯಿಡೀ ಶೋಧ ಮುಂದುವರಿದಿದ್ದು, ಬಂಧಿತರನ್ನು ಇಂದು ನ್ಯಾಯಾಲಯಕ್ಕೆ ಹಾಜರುಪಡಿಸಲಾಯಿತು.

ವಿಶೇಷವೆಂದರೆ, ದಕ್ಷ ಅಧಿಕಾರಿ ಎಂದೇ ಹೆಸರು ಪಡೆದಿದ್ದ ಐಪಿಎಸ್ ಹರ್‌ಚರಣ್‌ಸಿಂಗ್ ಬುಲ್ಲಾರ್ ಈವರೆಗೆ ವಿವಿಧ ಹುದ್ದೆಗಳನ್ನು ನಿರ್ವಹಿಸಿದ್ದಾರೆ. ಡ್ರಗ್ಸ್ ಮಾಫಿಯಾ ವಿರುದ್ಧ ವಿನಾಶದ ವಿರುದ್ಧ ಯುದ್ಧ ಎಂದು ದೊಡ್ಡ ಅಭಿಯಾನವನ್ನೇ ಕೈಗೊಂಡಿದ್ದರು. ಇದರಿಂದಾಗಿಯೇ ಇವರಿಗೆ ಡಿಐಜಿಯಾಗಿ ಬಡ್ತಿ ಸಿಕ್ಕಿತ್ತು. ಆದರೆ ಈಗ ಇವರ ಭ್ರಷ್ಟ ಮುಖವಾಡ ಕಳಚಿಬಿದ್ದಿದೆ. ಸಂಪತ್ತಿನ ಕೋಟೆ ನೋಡಿ ಸಿಬಿಐ ಅಧಿಕಾರಿಗಳೇ ದಂಗಾಗಿದ್ದಾರೆ.

# ಮಿನಿ ನ್ಯೂಸ್

## ಪರೀಕ್ಷೆ ತಪ್ಪಿಸಲು ಶಾಲೆಗೆ ಬಾಂಬ್ ಬೆದರಿಕೆ ಇ-ಮೇಲ್ ಕಳಿಸಿದ ವಿದ್ಯಾರ್ಥಿ

**ನವದೆಹಲಿ:** ಪರೀಕ್ಷೆಗಳನ್ನು ತಪ್ಪಿಸಲು ವಿದ್ಯಾರ್ಥಿಯೊಬ್ಬ ಶಾಲೆಯಲ್ಲಿ ಬಾಂಬ್ ಇಡಲಾಗಿದೆ ಎಂದು ಇ-ಮೇಲ್ ಕಳಿಸಿದ್ದ ಘಟನೆ ಇಲ್ಲಿ ನಡೆದಿದೆ. ದೆಹಲಿಯ ಹೊರವಲಯದ ಖಾಸಗಿ ಶಾಲೆಗೆ ಇ-ಮೇಲ್ ಮೂಲಕ ಬಾಂಬ್ ಬೆದರಿಕೆ ಬಂದಿದೆ ಪೊಲೀಸರು ಪರಿಶೀಲನೆ ನಡೆಸಿದಾಗ ಅದು ಹುಸಿ ಬೆದರಿಕೆ ಎಂದು ಹೊತ್ತಾಗಿ ಕಳಿಸಿದವರು ಯಾರು ಎಂದು ತನಿಖೆ ನಡೆಸಿದಾಗ ಅದೆ ಶಾಲೆಯ ವಿದ್ಯಾರ್ಥಿ ಎಂದು ಗೊತ್ತಾಗಿದೆ. ವಿಶಾಲ್ ಭಾರತಿ ಪಬ್ಲಿಕ್ ಶಾಲೆಯ ಪ್ರಾಂಶುಪಾಲರು ಪಶ್ಚಿಮ ವಿಹಾರ್ ಪೂರ್ವ ಪೊಲೀಸ್ ಠಾಣೆಗೆ ಮಹಿತಿ ನೀಡಿದಾಗ ಬಾಂಬ್ ನಿಷ್ಕ್ರಿಯ ದಳ, ಶ್ವಾನ ದಳ, ಅಗ್ನಿಶಾಮಕ ದಳದ ತಂಡಗಳನ್ನು ಸಂಪೂರ್ಣ ಪರಿಶೀಲನೆ ನಡೆಸಲು ಕರೆಸಲಾಯಿತು ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಶೋಧನೆಯ ಸಮಯದಲ್ಲಿ ಯಾವುದೇ ಅನುಮಾನಾಸ್ಪದ ವಸ್ತು ಕಂಡುಬಂದಿಲ್ಲವಾದ ನಂತರ, ಬೆದರಿಕೆಯನ್ನು ಸುಳ್ಳು ಎಂದು ಘೋಷಿಸಲಾಯಿತು ಎಂದು ಅವರು ಹೇಳಿದರು. ಪ್ರಕರಣ ದಾಖಲಿಸಲಾಯಿತು ಮತ್ತು ತನಿಖೆಯ ಸಮಯದಲ್ಲಿ, ಸೈಬರ್ ತಂಡವು ಇ-ಮೇಲ್‌ನ ಮೂಲವನ್ನು ಬಾಲಾಪರಾಧಿಗೆ ಪತ್ತೆಹಚಿತು. ಬಾಲಾಪರಾಧಿಯನ್ನು ಬಂಧಿಸಲಾಗಿದ್ದು, ವಿಚಾರಣೆ ನಡೆಸಿದಾಗ, ಪರೀಕ್ಷೆಗಳಿಗೆ ಹೆದರಿ ಶಾಲೆಗೆ ರಜೆ ಘೋಷಿಸಬೇಕೆಂದು ಬೆದರಿಕೆ ಪತ್ರ ಕಳುಹಿಸಿದ್ದಾಗಿ ಒಪ್ಪಿಕೊಂಡಿದ್ದಾನೆ ಎಂದು ಅಧಿಕಾರಿ ಹೇಳಿದರು.

## ಶಬರಿಮಲೆ ಚಿನ್ನ ನಾಪತ್ತೆ ಪ್ರಕರಣ ಆರೋಪಿ ಉನ್ನಿಕೃಷ್ಣನ್ ಪೊಟ್ಟಿ ಬಂಧನ


**ತಿರುವನಂತಪುರಂ:** ಶಬರಿಮಲೆ ಶ್ರೀ ಅಯ್ಯಪ್ಪ ಸ್ವಾಮಿಯ ದೇವಸ್ಥಾನದಿಂದ ಚಿನ್ನ ನಾಪತ್ತೆ ಪ್ರಕರಣದ ತನಿಖೆ ನಡೆಸುತ್ತಿರುವ ವಿಶೇಷ ತನಿಖಾ ತಂಡ ಶುಕ್ರವರ ಬೆಂಗಳೂರು ಮೂಲದ ಉದ್ಯಮಿ, ಪ್ರಮುಖ ಆರೋಪಿ ಉನ್ನಿಕೃಷ್ಣನ್ ಪೊಟ್ಟಿಯನ್ನು ಬಂಧಿಸಿದೆ. ಪುಲಿಮಠದಲ್ಲಿರುವ ಅವರ ನಿವಾಸದಿಂದ ಆರೋಪಿಯನ್ನು ಬಂಧಿಸಿ ತಿರುವನಂತಪುರಂನ ಎಸ್‌ಐಟಿ ಕಚೇರಿಗೆ ಕರೆತಂದು ವಿಚಾರಣೆ ನಡೆಸಲಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ನಂತರ, ಪೊಟ್ಟಿ ಅವರನ್ನು ವೈದ್ಯಕೀಯ ಪರೀಕ್ಷೆಗಾಗಿ ಸರ್ಕಾರಿ ಆಸ್ಪತ್ರೆಗೆ ಕರೆದೊಯ್ಯಲಾಗಿದ್ದು ಮಧ್ಯಾಹ್ನದ ವೇಳೆಗೆ ಪತ್ತನಂತಿಟ್ಟಕ್ಕೆ ಕರೆದುಕೊಂಡು ಹೋಗಿ ನ್ಯಾಯಾಲಯದ ಮುಂದೆ ಹಾಜರುಪಡಿಸಲಾಗುವುದು. ವಿವರವಾದ ವಿಚಾರಣೆಗಾಗಿ ಪೊಟ್ಟಿಯನ್ನು ಕಸ್ಟಡಿಗೆ ನೀಡಲು ಎಸ್‌ಐಟಿ ಕೋರಲಿದೆ. ಕೇರಳ ಹೈಕೋರ್ಟ್ ನಿರ್ದೇಶನದ ಮೇರೆಗೆ ರಚಿಸಲಾದ ಎಸ್‌ಐಟಿ ಪ್ರಸ್ತುತ ಎರಡು ಪ್ರಕರಣಗಳ ತನಿಖೆ ನಡೆಸುತ್ತಿದೆ ಒಂದು ದ್ವಾರಪಾಲಕ ವಿಗ್ರಹಗಳಿಂದ ಕಾಣೆಯಾದ ಚಿನ್ನ, ಇನ್ನೊಂದು ಶ್ರೀಕೋವಿಲ್ ಬಾಗಿಲಿನ ಚೌಕಟ್ಟುಗಳಿಂದ ಚಿನ್ನ ನಷ್ಟಕ್ಕೆ ಸಂಬಂಧಿಸಿದೆ. 2019 ರಲ್ಲಿ ದ್ವಾರಪಾಲಕ ವಿಗ್ರಹಗಳ ಚಿನ್ನದ ಹೊದಿಕೆಯ ತಾಮ್ರದ ತಟ್ಟೆಗಳು, ಶ್ರೀಕೋವಿಲ್ ಬಾಗಿಲಿನ ಚೌಕಟ್ಟುಗಳನ್ನು ವಿದ್ಯುಲ್ಲೇಪಿಸುವಿಕೆಗಾಗಿ ಪಾರ್ಟಿಗೆ ಹಸ್ತಾಂತರಿಸುವಲ್ಲಿ ತಿರುವಾಂಕೂರು ದೇವಸ್ವಂ ಮಂಡಳಿ ಸದಸ್ಯರು, ಅಧಿಕಾರಿಗಳ ಭಾಗಿಯಾಗಿರುವ ಬಗ್ಗೆಯೂ ಎಸ್‌ಐಟಿ ಅಧಿಕಾರಿಗಳು ತನಿಖೆ ನಡೆಸುತ್ತಿದ್ದಾರೆ. ಈ ಹಿಂದೆ, ಟಿಡಿಬಿ ವಿಜಿಲೆನ್ಸ್ ಸೆವಿಂಗ್ ಪಾರ್ಟಿಯನ್ನು ಎರಡು ದಿನಗಳ ಕಾಲ ವಿಚಾರಣೆ ನಡೆಸಿತ್ತು, ಅದರ ಪ್ರಾಥಮಿಕ ವಿಚಾರಣೆಯ ಸಮಯದಲ್ಲಿ ಅವರ ಹೇಳಿಕೆಯನ್ನು ದಾಖಲಿಸಿತ್ತು. ಎಸ್‌ಐಟಿ ತನ್ನ ತನಿಖೆಯನ್ನು ಮುಕ್ತಾಯಗೊಳಿಸಲು ಹೈಕೋರ್ಟ್ ಆರು ವಾರಗಳ ಗಡುವನ್ನು ನಿಗದಿಪಡಿಸಿದೆ.

## ಪಿಒಕೆ ರಚನೆಗೆ ನೆಹರು ಕಾರಣ ಕೇಂದ್ರ ಸಚಿವ ಜಿತೇಂದ್ರ ಸಿಂಗ್

**ಕಥುವಾ:** ಮಾಜಿ ಪ್ರಧಾನಿ ಜವಾಹರಲಾಲ್ ನೆಹರು ಅವರ ಏಕಪಕ್ಷೀಯ ಕದನ ವಿರಾಮ ನಿರ್ಧಾರವೇ ಪಾಕ್ ಆಕ್ರಮಿತ ಕಾಶೀರ ಕಾರಣ ಎಂದು ಕೇಂದ್ರ ಸಚಿವ ಜಿತೇಂದ್ರ ಸಿಂಗ್‌ದೂಷಿಸಿದ್ದಾರೆ. ಅಂತಹ ಪರಿಸ್ಥಿತಿಯನ್ನು ಆಗಿನ ಗೃಹ ಸಚಿವ ಸರ್ದಾರ್ ವಲ್ಲಭಭಾಯಿ ಪಟೇಲ್ ಅದನ್ನು ನಿಭಾಯಿಸಿದ್ದರೆ ಈ ಸಮಸ್ಯೆ ಉದ್ಭವಿಸುತ್ತಿರಲಿಲ್ಲ ಎಂದು ಅವರು ಹೇಳಿದ್ದಾರೆ. ಆಗಿನ ಪ್ರಧಾನಿ ನೆಹರು ಅವರು ತಮ ಗೃಹ ಸಚಿವ ಸರ್ದಾರ್ ಪಟೇಲ್ ಅವರಿಗೆ ಇತರ ರಾಜಪ್ರಭುತ್ವದ ರಾಜ್ಯಗಳಂತೆ ಜಮ್ಮು ಮತ್ತು ಕಾಶ್ಮೀರವನ್ನು ನಿಭಾಯಿಸಲು ಮುಕ್ತ ಹಸ್ತ ನೀಡಿದ್ದರೆ, ಪಿಒಕೆ ಸಮಸ್ಯೆ ಎಂದಿಗೂ ಉದ್ಭವಿಸುತ್ತಿರಲಿಲ್ಲ, ಜಮ್ಮು ಮತ್ತು ಕಾಶ್ಮೀರದ ಇತಿಹಾಸ, ಭಾರತ ವಿಭಿನ್ನವಾಗಿರುತ್ತಿತ್ತು ಎಂದು ಸಿಂಗ್ ಹೇಳಿದರು. ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ 150ನೇ ಜನ್ಮ ದಿನಾಚರಣೆಯ ಸ್ಮರಣಾರ್ಥ ಉದ್ಘಾಟನಾ ಏಕತಾ ಮಾರ್ಚ್‌ಕ್ಕೆ ಚಾಲನೆ ನೀಡಿದ ನಂತ ಅವರು ಈ ಹೇಳಿಕೆ ನೀಡಿದರು. 560 ಕ್ಕೂ ಹೆಚ್ಚು ರಾಜಪ್ರಭುತ್ವದ ರಾಜ್ಯಗಳನ್ನು ಒಕ್ಕೂಟಕ್ಕೆ ಸಂಯೋಜಿಸಿದ್ದಕ್ಕಾಗಿ ಸಿಂಗ್ ಪಟೇಲ್ ಅವರನ್ನು ಶ್ಲಾಘಿಸಿದರು ಮತ್ತು ಭಾರತೀಯ ಜನ ಸಂಘದ ಸಂಸ್ಥಾಪಕ ಶ್ಯಾಮ ಪ್ರಸಾದ್ ಮುಖರ್ಜಿ ಅವರೊಂದಿಗೆ ಅವರನ್ನು ಸ್ವತಂತ್ರ ಭಾರತದ ಅತ್ಯಂತ ಕಡೆಗಣಿಸಲಾದ ನಾಯಕರಲ್ಲಿ ಒಬ್ಬರೆಂದು ಬಣ್ಣಿಸಿದರು.

ಪಟೇಲರ ಸಮಯೋಚಿತ ಹಸ್ತಕ್ಷೇಪದಿಂದಾಗಿ ಭಾರತೀಯ ಪಡೆಗಳು ಶ್ರೀನಗರವನ್ನು ತಲುಪಿ ಬುಡಕಟ್ಟು ಜನಾಂಗದ ದಾಳಿಯನ್ನು ಹಿಮ್ಮೆಟ್ಟಿಸಲು ಸಾಧ್ಯವಾಯಿತು. ಆದರೆ ಪಾಕಿಸ್ತಾನ ವಶಪಡಿಸಿಕೊಂಡ ಜಮ್ಮು, ಕಾಶ್ಮೀರದ ಭಾಗವನ್ನು ಪಡೆಗಳು ಮರಳಿ ಪಡೆಯುವ ಹಂತದಲ್ಲಿದ್ದಾಗ, ನೆಹರು ಏಕಪಕ್ಷೀಯ ಕದನ ವಿರಾಮವನ್ನು ಘೋಷಿಸಿದರು, ಇದು ಪಿಒಜೆಕೆ ರಚನೆಗೆ ಕಾರಣವಾಯಿತು ಎಂದು ಹೇಳಿದರು.



# 21ನೇ ಶತಮಾನ ಭಾರತದ ಶತಮಾನವಾಗಿದೆ: ಆಸ್ಟ್ರೇಲಿಯಾ ಮಾಜಿ ಪ್ರಧಾನಿ

## 40–50 ವರ್ಷಗಳಲ್ಲಿ ಭಾರತ ವಿಶ್ವನಾಯಕನಾಗುತ್ತದೆ; ಟೋನಿ ಅಬ್ಬಾಟ್, ಭಾರತದ ವಿಷಯದಲ್ಲಿ ಟ್ರಂಪ್ ಸುಂಕ ವಿಧಿಸಿದ್ದು ತಪ್ಪು

**ಹೊಸದಿಲ್ಲಿ:** ಭಾರತವು ಜಾಗತಿಕವಾಗಿ ಶಕ್ತಿಶಾಲಿ ರಾಷ್ಟ್ರವಾಗಿ ಹೊರಹೊಮ್ಮುತ್ತ ತನ್ನ ಸ್ಥಾನವನ್ನು ಬಲಪಡಿಸಿಕೊಳ್ಳುತ್ತಿದೆ. ಈ ಹೊತ್ತಿನಲ್ಲೇ ಭಾರತದ ಕುರಿತು ಮಾತನಾಡಿರುವ ಆಸ್ಟ್ರೇಲಿಯಾದ ಮಾಜಿ ಪ್ರಧಾನಿ ಟೋನಿ ಅಬ್ಬಾಟ್ 21ನೇ ಶತಮಾನವು ಭಾರತಕ್ಕೇ ಸೀಮಿತವಾಗಿದೆ,ನಾಲ್ಕು ಅಥವಾ ಐದು ದಶಕಗಳವರೆಗೆ ಭಾರತದ ಯಾವುದೇ ಪ್ರಧಾನಿಯಾಗಿರಲಿ ಮುಕ್ತ ವಿಶ್ವ ನಾಯಕ ಎಂಬ ಪಟ್ಟವನ್ನು ಅಮೆರಿಕಾದಿಂದ ತನ್ನದಾಗಿಸಿಕೊಳ್ಳಬಹುದು ಎಂದು ಭಾರತದ ಪ್ರಗತಿಯನ್ನು ಹೊಗಳಿದ್ದಾರೆ.

ಎನ್ ಡಿ ಟಿವಿಯ ವರ್ಲ್ಡ್ ಸಮ್ಮಿಟ್‌ನಲ್ಲಿ ಮಾತನಾಡಿದ ಅಬ್ಬಾಟ್ ಜಾಗತಿಕ ಮಟ್ಟದಲ್ಲಿ ಪ್ರಭಾವಶಾಲಿ ರಾಷ್ಟ್ರವಾದ ಭಾರತ ಏಷ್ಯಾ-ಪೆಸಿಫಿಕ್ ಪ್ರದೇಶದಲ್ಲಿ ಚೀನಾದ ವಿರುದ್ಧ ಪ್ರಜಾಪ್ರಭುತ್ವದ ಅತಿದೊಡ್ಡ ಶಕ್ತಿಯಾಗಿಯಾಗುವುದರ ಜೊತೆಗೆ ಆಸ್ಟ್ರೇಲಿಯಾದ ದೃಢವಾದ, ವಿಶ್ವಾಸಾರ್ಹ ಪಾಲುದಾರನಾಗಿ ದೆಹಲಿ ತನ್ನ ಜವಾಬ್ದಾರಿಯನ್ನು ನಿರ್ವಹಿಸಬೇಕು ಎಂದು ಕರೆ ನೀಡಿದರು. ಭಾರತವು ಆಸ್ಟ್ರೇಲಿಯಾ, ಬ್ರಿಟನ್‌ನೊಂದಿಗೆ ಮಾಡಿಕೊಂಡ ಮುಕ್ತ ವ್ಯಾಪಾರ ಒಪ್ಪಂದಗಳಿಂದ ಪ್ರಜಾಪ್ರಭುತ್ವದ ಜಗತ್ತು ಚೀನಾದಿಂದ ದೂರ ಸರಿಯುತ್ತಿರುವ ಸಂಕೇತವಾಗಿದೆ ಎಂದಿದ್ದಾರೆ. ಅಷ್ಟೇ ಅಲ್ಲದೇ ಸಮ್ಮಿಟ್‌ನಲ್ಲಿ ಅವರು ಭಾರತ ಚೀನಾ, ಪಾಕಿಸ್ತಾನ ಹಾಗೂ ಅಮೆರಿಕಾಗಳ ನಡುವೆ ಹೊಂದಿರುವ ಸಂಬಂಧಗಳನ್ನು ಕುರಿತು ವಿವರಿಸುತ್ತಾ, ವಿಶ್ವವನ್ನು ಆಳುವ ಬಯಕೆಯಿರುವ ಚೀನಾದ ಮಹತ್ವಾಕಾಂಕ್ಷೆಗಳನ್ನು ನಿಯಂತ್ರಿಸುವ ಶಕ್ತಿ ಭಾರತಕ್ಕಿದೆ ಎಂದ ಅವರು ಚೀನಾ ಪ್ರಾಬಲ್ಯ



ಸಾಧಿಸಲು ಬಯಸುತ್ತದೆ ಇದು ಚೀನಾದ ಎಲ್ಲಾ ನೆರೆಹೊರೆಯವರಿಗೆ ಹಾಗೂ ಜಗತ್ತಿಗೆ ತೊಂದರೆ ಉಂಟು ಮಾಡುತ್ತದೆ ಎಂದರು.

**21ನೇ ಶತಮಾನವು ಭಾರತದ ಶತಮಾನವಾಗಿದೆ:** ಚೀನಾ ಹಾಗೂ ಭಾರತದ ಕುರಿತು ವಿಶ್ಲೇಷಣೆ ಮಾಡಿದ ಅಬ್ಬಾಟ್ ಚೀನಾದ ವಿರುದ್ಧ ಭಾರತ ಪ್ರಜಾಪ್ರಭುತ್ವದ ಅತಿದೊಡ್ಡ ಶಕ್ತಿಯಾಗಿದೆ. ಭಾರತ ಈಗ ಜನಸಂಖ್ಯೆಯಲ್ಲಿ ಅತಿದೊಡ್ಡ ರಾಷ್ಟ್ರವಾಗಿದೆ. ನೀವು ಭಾರತದ ಯಾವುದೇ ಮೂಲೆಗೆ ಹೋಗಿ ಅಲ್ಲಿ ನೀವು ಬೃಹತ್ ಕಟ್ಟಡಗಳು ಹಾಗೂ ಹೊಸ ವಿಮಾನ ನಿಲ್ದಾಣಗಳು ಸೇರಿದಂತೆ ಹಲವು ಪ್ರಗತಿಯನ್ನು ನೋಡಬಹುದು. ಭಾರತವು ದಿನದಿಂದ ದಿನಕ್ಕೆ ಬೆಳೆಯುತ್ತಿದ್ದು ಅದು ಚೀನಾಗೆ ಪರ್ಯಾಯವಾಗಬಲ್ಲದು ಎಂದಿದ್ದಾರೆ. ಅಲ್ಲದೇ 21ನೇ ಶತಮಾನವು ಚೀನಾಗೆ ಹೇಗೋ ಹಾಗೆಯೇ ಭಾರತದ ಶತಮಾನವು ಆಗಿದೆ ಎಂದಿರುವ ಅವರು ಕೆಲ ದಶಕಗಳ ಹಿಂದೆ ಚೀನಾ ಆರ್ಥಿಕ ಮತ್ತು ಮಿಲಿಟರಿಯಲ್ಲಿ ಪ್ರಗತಿ ಸಾಧಿಸದಂತೆಯೇ ಪ್ರಗತಿ ಸಾಧಿಸಲು ಬಯಸುತ್ತಿರುವ ಭಾರತಕ್ಕೆ ಚೀನಾಕ್ಕಿಂತ 3 ಬಹುದೊಡ್ಡ ಶಕ್ತಿಗಳಾಗಿ ಪ್ರಜಾಪ್ರಭುತ್ವ, ಕಾನೂನಿನ ಆಳ್ವಿಕೆ ಸೇರಿದಂತೆ ಇಂಗ್ಲಿಷ್ ಭಾಷೆಯ ಜ್ಞಾನ ಪರಿಣಮಿಸಲಿದೆ ಎಂದು ತಿಳಿಸಿದ್ದಾರೆ. ನಾನು ಪ್ರಧಾನಿಯಾಗಿದ್ದಾಗ 'ಭಾರತವು ಪ್ರಜಾಪ್ರಭುತ್ವದ ಮಹಾಶಕ್ತಿಯಾಗಿ ಹೊರಹೊಮ್ಮಲಿದೆ' ಎಂದು ಹೇಳುತ್ತಿದ್ದೆ. ಈಗ ಅದು ನಿಜವಾಗುತ್ತಿದೆ. ಮುಂದಿನ 40, 50 ವರ್ಷಗಳಲ್ಲಿ ಭಾರತದ ಪ್ರಧಾನಿಯೇ ಮುಕ್ತ ವಿಶ್ವದ ನಾಯಕನಾಗುವ ಸಾಧ್ಯತೆ ಇದೆ ಎಂದು ಅಬ್ಬಾಟ್ ಅಭಿಪ್ರಾಯಪಟ್ಟಿದ್ದಾರೆ.

ಇನ್ನೂ ಥೈವಾನ್ ಕುರಿತು ಮಾತನಾಡಿದ ಅಬ್ಬಾಟ್ ಥೈವಾನ್‌ನ ಮೇಲಿನ ಆಕ್ರಮಣ ಚೀನಾ ಜಗತ್ತಿಗೆ ನೀಡುವ ಮೊದಲ ಪರೀಕ್ಷೆಯಂತೆ, ನನ್ನ ದೇಶ ಸೇರಿದಂತೆ ಜಗತ್ತಿನ ಎಲ್ಲಾ ಪ್ರಜಾಪ್ರಭುತ್ವ ದೇಶಗಳು ಚೀನಾದ ಈ ನಡೆಯನ್ನು ಹಗುರವಾಗಿ ಪರಿಗಣಿಸಬೇಡಿ ಎಂದು ಎಚ್ಚರಿಕೆ ನೀಡಿದ್ದು, ಥೈವಾನ್‌ನ ಮೇಲೆ ಚೀನಾದ ದಾಳಿಯನ್ನು ನೋಡಿಯೂ ನೋಡದಂತೆ ನಟಿಸುವ ಬದಲಿಗೆ ದೇಶಗಳು ಪ್ರತಿದಿನವು ಆ ದಾಳಿಯಿಂದ ಉಂಟಾಗುವ ಪರಿಣಾಮಗಳ ಕುರಿತು ಚೀನಾಗೆ ತಿಳಿಯುವಂತೆ ಮಾಡುವ ಮೂಲಕ ಈ ಸಮಸ್ಯೆಯನ್ನು ಪರಿಹರಿಸಬಹುದು. ಹೀಗೆ ಥೈವಾನ್ ಅನ್ನು ರಕ್ಷಿಸಬಹುದು ಎಂದಿದ್ದಾರೆ.

> ನಾನು ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್‌ನ ಬೆಂಬಲಿಗ ಹೌದು ಆದರೆ ಭಾರತದ ವಿಷಯದಲ್ಲಿ ಟ್ರಂಪ್ ಸುಂಕ ವಿಧಿಸುವ ಮೂಲಕ ಎಡವಿದ್ದಾರೆ ಎಂದ ಅಬ್ಬಾಟ್ ಹಲವು ದೇಶಗಳು ರಷ್ಯಾದ ತೈಲ ಖರೀದಿ ಮಾಡುತ್ತಿದ್ದರೂ ಕೇವಲ ಭಾರತದ ಮೇಲೆ ಶೇ.25%ರಷ್ಟು ಸುಂಕ ವಿಧಿಸುವುದರ ಮೂಲಕ ಬಹಳ ದೊಡ್ಡ ತಪ್ಪು ಮಾಡಿದ್ದಾರೆ, ಅಲ್ಲದೇ ಶೀತಲ ಸಮರದ ಸಮಯದಲ್ಲಿ ಅಮೆರಿಕವು ಭಾರತದ ಉದಾರವಾದಿ ಪ್ರಜಾಪ್ರಭುತ್ವಕ್ಕೆ ವಿರುದ್ಧವಾಗಿ ಪಾಕಿಸ್ತಾನದ ಮಿಲಿಟರಿ ಸರ್ವಾಧಿಕಾರವನ್ನು ಸರ್ಕಾರವನ್ನು ಆಯ್ಕೆ ಮಾಡಿಕೊಂಡು ದೊಡ್ಡ ತಪ್ಪು ಮಾಡಿದೆ.
>
> – ಟೋನಿ ಅಬ್ಬಾಟ್
> ಆಸ್ಟ್ರೇಲಿಯಾ ಮಾಜಿ ಪ್ರಧಾನಿ

### ಉಕ್ರೇನ್ NATOಗೆ ಸೇರಿದ್ದರೆ ಇಂತಹ ಪರಿಸ್ಥಿತಿ ಇರುತ್ತಿರಲ್ಲಿಲ್ಲ

ರಷ್ಯಾ ಉಕ್ರೇನ್ ನಡುವಿನ ಯುದ್ಧದ ಕುರಿತು ಮಾತನಾಡಿದ ಅಬ್ಬಾಟ್ ಉಕ್ರೇನ್ ನೇಟೋದ ಭಾಗವಾಗಿದ್ದು, ಅಮೆರಿಕಾ, ಯುರೋಪ್ ರಾಷ್ಟ್ರಗಳಿಂದ ರಕ್ಷಿಸಲ್ಪಟ್ಟಿದ್ದರೆ ಇಂದು ಉಕ್ರೇನಿನ ಪರಿಸ್ಥಿತಿ ಹೀಗಾಗುತ್ತಿರಲಿಲ್ಲ, ಉಕ್ರೇನಿನ ಪ್ರಜೆಗಳು ನಿಜವಾಗಿಯೂ ಹೀರೋಗಳಂತಿದ್ದಾರೆ, ಜಗತ್ತು ಅವರಿಗೆ ಇನ್ನೂ ಹೆಚ್ಚಾಗಿ ಸಹಾಯ ಮಾಡಬಹುದಿತ್ತು, ಉಕ್ರೇನ್ NATOದ ಭಾಗವಾಗಿದ್ದರೆ ರಷ್ಯಾ ಅದರ ಮೇಲೆ ಆಕ್ರಮಣ ಮಾಡುವ ಸಾಹಸವನ್ನು ಮಾಡುತ್ತಲೇ ಇರಲಿಲ್ಲ ಎಂದರು.

